24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 18 | ನವದೆಹಲಿ | ಬೆಲೆ ₹10 | ಜುಲೈ 14 2026, ಮಂಗಳವಾರ

# ಪ್ರಯತ್ನವೂ ಫಲಿಸಿ ಪ್ರಾರ್ಥನೆಯೂ ಫಲಿಸಿತು...

**ಈ ಮೂಲಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಮ್ಮ ಪ್ರತಿಯೊಂದು ಕಾರ್ಯ ಆರಂಭಿಸುವ ಮೊದಲ ಪ್ರಯತ್ನದೊಂದಿಗೆ ದೇವರ ಪ್ರಾರ್ಥನೆ ಮರೆಯುವುದಿಲ್ಲ. ಕಾಂಗ್ರೆಸ್ಸಿನಲ್ಲಿ ಅನೇಕ ನಾಸ್ತಿಕರಿದ್ದರೂ, ಯಾವುದೇ ಹಿಂಜರಿಕೆ ಇಲ್ಲದೇ ಮುಖ್ಯಮಂತ್ರಿಗಳು ದೇವಸ್ಥಾನಗಳಿಗೆ ಭೇಟಿ ನೀಡುವುದು ಮತ್ತು ಪೂಜೆ-ಪ್ರಾರ್ಥನೆ ಸಲ್ಲಿಸುವಲ್ಲಿ ಪ್ರಧಾನಿ ಮೋದಿಗಿಂತ ಒಂದು ಹೆಜ್ಜೆ ಮುಂದೆ ಎನ್ನುವಂತೆ ಕಾಣುತ್ತದೆ.**




- ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗುವುದಕ್ಕೆ ಮೊದಲು ಹೇಳಿದ ಮಾತಿದು. ಅವರು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಂತರ ವಿಧಾನಸಭೆ ಪ್ರವೇಶಿಸುವ ಮೊದಲು ಪ್ರವೇಶ ದ್ವಾರದ ಮೆಟ್ಟಿಲುಗಳಿಗೆ ಹಣೆಹಚ್ಚಿ ನಮಸ್ಕರಿಸಿ ಇದು ನಮ್ಮ ಪ್ರಜಾಪ್ರಭುತ್ವದ ದೇಗುಲ ಎಂದು ಉದ್ಗರಿಸಿದ್ದರು.
- ಇತ್ತೀಚೆಗೆ ಬೆಳಗಾವಿ ಸುವರ್ಣಸೌಧಕ್ಕೆ ಭೇಟಿ ನೀಡುವಾಗಲೂ ಮಹಾದ್ವಾರದ ಮೆಟ್ಟಿಲುಗಳಿಗೆ ನಮಸ್ಕರಿಸಿ ಪ್ರವೇಶಿಸಿ, ವಿಭಾಗ ಮಟ್ಟದ ಅಧಿಕಾರಿಗಳ ಸಭೆ ನಡೆಸಿದರು.
- ದೈವಭಕ್ತಿಯಲ್ಲಿ ಡಿ.ಕೆ.ಶಿವಕುಮಾರ್ ಅವರು ಒಂದು ಹಂತದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಮೀರಿಸಿದ್ದಾರೆ ಎನ್ನಬಹುದು. ಮುಖ್ಯಮಂತ್ರಿಗಳ ಈ ಭಾವುಕತನದ ದೈವಭಕ್ತಿಗೆ ಖಂಡಿತ ದೇವರು ಫಲ ನೀಡುತ್ತಾನೆ. ಅದರಂತೆ ರಾಜ್ಯದಲ್ಲೀಗ ಮಳೆ ಸ್ವಲ್ಪಮಟ್ಟಿಗೆ ಆರಂಭವಾಗಿದೆ.
- ಮುಂಗಾರು ಆರಂಭವಾಗಿ ಒಂದು ತಿಂಗಳು ಗತಿಸಿದರೂ ರಾಜ್ಯದ ಬಹುತೇಕ ಭಾಗದಲ್ಲಿ ಮಳೆಯಾಗದೇ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಬಿತ್ತನೆ ಕಾರ್ಯವೇ ಆರಂಭವಾಗಿರಲಿಲ್ಲ. ಜನ–ಜಾನುವಾರುಗಳಿಗೆ ಕುಡಿಯುವ ನೀರಿಗೂ ಸಂಕಷ್ಟ ಎದುರಾಗಿತ್ತು.
- ಈ ಸಂದರ್ಭದಲ್ಲಿ ಕಲಬುರಗಿಗೆ ಆಗಮಿಸಿ ವಿಭಾಗ ಮಟ್ಟದ ಸಭೆಯಲ್ಲಿ ಮುಖ್ಯಮಂತ್ರಿಗಳು ತಮ್ಮ ಮಾತನ್ನು ಪುನರುಚ್ಚರಿಸಿದರು. ‘ಪ್ರಯತ್ನ ವಿಫಲವಾದರೂ ಪ್ರಾರ್ಥನೆ ವಿಫಲವಾಗುವುದಿಲ್ಲ. ದೇವರು



ಮತ್ತು ದೈವವನ್ನು ನಂಬಿದರೆ ಖಂಡಿತ ಮಳೆ ಬರುತ್ತದೆ ಎಂದು ಹೇಳಿದ್ದರು. ಅದರಂತೆ ರಾಜ್ಯದ ಕೆಲವು ಭಾಗಗಳಲ್ಲಿ ಈಗಾಗಲೇ ಮಳೆ ಆರಂಭವಾಗಿದೆ.
- ಮಳೆ ಬಂದಿಲ್ಲ, ಕೃಷಿ ಚಟುವಟಿಕೆಗಳಿಲ್ಲವೆಂದು ಗ್ರಾಮೀಣ ಜನರು ನಗರ ಪ್ರದೇಶಗಳಿಗೆ ವಲಸೆ ಹೋಗದಂತೆ ಕ್ರಿಯಾಯೋಜನೆ ರೂಪಿಸುವಂತೆ ವಿಭಾಗ ಮಟ್ಟದ ಸಭೆಯಲ್ಲಿ ಅಧಿಕಾರಿಗಳಿಗೆ ಸೂಚಿಸುವ ಮೂಲಕ ರೈತರ ಬಗ್ಗೆ ಅಪಾರ ಕಾಳಜಿಯನ್ನು ವ್ಯಕ್ತಪಡಿಸಿದ್ದರು.
- ಇತ್ತೀಚೆಗೆ ಬೆಳಗಾವಿಯಲ್ಲಿ ನಡೆದ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ‘ಶುದ್ಧ ಮನಸ್ಸಿನಿಂದ ದೇವರನ್ನು ಪ್ರಾರ್ಥಿಸಿದರೆ ಖಂಡಿತ ಪ್ರಾರ್ಥನೆಗೆ ಫಲ ದೊರೆಯುತ್ತದೆ. ನೋಡಿ ನನ್ನೊಂದಿಗೆ ರಾಜ್ಯದ ರೈತರೂ ಕೂಡ ಪ್ರಾರ್ಥನೆ ಮಾಡಿದ್ದರಿಂದ ರಾಜ್ಯದ ವಿವಿಧೆಡೆ ಮಳೆಯಾಗುತ್ತಿದೆ. ಅನೇಕ ಜಲಾಶಯಗಳು ತುಂಬುವ ಹಂತ ತಲುಪಿವೆ. ರೈತರಲ್ಲಿ ಸಂತೋಷ ಮೂಡುವಂತೆ ವರುಣದೇವ ಕೃಪೆ ಮಾಡಿದ್ದಾನೆ’ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಭಾವುಕರಾಗಿ ನುಡಿದರು.
- ಈ ಮೂಲಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಮ್ಮ ಪ್ರತಿಯೊಂದು ಕಾರ್ಯ ಆರಂಭಿಸುವ ಮೊದಲ ಪ್ರಯತ್ನದೊಂದಿಗೆ ದೇವರ ಪ್ರಾರ್ಥನೆ ಮರೆಯುವುದಿಲ್ಲ. ಕಾಂಗ್ರೆಸ್ಸಿನಲ್ಲಿ ಅನೇಕ ನಾಸ್ತಿಕರಿದ್ದರೂ, ಯಾವುದೇ ಹಿಂಜರಿಕೆ ಇಲ್ಲದೇ ಮುಖ್ಯಮಂತ್ರಿಗಳು ದೇವಸ್ಥಾನಗಳಿಗೆ ಭೇಟಿ ನೀಡುವುದು ಮತ್ತು ಪೂಜೆ–ಪ್ರಾರ್ಥನೆ ಸಲ್ಲಿಸುವಲ್ಲಿ ಪ್ರಧಾನಿ ಮೋದಿಗಿಂತ ಒಂದು ಹೆಜ್ಜೆ ಮುಂದೆ ಎನ್ನುವಂತೆ ಕಾಣುತ್ತದೆ ಅಷ್ಟೇ ಅಲ್ಲದೇ ಈ ಹಿಂದೆ ಅನೇಕ ಕಾಂಗ್ರೆಸ್ ಮುಖಂಡರು ಪ್ರಯಾಗರಾಜ್ ಕುಂಭಮೇಳವನ್ನು ಟೀಕಿಸಿದ್ದರೆ, ಡಿ.ಕೆ.ಶಿವಕುಮಾರ್ ಅವರು, ತಮ್ಮ ಪತ್ನಿ ಸಮೇತ ಕುಂಭಮೇಳಕ್ಕೆ ಹೋಗಿ ಪವಿತ್ರ ಸ್ನಾನ ಮಾಡುವ ಮೂಲಕ ಎಲ್ಲರ ಬಾಯಿ ಮುಚ್ಚಿಸಿದ್ದರು.
- ನಮ್ಮ ದೈವಭಕ್ತಿ ಪೂಜೆ –ಪ್ರಾರ್ಥನೆಗಳು ವೈಯಕ್ತಿಕವಾಗಿದ್ದರೂ, ನಾನೊಬ್ಬ ರಾಜ್ಯದ ಮುಖ್ಯಮಂತ್ರಿಯಾಗಿದ್ದರಿಂದ ಇಡೀ ರಾಜ್ಯದ ಜನತೆ ನಮ್ಮ ಕುಟುಂಬದ ಸದಸ್ಯರಿದ್ದಂತೆ. ಅವರ ಯೋಗಕ್ಷೇಮ ನೋಡಿಕೊಳ್ಳುವುದು ನನ್ನ ಜವಾಬ್ದಾರಿ. ಅದೇ ರೀತಿ ಇಡೀ ರಾಜ್ಯದ ಸಮೃದ್ಧಿಗಾಗಿ ಶ್ರಮಿಸುವುದು, ಶ್ರಮ ಸಾರ್ಥಕವಾಗಲೆಂದು ಪ್ರಾರ್ಥಿಸುವುದೂ ಕೂಡ ರಾಜ್ಯದ ಹಿತಕ್ಕಾಗಿ ಎಂದು ತಮ್ಮ ಈ ಭಾವನೆಗಳ ಬಗ್ಗೆ ಸಮರ್ಥಿಸಿಕೊಂಡು ಯಾರ ಟೀಕೆಗಳಿಗೂ ಕಿವಿಗೊಡದೆ ದಿಟ್ಟ ಹೆಜ್ಜೆಗಳನ್ನಿಟ್ಟು ರಾಜ್ಯವನ್ನು ಮುನ್ನಡೆಸಿಕೊಂಡು ಹೊರಟಿದ್ದಾರೆ. ಖಂಡಿತವಾಗಿಯೂ ಅವರಿಗೆ ಯಶಸ್ಸು ದೊರೆಯುತ್ತದೆಂದು ಅವರ ಅನುಯಾಯಿಗಳ ವಿಶ್ವಾಸವಾಗಿದೆ.

OOOOOO

## ನಿತ್ಯ ಪಂಚಾಂಗ 14.07.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ,
ಉತ್ತರಾಯಣ–ದಕ್ಷಿಣಾಯಣ ಗ್ರೀಷ್ಮ ಋತು,
ಚಾಂದ್ರಮಾನ, ನಿಜ ಜ್ಯೇಷ್ಠ – ಆಷಾಢ ಮಾಸ

ನಿಜ ಜ್ಯೇಷ್ಠ ಬಹುಳ, ಅಮಾವಾಸ್ಯೆ,
ಪುನರ್ವಸು ನಕ್ಷತ್ರ, ಮಣ್ಣೆತ್ತಿನ ಅಮಾವಾಸ್ಯೆ,
ವೃಷಭ ಪೂಜೆ, ಸಾಗರಕಟ್ಟೆ ಆರಾಧನೆ,
ಹಾನಗಲ್ಲ|ಹೊಂಕಣಮಠ ಗುಬ್ಬಿನಂಜುಂಡೇಶ್ವರ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 12.00 |
| ಮಂಗಳ | ಮ. 3.25–4.59 | 9.00–10.30 | 12.00– 1.30 |
| ಬುಧ | ಮ.12.16–1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42– 12.16 | 3.00– 4.30 | 7.30– 9.00 |
| ಶನಿ | ಬೆ. 9.07– 10.41 | 1.30– 3.00 | 6.00– 7.30 |

## ಹಿರಿಯರ ಅನುಭವವೇ ಸಮಾಜದ ಅಮೂಲ್ಯ ಸಂಪತ್ತು: ಸಂಸದ ಡಾ. ಮಂಜುನಾಥ್



ಬೆಂಗಳೂರು, ಜು.13: ಪದ್ಮನಾಭನಗರದ ಕಾರ್ಮೆಲ್ ಶಾಲೆ ಆವರಣದಲ್ಲಿ, ಪದ್ಮನಾಭನಗರ ಹಿರಿಯ ನಾಗರಿಕ ವೇದಿಕೆ ವತಿಯಿಂದ ಆಯೋಜಿಸಲಾದ 21ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ. ಸಿ. ಎನ್. ಮಂಜುನಾಥ್ ಭಾಗವಹಿಸಿ ಹಿರಿಯ ನಾಗರಿಕರನ್ನು ಉದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾನ್ಯ ಸಂಸದರು, "ನಿಮ್ಮೆಲ್ಲರನ್ನು ನೋಡಿದಾಗ ನಿಜಕ್ಕೂ ಅಪಾರ ಸಂತೋಷವಾಗುತ್ತದೆ. ನಿಮ್ಮ ಆರೋಗ್ಯ, ಚೈತನ್ಯ, ಜೀವನೋತ್ಸಾಹ ಹಾಗೂ ಸಕಾರಾತ್ಮಕ ಮನೋಭಾವ ಇಂದಿನ ಯುವಪೀಳಿಗೆಗೆ ಮಾದರಿಯಾಗಿದೆ. ಉತ್ತಮ ಆರೋಗ್ಯ, ನಿಯಮಿತ ಜೀವನಶೈಲಿ, ಮಾನಸಿಕ ನೆಮ್ಮದಿ ಮತ್ತು ಸಮಾಜದೊಂದಿಗೆ ನಿರಂತರ ಒಡನಾಟ ಹೊಂದಿದರೆ ವಯಸ್ಸು ಕೇವಲ ಒಂದು ಸಂಖ್ಯೆಯಾಗುತ್ತದೆ ಎಂಬುದನ್ನು ನೀವು ನಿಮ್ಮ ಜೀವನದ ಮೂಲಕವೇ ಸಾಬೀತುಪಡಿಸಿದ್ದೀರಿ. ಇಂದಿನ ಯುವಕರು ನಿಮ್ಮ ಶಿಸ್ತು, ಜೀವನಾನುಭವ, ಮೌಲ್ಯಗಳು ಮತ್ತು ಆರೋಗ್ಯಕರ ಜೀವನ ಪದ್ಧತಿಯನ್ನು ನೋಡಿ ಕಲಿಯಬೇಕು" ಎಂದು ತಿಳಿಸಿದರು.

ಹಿರಿಯ ನಾಗರಿಕರು ಕುಟುಂಬದ ಶಕ್ತಿ, ಸಮಾಜದ ಮಾರ್ಗದರ್ಶಕರು ಹಾಗೂ ದೇಶದ ಅಮೂಲ್ಯ ಸಂಪತ್ತಾಗಿದ್ದಾರೆ. ಅವರ ಅನುಭವ, ಜ್ಞಾನ ಮತ್ತು ಆಶೀರ್ವಾದ ಮುಂದಿನ ಪೀಳಿಗೆಗೆ ಸದಾ ಪ್ರೇರಣೆಯಾಗಿರಬೇಕು. ಹಿರಿಯರ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಬಗ್ಗೆ ಪ್ರತಿಯೊಬ್ಬರೂ ಕಾಳಜಿ ವಹಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಹಿರಿಯರಿಗೆ ಗೌರವ, ಪ್ರೀತಿ ಮತ್ತು ಸುರಕ್ಷಿತ ವಾತಾವರಣ ಕಲ್ಪಿಸುವ ಸಮಾಜವೇ ನಿಜವಾದ ಸಂಸ್ಕಾರವಂತ ಸಮಾಜವಾಗುತ್ತದೆ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪದ್ಮನಾಭನಗರ ಹಿರಿಯ ನಾಗರಿಕ ವೇದಿಕೆಯ ಅಧ್ಯಕ್ಷೆ ಜಿ.ಎನ್. ಲಲಿತಾಂಬ, ಕರ್ನಾಟಕ ರಾಜ್ಯ ಹಿರಿಯ ನಾಗರಿಕ ಒಕ್ಕೂಟದ ಅಧ್ಯಕ್ಷ ಜಿ. ಎಸ್. ನಾಗಭೂಷಣ್, ಕರ್ನಾಟಕ ರಾಜ್ಯ ಹಿರಿಯ ನಾಗರಿಕ ಒಕ್ಕೂಟದ ಆಡಳಿತ ಮಂಡಳಿ ಸದಸ್ಯ ವೆಂಕಟಕೃಷ್ಣ ಹಾಗೂ ಹಲವು ಹಿರಿಯ ಮುಖಂಡರು, ಗಣ್ಯರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಹನುಮಂತಪ್ಪ ಅವರ ಆಚಾರ-ವಿಚಾರ ಶಾಶ್ವತವಾಗಿ ಉಳಿಯಲಿದೆ: ಸಿಎಂ ಡಿಕೆಶಿ

### ಕೃಷಿ, ನೀರಾವರಿ ಯೋಜನೆಗಳಿಗೆ ಹೋರಾಟ ಮಾಡಿದ ನಾಯಕ

**ಬೆಂಗಳೂರು, ಜು.13:** ಹಿರಿಯ ನಾಯಕರಾದ ಹನುಮಂತಪ್ಪ ಅವರ ದೇಹ ನಮ್ಮ ಜೊತೆ ಇಲ್ಲದಿರಬಹುದು, ಆದರೆ ಅವರ ಕೆಲಸಗಳು, ಆಚಾರ ವಿಚಾರಗಳು ಶಾಶ್ವತವಾಗಿ ಉಳಿಯಲಿವೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ರಾಜ್ಯಸಭೆ ಮಾಜಿ ಸದಸ್ಯ ಎಚ್. ಹನುಮಂತಪ್ಪ ಪಾರ್ಥಿವ ಶರೀರಕ್ಕೆ ಚಿತ್ರದುರ್ಗದಲ್ಲಿ ಸೋಮವಾರ ಅಂತಿಮ ನಮನ ಸಲ್ಲಿಸಿದ ನಂತರ ಮಾಧ್ಯಮಗಳ ಜತೆ ಮಾತನಾಡಿ, 1979ರಿಂದ ಎಚ್. ಹನುಮಂತಪ್ಪ ಅವರ ಜೊತೆ ಒಡನಾಟ ಇಟ್ಟುಕೊಂಡಿದ್ದೆ. ವಿದ್ಯಾರ್ಥಿ ನಾಯಕರಾಗಿದ್ದಾಗ ಅಕ್ಕಪಕ್ಕದ ಕೊಠಡಿಗಳಲ್ಲೇ ಇದ್ದೆವು. ರಾಜಗೋಪಾಲ್, ಜಾಫರ್ ಷರೀಫ್ ಅವರು ನಮ್ಮ ಜಿಲ್ಲೆಯಿಂದಲೇ ರಾಜಕಾರಣ ಮಾಡಿದರು.



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಚಿತ್ರದುರ್ಗದಲ್ಲಿ ಸೋಮವಾರ ರಾಜ್ಯಸಭೆ ಮಾಜಿ ಸದಸ್ಯ ಎಚ್. ಹನುಮಂತಪ್ಪ ಅವರ ಪಾರ್ಥಿವ ಶರೀರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಹನುಮಂತಪ್ಪ ಅವರಿಗೆ ಎಲ್ಲಾ ವರ್ಗದ ಜನರ ಬಗ್ಗೆ ಕಾಳಜಿ ಇತ್ತು. ಇಂದು ಅವರ ದೇಹಕ್ಕೆ ಸಾವು ಬಂದಿರಬಹುದು. ಅವರ ಆಚಾರ ವಿಚಾರ, ಭಾವನೆಗಳು ಜೀವಂತವಾಗಿರುತ್ತವೆ. ರಾಜೀವ್ ಗಾಂಧಿ ಹಾಗೂ ಸೋನಿಯಾ ಗಾಂಧಿ ಅವರಿಗೆ ಮಾರ್ಗದರ್ಶನ ನೀಡಿದ್ದರು. ಚಿತ್ರದುರ್ಗದ ಕೃಷಿ ಹಾಗೂ ನೀರಾವರಿಯ ಅನೇಕ ಯೋಜನೆಗಳಿಗೆ ಹೋರಾಟ ಮಾಡಿದವರು ಎಂದು ಸ್ಮರಿಸಿದರು.

ಜಿಲ್ಲೆಗೆ ಭದ್ರಾ ಮೇಲ್ದಂಡೆ ಯೋಜನೆ ತರುವ ವಿಚಾರವಾಗಿ ಹನುಮಂತಪ್ಪ ಅವರು ಹೋರಾಟ ಮಾಡಿದ್ದರು ಎಂದು ಕೇಳಿದಾಗ, ಕೇವಲ ಭದ್ರಾ ಮೇಲ್ದಂಡೆ ಯೋಜನೆ ಮಾತ್ರವಲ್ಲ. ಅನೇಕ ನೀರಾವರಿ ಯೋಜನೆಗಳಿಗೆ ಹೋರಾಟ ಮಾಡಿದ್ದಾರೆ. ಸರ್ಕಾರದ ಮಟ್ಟದಲ್ಲಿ, ಸಂಸತ್ತಿನಲ್ಲಿ ಧ್ವನಿ ಎತ್ತಿದ್ದಾರೆ. ಅವರು ಜಿಲ್ಲೆಯಲ್ಲಿ ಎಲ್ಲರನ್ನೂ ಒಟ್ಟಾಗಿ ತೆಗೆದುಕೊಂಡು ಹೋಗಿದ್ದಾರೆ ಎಂದು ತಿಳಿಸಿದರು. ಅವರು ನಮ್ಮ ಆತ್ಮೀಯ ನಾಯಕರಾಗಿದ್ದು ಅವರಿಗೆ ಗೌರವ ಸಲ್ಲಿಸಿದ್ದೇವೆ. ಸರಳ ಜೀವನ ನಡೆಸಿದ್ದರು. ಕಾಂಗ್ರೆಸ್ ಪಕ್ಷದ ಕಟ್ಟಡ ನಿರ್ಮಾಣ ಮಾಡಬೇಕು ಎಂಬ ಹೆಜ್ಜೆ ಇಟ್ಟವರು ಹನುಮಂತಪ್ಪನವರು. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದರು.

## ಅರ್ಹರಿಗಷ್ಟೇ ಶಾಶ್ವತ ವಾಸಸ್ಥಳ ದೃಢೀಕರಣ ಪ್ರಮಾಣಪತ್ರ

### ಬಿಜೆಪಿಯಿಂದ ಜನರನ್ನು ದಿಕ್ಕುತಪ್ಪಿಸುವ ಕೆಲಸ: ಸಚಿವ ಯತೀಂದ್ರ ಸಿದ್ದರಾಮಯ್ಯ



ಬೀದರ್, ಜು.13: ಮತದಾರರು ತುಂಬಿ ಕೊಟ್ಟ ಎನ್ಯುಮರೇಷನ್ ಅರ್ಜಿ ನಮೂನೆಗಳನ್ನು ಪರಿಶೀಲಿಸುವ ಕೆಲಸ ಚುನಾವಣಾ ಆಯೋಗ ಮಾಡುತ್ತದೆ. ಆದಕಾರಣ ಬೂತ್ ಮಟ್ಟದ ಅಧಿಕಾರಿಗಳನ್ನು (ಬಿಎಲ್‌ಒ) ಸರ್ಕಾರ ದುರ್ಬಳಕೆ ಮಾಡಿಕೊಳ್ಳಲು ಹೇಗೆ ಸಾಧ್ಯ ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಪ್ರಶ್ನಿಸಿದರು.

ನಗರದ ವಿಮಾನ ನಿಲ್ದಾಣದಲ್ಲಿ ಪತ್ರಕರ್ತರೊಂದಿಗೆ ಸೋಮವಾರ ಮಾತನಾಡಿದ ಅವರು, ಬಿಜೆಪಿಯವರು ವಿನಾಕಾರಣ ಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಯಾರು ಕೂಡ ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು ಎನ್ನುವುದು ಸರ್ಕಾರದ ಉದ್ದೇಶವಾಗಿದೆ. ಆದರೆ, ಅವರು ಜನರ ಹಕ್ಕು ಕಸಿದುಕೊಳ್ಳಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ಯಾರು ಅರ್ಹ ಮತದಾರರಾಗಿದ್ದಾರೋ ಅಂಥವರಿಗೆ ಸರ್ಕಾರ ಶಾಶ್ವತ ವಾಸಸ್ಥಳ ದೃಢೀಕರಣ ಪ್ರಮಾಣ ಪತ್ರ ನೀಡುತ್ತಿದೆ ಎಂದು ಸರ್ಕಾರದ ಕ್ರಮ ಸಮರ್ಥಿಸಿಕೊಂಡರು. ರಾಜ್ಯದಲ್ಲಿನ ಬರ ಪರಿಸ್ಥಿತಿ ಬಗ್ಗೆ ಮುಖ್ಯಮಂತ್ರಿಯವರು ಅನೇಕ ಸಭೆಗಳನ್ನು ಮಾಡಿದ್ದಾರೆ. ಸಚಿವರು ಕೂಡ ಆಯಾ ಜಿಲ್ಲೆಗಳಲ್ಲಿ ಸಭೆಮಾಡಿದ್ದಾರೆ. ಎಲ್ಲೆಲ್ಲಿ ಬರವಿದೆ, ಮಳೆ ಕಡಿಮೆಯಾಗಿ, ಬಿತ್ತನೆ ಕುಂಠಿತಗೊಂಡಿದೆ ಎಂಬುದನ್ನು ಪರಿಶೀಲಿಸಲಾಗುತ್ತಿದೆ. ಒಂದೇ ಸಲ ಬರಗಾಲ ಎಂದು ಘೋಷಿಸಲು ಆಗುವುದಿಲ್ಲ. ಅದಕ್ಕೆ ಕೆಲವು ನಿಯಮಗಳಿವೆ ಎಂದು ಹೇಳಿದರು.

ಬೀದರ್ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ್ ಚಿಮಕೋಡೆ ಇದ್ದರು.

# 13 ರೋಪ್‌ವೇ ಯೋಜನೆಗಳ ಅನುಷ್ಠಾನಕ್ಕೆ ವೇಗ ನೀಡಿ: ಸಚಿವ ಜಾರ್ಜ್

**ಬೆಂಗಳೂರು, ಜು,13:** ರಾಜ್ಯದಲ್ಲಿ ಪ್ರಸ್ತಾಪಿಸಲಾಗಿರುವ 13 ರೋಪ್‌ವೇ ಯೋಜನೆಗಳನ್ನು ತ್ವರಿತಗತಿಯಲ್ಲಿ ಅನುಷ್ಠಾನಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ. ಕೆ.ವಿ. ತ್ರಿಲೋಕ್ ಚಂದ್ರ, ಆಯುಕ್ತ ಡಾ. ವಿ. ರಾಮ್ ಪ್ರಸಾತ್ ಮನೋಹರ್, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ನಡೆದ ಉನ್ನತ ಮಟ್ಟದ ಪರಿಶೀಲನಾ ಸಭೆಯಲ್ಲಿ ವಿವಿಧ ರೋಪ್‌ವೇ ಯೋಜನೆಗಳ ಪ್ರಗತಿಯನ್ನು ಸಚಿವರು ಸಮಗ್ರವಾಗಿ ಪರಿಶೀಲಿಸಿದರು.

ಸಭೆಯಲ್ಲಿ ಹಲವು ವರ್ಷಗಳಿಂದ ರೋಪ್‌ವೇ ಯೋಜನೆಗಳು ಪ್ರಸ್ತಾಪದ ಹಂತದಲ್ಲಿಯೇ ಉಳಿದಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಯೋಜನೆಗಳಿಗೆ ಟೆಂಡರ್ ಆಹ್ವಾನಿಸುವ ಮುನ್ನವೇ ಅರಣ್ಯ, ಪರಿಸರ ಸೇರಿದಂತೆ ಸಂಬಂಧಿತ ಎಲ್ಲ ಇಲಾಖೆಗಳ ಅಗತ್ಯ ಅನುಮತಿಗಳನ್ನು ಪಡೆದುಕೊಳ್ಳುವ ವ್ಯವಸ್ಥೆಯನ್ನು ಕಡ್ಡಾಯವಾಗಿ ಅನುಸರಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಇದರಿಂದ ಯೋಜನೆಗಳ ಅನುಷ್ಠಾನದಲ್ಲಿ



ಅನಗತ್ಯ ವಿಳಂಬ ತಪ್ಪಿಸಿ ನಿಗದಿತ ಸಮಯದಲ್ಲಿ ಕಾಮಗಾರಿ ಆರಂಭಿಸಲು ಸಾಧ್ಯವಾಗಲಿದೆ ಎಂದು ಹೇಳಿದರು.

ರಾಜ್ಯದ 13 ರೋಪ್‌ವೇ ಯೋಜನೆಗಳಿಗೆ ಕಾರ್ಯಸಾಧ್ಯತಾ ವರದಿ ಸಿದ್ಧಪಡಿಸುವ ಜವಾಬ್ದಾರಿಯನ್ನು ಆರ್.ಐ.ಟಿ.ಇ.ಎಸ್ ಸಂಸ್ಥೆಗೆ ವಹಿಸಲಾಗಿದ್ದು, ಈಗಾಗಲೇ 8 ಯೋಜನೆಗಳ ವರದಿಗಳು ಪೂರ್ಣಗೊಂಡಿವೆ. ಉಳಿದ ಯೋಜನೆಗಳ ಕಾರ್ಯಸಾಧ್ಯತಾ ವರದಿಗಳನ್ನು ಆದ್ಯತೆಯ ಮೇರೆಗೆ ಶೀಘ್ರ ಪೂರ್ಣಗೊಳಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಮುಳ್ಳಯ್ಯನಗಿರಿ ರೋಪ್‌ವೇ ಯೋಜನೆಗೆ ಅಗತ್ಯ ಅನುಮತಿಗಳ ಕೊರತೆಯಿಂದ ಕಾರ್ಯಸಾಧ್ಯತಾ ವರದಿ ವಿಳಂಬವಾಗಿರುವುದನ್ನು ಗಮನಿಸಿದ ಸಚಿವರು, ಆರ್.ಐ.ಟಿ.ಇ.ಎಸ್ ಸಂಸ್ಥೆಗೆ ತಕ್ಷಣವೇ ಅಗತ್ಯ ಅನುಮತಿಗಳನ್ನು ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿ, ಒಂದು ತಿಂಗಳೊಳಗೆ ಕಾರ್ಯಸಾಧ್ಯತಾ ವರದಿ ಸಲ್ಲಿಸುವಂತೆ ನಿರ್ದೇಶನ ನೀಡಿದರು.

ಬೆಳಗಾವಿ ಜಿಲ್ಲೆಯ ಗೋಕಾಕ್ ಜಲಪಾತ, ಯಾದಗಿರಿ ಜಿಲ್ಲೆಯ ಮೈಲಾರ ಲಿಂಗೇಶ್ವರ ದೇವಸ್ಥಾನ, ಕೊಪ್ಪಳ ಜಿಲ್ಲೆಯ ಅಂಜನಾದ್ರಿ ಬೆಟ್ಟ ಹಾಗೂ ಹಾವೇರಿ ಜಿಲ್ಲೆಯ ದೇವರಗುಡ್ಡ ಮಾಲತೇಶ ದೇವಸ್ಥಾನದ ರೋಪ್‌ವೇ ಯೋಜನೆಗೆ ಪ್ರಾಥಮಿಕ ಕಾರ್ಯಸಾಧ್ಯತಾ ವರದಿಗಳು ಈಗಾಗಲೇ ಸಿದ್ಧಗೊಂಡಿದ್ದು, ಗೋಕಾಕ್ ರೋಪ್‌ವೇ ಯೋಜನೆಗೆ ಹಣಕಾಸು ಇಲಾಖೆಯ ಅನುಮತಿಯೂ ದೊರೆತಿದೆ. ಈ ಯೋಜನೆಯನ್ನು ಮುಂದಿನ ಸಚಿವ ಸಂಪುಟ ಸಭೆಯ ಅನುಮೋದನೆಗೆ ಮಂಡಿಸಲು ಕ್ರಮ ಕೈಗೊಳ್ಳುವಂತೆ ಸಚಿವರು ಸೂಚಿಸಿದರು.

> ರೋಪ್‌ವೇ ಯೋಜನೆಗಳು ಕೇವಲ ಪ್ರವಾಸೋದ್ಯಮ ಮೂಲಸೌಕರ್ಯ ಅಭಿವೃದ್ಧಿಗೆ ಸೀಮಿತವಾಗಿಲ್ಲ. ಇವು ಪರಿಸರಸ್ನೇಹಿ ಸಾರಿಗೆ ವ್ಯವಸ್ಥೆಯನ್ನು ಉತ್ತೇಜಿಸುವುದರ ಜೊತೆಗೆ, ದುರ್ಗಮ ಪ್ರವಾಸಿ ತಾಣಗಳಿಗೆ ಸುಲಭ ಸಂಪರ್ಕ ಕಲ್ಪಿಸಿ, ಸ್ಥಳೀಯ ಆರ್ಥಿಕತೆ, ಉದ್ಯೋಗ ಸೃಷ್ಟಿ ಹಾಗೂ ಪ್ರವಾಸೋದ್ಯಮ ಹೂಡಿಕೆಗಳಿಗೆ ಹೊಸ ಅವಕಾಶಗಳನ್ನು ತೆರೆದಿಡಲಿವೆ. ಆದ್ದರಿಂದ ಯಾವುದೇ ಇಲಾಖೆಯ ಅನುಮತಿ ವಿಳಂಬದಿಂದ ಯೋಜನೆಗಳು ನಿಲ್ಲಬಾರದು. ಎಲ್ಲಾ ಸಂಬಂಧಿತ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಯೋಜನೆಗಳನ್ನು ಶೀಘ್ರ ಅನುಷ್ಠಾನಗೊಳಿಸಬೇಕು.
>
> –ಕೆ.ಜೆ. ಜಾರ್ಜ್, ಇಂಧನ ಹಾಗೂ ಪ್ರವಾಸೋದ್ಯಮ ಸಚಿವ

**ಪ್ರಸ್ತಾವಿತ ಯೋಜನೆಗಳು:**

ಮಧುಗಿರಿ ಕೋಟೆ – ತುಮಕೂರು ಜಿಲ್ಲೆ, ಮಲ್ಲಹಳ್ಳಿ ಜಲಪಾತ, ಅಂಜನಾದ್ರಿ ಬೆಟ್ಟ – ಕೊಪ್ಪಳ ಜಿಲ್ಲೆ, ಬಳ್ಳಾರಿ ಕೋಟೆ – ಬಳ್ಳಾರಿ ಜಿಲ್ಲೆ, ನೃಪತುಂಗ ಬೆಟ್ಟ – ಧಾರವಾಡ ಜಿಲ್ಲೆ, ಯಾದಗಿರಿ ಕೋಟೆ ಮತ್ತು ಮೈಲಾರ ಲಿಂಗೇಶ್ವರ ದೇವಸ್ಥಾನ – ಯಾದಗಿರಿ ಜಿಲ್ಲೆ, ಹೊಲಾಳಮ್ಮ ದೇವಸ್ಥಾನ ಮತ್ತು ಕಾಲಕಾಳೇಶ್ವರ ದೇವಸ್ಥಾನ – ಗದಗ ಜಿಲ್ಲೆ, ಸವದತ್ತಿ ಯಲ್ಲಮ್ಮ ದೇವಸ್ಥಾನ ಮತ್ತು ಗೋಕಾಕ್ ಜಲಪಾತ – ಬೆಳಗಾವಿ ಜಿಲ್ಲೆ, ದೇವರಗುಡ್ಡ ಮಾಲತೇಶ ದೇವಸ್ಥಾನ – ಹಾವೇರಿ ಜಿಲ್ಲೆ, ಮುಳ್ಳಯ್ಯನಗಿರಿ ಬೆಟ್ಟ – ಚಿಕ್ಕಮಗಳೂರು ಜಿಲ್ಲೆ

ರೋಪ್‌ವೇ ಯೋಜನೆಗಳನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತಿದ್ದು, ಯೋಜನೆಗಳು ನಿಗದಿತ ಸಮಯದಲ್ಲಿ ಆರಂಭವಾಗಲು ಅರಣ್ಯ ಸೇರಿದಂತೆ ವಿವಿಧ ಇಲಾಖೆಗಳ ಅನುಮತಿಗಳನ್ನು ಆದ್ಯತೆಯ ಮೇರೆಗೆ ಪಡೆಯಬೇಕು ಎಂದು ಸಚಿವರು ತಿಳಿಸಿದರು. ಈ ನಿಟ್ಟಿನಲ್ಲಿ ಪ್ರವಾಸೋದ್ಯಮ ಇಲಾಖೆಯ ಆಯುಕ್ತರು ದೆಹಲಿಗೆ ತೆರಳಿ ಕೇಂದ್ರ ಅರಣ್ಯ ಮತ್ತು ಪರಿಸರ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಗತ್ಯ ಅನುಮತಿಗಳನ್ನು ತ್ವರಿತವಾಗಿ ಪಡೆಯುವಂತೆ ಅವರು ನಿರ್ದೇಶಿಸಿದರು.

ಈ ರೋಪ್‌ವೇ ಯೋಜನೆಗಳ ಅನುಷ್ಠಾನದಿಂದ ರಾಜ್ಯದ ಪ್ರಮುಖ ಧಾರ್ಮಿಕ, ಪಾರಂಪರಿಕ ಹಾಗೂ ಪ್ರಕೃತಿ ಪ್ರವಾಸಿ ತಾಣಗಳಿಗೆ ಸುಲಭ ಸಂಪರ್ಕ ಕಲ್ಪಿಸುವುದರ ಜೊತೆಗೆ, ಪರಿಸರಸ್ನೇಹಿ ಸಾರಿಗೆ ವ್ಯವಸ್ಥೆಯನ್ನು ಉತ್ತೇಜಿಸಿ, ಪ್ರವಾಸೋದ್ಯಮ ಆಧಾರಿತ ಸ್ಥಳೀಯ ಆರ್ಥಿಕ ಅಭಿವೃದ್ಧಿಗೆ ಹೊಸ ಚೈತನ್ಯ ನೀಡುವ ಗುರಿಯನ್ನು ರಾಜ್ಯ ಸರ್ಕಾರ ಹೊಂದಿದೆ ಎಂದು ಸಚಿವರು ಹೇಳಿದರು.

# ಬೆಂಗಳೂರು ಸಂಚಾರ ಸಮಸ್ಯೆ ಪರಿಹಾರಕ್ಕೆ ತಂತ್ರಜ್ಞಾನ ಆಧಾರಿತ ಕ್ರಮ



### ಟ್ರಾಫಿಕ್ ವಿಭಾಗದ ಎಲ್ಲ ಡಿಸಿಪಿಗಳಿಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ

**ಬೆಂಗಳೂರು, ಜು.14:** ಬೆಂಗಳೂರು ನಗರದ ಸಂಚಾರ ದಟ್ಟಣೆ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಿ, ಸಾರ್ವಜನಿಕರಿಗೆ ಸುಗಮ ಹಾಗೂ ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ತಂತ್ರಜ್ಞಾನ ಆಧಾರಿತ ಪರಿಹಾರಗಳಿಗೆ ಹೆಚ್ಚಿನ ಒತ್ತು ನೀಡಬೇಕೆಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರು ನಗರದ ಎಲ್ಲ ಸಂಚಾರ ವಿಭಾಗದ ಡಿಸಿಪಿಗಳಿಗೆ ಸೂಚನೆ ನೀಡಿದರು.

ಬೆಂಗಳೂರು ನಗರದ ಟ್ರಾಫಿಕ್ ಡಿಸಿಪಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಗರದ ವಿವಿಧ ಭಾಗಗಳಲ್ಲಿ ವಾಹನಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಪ್ರಮುಖ ಜಂಕ್ಷನ್‌ಗಳು ಹಾಗೂ ಹೆಚ್ಚು ವಾಹನಗಳು ಸಂಚರಿಸುವ ರಸ್ತೆಗಳಲ್ಲಿ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ವೈಜ್ಞಾನಿಕ ಮತ್ತು ತಾಂತ್ರಿಕ ವಿಧಾನಗಳನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯವಾಗಿದೆ ಎಂದು ಹೇಳಿದರು.

ಬೆಂಗಳೂರು ಇಂದು ಜಾಗತಿಕ ಮಟ್ಟದಲ್ಲಿ ತನ್ನದೇ ಆದ ಸ್ಥಾನವನ್ನು ಗಳಿಸಿದೆ. ವಿಶ್ವದ ಪ್ರಮುಖ ಐಟಿ ಕಂಪನಿಗಳು, ಬಹುರಾಷ್ಟ್ರೀಯ ಸಂಸ್ಥೆಗಳು ಹಾಗೂ ಹೂಡಿಕೆದಾರರು ಬೆಂಗಳೂರನ್ನು ತಮ್ಮ ವ್ಯವಹಾರ ಮತ್ತು ಹೂಡಿಕೆಯ ಕೇಂದ್ರವಾಗಿ ಆಯ್ಕೆ ಮಾಡುತ್ತಿದ್ದಾರೆ.

ಇಂತಹ ಜಾಗತಿಕ ನಗರಕ್ಕೆ ತಕ್ಕಂತೆ ವಿಶ್ವಮಟ್ಟದ ಸಂಚಾರ ನಿರ್ವಹಣಾ ವ್ಯವಸ್ಥೆಯನ್ನು ರೂಪಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಸಚಿವರು ಹೇಳಿದರು.

ಸಂಚಾರ ದಟ್ಟಣೆ ಹೆಚ್ಚಿರುವ ರಸ್ತೆಗಳಲ್ಲಿ ಇಂಟೆಲಿಜೆಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಮ್, ಕೃತಕ ಬುದ್ಧಿಮತ್ತೆ, ಸ್ಮಾರ್ಟ್ ಸಿಗ್ನಲ್ ವ್ಯವಸ್ಥೆ, ರಿಯಲ್‌ಟೈಮ್ ಟ್ರಾಫಿಕ್ ಮಾನಿಟರಿಂಗ್ ಹಾಗೂ ಡೇಟಾ ಆಧಾರಿತ ಸಂಚಾರ ನಿರ್ವಹಣಾ ಕ್ರಮಗಳನ್ನು ಇನ್ನಷ್ಟು ವ್ಯಾಪಕವಾಗಿ ಅಳವಡಿಸಿಕೊಳ್ಳುವ ಕುರಿತು ಅಧಿಕಾರಿಗಳು ಕಾರ್ಯಯೋಜನೆ ರೂಪಿಸಬೇಕು ಎಂದು ನಿರ್ದೇಶನ ನೀಡಿದರು.

ಅಪಘಾತಗಳಿಗೆ ಕಾರಣವಾಗುವ ಹಾಟ್‌ಸ್ಪಾಟ್ ಗುರುತಿಸುವಿಕೆ, ಸಂಚಾರ ನಿಯಮಗಳ ಕಟ್ಟುನಿಟ್ಟಿನ ಜಾರಿ, ತುರ್ತು ಸೇವಾ ವಾಹನಗಳಿಗೆ ಆದ್ಯತೆ, ಪಾದಚಾರಿಗಳ ಸುರಕ್ಷತೆ ಹಾಗೂ ಸಾರ್ವಜನಿಕರ ಅನುಕೂಲಕ್ಕೆ ಆದ್ಯತೆ ನೀಡುವ ರೀತಿಯಲ್ಲಿ ಸಂಚಾರ ವ್ಯವಸ್ಥೆಯನ್ನು ರೂಪಿಸಬೇಕು ಎಂದು ಸೂಚಿಸಿದರು.

ಸಂಚಾರ ಸಮಸ್ಯೆ ಕೇವಲ ಪೊಲೀಸ್ ಇಲಾಖೆಯ ಜವಾಬ್ದಾರಿ ಮಾತ್ರವಲ್ಲ; ಬಿಬಿಎಂಪಿ, ಬಿಎಂಆರ್‌ಸಿಎಲ್, ಬಿಎಂಟಿಸಿ, ನಗರಾಭಿವೃದ್ಧಿ ಇಲಾಖೆ ಹಾಗೂ ಇತರೆ ಸಂಬಂಧಿತ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸಿ ದೀರ್ಘಕಾಲೀನ ಪರಿಹಾರಗಳನ್ನು ಜಾರಿಗೊಳಿಸಬೇಕು ಎಂದು ಸಚಿವರು ಹೇಳಿದರು. ಸಭೆಯಲ್ಲಿ ಪೊಲೀಸ್ ವರಿಷ್ಠಾಧಿಕಾರಿ ಡಿಜಿಪಿ ಡಾ. ಎಂ.ಎ. ಸಲೀಂ, ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಟ್ರಾಫಿಕ್ ಜಂಟಿ ಆಯುಕ್ತ ಕಾರ್ತಿಕ್ ರೆಡ್ಡಿ, ಗೃಹ ಸಚಿವರ ವಿಶೇಷಾಧಿಕಾರಿ ಲಾಬೂರಾಮ್ ಹಾಗೂ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

### ರಾಮಮಂದಿರ ದೇಣಿಗೆ: ವಿಷಾದ ವ್ಯಕ್ತಪಡಿಸಿದರೆ ಸಾಲದು, ಬಹಿರಂಗ ಕ್ಷಮೆಯಾಚಿಸಬೇಕು

ರಾಮಮಂದಿರ ದೇಣಿಗೆ ಅಕ್ರಮದ ವಿಚಾರಕ್ಕೆ ಸಂಬಂಧಿಸಿದಂತೆ ಆರ್‌ಎಸ್‌ಎಸ್ ಮತ್ತು ವಿಎಚ್‌ಪಿ ವಿರುದ್ಧ ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ. ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಹಗರಣಕ್ಕೆ ಸಂಬಂಧಿಸಿದಂತೆ ಆರ್‌ಎಸ್‌ಎಸ್ ಕೇವಲ ವಿಷಾದ ವ್ಯಕ್ತಪಡಿಸಿದರೆ ಸಾಲದು, ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು. ರಾಮಮಂದಿರ ದೇಣಿಗೆಯಲ್ಲಿ ಅಕ್ರಮ ನಡೆದಿರುವುದನ್ನು ಪರೋಕ್ಷವಾಗಿ ಒಪ್ಪಿಕೊಂಡಂತೆ ಆರ್‌ಎಸ್‌ಎಸ್ ವಿಷಾದ ವ್ಯಕ್ತಪಡಿಸಿದೆ. ಹಾಗಾದರೆ ಹಣ ಕದ್ದಿದ್ದಾರೆ ಎಂದು ಒಪ್ಪಿಕೊಂಡು ವಿಷಾದ ವ್ಯಕ್ತಪಡಿಸಿದ್ದಾರೆ. ಬದಲಾಗಿ ತಪ್ಪು ಮಾಡಿದ್ದೇವೆ ಎಂದು ಒಪ್ಪಿಕೊಳ್ಳಬೇಕು. ಕೇವಲ ಒಂದು ಪ್ರೆಸ್‌ನೋಟ್ ಬಿಡುಗಡೆ ಮಾಡಿ ಕೈತೊಳೆದುಕೊಂಡರೆ ಆಗಲ್ಲ. ಸಾರ್ವಜನಿಕರ ಎದುರು ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದರು.

## ಸಿದ್ದರಾಮಯ್ಯ ನೇತೃತ್ವದಲ್ಲೇ 2028ರ ಚುನಾವಣೆ: ಸಚಿವ ಸತೀಶ್ ಜಾರಕಿಹೊಳಿ

### ಪಕ್ಷ ಸಂಘಟನೆಗೆ ಬರುತ್ತಾರೆ, ಅವರನ್ನು ಕಡೆಗಣಿಸುವ ಪ್ರಶ್ನೆಯೇ ಇಲ್ಲ



ಬೆಳಗಾವಿ, ಜು.13: ಸಿದ್ದರಾಮಯ್ಯ ನವರು ಪಕ್ಷ ಸಂಘಟನೆಗೆ ಬರುತ್ತಾರೆ. ಪಕ್ಷದಲ್ಲಿರುವ ಎಲ್ಲರೂ ಅದನ್ನೇ ಹೇಳುತ್ತಾರೆ. 2028ರಲ್ಲಿ ಅವರ ನೇತೃತ್ವದಲ್ಲೇ ಚುನಾವಣೆಗೆ ಹೋಗುತ್ತೇವೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮಾಜಿ ಸಿಎಂ ಸಿದ್ದರಾಮಯ್ಯ ಅವರನ್ನು ಕಡೆಗಣಿಸುವ ಪ್ರಶ್ನೆಯೇ ಇಲ್ಲ. ಅವರ ನೇತೃತ್ವದಲ್ಲಿಯೇ ನಾವು ಮುಂದಿನ ಚುನಾವಣೆ ಎದುರಿಸಲಿದ್ದೇವೆ. ಅಹಿಂದ ನಾಯಕತ್ವ ಯಾರು ವಹಿಸಿಕೊಳ್ಳುತ್ತಾರೆ ಎಂಬ ಬಗ್ಗೆ ಚರ್ಚೆ ಮಾಡುವ ಅವಶ್ಯಕತೆ ಇಲ್ಲ. ಕಾಲ ಕಾಲಕ್ಕೆ ಅದು ಗೊತ್ತಾಗುತ್ತದೆ. ಅದನ್ನು ಅಷ್ಟು ಹೈಲೆಟ್ ಮಾಡುವ ಅವಶ್ಯಕತೆ ಇಲ್ಲ ಎಂದರು.

ಬೆಳಗಾವಿ ದೊಡ್ಡ ಜಿಲ್ಲೆ. ಹೀಗಾಗಿ, ಮೂರು ಸ್ಥಾನ ಕೊಡಬೇಕು. ಕೊಟ್ಟರೆ ಒಳ್ಳೆಯದಾಗುತ್ತದೆ. ಯಾರಿಗೆ ಕೊಡಬೇಕು ಅಂತಾ ನಾನೇನು ಶಿಫಾರಸು ಮಾಡಿಲ್ಲ. ಹೈಕಮಾಂಡ್ ತೀರ್ಮಾನಿಸುತ್ತದೆ. ಜಿಲ್ಲೆಯವರು ನಮಗೆ ಯಾರು ಸಂಪರ್ಕ ಮಾಡಿಲ್ಲ. ಮುಂದಿನ ಚುನಾವಣೆಗೆ ದೃಷ್ಟಿ ಇಟ್ಟುಕೊಂಡು ಮಾಡುತ್ತಾರೆ ಎಂದು ಸತೀಶ್ ಜಾರಕಿಹೊಳಿ ಹೇಳಿದರು. ಸಚಿವ ಸಂಪುಟ ವಿಸ್ತರಣೆ ಬೇಗ ಆಗಬೇಕು ಅಷ್ಟೇ ಎಂದರು.

> ಮಳೆ ಕೊರತೆ ಮುಂದುವರಿದರೆ, ಕೇಂದ್ರದ ಮಾನದಂಡದಂತೆ ಬರಪೀಡಿತ ತಾಲೂಕುಗಳ ಘೋಷಣೆ
>
> ಬೀದರ್‌ನಲ್ಲಿ ಮಾತನಾಡಿದ ಸಚಿವ ಯತೀಂದ್ರ ಸಿದ್ದರಾಮಯ್ಯ, ರಾಜ್ಯದಲ್ಲಿ ಮಳೆಯ ಕೊರತೆ ಈ ತಿಂಗಳಾಂತ್ಯದವರೆಗೂ ಮುಂದುವರೆದರೆ, ಕೇಂದ್ರ ಸರ್ಕಾರದ ಮಾನದಂಡಗಳ ಆಧಾರದ ಮೇಲೆ ಬರ ಪೀಡಿತ ತಾಲ್ಲೂಕುಗಳ ಘೋಷಣೆ ಸಾಧ್ಯವಾಗಲಿದೆ. ನಂತರ ರಾಜ್ಯ ಸರ್ಕಾರ ಬರಪೀಡಿತ ತಾಲೂಕುಗಳ ಘೋಷಣೆಗೆ ಕೇಂದ್ರ ಪ್ರಸ್ತಾವನೆ ಸಲ್ಲಿಸಲಿದೆ ಎಂದರು. ಮಳೆ ಕೊರತೆಯ ಬಗ್ಗೆ ಕೇಂದ್ರ ಸರ್ಕಾರ ನಿರ್ದಿಷ್ಟವಾದ ನಿಯಮಗಳನ್ನು ರೂಪಿಸಿದೆ. ಯಾವ ಪ್ರಮಾಣದಲ್ಲಿ ಬೆಳೆಹಾನಿಯಾಗಿದೆ, ಮಳೆ ಕೊರತೆಯ ಪ್ರಮಾಣವೆಷ್ಟು ಎಂಬೆಲ್ಲಾ ಅಂಶಗಳನ್ನು ಪರಿಶೀಲಿಸಿ ಬಳಿಕ ಬರ ಪೀಡಿತ ತಾಲ್ಲೂಕುಗಳ ಘೋಷಣೆ ಮಾಡಬೇಕು. ರಾಜ್ಯ ಸರ್ಕಾರ ಬರ ನಿರ್ವಹಣೆಗೆ ಈಗಾಗಲೇ ಸಾಕಷ್ಟು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ. ಕುಡಿಯುವ ನೀರಿನ ಕೊರತೆಯಾಗದಂತೆ ಎಚ್ಚರಿಕೆ ವಹಿಸಿರುವುದಾಗಿ ತಿಳಿಸಿದರು.

## ಕರ್ನಾಟಕ ಲೋಕಸೇವಾ ಆಯೋಗದ ಹಂಗಾಮಿ ಅಧ್ಯಕ್ಷರಾಗಿ ಡಾ.ಬಿ.ಪ್ರಭುದೇವ್



ಡಾ. ಬಿ. ಪ್ರಭುದೇವ್ ಅವರು ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲೂಕಿನ ನೆಲಮನೆ ಗ್ರಾಮದಲ್ಲಿ ದಿ. ಬಸವೇಗೌಡ ಮತ್ತು ದಿ. ಕೆಂಪಮ್ಮ ದಂಪತಿಗಳ ಪುತ್ರರಾಗಿ ಜನಿಸಿದ್ದು ಪತ್ನಿ ಉಷಾ ಅಮೆರಿಕದ ಪ್ರತಿಷ್ಠಿತ ಕಂಪೆನಿಯಲ್ಲಿ ಉದ್ಯೋಗಿಯಾಗಿದ್ದರು. ಇವರ ಪುತ್ರ ಪ್ರದ್ಯುಮ್ನ ಅಮೆರಿಕದ ಅಲಾಸ್ಕಾ ರಾಜ್ಯದ ಕೆಚಿಗನ್‌ನ ಆಟಾರ್ನಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಡಾ ಪ್ರಭುದೇವ್ ಅವರು ತಮ್ಮ ಹೈಸ್ಕೂಲ್ ಶಿಕ್ಷಣವನ್ನು ಮೈಸೂರಿನ ಮರಿಮಲ್ಲಪ್ಪ ಹೈಸ್ಕೂಲ್‌ನಲ್ಲಿ ಪೂರೈಸಿದ್ದು, ಮಂಡ್ಯ ಪಿ.ಇ.ಎಸ್ ಕಾಲೇಜಿನಲ್ಲಿ ಬಿ.ಇ ಮೆಕ್ಯಾನಿಕಲ್ ಹಾಗೂ ಮೈಸೂರು ವಿ ವಿ ಯಿಂದ ಎಮ್. ಬಿ. ಎ ಪದವಿ ಹಾಗೂ ವಿ ಟಿ ಯು ವಿವಿ ಯಿಂದ ಡಾಕ್ಟರೇಟ್ ಪದವಿ ಪಡೆದಿದ್ದಾರೆ.

ತಮ್ಮ ವೃತ್ತಿಜೀವನವನ್ನು ಅಮೇರಿಕಾದ ಡೆಟ್ರಾಯಿಟ್ ನ ಪ್ರತಿಷ್ಠಿತ ಫೋರ್ಡ್ ಕಂಪನಿಯಿಂದ ಆರಂಭಿಸಿ, ಅಲ್ಲಿ 10 ವರ್ಷಗಳ ಸೇವಾನುಭವದ ಮೇಲೆ ಉನ್ನತ ಹುದ್ದೆಗೆ ಬಡ್ತಿ ಹೊಂದಿದ್ದರು. ತಾಯ್ನಾಡಿನ ಸೇವೆಯ ತುಡಿತ ಅವರನ್ನು ಪುನಃ ಭಾರತಕ್ಕೆ ಮರಳುವಂತೆ ಮಾಡಿದ್ದು ನಂತರ ವಾಣಿಜ್ಯ ತೆರಿಗೆ ಇಲಾಖೆ, ಪ್ರವಾಸೋದ್ಯಮ ಇಲಾಖೆ,ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ಹಾಗೂ ಕಾರ್ಮಿಕ ಇಲಾಖೆಯಲ್ಲಿ ಉನ್ನತ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸಿ ಉತ್ತಮ ಅಧಿಕಾರಿಯೆಂದು ಹೆಸರು ಗಳಿಸಿದ್ದಾರೆ. ಇವರ ಅಸಾಧಾರಣ ಸೇವೆಯನ್ನು ಗುರುತಿಸಿದ ಸರ್ಕಾರ ಇವರನ್ನು ದಿ. 8.4.2021 ರಂದು ಕರ್ನಾಟಕ ಲೋಕಸೇವಾ ಆಯೋಗದ ಸದಸ್ಯರನ್ನಾಗಿ ನೇಮಿಸಿತು.

**ಪಾರದರ್ಶಕತೆ ಮತ್ತು ಚುರುಕುತನಕ್ಕೆ ಹೆಸರುವಾಸಿ**

ಕೆ ಪಿ ಎಸ್ಸಿ ಯಲ್ಲಿ ಪಾರದರ್ಶಕತೆ ಹಾಗೂ ಅತೀ ವೇಗಕ್ಕೆ ಚಾಲನೆ ನೀಡಿದ ಕೀರ್ತಿ ಇವರದು. ಕೆಪಿಎಸ್ಸಿ ಯ ಆಮೇಗತಿ ನಡಿಗೆಗೆ ಯಾವಾಗಲೂ ಚಾಟಿ ಬೀಸುವ ಇವರು ಅಭ್ಯರ್ಥಿಗಳ ವ್ಯಕ್ತಿತ್ವಪರೀಕ್ಷೆಯಲ್ಲಿ ಅತ್ಯಂತ ಪ್ರಬುದ್ಧ ಹಾಗೂ ವಾಸ್ತವಿಕ ಅಂಶಗಳ ಮೇಲೆ ಅಭ್ಯರ್ಥಿಗಳ ಸಂದರ್ಶನ ನಡೆಸಿದ ಹೆಗ್ಗಳಿಕೆ ಇವರದ್ದು. ಕರ್ನಾಟಕ ಲೋಕಸೇವಾ ಆಯೋಗಕ್ಕೆ ಅಂಟಿರುವ ಕಳಂಕ ತೊಡೆಯಲು ಇತರೇ ಸದಸ್ಯರುಗಳೊಂದಿಗೆ ಸೇರಿ ಸಮಗ್ರ ಕಾರ್ಯ ಯೋಜನೆ ರೂಪಿಸಿದ್ದಾರೆ. ನೇಮಕಾತಿಯಲ್ಲಿ ಸಂಪೂರ್ಣ ಪಾರದರ್ಶಕತೆ, ಯು ಪಿ ಎಸ್ಸಿ ಮಾದರಿಯಲ್ಲಿ ನೇಮಕಾತಿ ಹಾಗೂ ಅಧಿಸೂಚನೆ ಹೊರಡಿಸಿದ 3 ತಿಂಗಳೊಳಗೆ ನೇಮಕಾತಿ ಪಟ್ಟಿ ಪ್ರಕಟಿಸುವ ಮೂಲಕ ಲಕ್ಷಾಂತರ ಉದ್ಯೋಗ ಆಕಾಂಕ್ಷಿಗಳಲ್ಲಿ ಹೊಸ ಭರವಸೆಯನ್ನು ಬಿತ್ತಿದ್ದಾರೆ.

**ತೊಡೆಯುವರೇ ಕೆ ಪಿ ಎಸ್‌ಸಿಗೆ ಅಂಟಿರುವ ಕಳಂಕ**

ಈಗಾಗಲೇ ದಕ್ಷ ಕಾರ್ಯದರ್ಶಿಗಳನ್ನು ಹೊಂದಿರುವ ಕೆಪಿಎಸ್‌ಸಿಗೆ ಅಂಟಿರುವ ಕಳಂಕವನ್ನು ತೊಡೆಯುವ ಹಾಗೂ ಕಾಯಕಲ್ಪ ನೀಡುವ ದೊಡ್ಡ ಜವಾಬ್ದಾರಿ ಡಾ ಪ್ರಭುದೇವ್ ಹಾಗೂ ಅವರ ತಂಡದ ಸದಸ್ಯರ ಮೇಲಿದೆ. ಹಾಲಿ ಸದಸ್ಯರೊಂದಿಗೆ ಈಗಾಗಲೇ ಸಮಗ್ರ ಯೋಜನೆ ರೂಪಿಸಿರುವ ಹಂಗಾಮಿ ಅಧ್ಯಕ್ಷರು ಸರ್ಕಾರದ ಸಮನ್ವಯದೊಂದಿಗೆ ಶೀಘ್ರ ಹಾಗೂ ಪಾರದರ್ಶಕ ನೇಮಕಾತಿಗೆ ಹೆಜ್ಜೆಯನ್ನಿಡುವ ಭರವಸೆ ದೊರೆತಿದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಜುಲೈ 14 2026, ಮಂಗಳವಾರ

## ಒಳಪುಟಗಳಲ್ಲಿ

ಹೂಡಿಕೆ ಆಕರ್ಷಣೆಗೆ ಕೋಲ್ಕತ್ತಾದಲ್ಲಿ ಸಚಿವ ಎಂಬಿಪಿ ರೋಡ್‌ಶೋ - ಪು.24

ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅಮಾನತು - ಪು.5

ಉತ್ತರ ಕರ್ನಾಟದ ರೈತರ ಬಗ್ಗೆ ರಾಜ್ಯ ಸರ್ಕಾರ ನಿರ್ಲಕ್ಷ್ಯ: ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಆರೋಪ - ಪು.6

ಪೋಕ್ಸೋ ಪ್ರಕರಣ: ವಚನಾನಂದ ಶ್ರೀಗೆ ದಾವಣಗೆರೆ ಕೋರ್ಟ್ ಷರತ್ತುಬದ್ಧ ಜಾಮೀನು - ಪು.7

# ರೈತರ ರಕ್ಷಣೆ, ನೀರು ಪೂರೈಕೆ, ಕೋರ್ಟ್ ಆದೇಶ ಪಾಲಿಸಬೇಕು

**ಬೆಂಗಳೂರು, ಜು.13:** ಕಾವೇರಿ ವಿಚಾರದಲ್ಲಿ ರೈತರನ್ನು ಬದುಕಿಸಬೇಕು. ಕುಡಿಯುವ ನೀರನ್ನು ಪೂರೈಸಬೇಕು, ತಮಿಳುನಾಡು ಪಾಲಿನ ನೀರು ಹರಿಸುವ ಕೋರ್ಟ್ ಆದೇಶವನ್ನು ಪಾಲನೆ ಮಾಡಬೇಕು. 15ರಂದು ಕಾವೇರಿ ಮಂಡಳಿ ಸಭೆ ನಡೆಯಲಿದೆ. ಆ ಸಭೆಯಲ್ಲಿ ರಾಜ್ಯದ ವಾದ ಮಂಡಿಸುತ್ತೇವೆ. ನಂತರ ತೀರ್ಮಾನವನ್ನು ತಿಳಿಸುತ್ತೇವೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.



■ ಜು.15ರ ಸಭೆಯ ಬಳಿಕ ಕಾವೇರಿ ನೀರು ಹರಿಸುವ ಬಗ್ಗೆ ತೀರ್ಮಾನ: ಸಿಎಂ ಡಿ.ಕೆ. ಶಿವಕುಮಾರ್

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯ ಶಾಸಕರು ಕಾವೇರಿ ನೀರು ಬಿಡುವಂತೆ ಮನವಿ ಮಾಡಿರುವ ಬಗ್ಗೆ ಕೇಳಿದಾಗ, ಮಂಡ್ಯದವರು, ಶ್ರೀರಂಗಪಟ್ಟಣದವರು, ಜಿಲ್ಲಾ ಸಚಿವರು ಬಂದು ಭೇಟಿ ಮಾಡಿದ್ದರು. ಸಭೆ ಬಳಿಕ ತೀರ್ಮಾನ ತಿಳಿಸುತ್ತೇವೆ ಎಂದು ಹೇಳಿದರು.

ಕೆಪಿಎಸ್‌ಸಿ ಅಧ್ಯಕ್ಷರ ಅಮಾನತ್ತಿನ ಬಗ್ಗೆ ಕೇಳಿದಾಗ, ರಾಜ್ಯಪಾಲರು ಆದೇಶ ಮಾಡಿದ್ದಾರೆ. ಅವರ ನಂತರ ಯಾರು ಹಿರಿಯರು ಇದ್ದಾರೋ ಅವರಿಗೆ ಜವಾಬ್ದಾರಿ ನೀಡುವಂತೆ ನಿರ್ದೇಶನ ನೀಡಿದ್ದೇನೆ ಎಂದರು.

**ಟಿಟಿಡಿ ಮಾರ್ಗಸೂಚಿಯಲ್ಲಿ ಹಸ್ತಕ್ಷೇಪ ಮಾಡಲ್ಲ:** ತಿರುಪತಿಯಲ್ಲಿ ಮಹಾರಾಜರ ಕಾಲದಿಂದಲೂ ಮೊದಲ ಆರತಿ ಕರ್ನಾಟಕದ್ದಾಗಿದೆ. ಅಲ್ಲಿ ಪ್ರತಿದಿನ ಅಧಿಕಾರಿಯೊಬ್ಬರು ಆರತಿ ಪಡೆಯುತ್ತಾರೆ. ಆ ಅಧಿಕಾರಿ ಬದಲಿಗೆ ಇಲ್ಲಿಂದ ದರ್ಶನಕ್ಕೆ ಹೋಗುವ ಜನಪ್ರತಿನಿಧಿಗಳು, ನ್ಯಾಯಾಧೀಶರು, ಅಧಿಕಾರಿಗಳಿಗೆ, ಸಂಸದರು, ಮೇಯರ್, ತಹಶೀಲ್ದಾರ್ ಸೇರಿ ಕರ್ನಾಟಕದವರಿಗೆ ಅವಕಾಶ ನೀಡಲಾಗುವುದು. ಇದು ನಿರ್ದಿಷ್ಟ ಪಕ್ಷಕ್ಕೆ ಎಂದು ಸೀಮಿತವಲ್ಲ. ಯಾವುದೇ ಪಕ್ಷದ ಜನಪ್ರತಿನಿಧಿಗಳು ಹೋದರೂ ಈ ಅವಕಾಶ ಅವರಿಗೆ ಸಿಗಬೇಕು. ಇದಕ್ಕೆ ನಿರ್ದಿಷ್ಟ ಮಾರ್ಗಸೂಚಿಗಳಿದ್ದು, ಅದರಂತೆಯೇ ಈ ಅವಕಾಶ ನೀಡಲಾಗುವುದು. ನಮ್ಮ ತೀರ್ಮಾನ ಕೇವಲ ಆರತಿ ವಿಚಾರಕ್ಕೆ ಮಾತ್ರ. ಉಳಿದಂತೆ ಎಲ್ಲಾ ಮಾರ್ಗಸೂಚಿಗಳು ತಿರುಪತಿ ಆಡಳಿತ ಮಂಡಳಿಯಂತೆ ಇರಲಿದೆ. ಅವರ ಮಾರ್ಗಸೂಚಿಯಲ್ಲಿ ನಾವು ಹಸ್ತಕ್ಷೇಪ ಮಾಡುವುದಿಲ್ಲ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

### ಆ.6ರಿಂದ ಅಧಿವೇಶನ, ವರಿಷ್ಠರು ಕರೆದಾಗ ದೆಹಲಿಗೆ

ಗೃಹ ಕಚೇರಿ ಕೃಷ್ಣಾದಲ್ಲಿ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಆಗಸ್ಟ್ 6ರಂದು ವಿಧಾನ ಮಂಡಲ ಅಧಿವೇಶನ ಆರಂಭವಾಗಲಿದೆ. ಮೂರ್ನಾಲ್ಕು ದಿನದಲ್ಲಿ ದೆಹಲಿಗೆ ಬರುವಂತೆ ವರಿಷ್ಠರು ಕರೆಯಲಿದ್ದಾರೆ ಆಗ ಹೋಗುತ್ತೇನೆ. ಸಂಪುಟ ವಿಸ್ತರಣೆ ಆಗುತ್ತದೆ, ವಿಸ್ತರಣೆ ಬಗ್ಗೆ ಮಾತಾಡುತ್ತೇನೆ. ಅದಕ್ಕೂ ಮುಂಚೆ ದೆಹಲಿಗೆ ಹೋಗುತ್ತೇನೆ. ನನಗೆ ಸ್ವಲ್ಪ ಕೆಲಸವಿದೆ. ಇದಾದ ಮೇಲೆ ನನಗೆ ಮೂರು, ನಾಲ್ಕು ದಿನಗಳಲ್ಲಿ ಡೇಟ್ ಕೊಡಲಿದ್ದಾರೆ. ಡೇಟ್ ಕೊಟ್ಟಾಗ ಹೋಗಿ ಬರುತ್ತೇನೆ ಎಂದರು.

## ಶೀಘ್ರವೇ ರಾಜ್ಯ ಸಚಿವ ಸಂಪುಟ ವಿಸ್ತರಣೆ: ಮಲ್ಲಿಕಾರ್ಜುನ ಖರ್ಗೆ



**ಬೆಂಗಳೂರು, ಜು.13:** ಆದಷ್ಟು ಶೀಘ್ರವಾಗಿ ಕರ್ನಾಟಕದಲ್ಲಿ ಸಂಪುಟ ವಿಸ್ತರಣೆ ಆಗಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ. ನಗರದ ಸದಾಶಿವ ನಗರದ ನಿವಾಸದ ಬಳಿ ಮಾಧ್ಯಮದವರೊಂದಿಗೆ ಸೋಮವಾರ ಮಾತನಾಡಿ, ರಾಹುಲ್ ಗಾಂಧಿ ಅವರು ದೆಹಲಿಗೆ ವಾಪಸಾಗಿದ್ದಾರೆ. ಸಂಪುಟ ವಿಸ್ತರಣೆ ವಿಚಾರವಾಗಿ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಈ ಸಂಬಂಧ ಸಿಎಂ ಡಿ.ಕೆ. ಶಿವಕುಮಾರ್, ಮಾಜಿ ಸಿಎಂ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರಿಗೆ ದೆಹಲಿಗೆ ಬುಲಾವ್ ನೀಡುವ ಸಾಧ್ಯತೆ ಇದೆ.

ಅಯೋಧ್ಯೆ ರಾಮಮಂದಿರ ದೇಣಿಗೆ ಪ್ರಕರಣದ ಸಿಬಿಐ ತನಿಖೆ ಕೋರಿದ್ದ ಅರ್ಜಿಗಳ ವಿಚಾರಣೆ

## ಕೇಂದ್ರ, ಉತ್ತರ ಪ್ರದೇಶ ಸರ್ಕಾರ, ಟ್ರಸ್ಟ್‌ಗೆ ಸುಪ್ರೀಂ ನೋಟಿಸ್

**ನವದೆಹಲಿ, ಜು.13:** ಅಯೋಧ್ಯೆಯ ಶ್ರೀರಾಮ ಮಂದಿರದ ದೇಣಿಗೆ ದುರ್ಬಳಕೆ ಮತ್ತು ಕಳ್ಳತನ ಆರೋಪಗಳ ಕುರಿತು ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ಸಿಬಿಐ ತನಿಖೆ ನಡೆಸುವಂತೆ ಕೋರಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ಕೇಂದ್ರ ಸರ್ಕಾರ, ಉತ್ತರ ಪ್ರದೇಶ ಸರ್ಕಾರ ಹಾಗೂ ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ಗೆ ನೋಟಿಸ್ ಜಾರಿಗೊಳಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠವು ಅರ್ಜಿದಾರರ ವಾದ ಆಲಿಸಿದ ಬಳಿಕ ಪ್ರತಿವಾದಿಗಳಿಂದ ಉತ್ತರ ಕೇಳಿದ್ದು, ಪ್ರಕರಣದ ಮುಂದಿನ ವಿಚಾರಣೆ ಸೋಮವಾರಕ್ಕೆ ನಿಗದಿಪಡಿಸಿದೆ.





ರಾಮಮಂದಿರಕ್ಕೆ ಭಕ್ತರು ನೀಡಿದ ದೇಣಿಗೆ ಹಣದ ಕಳ್ಳತನ ಮತ್ತು ಹಣಕಾಸಿನ ಅಕ್ರಮಗಳ ಬಗ್ಗೆ ಸ್ವತಂತ್ರ ಹಾಗೂ ನ್ಯಾಯಸಮ್ಮತ ತನಿಖೆ ನಡೆಯಬೇಕಾದರೆ ಸಿಬಿಐಗೆ ತನಿಖೆ ವಹಿಸಬೇಕು ಎಂದು ಮನವಿ ಮಾಡಿದ್ದಾರೆ. ಜೊತೆಗೆ ಸುಪ್ರೀಂ ಕೋರ್ಟ್‌ನ ಮೇಲ್ವಿಚಾರಣೆಯಲ್ಲೇ ತನಿಖೆ ನಡೆಯಬೇಕು ಹಾಗೂ ಟ್ರಸ್ಟ್‌ನ ಹಣಕಾಸು ವ್ಯವಹಾರಗಳ ಕುರಿತು ಸಿಎಜಿ ಆಡಿಟ್ ನಡೆಸುವಂತೆ ಅರ್ಜಿದಾರರು ಕೋರಿದ್ದಾರೆ.

ಅರ್ಜಿಯಲ್ಲಿ, ದೇಣಿಗೆ ಹಣದ ದುರ್ಬಳಕೆ ಕುರಿತ ಆರೋಪಗಳು ಸಾರ್ವಜನಿಕರ ನಂಬಿಕೆಗೆ ಸಂಬಂಧಿಸಿದ ಗಂಭೀರ ವಿಷಯವಾಗಿದ್ದು, ಸಾಮಾನ್ಯ ತನಿಖೆಗಿಂತ ಸ್ವತಂತ್ರ ಸಂಸ್ಥೆಯಿಂದ ತನಿಖೆ ನಡೆಸಿದರೆ ಮಾತ್ರ ಸತ್ಯಾಂಶ ಹೊರಬರಲಿದೆ ಎಂದು ವಾದಿಸಲಾಗಿತ್ತು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಉತ್ತರ ಪ್ರದೇಶದಲ್ಲಿ ತನಿಖೆ ನಡೆಯುತ್ತಿದ್ದು, ಹಲವರನ್ನು ಬಂಧಿಸಲಾಗಿದೆ. ಆದಾಗ್ಯೂ, ಈ ತನಿಖೆ ಸಮರ್ಪಕವಾಗಿಲ್ಲ ಎಂದು ಅರ್ಜಿದಾರರು ಆರೋಪಿಸಿದ್ದು, ಸಂಪೂರ್ಣ ಪ್ರಕರಣವನ್ನು ಸಿಬಿಐಗೆ ವಹಿಸಿ ಸಮಯಬದ್ಧ ತನಿಖೆ ನಡೆಸುವಂತೆ ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿದ್ದಾರೆ.

ವಿಚಾರಣೆ ವೇಳೆ ನೋಟಿಸ್ ನೀಡದಂತೆ ಸರ್ಕಾರದ ಹಾಜರಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಮನವಿ ಮಾಡಿದರು. ಆದರೆ ಇದಕ್ಕೆ ಒಪ್ಪದ ಸುಪ್ರೀಂಕೋರ್ಟ್ ನೋಟಿಸ್ ಜಾರಿ ಮಾಡಿತು, ಅಲ್ಲದೇ ಯಾವುದೇ ದೊಡ್ಡ ಹಣಕಾಸು ವ್ಯವಹಾರ ನಡೆಸದಂತೆ ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ಗೆ ನಿರ್ದೇಶಿಸಿದೆ. ಅಲ್ಲದೇ ತನಿಖಾ ವರದಿಯನ್ನು ಸಲ್ಲಿಸಲು ಎಸ್‌ಐಟಿಗೆ ಕೋರ್ಟ್ ಸೂಚಿಸಿದೆ. ಈ ವರದಿಯನ್ನು ಮುಚ್ಚಿದ ಲಕೋಟೆಯಲ್ಲಿ ನೀಡುವುದಾಗಿ ತುಷಾರ್ ಮೆಹ್ತಾ ಹೇಳಿದರು.

## ಹಾರ್ಮುಜ್ ಮೂಲಕ ಸಾಗುವ ಸರಕುಗಳ ಮೇಲೆ ಶೇ.20 ಸುಂಕ: ಟ್ರಂಪ್

**ವಾಷಿಂಗ್ಟನ್, ಜು.13:** ಮಧ್ಯಪ್ರಾಚ್ಯ ಸಂಘರ್ಷ ಉಲ್ಬಣಗೊಳ್ಳುತ್ತಿರುವ ನಡುವೆ ಇರಾನ್ ಮೇಲೆ ಮುಗಿಬಿದ್ದಿರುವ ಅಮೆರಿಕ ಇದೀಗ ಹಾರ್ಮುಜ್ ಜಲಸಂಧಿ ಮೂಲಕ ಹಾದುಹೋಗುವ ನೌಕೆಗಳಿಗೆ ಭದ್ರತೆಗೆ ಸರಕು ಸಾಗಣೆಯ ಮೇಲೆ ಶೇ.20 ಶುಲ್ಕ ಹೇರುವಂತೆ ಆದೇಶ ಹೊರಡಿಸಿದೆ.

ಹಾರ್ಮುಜ್ ಜಲಸಂಧಿಯ ಭದ್ರತೆಯನ್ನು ಅಮೆರಿಕವೇ ನೋಡಿಕೊಳ್ಳಲಿದ್ದು, ಈ ಮಾರ್ಗದ ಮೂಲಕ ಸಾಗುವ ಎಲ್ಲಾ ಸರಕುಗಳ ಮೇಲೆ ಶೇ.20ರಷ್ಟು ಶುಲ್ಕ ವಿಧಿಸಲಾಗುವುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಇರಾನ್ ವಿರುದ್ಧದ ನಿರ್ಬಂಧವನ್ನು ಮತ್ತೆ ಜಾರಿಗೊಳಿಸುತ್ತಿರುವುದಾಗಿ ಹೇಳಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣ ಟ್ರೂತ್ ಸೋಶಿಯಲ್‌ನಲ್ಲಿ ಪೋಸ್ಟ್ ಮಾಡಿರುವ ಟ್ರಂಪ್, ಇನ್ನು ಮುಂದೆ ಅಮೆರಿಕವನ್ನು 'ಹೋರ್ಮುಜ್ ಜಲಸಂಧಿಯ ರಕ್ಷಕ' ಎಂದು ಕರೆಯಲಾಗುವುದು. ಈ ಅತ್ಯಂತ ಸೂಕ್ಷ್ಮ ಸಮುದ್ರ ಮಾರ್ಗದಲ್ಲಿ ಭದ್ರತೆ ಒದಗಿಸಲು ಅಮೆರಿಕ ಮಾಡುತ್ತಿರುವ ವೆಚ್ಚವನ್ನು ಭರಿಸಲು, ಈ ಮಾರ್ಗದ ಮೂಲಕ ಸಾಗುವ ಎಲ್ಲ ಸರಕುಗಳ ಮೇಲೆ ಶೇ.20ರಷ್ಟು ಶುಲ್ಕ ವಿಧಿಸಲಾಗುತ್ತದೆ. ಈ ಪ್ರಕ್ರಿಯೆಯನ್ನು ತಕ್ಷಣವೇ ಆರಂಭಿಸಲಾಗುವುದು" ಎಂದು ತಿಳಿಸಿದ್ದಾರೆ.

### ಹಡಗುಗಳಿಗೆ ಅಮೆರಿಕದಿಂದಲೇ ಭದ್ರತೆ, ಇರಾನ್ ವಿರುದ್ಧ ನಿರ್ಬಂಧ ಮರುಜಾರಿ



**ಇರಾನ್ ಇದ್ದರೂ ಹಾರ್ಮುಜ್ ಓಪನ್:** ಹಾರ್ಮುಜ್ ಜಲಸಂಧಿ ತೆರೆದಿದ್ದು, ಇರಾನ್ ಇದ್ದರೂ ಇಲ್ಲದಿದ್ದರೂ ಅದು ಮುಕ್ತವಾಗಿರುತ್ತದೆ.

ಇರಾನ್ ವಿರುದ್ಧದ ನಿರ್ಬಂಧ ಮರುಜಾರಿ ಮಾಡುತ್ತಿರುವ ಉದ್ದೇಶ ಆ ದೇಶದ ಹಡಗುಗಳು ಅಥವಾ ಅದರ ಗ್ರಾಹಕರ ಹಡಗುಗಳು ದೇಶದೊಳಗೆ ಪ್ರವೇಶಿಸದಂತೆ ಅಥವಾ ಹೊರಹೋಗದಂತೆ ತಡೆಯುವುದಾಗಿದೆ. ಉಳಿದ ಎಲ್ಲಾ ದೇಶಗಳು ಜಲಸಂಧಿಯನ್ನು ಮುಕ್ತವಾಗಿ ಬಳಸಬಹುದಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.


ಇದಕ್ಕೂ ಕೆಲವೇ ಗಂಟೆಗಳ ಮೊದಲು ಸುದ್ದಿವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಟ್ರಂಪ್, ಹಾರ್ಮುಜ್ ಜಲಸಂಧಿಯ ಮೇಲಿನ ನಿಯಂತ್ರಣವನ್ನು ಅಮೆರಿಕ ವಹಿಸಿಕೊಳ್ಳಲಿದೆ ಎಂದು ಹೇಳಿದ್ದರು. "ನಾವು ಜಲಸಂಧಿಯನ್ನು ನಮ್ಮ ನಿಯಂತ್ರಣಕ್ಕೆ ತೆಗೆದುಕೊಳ್ಳಲಿದ್ದೇವೆ.

ಬಹುಶಃ ಅದನ್ನು ನಾವೇ ನಿರ್ವಹಿಸುತ್ತೇವೆ. ನಾವು ಹಾರ್ಮುಜ್ ಜಲಸಂಧಿಯ ರಕ್ಷಕರಾಗುತ್ತೇವೆ. ಇದುವರೆಗೆ ಯಾವುದೇ ಪ್ರತಿಫಲವಿಲ್ಲದೆ ಈ ಜಲಸಂಧಿಗೆ ಭದ್ರತೆ ಒದಗಿಸಿದ್ದೇವೆ. ಇನ್ನು ಮುಂದೆ ಅದಕ್ಕಾಗಿ ನಮಗೆ ಹಣ ಪಾವತಿಸಬೇಕು. ನಮ್ಮ ಸೈನಿಕರನ್ನು ಅಪಾಯಕ್ಕೆ ಒಡ್ಡಿ ಭದ್ರತೆ ಒದಗಿಸುತ್ತಿದ್ದೇವೆ. ಅದರ ವೆಚ್ಚವನ್ನು ಶ್ರೀಮಂತ ರಾಷ್ಟ್ರಗಳು ಭರಿಸಬೇಕು" ಎಂದು ಟ್ರಂಪ್ ಹೇಳಿದ್ದಾರೆ.

ವಾರಾಂತ್ಯದಲ್ಲಿ ನಡೆದ ಸುದೀರ್ಘ ಮಾತುಕತೆಯಲ್ಲಿ ಹಲವು ವಿಷಯಗಳಿಗೆ ಒಪ್ಪಿಗೆ ಸೂಚಿಸಿದ ಬಳಿಕವೂ ಇರಾನ್ ತನ್ನ ನಿಲುವು ಬದಲಾಯಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ್ದಾರೆ. ನಿನ್ನೆ 11 ಗಂಟೆಗಳ ಕಾಲ ಸಭೆ ನಡೆಯಿತು.

ಎಲ್ಲ ವಿಷಯಗಳಿಗೂ ಒಪ್ಪಿಗೆ ನೀಡಲಾಯಿತು. ಆದರೆ ಸಭೆಯಿಂದ ಹೊರಬಂದ ಬಳಿಕ ಮತ್ತೆ ಕರೆ ಮಾಡಿ ಕೆಲವು ಬದಲಾವಣೆಗಳನ್ನು ಮಾಡಬೇಕೆಂದು ಕೇಳಿದರು" ಎಂದು ಟ್ರಂಪ್ ಹೇಳಿದ್ದಾರೆ.

## ಜು.20ರಿಂದ ಸಂಸತ್ ಮುಂಗಾರು ಅಧಿವೇಶನ



ಜು.19ರಂದು ಸರ್ವಪಕ್ಷ ಸಭೆ

ಮಹತ್ವದ ಸಾಂವಿಧಾನಿಕ, ಚುನಾವಣಾ ಸುಧಾರಣಾ ಮಸೂದೆ ಮಂಡಿಸಲು ಕೇಂದ್ರ ಸಿದ್ಧತೆ

ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ಪ್ರತಿಪಕ್ಷಗಳ ಸಜ್ಜು

**ನವದೆಹಲಿ, ಜು.13:** ಜುಲೈ 20ರಿಂದ ಸಂಸಂತ್‌ನ ಮುಂಗಾರು ಅಧಿವೇಶನ ಆರಂಭವಾಗಲಿದೆ. ಆ.13ರವರೆಗೆ ನಡೆಯಲಿರುವ 19 ದಿನಗಳ ಅಧಿವೇಶನವು ಅತ್ಯಂತ ಮಹತ್ವದ ಹಾಗೂ ರಾಜಕೀಯ ಸಂಘರ್ಷಕ್ಕೆ ಸಾಕ್ಷಿಯಾಗುವ ಸಾಧ್ಯತೆಯಿದೆ.

ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಪ್ರಮುಖ ಸಾಂವಿಧಾನಿಕ ಮತ್ತು ಚುನಾವಣಾ ಸುಧಾರಣಾ ಮಸೂದೆಗಳನ್ನು ಮಂಡಿಸಲು ಸಿದ್ಧತೆ ನಡೆಸುತ್ತಿದ್ದರೆ, ಪ್ರತಿಪಕ್ಷಗಳ 'ಇಂಡಿಯಾ' ಮೈತ್ರಿಕೂಟವು ನೀಟ್–ಯುಜಿ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ, ಹಣದುಬ್ಬರ ಮತ್ತು ನಿರುದ್ಯೋಗ ಸೇರಿ ಹಲವು ಪ್ರಮುಖ ವಿಷಯಗಳ ಮುಖೇನ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ಸಜ್ಜಾಗಿದೆ. ಮತ್ತೊಂದೆಡೆ ಸಂಸತ್ತಿನ ಸುಗಮ ಕಲಾಪವನ್ನು ಖಚಿತಪಡಿಸಿಕೊಳ್ಳಲು, ಕೇಂದ್ರ ಸರ್ಕಾರವು ಜುಲೈ 19ರಂದು ಸರ್ವಪಕ್ಷ ಸಭೆಯನ್ನು ಕರೆದಿದೆ.

ಈ ಮುಂಗಾರು ಅಧಿವೇಶನದ ಪ್ರಮುಖ ಅಂಶಗಳು ಈ ಕೆಳಗಿನಂತಿವೆ.

**ಸರ್ಕಾರದ ಪ್ರಮುಖ ಶಾಸಕಾಂಗ ಕಾರ್ಯಸೂಚಿ**

130ನೇ ಸಾಂವಿಧಾನಿಕ ತಿದ್ದುಪಡಿ ಮಸೂದೆ: ಯಾವುದೇ ಪ್ರಧಾನ ಮಂತ್ರಿ, ಮುಖ್ಯಮಂತ್ರಿ ಅಥವಾ ಸಂಪುಟ ಸಚಿವರು ಸತತ 30 ದಿನಗಳ ಕಾಲ ನ್ಯಾಯಾಂಗ ಬಂಧನದಲ್ಲಿದ್ದರೆ, ಅವರು ಸ್ವಯಂಚಾಲಿತವಾಗಿ ತಮ್ಮ ಅಧಿಕಾರವನ್ನು ಕಳೆದುಕೊಳ್ಳಬೇಕಾಗುತ್ತದೆ ಎಂಬ ಪ್ರಸ್ತಾವನೆ ಇದಾಗಿದೆ. ಇದು ಸಾಂವಿಧಾನಿಕ ಹೊಣೆಗಾರಿಕೆಯ ಕುರಿತು ತೀವ್ರ ಚರ್ಚೆಯನ್ನು ಹುಟ್ಟುಹಾಕಬಹುದು.

131ನೇ ಸಾಂವಿಧಾನಿಕ ತಿದ್ದುಪಡಿ ಮಸೂದೆ (ಮಹಿಳಾ ಮೀಸಲಾತಿ): ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿಯನ್ನು ಜಾರಿಗೆ ತರಲು, ಹೊಸ ಕ್ಷೇತ್ರ ಪುನರ್ವಿಂಗಡಣೆ (ಡಿಲಿಮಿಟೇಶನ್) ಪ್ರಕ್ರಿಯೆ ಮತ್ತು ಕೆಳಮನೆಯ ಸಂಖ್ಯಾಬಲವನ್ನು ಹೆಚ್ಚಿಸುವ ಪ್ರಸ್ತಾವನೆಯನ್ನು ಒಳಗೊಂಡ ಮಸೂದೆಯನ್ನು ಮರುಪರಿಚಯಿಸಲು ಎನ್‌ಡಿಎ ಸರ್ಕಾರ ಸಜ್ಜಾಗಿದೆ.

**ಇತರ ಸುಧಾರಣೆಗಳು:** ಸರ್ಕಾರವು 'ಒಂದು ದೇಶ, ಒಂದು ಚುನಾವಣೆ ಯೋಜನೆಯನ್ನು ಮುನ್ನಡೆಸಲು ಮತ್ತು ವಿದೇಶಿ ಕೊಡುಗೆ (ನಿಯಂತ್ರಣ) ಕಾಯ್ದೆಗೆ ತಿದ್ದುಪಡಿಗಳನ್ನು ತರಲು ಯೋಜಿಸಿದೆ.

**ಬದಲಾದ ಸಂಸತ್ತಿನ ಸಮೀಕರಣ:** ಪ್ರಾದೇಶಿಕ ಪಕ್ಷಗಳಾದ ತೃಣಮೂಲ ಕಾಂಗ್ರೆಸ್ ಮತ್ತು ಶಿವಸೇನಾ (ಯುಬಿಟಿ) ದಿಂದ ಕೆಲವು ಸದಸ್ಯರು ಪಕ್ಷಾಂತರ ಗೊಂಡಿರುವುದರಿಂದ ಆಡಳಿತಾರೂಢ ಎನ್‌ಡಿಎ ಮೈತ್ರಿಕೂಟದ ಬಲ ಹೆಚ್ಚಾಗಿದೆ. ಇದು ಸಾಂವಿಧಾನಿಕ ತಿದ್ದುಪಡಿಗಳಿಗೆ ಅಗತ್ಯವಿರುವ ಮೂರನೇ ಎರಡರಷ್ಟು ಬಹುಮತಕ್ಕೆ ಎನ್‌ಡಿಎಯನ್ನು ಮತ್ತಷ್ಟು ಹತ್ತಿರವಾಗಿಸಿದೆ.

**ಪ್ರತಿಪಕ್ಷಗಳ ತಂತ್ರ ಮತ್ತು ಹೋರಾಟ:** ಪ್ರತಿಪಕ್ಷಗಳು ಸಾರ್ವಜನಿಕ ಕಾಳಜಿಯ ಹಲವು ಪ್ರಮುಖ ವಿಷಯಗಳ ಮೇಲೆ ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳಲು ಸಿದ್ಧತೆ ನಡೆಸಿವೆ:

**ಪರೀಕ್ಷಾ ಅಕ್ರಮ:** ನೀಟ್–ಯುಜಿ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಗಳ ಕಾರ್ಯವೈಖರಿಯನ್ನು ಪ್ರಶ್ನಿಸಿ ಸರ್ಕಾರದಿಂದ ಹೊಣೆಗಾರಿಕೆಯನ್ನು ಒತ್ತಾಯಿಸಲಿವೆ.

**ಆರ್ಥಿಕ ಸಮಸ್ಯೆ:** ದೇಶದಲ್ಲಿ ಹೆಚ್ಚುತ್ತಿರುವ ಹಣದುಬ್ಬರ, ನಿರುದ್ಯೋಗ ಮತ್ತು ಅಗತ್ಯ ವಸ್ತುಗಳ ಬೆಲೆ ಏರಿಕೆಯ ಬಗ್ಗೆ ಪ್ರತಿಪಕ್ಷಗಳು ಧ್ವನಿ ಎತ್ತಲಿವೆ.

**ವಿವಾದಗಳು:** ಅಯೋಧ್ಯೆ ರಾಮಮಂದಿರದ ಕಾಣಿಕೆಗಳ ಕಳ್ಳತನದ ಆರೋಪ ಸೇರಿದಂತೆ ಆರ್ಥಿಕ ಅಕ್ರಮಗಳ ಬಗ್ಗೆ ಸರ್ಕಾರದಿಂದ ಪಾರದರ್ಶಕತೆಯನ್ನು ಪ್ರತಿಪಕ್ಷಗಳು ಒತ್ತಾಯಿಸಲಿವೆ. ಜೊತೆಗೆ, ಆಪರೇಷನ್ ಸಿಂಧೂರ್' ಕುರಿತ ಹೇಳಿಕೆಗೆ ಸಂಬಂಧಿಸಿದಂತೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ವಿರುದ್ಧ ಹಕ್ಕುಚ್ಯುತಿ ನೋಟಿಸ್ ನೀಡಲು ಕಾಂಗ್ರೆಸ್ ಯೋಜಿಸಿದೆ.

## ಬಿಡದಿ ಟೌನ್‌ಶಿಪ್: ಸರ್ವೇಗೆ ಬಂದ ಅಧಿಕಾರಿಗಳಿಗೆ ಘೇರಾವ್

### ಮಹಿಳೆಯರಿಂದ ಪೊರಕೆ ಹಿಡಿದು ಪ್ರತಿಭಟನೆ, ಕೆಲಕಾಲ ಪರಿಸ್ಥಿತಿ ಉದ್ವಿಗ್ನ



**ರಾಮನಗರ, ಜು.13:** ಬಿಡದಿ ಟೌನ್‌ಶಿಪ್ ವ್ಯಾಪ್ತಿಯಲ್ಲಿ ಜಮೀನು ಸರ್ವೇ ಮಾಡಲು ಬಂದ ಅಧಿಕಾರಿಗಳಿಗೆ ರೈತರು ಹಾಗೂ ಮಹಿಳೆಯರು ತೀವ್ರ ವಿರೋಧ ವ್ಯಕ್ತಪಡಿಸಿ ಹಲ್ಲೆ ನಡೆಸಿರುವ ಘಟನೆ ವರದಿಯಾಗಿದೆ. ಪರಿಸ್ಥಿತಿ ಉದ್ವಿಗ್ನಗೊಂಡ ವೇಳೆ ಕೆಲ ಮಹಿಳೆಯರು ಪೊರಕೆ ಹಿಡಿದು ಪ್ರತಿಭಟನೆ ನಡೆಸಿದರು. ಬಿಡದಿ ಟೌನ್‌ಶಿಪ್‌ಗೆ ಸಂಬಂಧಿಸಿದ ವಿವಾದ ದಿನದಿಂದ ದಿನಕ್ಕೆ ತೀವ್ರ ಸ್ವರೂಪ ಪಡೆಯುತ್ತಿದ್ದು, ಜಮೀನು ಸರ್ವೇಗಾಗಿ ಸೋಮವಾರ ಮಧ್ಯಾಹ್ನ ಬಿಡದಿ ತಾಲೂಕಿನ ಮಂಡಲಹಳ್ಳಿ ಗ್ರಾಮದಲ್ಲಿ ಜೆಎಂಸಿ ಸರ್ವೇಗೆ ಆಗಮಿಸಿದ ಅಧಿಕಾರಿಗಳನ್ನು ರೈತರು ಹಾಗೂ ಮಹಿಳೆಯರು ಅವರನ್ನು ಸುತ್ತುವರಿದು (ಘೇರಾವ್) ತರಾಟೆಗೆ ತೆಗೆದುಕೊಂಡರು. ಹಾಗೂ ಸರ್ವೇ ನಡೆಸದಂತೆ ನೀಡಿದ ಎಚ್ಚರಿಕೆ ಹೊರತಾಗಿಯೂ ಸರ್ವೆ ಕಾರ್ಯಕ್ಕೆ ಮುಂದಾದ ಅಧಿಕಾರಿಗಳಿಗೆ ರೈತ ಮಹಿಳೆಯರು ಪೊರಕೆ ಏಟು ಕೊಟ್ಟಿದ್ದಾರೆ.

ಘಟನಾ ಸ್ಥಳದಲ್ಲಿ ಪರಿಸ್ಥಿತಿ ಉದ್ವಿಗ್ನವಾಗುತ್ತಿದ್ದಂತೆ ಪೊಲೀಸರು ಮಧ್ಯ ಪ್ರವೇಶಿಸಿದರು. ಈ ವೇಳೆ ಪ್ರತಿಭಟನಾಕಾರರು ಮತ್ತು ಪೊಲೀಸರ ನಡುವೆ ಮಾತಿನ ಚಕಮಕಿ ನಡೆದಿದ್ದು, ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು. ಪ್ರತಿಭಟನಕಾರರು ಅಧಿಕಾರಿಗಳು ಸ್ಥಳವನ್ನು ತಕ್ಷಣ ತೊರೆಯಬೇಕು ಎಂದು ಒತ್ತಾಯಿಸಿದರು.ನಮ್ಮನ್ನು ಬೇಕಾದರೆ ಬಂಧಿಸಿ, ಸಾಯಿಸಿ. ಆದರೆ ಬಿಡದಿ ಟೌನ್‌ಶಿಪ್ ಯೋಜನೆಗೆ ಅವಕಾಶ ನೀಡುವುದಿಲ್ಲ ಎಂದು ರೈತರು ಆಕ್ರೋಶ ಹೊರಹಾಕಿದರು. ಘಟನೆ ಬೆನ್ನಲ್ಲೇ ಇನ್ನೂ ಸ್ಥಳಕ್ಕೆ ಭೇಟಿ ನೀಡಿದ ಎಸ್‌ಪಿ ಶ್ರೀನಿವಾಸ ಗೌಡ ರೈತರ ಜೊತೆಗೆ ಮಾತುಕತೆ ನಡೆಸಿದ್ದಾರೆ. ಎಎಸ್‌ಪಿ ರಾಮಚಂದ್ರಯ್ಯ, ಡಿವೈಎಸ್ಪಿ ಗಿರೀಶ್ ಸ್ಥಳದಲ್ಲೇ ಬೀಡುಬಿಟ್ಟಿದ್ದಾರೆ. ಪ್ರಸ್ತುತ ಪ್ರದೇಶದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದ್ದು, ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ಶಾಂತಿಯುತ ಹೋರಾಟ ಹತ್ತಿಕ್ಕಲು ರಾಜ್ಯ ಸರ್ಕಾರ ಚಿತಾವಣೆ: ಎಚ್‌ಡಿಕೆ

**ಬೆಂಗಳೂರು, ಜು.13:** ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ನಡೆಸುತ್ತಿರುವ ಶಾಂತಿಯುತ ಹೋರಾಟವನ್ನು ಹತ್ತಿಕ್ಕಲು ರಾಜ್ಯ ಸರ್ಕಾರ ಚಿತಾವಣೆ ನಡೆಸಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.



ಈ ಸಂಬಂಧ ಹೇಳಿಕೆ ನೀಡಿರುವ ಅವರು, ಸರ್ಕಾರದ ಸೂಚನೆಯಂತೆ ಶಾಂತಿಯುತ ಹೋರಾಟ ನಡೆಸುತ್ತಿರುವ ರೈತರ ಮೇಲೆ ದೌರ್ಜನ್ಯ ಎಸಗಿದರೆ, ಸರ್ಕಾರದ ಕೆಟ್ಟ ನಡವಳಿಕೆಯ ಆರೋಪ ನಿಮ್ಮ ಮೇಲೂ ಬರಲಿದೆ ಎಂದು ಅಧಿಕಾರಿಗಳಿಗೆ ಎಚ್ಚರಿಸಿದ್ದಾರೆ. ಸರ್ಕಾರದ ಚಿತಾವಣೆಯಿಂದ ಬಿಡದಿ ಬಳಿ ಅಹಿತಕರ ಘಟನೆ ಜರುಗಿದೆ ಎಂದ ಅವರು, 500 ದಿನಗಳಿಂದ ಟೌನ್‌ಶಿಪ್ ವಿರೋಧಿಸಿ ಕೃಷಿಕರು ಶಾಂತಿಯುತ ಹೋರಾಟ ನಡೆಸುತ್ತಿದ್ದಾರೆ. ಮಹಿಳೆಯರು ಹೋರಾಟಕ್ಕೆ ಬೆಂಬಲ ನೀಡಿದ್ದಾರೆ. ಸರ್ವೇಗೆ ಬಂದಾಗ ಅಹಿತಕರ ಘಟನೆ ನಡೆದಿದೆ ಎಂದು ಹೇಳಿದ್ದಾರೆ.

ಯಾವುದೇ ಕಾರಣಕ್ಕೂ ಅಹಿತಕರ ಘಟನೆಗೆ ಅವಕಾಶ ಕೊಡದೆ ಶಾಂತಿಯುತ ಹೋರಾಟ ಮುಂದುವರಿಸಿ. ಕಾನೂನು ವ್ಯಾಪ್ತಿಯಲ್ಲಿ ನ್ಯಾಯ ಒದಗಿಸಲು ಹಲವರು ಮುಂದೆ ಬಂದಿದ್ದಾರೆ. ನಿಮ್ಮ ನ್ಯಾಯಯುತ ಹಾಗೂ ಶಾಂತಿಯುತ ಹೋರಾಟಕ್ಕೆ ಬೆಂಬಲ ನೀಡುವುದರ ಜೊತೆಗೆ ಕಾನೂನು ಹೋರಾಟ ಮಾಡುವ ಭರವಸೆಯನ್ನು ಎಚ್‌ಡಿಕೆ ನೀಡಿದ್ದಾರೆ. ರೈತರ ಒಪ್ಪಿಗೆ ಇಲ್ಲದೇ ಜೆಎಂಸಿ ಸರ್ವೇ ಮಾಡಲು ಹೊರಟಿರುವುದನ್ನು ನಿಖಿಲ್ ಕುಮಾರಸ್ವಾಮಿ ಖಂಡಿಸಿದ್ದಾರೆ.

ಭಾವಪೂರ್ಣ ಶ್ರದ್ಧಾಂಜಲಿ



ಶ್ರೀ ಎಚ್. ಹನುಮಂತಪ್ಪ

ಮಾಜಿ ಸಂಸದರು, ಹಿರಿಯ ಕಾಂಗ್ರೆಸ್ ಮುಖಂಡರು, ಕೇಂದ್ರ ರೇಷ್ಮೆ ಮಂಡಳಿಯ ಮಾಜಿ ಅಧ್ಯಕ್ಷರು ಹಾಗೂ ಪರಿಶಿಷ್ಟ ಸಮುದಾಯದ ನಾಯಕರಾದ ಶ್ರೀ ಎಚ್. ಹನುಮಂತಪ್ಪ ಅವರ ನಿಧನ ರಾಜ್ಯ ರಾಜಕೀಯ ಮತ್ತು ಸಮುದಾಯಕ್ಕೆ ತುಂಬಲಾರದ ನಷ್ಟ. ಅವರ ಆತ್ಮಕ್ಕೆ ಸದ್ಗತಿ ಸಿಗಲಿ.

ಡಾ. ಆನಂದ ಕುಮಾರ್

ರಾಷ್ಟ್ರೀಯ ಸಂಯೋಜಕರು, ಮಹಾರಾಷ್ಟ್ರ ಉಸ್ತುವಾರಿ

ಎಸ್.ಸಿ. ವಿಭಾಗ, ಎಐಸಿಸಿ, ನವದೆಹಲಿ

# ಹೂಡಿಕೆ ಆಕರ್ಷಣೆಗೆ ಕೋಲ್ಕತ್ತಾದಲ್ಲಿ ಸಚಿವ ಎಂಬಿಪಿ ರೋಡ್‌ಶೋ

## ಎಂಟು ಪ್ರಮುಖ ಕಂಪನಿಗಳ ಜತೆ ಮಾತುಕತೆ, ಕರ್ನಾಟಕದಲ್ಲಿ ಹೂಡಿಕೆ, ವಿಸ್ತರಣೆಗೆ ಆದ್ಯತೆ ನೀಡುವಂತೆ ಕೋರಿಕೆ

**ಕೋಲ್ಕತ್ತಾ, ಜು.13:** ರಾಜ್ಯದ ಕೈಗಾರಿಕಾ ಕ್ಷೇತ್ರಕ್ಕೆ ಬಂಡವಾಳ ಸೆಳೆಯುವ ತಮ್ಮ ಉಪಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಮುಂದುವರಿಸಿದ್ದಾರೆ. ಇದರ ಭಾಗವಾಗಿ ಪೂರ್ವ ಭಾರತದತ್ತ ಗಮನ ಹರಿಸಿದ್ದು, ಎಂಟು ಪ್ರಮುಖ ಕಂಪನಿಗಳ ಜತೆ ಕೋಲ್ಕತ್ತಾದಲ್ಲಿ ಸೋಮವಾರ ಮಾತುಕತೆ ನಡೆಸಿದ್ದಾರೆ.

ಉನ್ನತ ಮಟ್ಟದ ನಿಯೋಗದೊಂದಿಗೆ ಕೋಲ್ಕತ್ತಾ ತಲುಪಿರುವ ಸಚಿವರು ಪ್ಲೈವುಡ್ ತಯಾರಿಕೆಗೆ ಹೆಸರಾಗಿರುವ ಗ್ರೀನ್ ಪ್ಲೈ, ಗಣಿಗಾರಿಕೆ ಮತ್ತು ಖನಿಜ ಸಂಸ್ಕರಣೆಗೆ ಹೆಸರಾಗಿರುವ ತೇಗಾ ಇಂಡಸ್ಟ್ರೀಸ್, ಕೃಷ್ಯುತ್ಪನ್ನ ಸಂಸ್ಕರಣೆಯಲ್ಲಿ ಮುಂಚೂಣಿಯಲ್ಲಿರುವ ರೀಗಾಲ್ ರಿಸೋರ್ಸ್‌ಸ್, ಗ್ರಾಫೈಟ್ ಎಲೆಕ್ಟ್ರೋಡ್ ತಯಾರಿಕೆಗೆ ಖ್ಯಾತವಾಗಿರುವ ಗ್ರಾಫೈಟ್ ಇಂಡಿಯಾ, ಸೋಲಾರ್ ಪಿ.ವಿ. ಮಾಡ್ಯೂಲ್ ತಯಾರಿಸುವ ವಿಕ್ರಂ ಸೋಲಾರ್, ಉಡುಪು ತಯಾರಿಕೆಗೆ ಹೆಸರಾಗಿರುವ ರೂಪಾ ಇಂಡಸ್ಟ್ರೀಸ್ ಕಂಪನಿಯ ಉನ್ನತ ಮಟ್ಟದ ಪ್ರತಿನಿಧಿಗಳ ಜತೆ ವಿಸ್ತೃತ ವಿಚಾರ ವಿನಿಮಯ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಅವರು, ಕರ್ನಾಟಕದಲ್ಲಿ ಹೆಚ್ಚಿನ ಹೂಡಿಕೆ ಮತ್ತು



ವಿಸ್ತರಣೆಗೆ ಆದ್ಯತೆ ಕೊಡುವಂತೆ ಕೋರಿದ್ದಾರೆ.

ಅಲ್ಲದೆ, ರಾಜ್ಯ ಸರ್ಕಾರವು ಬಿಯಾಂಡ್ ಬೆಂಗಳೂರು ಉಪಕ್ರಮದಡಿ ಸಮಗ್ರ ಕೈಗಾರಿಕಾ ಬೆಳವಣಿಗೆಗೆ ಒತ್ತು ಕೊಟ್ಟಿದೆ. ಆದ್ದರಿಂದ ಹೂಡಿಕೆದಾರರು ವಿಜಯಪುರ, ತುಮಕೂರು, ಬೆಳಗಾವಿ, ಹುಬ್ಬಳ್ಳಿ ಮುಂತಾದ ಕಡೆಗಳತ್ತಲೂ ಗಮನ ಹರಿಸಬೇಕು. ಈ ಭಾಗಗಳಲ್ಲಿ ವಿದ್ಯುತ್‌ಚಾಲಿತ ವಾಹನಗಳ ತಯಾರಿಕೆ, ಮರುಬಳಕೆ ಇಂಧನ ಮುಂತಾದ ಕ್ಷೇತ್ರಗಳಲ್ಲಿ ಹೆಚ್ಚಿನ ಬೆಳವಣಿಗೆಗೆ ಯಥೇಚ್ಛ ಅವಕಾಶಗಳಿವೆ. ಹೀಗಾಗಿ ಕಂಪನಿಗಳ ನಿಯೋಗವು ಭೂಮಿ, ನೀರು, ವಿದ್ಯುತ್ ಲಭ್ಯತೆಗಳ ಬಗ್ಗೆ ತಿಳಿದುಕೊಳ್ಳಲು ರಾಜ್ಯಕ್ಕೆ ಭೇಟಿ ನೀಡಬೇಕು. ಇದಕ್ಕೆ ರಾಜ್ಯ ಸರಕಾರವು ಸಂಪೂರ್ಣ ಸಹಕಾರ ನೀಡಲಿದೆ ಎಂದು ಅವರು ಮನದಟ್ಟು ಮಾಡಿಕೊಟ್ಟಿದ್ದಾರೆ.

ರೀಗಲ್ ರಿಸೋರ್ಸ್‌ಸ್ ಕಂಪನಿಯು ಸದ್ಯಕ್ಕೆ ಮೆಕ್ಕೆಜೋಳದ ಉತ್ಪನ್ನಗಳನ್ನು ಮಾತ್ರ ಉತ್ಪಾದಿಸುತ್ತಿದೆ. ತೊಗರಿಬೇಳೆ ಮತ್ತಿತರ ಕೃಷಿ ಉತ್ಪನ್ನಗಳ ಕಡೆಗೂ ಅದು ಗಮನ ಹರಿಸಬೇಕು. ಹಾಗೆಯೇ, ರೂಪಾ ಇಂಡಸ್ಟ್ರೀಸ್ ರಾಜ್ಯದಲ್ಲಿ ತನ್ನ ಮತ್ತೊಂದು ತಯಾರಿಕಾ ಘಟಕವನ್ನು ಸ್ಥಾಪಿಸಲು ಬಯಸಿದೆ. ಈ ಉದ್ದೇಶಿತ ಯೋಜನೆಗಳಿಗೆ ಸಂಬಂಧಿಸಿ ಮತ್ತಷ್ಟು ಚರ್ಚಿಸಿ, ಮುಂದಿನ ಹಂತಕ್ಕೆ ಕೊಂಡೊಯ್ಯಲಾಗುವುದು ಎಂದು ಪಾಟೀಲ ವಿವರಿಸಿದ್ದಾರೆ.

ಈ ಮಾತುಕತೆಗಳಲ್ಲಿ ಗ್ರೀನ್ ಪ್ಲೈ ಕಂಪನಿಯ ಸಿಎಫ್‌ಒ ಸಂಜೀವ್ ಕೇಸರಿ ಮತ್ತು ಉಪಾಧ್ಯಕ್ಷ ಜಿತೇಂದ್ರಕುಮಾರ್ ಜೈನ್, ತೇಗಾ ಇಂಡಸ್ಟ್ರೀಸ್ ಪರವಾಗಿ ಅದರ ಜಾಗತಿಕ ಅಧ್ಯಕ್ಷ ಪ್ರತೀಕ್ ಬಸು ರಾಯ್, ರೀಗಾಲ್ ರಿಸೋರ್ಸ್‌ಸ್ ಪರವಾಗಿ ಸಿಎಫ್‌ಒ ರೋಹನ್ ಕಿಶೋರಪುರಿಯಾ ಮತ್ತು ಸಿದ್ಧಾರ್ಥ ವರ್ಮಾ, ಗ್ರಾಫೈಟ್ ಇಂಡಿಯಾದ ಕಾರ್ಯನಿರ್ವಾಹಕ ನಿರ್ದೇಶಕ ಆಶುತಕೋಷ್ ದೀಕ್ಷಿತ್ ಮತ್ತು ಉಪಾಧ್ಯಕ್ಷ ಸಿದ್ಧಾಂತ್ ಬಾಂಗೂರ್, ವಿಕ್ರಂ ಸೋಲಾರ್ ಕಂಪನಿಯ ಉಪಾಧ್ಯಕ್ಷ ವಿವೇಕ್ ಚೌಧರಿ ಮತ್ತು ಸಿಇಒ ಅರುಣ್ ಮಿತ್ತಲ್, ರೂಪಾ ಇಂಡಸ್ಟ್ರೀಸ್ ಸಂಸ್ಥೆಯ ಸಿಎಫ್‌ಒ ಸಮಿತ್ ಕೋವಾಲ ಮತ್ತು ಹಣಕಾಸು ವ್ಯವಸ್ಥಾಪಕ ಪ್ರವೀಣ್ ಭಾಗವಹಿಸಿದ್ದರು.

ರಾಜ್ಯ ಸರ್ಕಾರದ ಉನ್ನತ ಮಟ್ಟದ ನಿಯೋಗದಲ್ಲಿ ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಆಯುಕ್ತೆ ಖುಷ್ಬೂ ಗೋಯೆಲ್ ಮುಂತಾದವರು ಉಪಸ್ಥಿತರಿದ್ದರು.

# ಎಚ್.ಡಿ.ರೇವಣ್ಣಗೆ ಸುಪ್ರೀಂ ನೋಟಿಸ್



**ನವದೆಹಲಿ, ಜು.13:** ಮನೆ ಕೆಲಸದಾಕೆಯ ಮೇಲಿನ ಲೈಂಗಿಕ ಕಿರುಕುಳ ಪ್ರಕರಣಕ್ಕೆ ಸಂಬಂಧಿಸಿದಂತೆ ಜೆಡಿಎಸ್ ಶಾಸಕ ಎಚ್.ಡಿ ರೇವಣ್ಣ ವಿರುದ್ಧದ ಐಪಿಸಿ ಸೆಕ್ಷನ್ 354ರ ಅಡಿಯಲ್ಲಿ ದಾಖಲಾಗಿದ್ದ ಪ್ರಕರಣವನ್ನು ಹೈಕೋರ್ಟ್ ರದ್ದುಗೊಳಿಸಿತ್ತು. ಹೈಕೋರ್ಟ್‌ನ ಈ ಆದೇಶವನ್ನು ಪ್ರಶ್ನಿಸಿ ಸರ್ಕಾರ ಸಲ್ಲಿಸಿರುವ ಮೇಲ್ಮನವಿಯನ್ನು ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ಸೋಮವಾರ ಒಪ್ಪಿಕೊಂಡಿದೆ. ರೇವಣ್ಣಗೆ ನೋಟಿಸ್ ಜಾರಿಗೊಳಿಸಿದೆ.

ನ್ಯಾಯಮೂರ್ತಿಗಳಾದ ಜೆ.ಬಿ. ಪರ್ದಿವಾಲಾ ಮತ್ತು ಕೆ. ವಿನೋದ್ ಚಂದ್ರನ್ ಅವರನ್ನೊಳಗೊಂಡ ಪೀಠವು ರೇವಣ್ಣಗೆ ನೋಟಿಸ್ ಜಾರಿ ಮಾಡಿದ್ದು, ಆಕ್ಷೇಪಣೆ ಸಲ್ಲಿಸಲು ಸೂಚಿಸಿದೆ.

ವಿಚಾರಣೆ ವೇಳೆ, 2025ರ ನವೆಂಬರ್ 19ರಂದು ಹೈಕೋರ್ಟ್ ನೀಡಿದ್ದ ಆದೇಶವನ್ನು ಸವಾಲು ಮಾಡಲು ಇಷ್ಟೊಂದು ವಿಳಂಬ ಮಾಡಿರುವುದಕ್ಕೆ ಸುಪ್ರೀಂ ಕೋರ್ಟ್ ಪೀಠವು ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದೆ. ಸೆಕ್ಷನ್ 354ರ ಅಡಿಯಲ್ಲಿನ ಆರೋಪಗಳನ್ನು ಕೈಬಿಟ್ಟ ತಕ್ಷಣವೇ ಏಕೆ ಮೇಲ್ಮನವಿ ಸಲ್ಲಿಸಲಿಲ್ಲ ಎಂದು ಪ್ರಶ್ನಿಸಿದ್ದು, ಸ್ವಲ್ಪ ಶಿಸ್ತು ಪಾಲಿಸಿ ಎಂದು ಸರ್ಕಾರಕ್ಕೆ ಹೇಳಿದೆ.

2024ರ ಲೋಕಸಭೆ ಚುನಾವಣೆಗೂ ಮುನ್ನ ಹಾಸನದಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರದ್ದೆನ್ನಲಾದ ಪೆನ್‌ಡ್ರೈವ್ ವಿಡಿಯೋಗಳು ಬಹಿರಂಗಗೊಂಡ ಬಳಿಕ ಈ ಇಡೀ ಪ್ರಕರಣ ದೇಶಾದ್ಯಂತ ಸದ್ದು ಮಾಡಿತ್ತು. ಇದೇ ವೇಳೆ, ಸಂತ್ರಸ್ತೆಯೊಬ್ಬರು ಎಚ್.ಡಿ. ರೇವಣ್ಣ ವಿರುದ್ಧವೂ ಲೈಂಗಿಕ ಕಿರುಕುಳದ ಆರೋಪ ಮಾಡಿದ್ದರು.

ಕಳೆದ ವರ್ಷ (2025) ನವೆಂಬರ್ 19ರಂದು, ರೇವಣ್ಣ ವಿರುದ್ಧದ ಸೆಕ್ಷನ್ 354 ಆರೋಪವನ್ನು ರದ್ದುಗೊಳಿಸಿದ್ದ ಹೈಕೋರ್ಟ್, ಸೆಕ್ಷನ್ 354ಎ (ಲೈಂಗಿಕ ಕಿರುಕುಳ) ಆರೋಪವನ್ನು ಮಾತ್ರ ಉಳಿಸಿಕೊಂಡಿತ್ತು. ದೂರು ನೀಡಲು ಆಗಿರುವ ವಿಳಂಬವನ್ನು ಪರಿಗಣಿಸುವಂತೆ ಕೆಳ ನ್ಯಾಯಾಲಯಕ್ಕೆ ಸೂಚಿಸಿತ್ತು.

ಹೈಕೋರ್ಟ್ ಆದೇಶದ ಬೆನ್ನಲ್ಲೇ ಹಾಸನದ ಹೆಚ್ಚುವರಿ ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಎಚ್.ಡಿ. ರೇವಣ್ಣ ಅವರನ್ನು ಈ ಲೈಂಗಿಕ ಕಿರುಕುಳ ಪ್ರಕರಣದಿಂದ ಮುಕ್ತಗೊಳಿಸಿ ಡಿಸೆಂಬರ್ 29ರಂದು ಆದೇಶಿಸಿತ್ತು.

ಇದೀಗ ರಾಜ್ಯ ಸರ್ಕಾರವು ಹೈಕೋರ್ಟ್‌ನ ಮೂಲ ಆದೇಶದ ವಿರುದ್ಧ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದು, ಪ್ರಕರಣಕ್ಕೆ ಹೊಸ ತಿರುವು ಸಿಕ್ಕಂತಾಗಿದೆ.

# ತಮಿಳುನಾಡಿನಲ್ಲಿ ಗೋಹತ್ಯೆ ನಿಷೇಧ ಆದೇಶಕ್ಕೆ ಸುಪ್ರೀಂಕೋರ್ಟ್ ತಡೆ

**ನವದೆಹಲಿ, ಜು.13:** ತಮಿಳುನಾಡಿನಲ್ಲಿ ಹಸು ಹಾಗೂ ಕರುಗಳ ಹತ್ಯೆಗೆ ರಾಜ್ಯವ್ಯಾಪಿ ನಿಷೇಧ ಹೇರಿದ್ದ ಮದ್ರಾಸ್ ಹೈಕೋರ್ಟ್ ಆದೇಶಕ್ಕೆ ಸುಪ್ರೀಂಕೋರ್ಟ್ ಮಧ್ಯಂತರ ತಡೆ ನೀಡಿದೆ. ನ್ಯಾ. ವಿಕ್ರಂ ನಾಥ್ ಹಾಗೂ ಸಂದೀಪ್ ಮೆಹ್ತಾ ಅವರಿದ್ದ ಪೀಠವು ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿ, ಹೈಕೋರ್ಟ್ ಆದೇಶದ ಜಾರಿಗೆ ತಡೆ ನೀಡಿ, ನೋಟಿಸ್ ನೀಡಿತು.

ವಿಚಾರಣೆ ವೇಳೆ, ಹೈಕೋರ್ಟ್ ಆದೇಶದ ಕೊನೆಯ ಭಾಗವು ಪ್ರಾಥಮಿಕ ದೃಷ್ಟಿಗೆ ತಿದ್ದುಪಡಿಗೆ ಅಗತ್ಯವಿರುವಂತಿದೆ ಎಂದು ಸುಪ್ರೀಂಕೋರ್ಟ್ ಅಭಿಪ್ರಾಯಪಟ್ಟಿತು.

ತಮಿಳುನಾಡು ಸರ್ಕಾರದ ಪರ ಹಿರಿಯ ವಕೀಲ ಡಾ. ಅಭಿಷೇಕ್ ಸಿಂಘ್ವಿ ವಾದ ಮಂಡಿಸಿದರು. 1958ರ ತಮಿಳುನಾಡು ಪ್ರಾಣಿ ಸಂರಕ್ಷಣಾ ಕಾಯ್ದೆ ಪ್ರಕಾರ, 10 ವರ್ಷಕ್ಕಿಂತ ಮೇಲ್ಪಟ್ಟ ಹಾಗೂ ಕೆಲಸ ಅಥವಾ ಸಂತಾನೋತ್ಪತ್ತಿಗೆ ಯೋಗ್ಯವಾಗಿರದ ಹಸುಗಳನ್ನು ಸಂಬಂಧಪಟ್ಟ ಪ್ರಾಧಿಕಾರದ ಪ್ರಮಾಣಪತ್ರದ ಆಧಾರದ ಮೇಲೆ ವಧೆ ಮಾಡಲು ಅವಕಾಶವಿದೆ.

ಇದಲ್ಲದೆ, ಪ್ರಾಣಿಗಳ ಮೇಲಿನ ಕ್ರೌರ್ಯ ತಡೆ ಕಾಯ್ದೆ, ಸ್ಲಾಟರ್ ಹೌಸ್ ನಿಯಮಗಳು ಹಾಗೂ ಇತರ ಅನ್ವಯಿಸುವ ಕಾನೂನುಗಳು ವಧೆಯನ್ನು ನಿಯಂತ್ರಿಸುತ್ತವೆ ಹೊರತು ಸಂಪೂರ್ಣ ನಿಷೇಧ ಹೇರುವುದಿಲ್ಲ ಎಂದು ಸರ್ಕಾರ ವಾದಿಸಿತು. ಆದರೆ, ಈ ಕಾನೂನುಗಳ ವಿರುದ್ಧವಾಗಿ ಹೈಕೋರ್ಟ್ ರಾಜ್ಯಾದ್ಯಂತ ಸಂಪೂರ್ಣ ನಿಷೇಧ ಹೇರಿರುವುದು ಕಾನೂನಿನ ಮಿತಿಯನ್ನು ಮೀರಿ ನ್ಯಾಯಾಂಗವೇ ಹೊಸ ಕಾನೂನು ರೂಪಿಸಿದಂತಾಗಿದೆ ಎಂದು ಸರ್ಕಾರ ಸುಪ್ರೀಂಕೋರ್ಟ್‌ಗೆ ತಿಳಿಸಿತು.

ಮೇ 27ರಂದು ಬಕ್ರೀದ್ ಹಬ್ಬದ ಮುನ್ನ, ಹಿಂದೂ ಮಕ್ಕಳ್ ಕಚ್ಚಿಯ ಪ್ರಧಾನ ಕಾರ್ಯದರ್ಶಿ ಕೆ. ಸೂರ್ಯ ಪ್ರಸಾಂತ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ್ದ ಮದ್ರಾಸ್ ಹೈಕೋರ್ಟ್, ಹಸು ಹಾಗೂ ಕರುಗಳ ವಧೆಯನ್ನು ರಾಜ್ಯದ ಎಲ್ಲೆಡೆ, ಯಾವುದೇ ದಿನ ನಡೆಸಬಾರದು ಎಂದು ಆದೇಶಿಸಿತ್ತು. ಅರ್ಜಿಯಲ್ಲಿ ಕೇವಲ ನಿಗದಿತ ಸ್ಥಳಗಳಲ್ಲೇ ವಧೆ ನಡೆಯುವಂತೆ ಕ್ರಮ ಕೈಗೊಳ್ಳುವಂತೆ ಕೋರಲಾಗಿದ್ದರೂ, ಹೈಕೋರ್ಟ್ ರಾಜ್ಯವ್ಯಾಪಿ ಸಂಪೂರ್ಣ ನಿಷೇಧದ ಆದೇಶ ನೀಡಿತ್ತು.

# ಲೋಕಸೇವಕ: ಎಲ್.ವಿ ಅಮೀನ್ ಕೃತಿ ಅನಾವರಣ:ಎಲ್ವೀ ಸಾಧಕತ್ವದ ಜೀವನ ಪುಟಗಳ ದರ್ಶನ

**ಮುಂಬಯಿ, ಜೂ.13:** ಎಲ್.ವಿ ಅಮೀನ್ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡ, ಎಲ್ಲರೊಂದಿಗೂ ಆತ್ಮೀಯ ಸಂಬಂಧ ಬೆಳೆಸಿ ಬಾಳಿದ ಹೃದಯಶೀಲರು. ಯಾವುದೇ ಜವಾಬ್ದಾರಿಯನ್ನು ವಹಿಸಿದರೂ ಅದನ್ನು ಸಮರ್ಥ ಮತ್ತು ಯಶಸ್ವಿಯಾಗಿ ನಿರ್ವಹಿಸುವ ಅಪೂರ್ವ ಸಾಮರ್ಥ್ಯವುಳ್ಳ ಇಂದು ಎಲ್‌ವೀ ತುಳುಕನ್ನಡಿಗರ ಅವಿನಾಭಾವದ ಕೊಂಡಿಯಾಗಿದ್ದಾರೆ ಬಂಟರು ಮತ್ತು ಬಿಲ್ಲವ ಸಮುದಾಯಗಳ ನಡುವೆ ಐಕ್ಯ ಮತ್ತು ಸೌಹಾರ್ದತೆಯನ್ನು ಬೆಳೆಸುವಲ್ಲಿ ಅವರ ಪಾತ್ರ ಮಹತ್ತರದ್ದಾಗಿದೆ. ಸಮಾಜದಲ್ಲಿ ಉತ್ತಮ ವಾತಾವರಣ ನಿರ್ಮಿಸುವುದರೊಂದಿಗೆ ನಿಜವಾದ ಲೋಕಸೇವಕರಾಗಿ ಗುರುತಿಸಿಕೊಂಡಿರುವ ಅವರ ಜೀವನಯಾನ, ಸಮಾಜಸೇವೆ, ಸಂಘಟನಾ ಚಟುವಟಿಕೆಗಳು ಹಾಗೂ ಸಾಧನೆಗಳನ್ನು ದಾಖಲಿಸಿರುವ ಈ ಕೃತಿ ಅತ್ಯಂತ ಮೌಲ್ಯಯುತವಾದುದು. ಎಲ್‌ವೀ ಜೀವನಗಾಥೆ ಸಮಾಜಕ್ಕೆ ಮಾದರಿಯಾಗಿದ್ದು, ಅವರ ಸಾಧನೆಗೆ ಈ ರೀತಿಯ ಗೌರವ ಮತ್ತು ದಾಖಲಾತಿ ನಿಜಕ್ಕೂ ಅರ್ಹವಾಗಿದೆ ಎಂದು ಉತ್ತರ–ಮುಂಬಯಿ ಲೋಕಸಭಾ ಕ್ಷೇತ್ರದ ಪೂರ್ವ ಸಂಸದ ಗೋಪಾಲ್ ಸಿ.ಶೆಟ್ಟಿ ನುಡಿದರು.




ಸಾಂತಾಕ್ರೂಜ್ ಪೂರ್ವದ ವಿದ್ಯಾನಗರಿಯ ಕಲೀನಾ ಕ್ಯಾಂಪಸ್‌ನಲ್ಲಿನ ಕವಿ ಕುಸುಮಾಗ್ರಜ್ ಮರಾಠಿ ಭಾಷಾ ಭವನದ ಸಭಾಗೃಹದಲ್ಲಿ ಇಂದಿಲ್ಲಿ ಬುಧವಾರ ಸಂಜೆ ಮುಂಬಯಿ ವಿವಿ ಕನ್ನಡ ವಿಭಾಗವು ಆಯೋಜಿಸಿದ್ದ ಬೃಹನ್ಮುಂಬಯಿಯ ಲ್ಲಿನ ಹೆಸರಾಂತ ಹಿರಿಯ ಉದ್ಯಮಿ, ನಾಮಾಂಕಿತ ಸಂಘಟಕ, ಬಿಲ್ಲವರ ಅಸೋಸಿಯೇಶನ್ ಮುಂಬಯಿ ಇದರ ಗೌರವಾಧ್ಯಕ್ಷ ಎಲ್.ವಿ ಅಮೀನ್ ಜೀವನಾಧಾರಿತ, ಮುಂಬಯಿ ವಿವಿ ಕನ್ನಡ ವಿಭಾಗ ಪ್ರಕಾಶಿತ ಲೋಕ ಸೇವಕ: ಎಲ್.ವಿ ಅಮೀನ್ ಗೌರವ ಗ್ರಂಥ ಬಿಡುಗಡೆ ಗೊಳಿಸಿ ಗೋಪಾಲ್ ಶೆಟ್ಟಿ ಮಾತನಾಡಿದರು.

ಮುಂಬಯಿ ವಿವಿ ಕನ್ನಡ ವಿಭಾಗದ ಮುಖ್ಯಸ್ಥ, ಪ್ರಾಧ್ಯಾಪಕ ಪ್ರೊ| ಜಿ.ಎನ್.ಉಪಾಧ್ಯ ಅಧ್ಯಕ್ಷತೆಯಲ್ಲಿ ಜರುಗಿದ ಗೌರವ ಕೃತಿ ಅನಾವರಣದ ಕಾರ್ಯಕ್ರಮಕ್ಕೆ ಪ್ರಸಿದ್ಧ ವಾಸ್ತುತಜ್ಞ ಅಶೋಕ ಪುರೋಹಿತ್ ಚಾಲನೆಯನ್ನಿತ್ತರು. ಮುಖ್ಯ ಅತಿಥಿಯಾಗಿ ಜಾಗತಿಕ ಬಂಟರ ಸಂಘಗಳ ಒಕ್ಕೂಟದ ಅಧ್ಯಕ್ಷ ಐಕಳ ಹರೀಶ ಶೆಟ್ಟಿ ಹಾಗೂ ಗೌರವ್ವಾನಿತ ಅತಿಥಿಗಳಾಗಿ ರಾಷ್ಟ್ರೀಯ ಬಿಲ್ಲವರ ಮಹಾಮಂಡಳ ಮುಲ್ಕಿ ಇದರ ನಿಕಟಪೂರ್ವ ಅಧ್ಯಕ್ಷ ಡಾ| ರಾಜಶೇಖರ ಆರ್.ಕೋಟ್ಯಾನ್, ಬಂಟರ ಸಂಘ, ಮುಂಬಯಿ ಇದರ ಗೌರವ ಪ್ರಧಾನ ಕಾರ್ಯದರ್ಶಿ ಡಾ| ಆರ್.ಕೆ ಶೆಟ್ಟಿ, ದೇವಾಡಿಗ ಮಹಾ ಮಂಡಳದ ಅಧ್ಯಕ್ಷ ಧರ್ಮಪಾಲ ಯು.ದೇವಾಡಿಗ, ಬಿಲ್ಲವರ ಅಸೋಸಿಯೇಶನ್ ಮುಂಬಯಿ ಉಪಾಧ್ಯಕ್ಷ ಪುರುಷೋತ್ತಮ ಎಸ್.ಕೋಟ್ಯಾನ್, ಸಸಿಹಿತ್ಲು ಶ್ರೀ ಭಗವತೀ ದೇವಸ್ಥಾನದ ಆಡಳಿತ ಮುಕ್ತೇಸರ ಚಂದ್ರಶೇಖರ ಆರ್.ಬೆಳ್ಚಡ, ಕನ್ನಡ ಸಂಘ ಸಾಂತಾಕ್ರೂಜ್ ಇದರ ಅಧ್ಯಕ್ಷೆ ಸುಜಾತ ಆರ್.ಶೆಟ್ಟಿ ವೇದಿಕೆಯಲ್ಲಿದ್ದು ಎಲ್.ವಿ ಅವಿನ್ ಮತ್ತು ಸುಧಾ ಎಲ್.ಅವಿನ್ ದಂಪತಿಯನ್ನು (ಪರಿವಾರ ಸಹಿತ) ಸನ್ಮಾನಿಸಿ ಗೌರವ ಗ್ರಂಥಕ್ಕಾಗಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಅವಿನ್ ಪರಿವಾರದ ಇಶಾ ಎಸ್.ಪ್ರಧಾನ್, ಸೌಮ್ಯ ಎನ್.ಸಾಲ್ಯಾನ್, ಡಾ| ಯುತಿಕಾ ಶಶಾಂಕ್ (ಪುತ್ರಿಯರು), ಸಿದ್ಧಾರ್ಥ ಯು.ಪ್ರಧಾನ್, ನವೀನ್ ಎಸ್.ಸಾಲ್ಯಾನ್, ಡಾ| ಶಶಾಂಕ್ ಕಿಶೋರ್ (ಅಳಿಯಂದಿರು) ಪ್ರಧಾನವಾಗಿ ವೇದಿಕೆಯಲ್ಲಿದ್ದು ಅಭಿನಂದಿಸಿದರು. ಅಂತೆಯೇ ಮುಂಬಯಿ ವಿವಿ ಕನ್ನಡ ವಿಭಾಗದ ಪರವಾಗಿ ಸಮಾಜ ಸೇವಕ, ಸಂಘಟಕ ಸಿಎ| ಶ್ರೀನಿವಾಸ ಪಿ.ಸಾಫಲ್ಯ ಇವರನ್ನು ಮತ್ತು ಶೈಕ್ಷಣಿಕ ಸಾಧನೆಗಾಗಿ ಮೆಹ್ತಾ ಕಾಲೇಜು ಐರೋಲಿ ಸಂಸ್ಥೆಯನ್ನು (ಪರವಾಗಿ ಪ್ರಧಾನ ಕಾರ್ಯದರ್ಶಿ ವಿ.ಬಿ ಮುಗಳಿ ಮತ್ತು ಪ್ರಾಚಾರ್ಯ ಡಾ| ಬಿ.ಆರ್ ದೇಶಪಾಂಡೆ ಮೆಹ್ತಾ) ಗೌರವಿಸಿದರು.

ಸಣ್ಣ ಪ್ರಾಯದಲ್ಲಿ ಮುಂಬಯಿಗೆ ಬಂದು ಬದುಕು ಕಟ್ಟಿಕೊಂಡು ಸಾಂಸ್ಥಿಕವಾಗಿ ಅನೇಕ ಸಂಸ್ಥೆಗಳ ನೇತಾರರಾಗಿ ಮುನ್ನಡೆದ ಸರ್ವಶ್ರೇಷ್ಠರು. ಎಲ್ಲರನ್ನೂ ಕೂಡಿಸಿ ಜೋಡಿಸಿದ ಸಮನ್ವಯಕ ಮೂರ್ತಿವರಾಗಿದ್ದಾರೆ. ರಾಷ್ಟ್ರದ ಘಟಾನುಘಟಿ ನಾಯಕರನ್ನು ಹತ್ತಿರದಿಂದ ಬಲ್ಲವರಾಗಿದ್ದು, ಅಭಿಮಾನ ಪಡುವ ಕನ್ನಡದ ಸೇವಾಕೆಲಸ ಮಾಡಿದವರು ಎಂದು ಅಧ್ಯಕ್ಷೀಯ ಭಾಷಣವನ್ನುದ್ದೇಶಿಸಿ ಪ್ರೊ.ಉಪಾಧ್ಯ ತಿಳಿಸಿದರು.

ಐಕಳ ಹರೀಶ್ ಮಾತನಾಡಿ ಎಲ್.ವಿ ಅವಿನ್ ಅವರ ಮುಂಬಯಿಯಲ್ಲಿ ಸುಮಾರು ವರ್ಷಗಳ ಸಮಾಜ ಸೇವೆ. ಎಲ್.ವಿ ಅವರು ಕಟೀಲು ದೇವಸ್ಥಾನದ ಬ್ರಹ್ಮ ಕಲಶ ಸಮಯದಲ್ಲಿ ನನ್ನ ಜೊತೆ ತುಂಬಾ ಶ್ರಮಿಸಿದವರು. ಸಮಾಜಕ್ಕೆ ಮಾಡಿದ ಕೆಲಸ ಎಂದೂ ಸಮಾಜದಲ್ಲೇ ಶಾಶ್ವತವಾಗಿರುತ್ತದೆ ಎಂದರು.

ಆರ್.ಕೆ ಶೆಟ್ಟಿ ಮಾತನಾಡಿ ಎಲ್.ವಿ ಅಮೀನ್ ಬಹುಮುಖ ಪ್ರತಿಭೆಯ ವ್ಯಕ್ತಿತ್ವವುಳ್ಳವರಾಗಿದ್ದು ನಾನು ಎಲ್ವೀ ಅವರನ್ನು ತುಂಬಾ ಸಾಮೀಪ್ಯದಿಂದ ಕಂಡವನು. ಅವರನ್ನು ಪ್ರತೀಬಾರಿ ನೋಡಿದಾಗಲೂ ಅವರು ನನಗೆ ಒಬ್ಬ ಅದ್ಭುತ ವ್ಯಕ್ತಿಯಾಗಿ ಕಾಣಿಸುತ್ತಾರೆ ಎಂದರು.

ಪುರುಷೋತ್ತಮ ಕೋಟ್ಯಾನ್ ಮಾತನಾಡಿ, ನಮ್ಮದು ಸುಮಾರು ನಲ್ವತ್ತು ವರ್ಷಗಳ ಸ್ನೇಹತ್ವವಾಗಿದೆ. ಇವರು ಇನ್ನು ಸ್ಫೂರ್ತಿಯುತವಾಗಿ ಇನ್ನಷ್ಟು ವೇಗವಾಗಿ ಸೇವೆಯಲ್ಲಿ ಉತ್ಸುಕರಾಗಬೇಕು. ಅವರು ಸಮಾಜ ಸೇವೆಯನ್ನೇ ಜೀವನದ ಧ್ಯೇಯವನ್ನಾಗಿಸಿಕೊಂಡು ಪೂರ್ಣಕಾಲಿಕ ಸಮಾಜಸೇವಕರಾಗಿ ಗುರುತಿಸಿಕೊಂಡವರು. ಇಂತಹ ಸಾಧಕರ ಚರಿತ್ರೆಯಿಂದ ಮರಾಠಿ ಭವನದಲ್ಲಿ ತುಳು ಕನ್ನಡಿಗರ ಗುರುತರ ಕಾರ್ಯಕ್ರಮಗಳು ಇನ್ನಷ್ಟು ಆಗಲಿ ಎಂದು ಹಾರೈಸಿದರು.

ಎಲ್‌ವಿ ಸಮಾಜ ಸೇವಕ ಎಂದು ಎಲ್ಲರಿಗೂ ಗೊತ್ತಿದ್ದ ವಿಷಯ ಆದರೆ ಇಂದು ಲೋಕ ಸೇವಕ ಗೌರವಕ್ಕೆ ಪಾತ್ರವಾಗಿದ್ದಾರೆ. ಲೋಕ ಕಲ್ಯಾಣಕ್ಕಾಗಿ ಯಾರು ಸೇವೆ ಮಾಡುತ್ತರೋ ಅವರೇ ಲೋಕ ಸೇವಕರು. ನಿಜವಾಗಿಯೂ ಲೋಕ ಸೇವಕರೇ ಸರಿ. ಎಲ್ವೀ ನಾವಿಬ್ಬರು ಪರಮಾಪ್ತರಾಗಿದ್ದು ಅವರು ತುಳಸೀಎಲೆ ಇದ್ದಾಗೆ ಎಲ್ಲೂ ಸಲ್ಲುವ ಸರ್ವಶ್ರೇಷ್ಠರು ಎಂದ ಚಂದ್ರಶೇಖರ ಬೆಳ್ಚಡ ನುಡಿದರು.

ಅಶೋಕ ಪುರೋಹಿತ್ ಮಾತನಾಡಿ ಎಲ್.ವಿ ಅಮೀನ್ ಮತ್ತು ಸುಧಾ ಅಮೀನ್ ಜೋಡಿ ಲಕ್ಷ್ಮಿ ನಾರಾಯಣ ದಂಪತಿ ಇದ್ದಂತೆ. 120 ವರ್ಷಗಳ ಪೂರ್ಣಾಯುಷ್ಯ ಪ್ರಾಪ್ತಿಯಾಗಿ ಸುಖಿಯಾಗಿ ಬಾಳುವಂತಾಗಲಿ. ಇಂತಹ ಗ್ರಂಥಗಳಿಂದ ಸಾಧಕರಿಗೆ ಇನ್ನಷ್ಟು ಪ್ರೇರಣೆಯಾಗುವುದು ಎಂದರು.

ಹಿರಿಯ ಲೇಖಕ, ಅಕ್ಷಯ ಮಾಸಿಕದ ಸಂಪಾದಕ ಹರೀಶ್ ಹೆಜ್ಮಾಡಿ ಕೃತಿಯನ್ನು ಪರಿಚಯಿಸಿದರು. ಅಭಿನಂದನಾ ಸಂಪುಟದ ಸಂಪಾದಕಿ, ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ| ಪೂರ್ಣಿಮಾ ಸುಧಾಕರ ಶೆಟ್ಟಿ ಮತ್ತು ಕನ್ನಡ ವಿಭಾಗದ ವಿದ್ಯಾಥಿನಿ, ಕೃತಿಕರ್ತೆ ಆಶಾ.ಕೆ ಸುವರ್ಣ ಅವರನ್ನು ಅತಿಥಿಗಳನ್ನೊಳಗೊಂಡು ಎಲ್.ವಿ ಅವಿನ್ ಸನ್ಮಾನಿಸಿ ಅಭಿವಂದಿಸಿದರು. ಹಾಗೂ ಕೃತಿಕರ್ತೆ ಆಶಾ ಸುವರ್ಣ ಅವರು ಕೃತಿ ಪ್ರಕಾಶನದ ಪ್ರಧಾನ ರೂವಾರಿ ಪ್ರೊ| ಜಿ.ಎನ್ ಉಪಾಧ್ಯ ಅವರಿಗೆ ಗುರುವಂದನೆಗೈದರು.

ಎಲ್.ವಿ ಕುಟುಂಬಸ್ಥರು, ಹಿತೈಷಿಗಳು, ಅಭಿಮಾನಿಗಳು, ಅಂಬಿಕಾ ಗ್ರೂಪ್ ಆಫ್ ಇಂಡಸ್ಟ್ರೀಸ್ ಸಿಬ್ಬಂದಿ ಸೇರಿದಂತೆ ವಿವಿಧ ಸಂಘಸಂಸ್ಥೆಗಳ ಮುಖ್ಯಸ್ಥರು, ಬಿಲ್ಲವರ ಅಸೋಸಿಯೇಶನ್ ಮುಂಬಯಿ, ಕನ್ನಡ ಸಂಘ ಸಾಂತಾಕ್ರೂಜ್ ಇದರ ಪದಾಧಿಕಾರಿಗಳು, ಸದಸ್ಯರು, ಕನ್ನಡ ವಿಭಾಗದ ಪ್ರಾಧ್ಯಾಪಕರು, ವಿದ್ಯಾಥಿಗಳು ಹಾಜರಿದ್ದು ಎಲ್.ವಿ ಅವಿನ್ ಅವರನ್ನು ಅಭಿನಂದಿಸಿದರು.

ಕಲಾ ಭಾಗವತ್ ವಚನವನ್ನಾಡಿದರು. ಶ್ರೀನಿವಾಸ್ ಪಿ.ಸಾಫಲ್ಯ ಯಕ್ಷಗಾನ ದಾಟಿಯಲ್ಲಿ ಪ್ರಾರ್ಥನೆಯನ್ನಾಡಿದರು. ಕನ್ನಡ ವಿಭಾಗದ ಸಹ ಪ್ರಾಧ್ಯಾಪಕಿ ಡಾ| ಪೂರ್ಣಿಮಾ ಎಸ್ ಶೆಟ್ಟಿ ಸ್ವಾಗತಿಸಿ, ಅತಿಥಿಗಳನ್ನು ಪರಿಚಯಿಸಿ ಕಾರ್ಯಕ್ರಮ ನಿರೂಪಿಸಿದರು. ಸುಧಾ ಎಲ್.ವಿ

# ಮಹೇಶ್‌ಶೆಟ್ಟಿ ತಿಮರೋಡಿಗೆ ಸುಪ್ರೀಂ ತರಾಟೆ

**ನವದೆಹಲಿ, ಜು.14:** ಗಡಿಪಾರು ಆದೇಶವನ್ನು ಪ್ರಶ್ನಿಸಿ ಮಹೇಶ್ ಶೆಟ್ಟಿ ತಿಮರೋಡಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ವಜಾ ಮಾಡಿದ್ದು, ಕಾನೂನು ಪ್ರಕಾರ ಸೂಕ್ತ ಸಕ್ಷಮ ಪ್ರಾಧಿಕಾರವನ್ನೇ ಸಂಪರ್ಕಿಸುವಂತೆ ನಿರ್ದೇಶಿಸಿದೆ. ಪ್ರಕರಣದ ವಿಚಾರಣೆ ನಡೆಸಿದ ನ್ಯಾ. ಸಂಜಯ್ ಕುಮಾರ್ ನೇತೃತ್ವದ ದ್ವಿ ಸದಸ್ಯ ಪೀಠವು ಮಹೇಶ್ ಶೆಟ್ಟಿ ಅವರು ಸಲ್ಲಿಸಿದ್ದ ಅರ್ಜಿಯನ್ನು ಉಚ್ಚ ನ್ಯಾಯಾಲಯ ಈಗಾಗಲೇ ವಜಾಗೊಳಿಸಿರುವುದನ್ನು ಪ್ರಸ್ತಾಪಿಸಿತು. ಲಭ್ಯವಿರುವ ಶಾಸನಬದ್ಧ ಪರಿಹಾರಗಳನ್ನು ಬಳಸಿಕೊಳ್ಳುವ ಬದಲು ನೇರವಾಗಿ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿರುವುದರ ಕುರಿತು ನ್ಯಾಯಪೀಠವು ಪ್ರಶ್ನಿಸಿತು.

ಮಹೇಶ್ ಶೆಟ್ಟಿ ಅವರ ಪರ ವಾದ ಮಂಡಿಸಿದ ವಕೀಲರು, ಈ ಗಡಿಪಾರು ಪ್ರಕರಣವನ್ನು 'ಸೌಜನ್ಯ ಪ್ರಕರಣ'ಕ್ಕೆ ಸಂಯೋಜಿಸಲು ಯತ್ನಿಸಿದರು ಹಾಗೂ ಸ್ಥಳೀಯ ದೇವಸ್ಥಾನಕ್ಕೆ ಸಂಬಂಧಿಸಿದ ವ್ಯಕ್ತಿಗಳು ತಮ್ಮನ್ನು ಗುರಿಯಾಗಿಸಿಕೊಂಡಿದ್ದಾರೆ ಎಂದು ವಾದಿಸಿದರು. ಆದರೆ ಸುಪ್ರೀಂ ಕೋರ್ಟ್ ಈ ವಾದವನ್ನು ತೀವ್ರವಾಗಿ ತಿರಸ್ಕರಿಸಿದ್ದು, ಅಸಂಬಂಧಿತ ವಿಷಯಗಳನ್ನು ಬಳಸಿ ಸಾರ್ವಜನಿಕ ಭಾವನೆಗಳನ್ನು ಕೆರಳಿಸುವುದು ಅಥವಾ ದುರ್ಬಳಕೆ ಮಾಡಿಕೊಳ್ಳುವುದು ಸರಿಯಲ್ಲ ಎಂದು ತರಾಟೆ ತೆಗೆದುಕೊಂಡಿತು.

ಒಂದು ವೇಳೆ ಮಹೇಶ್ ಶೆಟ್ಟಿ ಅವರಿಗೆ ಗಡಿಪಾರು ಆದೇಶದ ಕುರಿತು ಆಕ್ಷೇಪಣೆಗಳಿದ್ದರೆ, ಸಂಬಂಧಪಟ್ಟ ಮೇಲ್ಮನವಿ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸುವ ಮೂಲಕ ಸೂಕ್ತ ಕಾನೂನು ಪರಿಹಾರ ಪಡೆದುಕೊಳ್ಳಲು ಸ್ವತಂತ್ರರಾಗಿದ್ದಾರೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿತು.

ಅರ್ಜಿದಾರರಿಗೆ ಯಾವುದೇ ರೀತಿಯ ಪರಿಹಾರ ನೀಡಲು ನಿರಾಕರಿಸಿದ ಸುಪ್ರೀಂ ಕೋರ್ಟ್, ಅರ್ಜಿಯನ್ನು ವಜಾಗೊಳಿಸಿತು. ಇದೇ ವೇಳೆ ಊಹಾತ್ಮಕ ವಾದಗಳನ್ನು ಮಂಡಿಸುವುದರ ವಿರುದ್ಧ ವಕೀಲರಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ ನ್ಯಾಯಪೀಠವು, ಈ ನ್ಯಾಯಾಲಯದಲ್ಲಿ ಜೂಜಾಟವಾಡಬೇಡಿ, ಒಮ್ಮೆ ಬಾಜಿ ಕಟ್ಟಿದರೆ ಮುಗಿಯಿತು, ಈ ನ್ಯಾಯಾಲಯದಲ್ಲಿ ಅಂತಹ ಅವಕಾಶಗಳಿಗೆ ಆಸ್ಪದವಿಲ್ಲ ಎಂದು ಮೌಖಿಕವಾಗಿ ತೀವ್ರ ಆಕ್ಷೇಪ ವ್ಯಕ್ತಪಡಿಸಿತು.

# ಕಸ ವಿಲೇವಾರಿ ಪ್ರಾತ್ಯಕ್ಷಿಕೆ ಕಾರ್ಯಕ್ರಮ



**ಮುಂಬಯಿ, ಜು.13:** ಸ್ವಸ್ತಿಶ್ರೀ ಜೈನ ವಸತಿ ಪದವಿ ಪೂರ್ವ ಕಾಲೇಜಿನಲ್ಲಿ ಸೋಮವಾರ ಧವಳತ್ರಯ ಜೈನ ಕಾಶಿ ಟ್ರಸ್ಟ್ ಸಹಕಾರದಿಂದ ಕಾಲೇಜಿನ ಸಮಾಜ ಸೇವಾ ಸಂಘದ ಸಹಯೋಗದಲ್ಲಿ ಹಾಗೂ ಮೂಡು ಬಿದಿರೆ ಪುರಸಭೆಯ ಸಹಯೋಗ ದೊಂದಿಗೆ ಕಸ ವಿಲೇವಾರಿ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಕಾಲೇಜಿನ ಸ್ಥಾಪಕ ಅಧ್ಯಕ್ಷರಾದ ಸ್ವಸ್ತಿಶ್ರೀ ಚಾರುಕರ್ತಿ ಭಟ್ಟಾರಕ ಪಟ್ಟಾಚಾರ್ಯರ್ಯ ಪಂಡಿತಾಚಾ ರ್ಯವರ್ಯ ಮಹಾಸ್ವಾಮೀಜಿ ಪಾವನ ಸಾನಿಧ್ಯವನ್ನು ವಹಿಸಿಕೊಂಡು ಮಾತನಾಡುತ್ತ ನಮ್ಮ ಊರಿನ ಪರಿಸರದ ಸ್ವಚ್ಛ ಸುಂದರವಾಗಿಸಿ ಕಸ ಇಲ್ಲ ದಂತೆ ನೋಡುದು ನಮ್ಮೆಲ್ಲರ ಜವಾಬ್ದಾರಿ ಕಸವನ್ನು ಸರಿಯಾದ ರೀತಿಯಲ್ಲಿ ವಿಲೇವಾರಿ ಮಾಡಿದಾಗ ನಮ್ಮ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿರುತ್ತದೆ ಎಂದರು. ಕಾರ್ಯಕ್ರಮದಲ್ಲಿ ಮೂಡುಬಿದಿರೆ ಪುರಸಭೆಯ ಮುಖ್ಯ ಅಧಿಕಾರಿ ಇಂದೂ ರವರು ಹಾಗೂ, ಪುರಸಭೆಯ ಪರಿಸರ ಅಭಿಯಂತರೆ ಶಿಲ್ಪಾ ಉಪಸ್ಥಿತರಿದ್ದರು ಇವರನ್ನು ಸ್ವಸ್ತಿಶ್ರೀ ಪೂಜ್ಯ ಸ್ವಾಮೀಜಿಯವರು ಸನ್ಮಾನಿಸಿ ಅಭಿನಂದಿಸಿದರು. ಶಿಲ್ಪಾ ಅವರು ಕಸ ವಿಲೇವಾರಿಯ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು. ಯಾವ ಯಾವ ರೀತಿಯ ಕಸವನ್ನು ಯಾವ್ಯಾವ ರೀತಿ ವಿಲೇವಾರಿ ಮಾಡಬೇಕು ಎನ್ನುವ ವಿಷಯವನ್ನು ಮನವರಿಕೆ ಮಾಡಿಕೊಟ್ಟರು.

ಕಾರ್ಯಕ್ರಮ ದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಪ್ರಜ್ವಲ್ ಶೆಣೈ ಇವರು ಉಪಸ್ಥಿತರಿದ್ದರು ಇವರು ಕಸ ವಿಲೇವಾರಿ ಮಾದರಿಗಳ ಮುಖಾಂತರ ಪ್ರಾತ್ಯಕ್ಷಿಕೆಯನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು. ಕಾರ್ಯಕ್ರಮದಲ್ಲಿ ಕಾಲೇಜಿನ ಶಿಕ್ಷಕರಕ್ಷಕ ಸಂಘದ ಅಧ್ಯಕ್ಷೆ ಶ್ವೇತಾ ಜೈನ್ ನೋಟರಿ ಹಾಗೂ ನ್ಯಾಯವಾದಿಗಳು ಮೂಡು ಬಿದಿರೆ ಇವರು ಉಪಸ್ಥಿತರಿದ್ದು ಎಲ್ಲಾ ವಿದ್ಯಾರ್ಥಿ ಗಳಿಗೆ ಬಟ್ಟೆಚೀಲ ಉಚಿತವಾಗಿ ನೀಡಿದರು.

ಮಧ್ಯಾಹ್ನ ನಡೆದ ಈ ಸುಂದರ ಸಮಾರಂಭ ದಲ್ಲಿ ಕಾಲೇಜಿನ ಉಪನ್ಯಾಸಕ ವೃಂದದವರು ವಿದ್ಯಾರ್ಥಿ ಗಳು ಉಪಸ್ಥಿತರಿದ್ದರು. ಕಾಲೇಜಿನ ಪ್ರಾಂಶುಪಾಲೆ ಸೌಮ್ಯಶ್ರೀ ಸ್ವಾಗತಿಸಿದರು. ಉಪನ್ಯಾಸಕಿ ಸರಸ್ವತಿ ವಂದಿಸಿದರು.

# ಎನ್‌ಎಂಎಸಿಸಿಯಲ್ಲಿ ದಿ ಮುಂಬಯಿ ರಿವ್ಯೂ ಸಂಗೀತ ನಾಟಕ ಪ್ರದರ್ಶನ

**ಮುಂಬಯಿ, ಜು.13:** ರಾಯನ್ ಶಿಕ್ಷಣ ಸಮೂಹವು ತನ್ನ ಶೈಕ್ಷಣಿಕ ಸೇವಾ ಸುವರ್ಣ ಮಹೋತ್ಸವ (50ನೇ ವರ್ಷದ) ಸಂಭ್ರಮದಲ್ಲಿದ್ದು ಕಳೆದ ಮಂಗಳವಾರ (ಜು.7) ಬಾಂದ್ರಾ ಕುರ್ಲಾ ಕಾಂಪ್ಲೆಕ್ಸ್‌ನ ನಿತಾ ಮುಕೇಶ್ ಅಂಬಾನಿ ಕಲ್ಚರಲ್ ಸೆಂಟರ್‌ನ (ಎನ್‌ಎಮ್‌ಎಸಿಸಿ) ಸ್ಟುಡಿಯೊ ಥಿಯೇಟರ್‌ನಲ್ಲಿ ಸುವರ್ಣ ಮಹೋತ್ಸವಕ್ಕೆ ಅದ್ದೂರಿಯಾಗಿ ಚಾಲನೆಯನ್ನೀಡಿತು. ರಾಯನ್ ಶಿಕ್ಷಣ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕಿ ಮೇಡಂ ಡಾ| ಗ್ರೇಸ್ ಪಿಂಟೊ, ನಿರ್ದೇಶಕರಾದ ಡಾ| ಸ್ನೇಹಲ್ ಪಿಂಟೊ. ಸೋನಲ್ ಪಿಂಟೊ ಹಾಗೂ ಲಿಜ್ ಸ್ಯಾಮ್ಯುಯೆಲ್ ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಚಾಲನೆಯನ್ನಿತ್ತರು.

ಶೈಕ್ಷಣಿಕ ಕ್ಷೇತ್ರದಲ್ಲಿ ಐದು ದಶಕಗಳ ಸಾಧನೆಯನ್ನು ಪೂರೈಸುವ ಶುಭಾವಸರದಿ ಸುವರ್ಣ ಮಹೋತ್ಸವ ಸಮಾರಂಭದ ಮೊದಲ ಸಾಂಸ್ಕೃತಿಕ ಕಾರ್ಯಕ್ರಮವಾಗಿ ರಾಯನ್ ಶಾಲೆಗಳ ಮುಂಬಯಿಯಾದ್ಯಂತದ ವಿವಿಧ ಪ್ರತಿಭಾವಂತ ವಿದ್ಯಾರ್ಥಿಗಳು ಸಂಗೀತ, ನಾಟಕ ಮತ್ತು ಕಥಾ ನಿರೂಪಣೆಯ ಅದ್ಭುತ ಸಂಯೋಜನೆ ಯ ಮೂಲಕ ದಿ ಮುಂಬಯಿ ರಿವ್ಯೂ ಎಂಬ ಮೂಲ ಸಂಗೀತ ನಾಟಕ ಪ್ರದರ್ಶಿಸಿದರು. ಪ್ರಸಿದ್ಧ ಪಿಯಾನೋ ವಾದಕಿ ಕು| ಅನಯಾ ಗ್ರೇಸ್ ಅವರ ನೇರವಾದ ಸಂಗೀತ ಸಹಯೋಗ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದ್ದು, ಪ್ರದರ್ಶನವು ಕೇವಲ ವೇದಿಕೆ ಕಾರ್ಯಕ್ರಮವಾಗಿರದೆ, ನಾಲ್ಕು ದಿನಗಳ ಕಾಲ ನಡೆದ ವಿಶೇಷ ಪರ್ಫಾರ್ಮೆನ್ಸ್ ಲ್ಯಾಬ್ ತರಬೇತಿಯ ಪರಿಪಾಕವಾಗಿ ನಡೆಸಲ್ಪಟ್ಟಿತು.



ಅಂತಾರಾಷ್ಟ್ರೀಯ ಮಟ್ಟದಲ್ಲಿ ತರಬೇತಿ ಪಡೆದ ಬಹುಮುಖ ಕಲಾವಿದೆ ಹಾಗೂ ನಿರ್ದೇಶಕಿ ಟಿಯಾರಾ ಒಬೆರಾಯ್ ಮಾರ್ಗದರ್ಶನದಲ್ಲಿ ರಾಯನ್ಸ್ ವಿದ್ಯಾರ್ಥಿಗಳು ವೃತ್ತಿಪರ ಸಂಗೀತ ನಾಟಕದ ವಿವಿಧ ಆಯಾಮಗಳಲ್ಲಿ ಈ ಮೂಲಕ ಸಮಗ್ರ ತರಬೇತಿ ಪಡೆದಿದ್ದು, ನಾಟಕ ಪ್ರದರ್ಶನಕ್ಕೂ ಮುನ್ನ ನಡೆದ ನಾಲ್ಕು ದಿನಗಳ ಪರ್ಫಾರ್ಮೆನ್ಸ್ ಲ್ಯಾಬ್‌ನಲ್ಲಿ ರಾಯನ್ ವಿದ್ಯಾಲಯಗಳ ಸುಮಾರು ಮೂವತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಅಭಿನಯ, ಗಾಯನ, ಮಯ್ಯಾತು, ರಂಗಸಜ್ಜಿಕೆ, ಪ್ರತಿಭಾ ಪ್ರದರ್ಶನಾ ತಂತ್ರಗಾರಿಕೆ ಹಾಗೂ ತಂಡದೊಂದಿಗೆ ಕಾರ್ಯನಿರ್ವಹಿಸುವ ಕೌಶಲ್ಯ ಸೇರಿದಂತೆ ವೃತ್ತಿಪರ ರಂಗಭೂಮಿಗೆ ಅಗತ್ಯವಾದ ವಿವಿಧ ವಿಷಯಗಳಲ್ಲಿ ಅವರಿಗೆ ತರಬೇತಿ ನೀಡಲಾದ ಈ ಅಂತಾರಾಷ್ಟ್ರೀಯ ಮಟ್ಟದ ತರಬೇತಿ ವಿದ್ಯಾರ್ಥಿಗಳ ಪ್ರತಿಭೆಗೆ ಹೊಸ ವೇದಿಕೆಯಾಗಿ ಶಿಕ್ಷಣಪ್ರೇಮಿ ಪ್ರೇಕ್ಷಕರ ಮನಗೆದ್ದಿತು ಎಂದು ಡಾ| ಸ್ನೇಹಲ್ ಪಿಂಟೊ ಅಭಿಪ್ರಾಯ ಪಟ್ಟರು.

ಕಾರ್ಯಕ್ರಮದ ಆರಂಭದಲ್ಲಿ ವಿದ್ಯಾರ್ಥಿಗಳು ಸಂಗೀತ ಪ್ರಸ್ತುತಪಡಿಸಿ, ಸಂಗೀತ ಪಯಣಕ್ಕೆ ಮನಮೋಹಕ ಚಾಲನೆ ನೀಡಿದರು. ಟಿಯಾರಾ ಒಬೆರಾಯ್ ಅವರ ಸೃಜನಾತ್ಮಕ ನಿರ್ದೇಶನದಲ್ಲಿ ವಿದ್ಯಾರ್ಥಿಗಳು ಆಕರ್ಷಕ ನೃತ್ಯ ಸಂಯೋಜನೆ, ಪರಿಣಾಮಕಾರಿ ಗಾಯನ ಹಾಗೂ ಭಾವಪೂರ್ಣ ಅಭಿನಯದ ಮೂಲಕ ಅತ್ಯುತ್ತಮ ಪ್ರದರ್ಶನ ನೀಡಿದರು. ತಮ್ಮ ಅಂತಾರಾಷ್ಟ್ರೀಯ ಅನುಭವ ಹಾಗೂ ಸೃಜನಾತ್ಮಕ ಮಾರ್ಗದರ್ಶನದ ಮೂಲಕ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಶಿಸ್ತು ಹಾಗೂ ಕಲೆಯ ಮೇಲಿನ ಒಲವು ತೋರಿದ ಟಿಯಾರಾ ಒಬೆರಾಯ್ ಈ ಕಾರ್ಯಕ್ರಮವನ್ನು ಯುವ ಪ್ರತಿಭೆಗಳ ಸ್ಮರಣೀಯ ಸಂಭ್ರಮವನ್ನಾಗಿಸಿ ರೂಪಿಸಿದರು.

ಕಳೆದ ಐದು ದಶಕಗಳಿಂದ ರಾಯನ್ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ತರಗತಿ ಶಿಕ್ಷಣವನ್ನು ಮೀರಿ ಶೈಕ್ಷಣಿಕ ಸಾಧನೆ, ಕ್ರೀಡೆ, ನಾಯಕತ್ವ, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ಪ್ರದರ್ಶನ ಕಲೆಗಳಲ್ಲಿ ಬೆಳೆಯಲು ಸಮಾನ ಅವಕಾಶಗಳನ್ನು ಒದಗಿಸುತ್ತಾ ಬಂದಿದೆ. ಇದೀಗ ಸುವರ್ಣ ಮಹೋತ್ಸವ ವರ್ಷ ಪ್ರವೇಶಿಸಿರುವ ರಾಯನ್ ಶಿಕ್ಷಣ ಸಂಸ್ಥೆಗಳ ಸಮಗ್ರ ಶಿಕ್ಷಣದ ಧ್ಯೇಯವನ್ನು ದಿ ಮುಂಬಯಿ ರಿವ್ಯೂ ಪರಿಣಾಮಕಾರಿಯಾಗಿ ಪ್ರತಿಬಿಂಬಿಸಿದೆ. ಸೃಜನಶೀಲತೆ, ಸಹಕಾರ, ಆತ್ಮವಿಶ್ವಾಸ ಹಾಗೂ ಶೈಕ್ಷಣಿಕ ಸಾಧನೆಯನ್ನು ಸಮಾನವಾಗಿ ಬೆಳೆಸುವ ಸಂಸ್ಥೆಯ ಶಿಕ್ಷಣ ತತ್ವವನ್ನು ಈ ಕಾರ್ಯಕ್ರಮ ಮತ್ತೊಮ್ಮೆ ಎತ್ತಿ ತೋರಿಸಿತು ಎಂದು ಸೋನಲ್ ಪಿಂಟೊ ತಿಳಿಸಿದರು.

ಈ ಪ್ರದರ್ಶನವು ರಾಯನ್ ಶಿಕ್ಷಣ ಸಂಸ್ಥೆಗಳ ಐವತ್ತು ವರ್ಷಗಳ ವೈಭವಮಯ ಪಯಣವನ್ನು ಮಾತ್ರವಲ್ಲದೆ, ಜಾಗತಿಕ ಅನುಭವ, ಅರ್ಥಪೂರ್ಣ ಕಲಾ ಅವಕಾಶಗಳು ಹಾಗೂ ಭವಿಷ್ಯದ ಸವಾಲುಗಳನ್ನು ಆತ್ಮವಿಶ್ವಾಸದಿಂದ ಎದುರಿಸಬಲ್ಲ, ಮಾನವೀಯ ಮೌಲ್ಯಗಳನ್ನು ಹೊಂದಿದ ವಿಶ್ವನಾಗರಿಕರನ್ನು ರೂಪಿಸುವ ಸಂಸ್ಥೆಯ ದೂರದೃಷ್ಟಿಯನ್ನೂ ಪ್ರತಿಬಿಂಬಿಸಿತು. ಶೈಕ್ಷಣಿಕ ಕ್ಷೇತ್ರದಲ್ಲಿ ಐದು ದಶಕಗಳ ಯಶಸ್ವಿ ಪಯಣವನ್ನು ಆಚರಿಸುತ್ತಿರುವ ರಾಯನ್ ಶಿಕ್ಷಣ ಸಮೂಹವು ವಿದೇಶಗಳಲ್ಲಿ ಸೇರಿದಂತೆ ಭಾರತ ರಾಷ್ಟ್ರದಾದ್ಯಂತ 150ಕ್ಕೂ ಹೆಚ್ಚು ಶಾಲೆಗಳನ್ನು ಹೊಂದಿರುವ ದೇಶದ ಪ್ರತಿಷ್ಠಿತ ಮತ್ತು ಪ್ರಮುಖ ಕೆ–12 ಶಿಕ್ಷಣ ಸಂಸ್ಥೆಯಾಗಿದೆ. ಸಮಗ್ರ ಶಿಕ್ಷಣ ವಿಧಾನಕ್ಕೆ ಹೆಸರುವಾಸಿಯಾಗಿರುವ ಈ ಸಂಸ್ಥೆ, ಶೈಕ್ಷಣಿಕ ಸಾಧನೆಯೊಂದಿಗೆ ಕ್ರೀಡೆ, ಪ್ರದರ್ಶನ ಕಲೆಗಳು, ನಾಯಕತ್ವ, ನವೋದ್ಯಮ ಹಾಗೂ ಸಮಾಜಸೇವೆಗೆ ಸಮಾನ ಮಹತ್ವ ನೀಡಿ, ಆತ್ಮವಿಶ್ವಾಸಿ, ಮಾನವೀಯ ಮೌಲ್ಯಗಳನ್ನು ಹೊಂದಿದ ಹಾಗೂ ಜಾಗತಿಕ ಮಟ್ಟದಲ್ಲಿ ಯಶಸ್ವಿಯಾಗಬಲ್ಲ ವಿದ್ಯಾರ್ಥಿಗಳನ್ನು ರೂಪಿಸುವಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸುವಲ್ಲಿ ಯಶಕಂಡಿದೆ ಎಂದು ಮೇಡಂ ಡಾ| ಗ್ರೇಸ್ ಪಿಂಟೊ ತಿಳಿಸಿದರು.

# ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅಮಾನತು

### ಪುತ್ರಿಗೆ ಸರ್ಕಾರಿ ಹುದ್ದೆ ನೀಡಲು ಮೀಸಲಾತಿ ದುರುಪಯೋಗ ಆರೋಪ: ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಆದೇಶ

**ಬೆಂಗಳೂರು, ಜು.13:** ಪುತ್ರಿಗೆ ಸರ್ಕಾರಿ ಹುದ್ದೆ ನೀಡಲು ಮೀಸಲಾತಿ ದುರುಪಯೋಗ ಪಡಿಸಿಕೊಂಡ ಆರೋಪದ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಇತಿಹಾಸದಲ್ಲೇ ಮೊದಲ ಬಾರಿಗೆ ಹಾಲಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರನ್ನು ತಕ್ಷಣದಿಂದಲೇ ಜಾರಿಯಾಗುವಂತೆ ಸೇವೆಯಿಂದ ಅಮಾನತುಗೊಳಿಸಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಮಹತ್ವದ ಆದೇಶ ಹೊರಡಿಸಿದ್ದಾರೆ.

ಅಲ್ಲದೆ ಅವರ ವಿರುದ್ಧದ ಆರೋಪಗಳ ಕುರಿತು ತನಿಖೆ ನಡೆಸಲು ಶಿಫಾರಸು ಮಾಡಿದ್ದು, ಈ ಮೂಲಕ ಕೆಪಿಎಸ್‌ಸಿ ಇತಿಹಾಸದಲ್ಲೇ ಅಧ್ಯಕ್ಷರೊಬ್ಬರು ಭ್ರಷ್ಟಾಚಾರ ಅಥವಾ ಅಕ್ರಮದ ಆರೋಪದ ಮೇಲೆ ಅಮಾನತುಗೊಂಡ ಮೊದಲ ಪ್ರಕರಣ ಇದಾಗಿದೆ.

ಅಧಿಕಾರ ದುರುಪಯೋಗ, ಸ್ವಜನಪಕ್ಷಪಾತ ಮತ್ತು ನಕಲಿ ದಾಖಲೆಗಳ ಸೃಷ್ಟಿ ಆರೋಪದ ಹಿನ್ನೆಲೆಯಲ್ಲಿ ಈ ಹಠಾತ್ ಕ್ರಮ ಕೈಗೊಳ್ಳಲಾಗಿದೆ. ಸುಪ್ರೀಂಕೋರ್ಟ್ ಉಲ್ಲೇಖ ಹಾಗೂ ರಾಷ್ಟ್ರಪತಿಗಳ ಮುಂದಿನ ನಿರ್ಧಾರದ ಮೇಲೆ ಈ ಪ್ರಕರಣದ ಅಂತಿಮ ತೀರ್ಪು ಆಧಾರಿತವಾಗಿದೆ ಎಂದು ಕಾರ್ಯಾಂಗದ ಮುಖ್ಯಸ್ಥರಾಗಿರುವ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್.ಪ್ರಭುಶಂಕರ್ ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.



**ಹಂಗಾಮಿ ಅಧ್ಯಕ್ಷರ ನೇಮಕ**

**ಆಯೋಗದ ದೈನಂದಿನ ಕಾರ್ಯಕಲಾಪಗಳಿಗೆ ತೊಂದರೆಯಾಗದಂತೆ, ಮುಂದಿನ ಆದೇಶದವರೆಗೆ ಕೆಪಿಎಸ್‌ಸಿಯ ಹಿರಿಯ ಸದಸ್ಯರೊಬ್ಬರು ಹಂಗಾಮಿ ಅಧ್ಯಕ್ಷರನ್ನಾಗಿ ಕಾರ್ಯ ನಿರ್ವಹಿಸಲು ಆದೇಶಿಸಲಾಗಿದೆ.**

ಸಂವಿಧಾನದ ವಿಧಿ 317ರಡಿ ಲೋಕಸೇವಾ ಆಯೋಗದ ಅಧ್ಯಕ್ಷರು ಅಥವಾ ಸದಸ್ಯರನ್ನು ಹುದ್ದೆಯಿಂದ ತೆಗೆದುಹಾಕುವ ಅಧಿಕಾರ ರಾಷ್ಟ್ರಪತಿಗಿರುತ್ತದೆ. ಆದರೆ ವಿಚಾರಣೆ ಬಾಕಿ ಇರುವ ಅವಧಿಯಲ್ಲಿ ಅವರನ್ನು ಅಮಾನತುಗೊಳಿಸುವ ವಿಶೇಷ ಅಧಿಕಾರವನ್ನು ರಾಜ್ಯಪಾಲರು ಚಲಾಯಿಸಿದ್ದಾರೆ. ಕೆಪಿಎಸ್ಸಿ ಅಧ್ಯಕ್ಷರು ಅವರ ಇಬ್ಬರು ಪುತ್ರಿಯರನ್ನು ನಿಯಮಬಾಹಿರವಾಗಿ ಕೈಗಾರಿಕಾ ವಿಸ್ತರಣಾ ಅಧಿಕಾರಿ ಹುದ್ದೆಗಳಿಗೆ ಆಯ್ಕೆ ಮಾಡಲು ಅನುಕೂಲ ಮಾಡಿಕೊಟ್ಟಿದ್ದಾರೆ ಎಂಬ ಗಂಭೀರ ದೂರುಗಳು ದಾಖಲಾಗಿದ್ದವು. ತಮ್ಮ ನೇರ ಅವಲಂಬಿತರು (ಪುತ್ರಿಯರು) ಆಯೋಗದ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದಾಗ, ಅಧ್ಯಕ್ಷರು ನಿಯಮಾವಳಿಗಳ ಪ್ರಕಾರ ಆ ಪ್ರಕ್ರಿಯೆಯಿಂದ ದೂರವಿರಬೇಕಾಗಿತ್ತು ಅಥವಾ ಹಿತಾಸಕ್ತಿ ಸಂಘರ್ಷವನ್ನು ಔಪಚಾರಿಕವಾಗಿ ಘೋಷಿಸಬೇಕಾಗಿತ್ತು. ಆದರೆ, ಅವರು ಇದರಲ್ಲಿ ಸಂಪೂರ್ಣವಾಗಿ ವಿಫಲರಾಗಿದ್ದಾರೆ. ಅಧ್ಯಕ್ಷರ ಪುತ್ರಿಯೊಬ್ಬರು ತಮ್ಮ ಕುಟುಂಬದ ವಾರ್ಷಿಕ ಆದಾಯವನ್ನು ಕೇವಲ 40,000 ಎಂದು ಸುಳ್ಳು ಘೋಷಣೆ ನೀಡಿ, ಆದಾಯ ಮತ್ತು ಜಾತಿ ಪ್ರಮಾಣಪತ್ರ ಪಡೆದಿದ್ದಾರೆ. ತಂದೆ ಕೆಪಿಎಸ್‌ಸಿ ಅಧ್ಯಕ್ಷರಾಗಿದ್ದರೂ, ನಿಗದಿತ ಮಿತಿಗಿಂತ ಹೆಚ್ಚಿನ ಆದಾಯ ಹೊಂದಿದ್ದರೂ ಉದ್ದೇಶಪೂರ್ವಕವಾಗಿ ಸತ್ಯಾಂಶಗಳನ್ನು ಮರೆಮಾಚಲಾಗಿದೆ ಎಂಬ ಆರೋಪ ಕೇಳಿ ಬಂದಿತ್ತು.

**ಕೆಪಿಎಸ್‌ಸಿ ಅಧ್ಯಕ್ಷರ ಪುತ್ರಿ ವಿರುದ್ಧ ಎಫ್‌ಐಆರ್ ದಾಖಲು**

**ಬೆಂಗಳೂರು, ಜು.13: ಕೆಪಿಎಸ್ಸಿ ಅಧ್ಯಕ್ಷ ಶಿವಶಂಕರಪ್ಪ ಅವರ ಪುತ್ರಿ ಸುಮಾ ವಿರುದ್ಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ ಎಂದು ಕೇಂದ್ರ ವಿಭಾಗದ ಡಿಸಿಪಿ ತಿಳಿಸಿದ್ದಾರೆ. ಸುಮಾ ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ನೀಡಿರುವ ಅಧಿಕಾರಿಗಳಿಗೆ ವಿಚಾರಣೆಗೆ ಹಾಜರಾಗುವಂತೆ ನೋಟೀಸ್ ನೀಡಲಾಗಿದೆ ಎಂದು ಹೇಳಿದರು. ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆಗೆ ಸುಮಾ ಎಸ್ ಸಾಹುಕಾರ್ ಅವರು ಅರ್ಜಿ ಸಲ್ಲಿಸುವಾಗ ನಕಲಿ ಆದಾಯ ಮತ್ತು ಜಾತಿ ಪ್ರಮಾಣಪತ್ರ ಸಲ್ಲಿಸಿರುವ ಆರೋಪದ ಮೇಲೆ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.ಸುಮಾ ಅವರು ತಮ್ಮ ಕುಟುಂಬದ ವಾರ್ಷಿಕ ಆದಾಯವನ್ನು 40 ಸಾವಿರ ರೂ.ಗಳೆಂದು ನಮೂದಿಸಿರುವುದು ಅಭ್ಯರ್ಥಿಗಳ ದಾಖಲೆ ಪರಿಶೀಲನೆ ವೇಳೆ ವಂಚನೆ ಬಯಲಾಗಿದೆ.ಸುಮಾ ತಂದೆ ಶಿವಶಂಕರಪ್ಪ ಅವರ ಮಾಸಿಕ ವೇತನವೇ 2.25 ಲಕ್ಷ ರೂ. ಆಗಿದ್ದು, ಸುಳ್ಳು ದಾಖಲೆಗಳನ್ನು ನೀಡಿ ಮೀಸಲಾತಿ ದುರುಪಯೋಗ ಪಡಿಸಿಕೊಳ್ಳಲು ಪ್ರಯತ್ನಿಸಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.**

## ಕೆಪಿಎಸ್‌ಸಿ ಭ್ರಷ್ಟಾಚಾರಕ್ಕೆ ಮುಕ್ತಿ ಹಾಡಲು ಸಾಂವಿಧಾನಿಕ ತಿದ್ದುಪಡಿ ಅಗತ್ಯ

**ಬೆಂಗಳೂರು, ಜು.13:** ಕರ್ನಾಟಕ ಲೋಕಸೇವಾ ಆಯೋಗದ ವಿಶ್ವಾಸಾರ್ಹತೆಗೆ ಕಳಂಕ ಅಂಟಿದ್ದು, ಕೆಪಿಎಸ್‌ಸಿಯಲ್ಲಿನ ಭ್ರಷ್ಟಾಚಾರಕ್ಕೆ ಶಾಶ್ವತ ಮುಕ್ತಿ ಹಾಡಲು ಸಂವಿಧಾನಾತ್ಮಕ ತಿದ್ದುಪಡಿ ತರಬೇಕಾದ ಅಗತ್ಯವಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಪಾದಿಸಿದ್ದಾರೆ.



■ **ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಪಾದನೆ**

ವ್ಯವಸ್ಥೆಯಲ್ಲಿ ಬದಲಾವಣೆ ತರಲು ಆಡಳಿತ ಹಾಗೂ ವಿಪಕ್ಷಗಳ ಆಶಯವೂ ಒಂದೇ ಆಗಿದೆ. ಈ ನಿಟ್ಟಿನಲ್ಲಿ ಎಲ್ಲರೂ ಒಟ್ಟಾಗಿ ಕೇಂದ್ರ ಸರ್ಕಾರಕ್ಕೆ ಜಂಟಿಯಾಗಿ ಮನವಿ ಸಲ್ಲಿಸಬೇಕು. ಸರ್ಕಾರ ಕೂಡ ಈ ನಿಟ್ಟಿನಲ್ಲಿ ತಿದ್ದುಪಡಿ ತರಲು ಕಾನೂನಿನ ಸಾಧಕ-ಬಾಧಕಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಹೆಜ್ಜೆ ಇಡುವುದು ಸೂಕ್ತ. ಪ್ರಸ್ತುತ ಸರ್ಕಾರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳ ಬಗ್ಗೆ ಯುವಕರಲ್ಲಿ ಹಾಗೂ ಸಾರ್ವಜನಿಕರಲ್ಲಿ ಸಾಕಷ್ಟು ಅನುಮಾನಗಳು ಮತ್ತು ಆತಂಕ ಸೃಷ್ಟಿಯಾಗಿದೆ. ದೇಶದ ಯುವ ಸಮೂಹದ ಭವಿಷ್ಯದ ದೃಷ್ಟಿಯಿಂದ ಪಕ್ಷಭೇದ ಮರೆತು ಎಲ್ಲರೂ ಒಟ್ಟಾಗಿ ಕಠಿಣ ಕಾನೂನು ರೂಪಿಸುವುದು ಇಂದಿನ ತುರ್ತು ಅಗತ್ಯವಾಗಿದೆ. ಇದು ನನ್ನ ವೈಯಕ್ತಿಕ ಅಭಿಪ್ರಾಯವೂ ಹೌದು ಎಂದು ಈ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಮರುಸ್ಥಾಪಿಸಲು ನಾವೆಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡಬೇಕಿದೆ ಎಂದಿದ್ದಾರೆ.

**ಕೇಂದ್ರದ ಪರೀಕ್ಷೆಗಳಲ್ಲೂ ಭ್ರಷ್ಟಾಚಾರ:** ದೇಶಾದ್ಯಂತ ನಂಬಿಕೆಯ ಕೊರತೆ-ಕೇವಲ ರಾಜ್ಯದ ಪರೀಕ್ಷೆಗಳು ಮಾತ್ರವಲ್ಲದೆ ದೇಶದ ಪ್ರತಿಷ್ಠಿತ ಪರೀಕ್ಷಾ ಮಂಡಳಿಗಳಾದ ಸಿಬಿಎಸ್‌ಇ, ನೀಟ್ ಪರೀಕ್ಷೆಗಳ ಪ್ರಶ್ನೆಪತ್ರಿಕೆಗಳೂ ಸೋರಿಕೆಯಾಗಿವೆ. ರೈಲ್ವೆ ಇಲಾಖೆಯ ಪರೀಕ್ಷೆಗಳಲ್ಲೂ ಇಂತಹದ್ದೇ ಅಕ್ರಮಗಳು ನಡೆದಿವೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದರು.

**ಗವರ್ನರ್ ಆದೇಶಕ್ಕೆ ಪ್ರಿಯಾಂಕ್ ಬೆಂಬಲ:** ಕೆಪಿಎಸ್ಸಿ ಅಧ್ಯಕ್ಷ ಶಿವಶಂಕರ್ ಸಾಹುಕಾರ್ ಅಮಾನತು ವಿಚಾರವಾಗಿ ಮಾತನಾಡಿದ ಸಚಿವರು, ಯಾವುದೇ ಒಬ್ಬ ಅಧಿಕಾರಿ, ವ್ಯಕ್ತಿ ಅಥವಾ ಸಾಂಸ್ಥಿಕ ಮುಖ್ಯಸ್ಥರ ಮೇಲೆ ಭ್ರಷ್ಟಾಚಾರದ ಅನುಮಾನಗಳು ವ್ಯಕ್ತವಾದಾಗ, ಅವರು ಸ್ವಪ್ರೇರಣೆಯಿಂದ ತಮ್ಮ ಹುದ್ದೆಗೆ ರಾಜೀನಾಮೆ ನೀಡಬೇಕು. ತನಿಖೆಗೆ ಸಹಕಾರ ನೀಡಿ ದೋಷಮುಕ್ತರೆಂದು ಸಾಬೀತಾದ ಬಳಿಕ ಮರಳಿ ಅಧಿಕಾರ ವಹಿಸಿಕೊಳ್ಳುವುದು ನೈತಿಕತೆ. ಆದರೆ, ಕುರ್ಚಿಯಲ್ಲಿ ಮುಂದುವರಿಯುತ್ತೇನೆ ಎಂದು ಹಠ ಹಿಡಿಯುವುದು ಸರಿಯಲ್ಲ ಎಂದು ಸಾಹುಕಾರ್ ಅವರ ನಿಲುವನ್ನು ಪ್ರಿಯಾಂಕ್ ಖರ್ಗೆ ಖಂಡಿಸಿದರು.

ನಿಯಮಾವಳಿಗಳ ಪ್ರಕಾರವೇ ರಾಜ್ಯಪಾಲರು ವಜಾ ಮಾಡುವ ಆದೇಶ ಹೊರಡಿಸಿದ್ದಾರೆ. ಮುಂದಿನ ದಿನಗಳಲ್ಲಿ ಇಂತಹ ಗೊಂದಲಗಳು ಮರುಕಳಿಸದಂತೆ ವ್ಯವಸ್ಥೆಯನ್ನು ಸರಿಪಡಿಸಬೇಕಿದೆ. ಯುವಕರ ಭವಿಷ್ಯದ ಜೊತೆ ಚಿಲ್ಲರೆ ರಾಜಕಾರಣ ಮಾಡುವ ಯಾವುದೇ ಸಂಸ್ಥೆಯನ್ನು ಸರ್ಕಾರ ಸಹಿಸುವುದಿಲ್ಲ ಎಂದು ಪ್ರಿಯಾಂಕ್ ಖರ್ಗೆ ಎಚ್ಚರಿಕೆ ನೀಡಿದರು.

## ಆಂಧ್ರಪ್ರದೇಶಕ್ಕೆ ವಕ್ಕರಿಸಿದ ಕರೋನಾ ಮಾದರಿ ವೈರಸ್

**ಬೆಂಗಳೂರು, ಜು.13:** ದೇಶದಲ್ಲಿ ಸದ್ಯಕ್ಕೆ ತಣ್ಣಗಾಗಿದ್ದ ಕೊರೊನಾ ವೈರಸ್ ಮಹಾಮಾರಿ ನೆರೆರಾಜ್ಯವಾದ ಆಂಧ್ರಪ್ರದೇಶದಲ್ಲಿ ಮತ್ತೆ ವಕ್ಕರಿಸಿದೆ. ಕಡಪಾ ಜಿಲ್ಲೆಯಲ್ಲಿ ಹೊಸದಾಗಿ ಕೋವಿಡ್ ಪ್ರಕರಣಗಳು ವರದಿಯಾಗುತ್ತಿದ್ದು, ಸೋಂಕಿಗೆ ಒಬ್ಬರು ಮೃತಪಟ್ಟಿದ್ದಾರೆ, ಸೋಂಕು ವಿಷಯ ತಿಳಿಯುತ್ತಿದ್ದಂತೆ ಕರ್ನಾಟಕ ಸೇರಿ ಆಂಧ್ರದ ನೆರೆರಾಜ್ಯಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದೆ.

■ **ಕರ್ನಾಟಕ ಸೇರಿ ಆಂಧ್ರಪ್ರದೇಶದ ನೆರೆಗಳಲ್ಲಿ ಅಲರ್ಟ್**

ಕರ್ನಾಟಕದ ಗಡಿ ಹಂಚಿಕೊಂಡಿರುವ ಆಂಧ್ರದಲ್ಲಿ ನಡೆದಿರುವ ಈ ಬೆಳವಣಿಗೆಯು ಸದ್ಯ ಇಡೀ ದಕ್ಷಿಣ ಭಾರತದಲ್ಲಿ ಸಂಚಲನ ಮೂಡಿಸಿದ್ದು, ನೆರೆರಾಜ್ಯಗಳ ಆರೋಗ್ಯ ಇಲಾಖೆಗಳು ಅಲರ್ಟ್ ಆಗುವಂತೆ ಮಾಡಿದೆ. ಆಂಧ್ರಪ್ರದೇಶದ ಕಡಪ ಜಿಲ್ಲೆಯಲ್ಲಿ ಜುಲೈ 9ರಂದು 46 ವರ್ಷದ ವ್ಯಕ್ತಿಯೊಬ್ಬರು ಕೋವಿಡ್-19 ಸೋಂಕಿನಿಂದಾಗಿ ಮೃತಪಟ್ಟಿದ್ದಾರೆ. ತೀವ್ರ ಉಸಿರಾಟದ ತೊಂದರೆ ಮತ್ತು ನಿರಂತರ ಕೆಮ್ಮಿನಿಂದ ಬಳಲುತ್ತಿದ್ದ ಇವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಆಂಟಿಬಯೋಟಿಕ್ಸ್ ಚಿಕಿತ್ಸೆ ನೀಡಿದರೂ ಯಾವುದೇ ಗುಣಮುಖ ಲಕ್ಷಣಗಳು ಕಾಣಿಸದೆ ಅವರು ಕೊನೆಯುಸಿರೆಳೆದಿದ್ದಾರೆ ಎಂದು ಜಿಲ್ಲಾ ವೈದ್ಯಾಧಿಕಾರಿ ಡಾ.ರವಿಬಾಬು ತಿಳಿಸಿದ್ದಾರೆ. ಪ್ರಾಥಮಿಕ ವರದಿಗಳ ಪ್ರಕಾರ, ಮೃತ ವ್ಯಕ್ತಿ ತೀವ್ರ ಮದ್ಯದ ವ್ಯಸನಿಯಾಗಿದ್ದರು ಎನ್ನಲಾಗಿದೆ. ಕೆಲವು ಮಾಧ್ಯಮಗಳ ಪ್ರಕಾರ ರಾಜ್ಯದಲ್ಲಿ ಈಗಾಗಲೇ ಇಬ್ಬರು ಸೋಂಕಿಗೆ ಬಲಿಯಾಗಿದ್ದಾರೆ ಎಂದೂ ಹೇಳಲಾಗುತ್ತಿದೆ. ಕಡಪಾ ಸೇರಿದಂತೆ ಆಂಧ್ರದ ಹಲವು ಭಾಗಗಳಲ್ಲಿ ಕೋವಿಡ್ ಪ್ರಕರಣಗಳು ಮರುಕಳಿಸುತ್ತಿದ್ದಂತೆ ಎಚ್ಚೆತ್ತುಕೊಂಡಿರುವ ಅಲ್ಲಿನ ಸರ್ಕಾರ, ವೈರಸ್ ಹರಡುವಿಕೆಯನ್ನು ತಡೆಯಲು ಕಟ್ಟುನಿಟ್ಟಿನ ಕ್ರಮಗಳಿಗೆ ಮುಂದಾಗಿದೆ. ಸೋಂಕು ಪೀಡಿತ ಪ್ರದೇಶಗಳಲ್ಲಿ ತಕ್ಷಣವೇ ಕಾರ್ಯಪ್ರವೃತ್ತರಾಗಲು ವಿಶೇಷ ತ್ವರಿತ ಸ್ಪಂದನಾ ತಂಡಗಳನ್ನು ರಚಿಸಲಾಗಿದೆ. ಯಾವುದೇ ತುರ್ತು ಪರಿಸ್ಥಿತಿಯನ್ನು ಎದುರಿಸಲು ಸಜ್ಜಾಗಿರುವಂತೆ ಆಸ್ಪತ್ರೆಗಳಿಗೆ ಸೂಚಿಸಲಾಗಿದ್ದು, ಪ್ರತ್ಯೇಕ ಐಸೊಲೇಷನ್ ಸೌಲಭ್ಯಗಳನ್ನು ಸಿದ್ಧವಾಗಿಟ್ಟುಕೊಳ್ಳಲು ಆದೇಶಿಸಲಾಗಿದೆ.

## ರಾಜ್ಯದ 1119 ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಅಭಾವ ಸಾಧ್ಯತೆ

**ಕೊರತೆ ನಿವಾರಿಸಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮಹತ್ವದ ಕ್ರಮ**

**ಬೆಂಗಳೂರು, ಜು.13:** ರಾಜ್ಯದಲ್ಲಿ ಈ ಬಾರಿ ಮುಂಗಾರು ಕೈಕೊಟ್ಟಿದ್ದು, ಕೆಲವೇ ಭಾಗಗಳಲ್ಲಿ ಮಾತ್ರ ತುಂತುರು ಮಳೆಯಾಗುತ್ತಿದೆ. ಇದನ್ನು ಹೊರತುಪಡಿಸಿ ಬಹುತೇಕ ಜಿಲ್ಲೆಗಳಲ್ಲಿ ಬಿಸಿಲಿನ ವಾತಾವರಣ ಮುಂದುವರೆದಿದೆ. ಜಲಮೂಲಗಳು ಸಹ ಬರಿದಾಗುತ್ತಿದ್ದು, ವರುಣ ಕರುಣೆ ತೋರದಿದ್ದರೆ ಮುಂದಿನ ದಿನಗಳಲ್ಲಿ ನೀರಿನ ಹಾಹಾಕಾರ ಎದುರಾದರೂ ಆಶ್ಚರ್ಯವಿಲ್ಲ. ಆದ್ದರಿಂದ ಈಗಲೇ ಎಚ್ಚೆತ್ತುಕೊಂಡ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮಹತ್ವದ ಕ್ರಮಕ್ಕೆ ಮುಂದಾಗಿದೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ರಾಜ್ಯಾದ್ಯಂತ 1,119 ಗ್ರಾಮಗಳನ್ನು ಕುಡಿಯುವ ನೀರಿನ ಅಭಾವ ಎದುರಿಸಬಹುದಾದ ಸೂಕ್ಷ್ಮ ಪ್ರದೇಶಗಳೆಂದು ಗುರುತಿಸಿದೆ. ಈ ಪಟ್ಟಿಯಲ್ಲಿ ಬೆಂಗಳೂರು ನಗರ ಜಿಲ್ಲೆಯ 22 ಪ್ರದೇಶಗಳು ಸೇರಿವೆ.



**ಕಳೆದ 10 ವರ್ಷಗಳ ನೀರಿನ ಅಭಾವದ ಮಾದರಿ ಮತ್ತು ದತ್ತಾಂಶಗಳನ್ನು ಕೂಲಂಕಷವಾಗಿ ಅಧ್ಯಯನ ಮಾಡಿದ ಬಳಿಕವೇ ಈ ಯೋಜನೆಯನ್ನು ರೂಪಿಸಲಾಗಿದೆ,' ಎಂದು ಹೇಳಿದ್ದಾರೆ.'ಕೆಲವು ಹಳ್ಳಿಗಳಲ್ಲಿ ಕೇವಲ ನಿರ್ದಿಷ್ಟ ಜನವಸತಿ ಪ್ರದೇಶಗಳಲ್ಲಿ ಮಾತ್ರ ತೊಂದರೆ ಇರುತ್ತದೆ. ಅದನ್ನು ಗಮನದಲ್ಲಿ ಇಟ್ಟುಕೊಂಡು ಸೆಪ್ಟೆಂಬರ್‌ವರೆಗೆ ದೈನಂದಿನ ನೀರಿನ ಕೊರತೆ ಆಗದಂತೆ ಕ್ರಮ ವಹಿಸಲಾಗಿದೆ.**

**-ಬಿ.ಫೌಜಿಯಾ ತರನುಮ್, ಆಯುಕ್ತೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ**

ಮುಖ್ಯವಾಗಿ 'ಎಲ್ ನಿನೊ' ಪರಿಣಾಮ ಮುಂಗಾರು ಮಾರುತಗಳ ಆಗಮನ ವಿಳಂಬವಾಗಿದ್ದು, ರಾಜ್ಯದಲ್ಲಿ ಜೂನ್ 1ರಿಂದ 8ರ ನಡುವೆ ವಾಡಿಕೆಗಿಂತ ಶೇಕಡ 28ರಷ್ಟು ಕಡಿಮೆ ಮಳೆಯಾಗಿದೆ. (ವಾಡಿಕೆ 266 ಮಿ.ಮೀ. ಇದ್ದರೆ, ಕೇವಲ 191 ಮಿ.ಮೀ. ಮಳೆಯಾಗಿದೆ). ಇನ್ನೂ ಸೆಪ್ಟೆಂಬರ್ ತಿಂಗಳವರೆಗೆ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಕುಡಿಯುವ ನೀರನ್ನು ಪೂರೈಸಲು ಇಲಾಖೆಯು ಗ್ರಾಮವಾರು ತುರ್ತು ಯೋಜನೆಯನ್ನು ಸಿದ್ಧಪಡಿಸಿದೆ. ಒಟ್ಟು 978 ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆಯಲಾಗುತ್ತಿದ್ದು, ಇವುಗಳ ಮೂಲಕವೇ ಸುಮಾರು 838 ಹಳ್ಳಿಗಳಿಗೆ ನೀರು ಒದಗಿಸುವ ಗುರಿ ಇಟ್ಟುಕೊಂಡಿದೆ. ಎಲ್ಲಿ ಹೆಚ್ಚು ನೀರಿನ ಸಮಸ್ಯೆ ಇದೆಯೋ ಅಂತಹ ಭಾಗಗಳಿಗೆ ನೀರು ತಲುಪಿಸಲು 254 ಖಾಸಗಿ ಟ್ಯಾಂಕರ್‌ಗಳನ್ನು ಬಾಡಿಗೆಗೆ ಪಡೆಯಲಾಗಿದೆ ಹಾಗೂ ಇಲಾಖೆಯ 35 ಸ್ವಂತ ಟ್ಯಾಂಕರ್‌ಗಳನ್ನು ನಿಯೋಜಿಸಲಾಗಿದೆ. ಈ ನೀರಿನ ಸಮಸ್ಯೆಯನ್ನು ನಿಭಾಯಿಸಲು ಮತ್ತು ಪರಿಹಾರ ಕ್ರಮಗಳಿಗಾಗಿ ರಾಜ್ಯ ಸರ್ಕಾರವು ಈಗಾಗಲೇ 117 ಕೋಟಿ ರೂಪಾಯಿ ಹಣವನ್ನು ಮಂಜೂರು ಮಾಡಿದೆ ಎಂದು ತಿಳಿದುಬಂದಿದೆ.

ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆಯುವ ದರವನ್ನು ಆಯಾ ಜಿಲ್ಲಾಡಳಿತಗಳು ಅಲ್ಲಿನ ಪರಿಸ್ಥಿತಿ ಆಧರಿಸಿ ನಿರ್ಧರಿಸಲಿದ್ದು, ಸಾಮಾನ್ಯವಾಗಿ ತಿಂಗಳಿಗೆ 10,000 ದಿಂದ 15,000 ರೂಪಾಯಿವರೆಗೆ ಇರಲಿದೆ.

**ಬೀದರ್‌ನಲ್ಲಿ ಹೆಚ್ಚಿನ ಅಭಾವ:** ಇಡೀ ರಾಜ್ಯದಲ್ಲೇ ಬೀದರ್ ಅತ್ಯಂತ ಹೆಚ್ಚು ನೀರಿನ ಅಭಾವ ಎದುರಿಸುತ್ತಿರುವ ಜಿಲ್ಲೆಯಾಗಿ ಹೊರಹೊಮ್ಮಿದೆ. ಇಲ್ಲಿನ 65 ಗ್ರಾಮ ಪಂಚಾಯಿತಿ ವ್ಯಾಪ್ತಿಯ 93 ಹಳ್ಳಿಗಳು ತೀವ್ರ ಆತಂಕದ ಪರಿಸ್ಥಿತಿಯಲ್ಲಿವೆ. ಇಲ್ಲಿನ 9 ಹಳ್ಳಿಗಳಿಗೆ ನೀರು ಒದಗಿಸಲು 7 ಖಾಸಗಿ ಟ್ಯಾಂಕರ್ ಹಾಗೂ 8 ಖಾಸಗಿ ಬೋರ್‌ವೆಲ್‌ಗಳನ್ನು ಬಳಸಲಾಗುತ್ತಿದೆ. ಇದರ ನಂತರದ ಸ್ಥಾನಗಳಲ್ಲಿ ಬೆಂಗಳೂರು ದಕ್ಷಿಣ ಮತ್ತು ಶಿವಮೊಗ್ಗ ಜಿಲ್ಲೆಗಳಿವೆ ಎಂದು ವರದಿಯಾಗಿದೆ. ವಿಜಯಪುರ, ಕೊಡಗು ಮತ್ತು ಗದಗ ಜಿಲ್ಲೆಗಳಲ್ಲಿ ನೀರಿನ ಅಭಾವದ ಆತಂಕ ಕಡಿಮೆ ಇದೆ. ವಿಜಯಪುರದಲ್ಲಿ 27 ಗ್ರಾಮ ಪಂಚಾಯಿತಿಗಳನ್ನು ಗುರುತಿಸಲಾಗಿದೆ. ಆದರೂ ಸದ್ಯಕ್ಕೆ ಯಾವುದೇ ಹಳ್ಳಿಗಳು ತೀವ್ರ ಆತಂಕದ ಪಟ್ಟಿಯಲ್ಲಿಲ್ಲ.

### ಕಲ್ಯಾಣ ಕರ್ನಾಟಕದಲ್ಲಿ ಹೆಚ್ಚುತ್ತಿರುವ ಭ್ರೂಣಹತ್ಯೆ ಪ್ರಕರಣ

## ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆಗೆ ಆರ್.ಅಶೋಕ್ ಆಗ್ರಹ



**ಬೆಂಗಳೂರು, ಜು.13:** ಕಲ್ಯಾಣ ಕರ್ನಾಟಕ ಭಾಗದ ಕಲಬುರಗಿ-ಯಾದಗಿರಿ ಜಿಲ್ಲೆಗಳಲ್ಲಿ 16 ಸಾವಿರಕ್ಕೂ ಅಧಿಕ ಹೆಣ್ಣು ಮಕ್ಕಳು ಹುಟ್ಟುವ ಮುನ್ನವೆ ಕಾಣೆಯಾಗುತ್ತಿರುವ ಪ್ರಕರಣದ ಕುರಿತು ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸುವಂತೆ ರಾಜ್ಯ ಸರ್ಕಾರವನ್ನು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆಗ್ರಹಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಯಾದಗಿರಿ ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳ ಅವಧಿಯಲ್ಲಿ 16 ಸಾವಿರದ 116 ಮಕ್ಕಳು ಹುಟ್ಟುವ ಮುನ್ನವೆ ಭ್ರೂಣಹತ್ಯೆ ಪ್ರಕರಣಗಳು ವರದಿಯಾಗುತ್ತಿವೆ. ಜನನ ನೋಂದಣಿಯಾಗುವ ಮುನ್ನವೆ ನವಜಾತ ಶಿಶುಗಳು ಮಾಯವಾಗುತ್ತಿದ್ದು, ಲಿಂಗ ಪತ್ತೆ ಹಿಂದೆ ಯಾರ ಕೈವಾಡವಿದೆ ಎನ್ನುವುದನ್ನು ಮುಖ್ಯಮಂತ್ರಿ, ರಾಜ್ಯದ ಜನತೆಗೆ ಸ್ಪಷ್ಟಪಡಿಸಬೇಕು ಎಂದು ಹೇಳಿದ್ದಾರೆ.

ರಾಜ್ಯ ಸರ್ಕಾರ ಮಹಿಳಾ ಸಬಲೀಕರಣದ ಕಡೆಗೆ ಒತ್ತು ನೀಡಲಾಗುತ್ತಿದೆ ಎಂದು ಹೇಳುತ್ತಿದೆ. ಆದರೆ, ಮತ್ತೊಂದೆಡೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೆಣ್ಣು ಭ್ರೂಣ ಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿರುವುದು ದುರ್ದೈವದ ಸಂಗತಿ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಕೂಡಲೇ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

## ಸೋನಮ್ ವಾಂಗ್ಚುಕ್ ಪ್ರತಿಭಟನೆಗೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಬೆಂಬಲ



**ಬೆಂಗಳೂರು, ಜು.13:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆಗೆ ಸಂಬಂಧಿಸಿದಂತೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ ಪರಿಸರವಾದಿ ಸೋನಮ್ ವಾಂಗ್ಚುಕ್ ದೆಹಲಿಯಲ್ಲಿ ನಡೆಸುತ್ತಿರುವ ಉಪವಾಸ ಸತ್ಯಾಗ್ರಹಕ್ಕೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಬೆಂಬಲ ವ್ಯಕ್ತಪಡಿಸಿದ್ದಾರೆ. ಅಧಿಕಾರದ ಅಹಂಕಾರಕ್ಕಿಂತ ಪ್ರಜಾಪ್ರಭುತ್ವದ ಧ್ವನಿಗೆ ಬೆಲೆ ನೀಡುವುದು ಸರ್ಕಾರದ ಕರ್ತವ್ಯವಾಗಬೇಕು. ಸೋನಮ್ ವಾಂಗ್ಚುಕ್ ಅವರ ಅಹಿಂಸಾತ್ಮಕ, ಪ್ರಜಾಸತ್ತಾತ್ಮಕ ಸತ್ಯಾಗ್ರಹದ ಹೋರಾಟಕ್ಕೆ ಸಂಪೂರ್ಣ ಬೆಂಬಲವಿದೆ ಎಂದು ತಿಳಿಸಿದ್ದಾರೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆಗೆ ಸಂಬಂಧಿಸಿದಂತೆ ದೇಶಾದ್ಯಂತ ಹೋರಾಟ ನಡೆಸುತ್ತಿದ್ದರೂ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ತೋರಿಸುತ್ತಿರುವ ಮೌನ ಮತ್ತು ನಿರ್ಲಕ್ಷ್ಯ ಅತ್ಯಂತ ಖಂಡನೀಯ ಎಂದು ಹೇಳಿದ್ದಾರೆ. ದೇಶದ ಯುವ ಜನರು ನ್ಯಾಯ ಕೇಳುತ್ತಿದ್ದಾರೆ. ಅವರ ಧ್ವನಿಗೆ ಸ್ಪಂದಿಸಿ ಪರೀಕ್ಷಾ ವ್ಯವಸ್ಥೆ ಮೇಲಿನ ವಿಶ್ವಾಸವನ್ನು ಮರುಸ್ಥಾಪಿಸಿ ಎಂದು ಒತ್ತಾಯಿಸಿದ್ದಾರೆ. ಅಧಿಕಾರದಲ್ಲಿರುವವರು ಆತ್ಮಾವಲೋಕನ ಮಾಡಿಕೊಳ್ಳಬೇಕಾದ ಸಮಯ ಇದು. ಪ್ರಜಾಪ್ರಭುತ್ವದಲ್ಲಿ ಜನರ ಧ್ವನಿಯನ್ನು ಆಲಿಸುವುದು, ಭಿನ್ನಮತಕ್ಕೆ ಸ್ಪಂದಿಸುವುದು ಸರ್ಕಾರದ ನೈತಿಕ ಹೊಣೆಗಾರಿಕೆ ಎಂದು ಹೇಳಿದ್ದಾರೆ.

## ಚಿಲ್ಲರೆ ಕಾರಣಕ್ಕಾಗಿ ಜನರಿಗೆ ಪ್ರಯಾಣದ ಅವಕಾಶ ನಿರಾಕರಿಸುವಂತಿಲ್ಲ

**ಬೆಂಗಳೂರು, ಜು.13:** ಚಿಲ್ಲರೆಯ ಕೊರತೆ ಕಾರಣಕ್ಕಾಗಿ ಪ್ರಯಾಣಿಕರಿಗೆ ಪ್ರಯಾಣದ ಅವಕಾಶವನ್ನು ನಿರಾಕರಿಸುವಂತಿಲ್ಲ ಎಂದು ಬಿಎಂಟಿಸಿ ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ. ಸಾರಿಗೆ ಸಚಿವ ಭೈರತಿ ಸುರೇಶ್ ಅವರು, ಮಾಸ್ಕ್ ಧರಿಸಿ ನಗರದ ಹತ್ತಕ್ಕೂ ಹೆಚ್ಚು ಮಾರ್ಗಗಳ ಬಿಎಂಟಿಸಿ ಬಸ್‌ನಲ್ಲಿ ಸಾಮಾನ್ಯ ಪ್ರಯಾಣಿಕನಂತೆ ಪ್ರಯಾಣಿಸಿ, ರಿಯಾಲಿಟಿ ಚೆಕ್ ನಡೆಸಿದ್ದರು.

■ **ಸಾರಿಗೆ ಸಚಿವರ ರಿಯಾಲಿಟಿ ಚೆಕ್ ನಂತರ ಬಿಎಂಟಿಸಿ ಕಟ್ಟುನಿಟ್ಟಿನ ಆದೇಶ**

ಆ ವೇಳೆ ಕೆಲ ನಿರ್ವಾಹಕರು ಚಿಲ್ಲರೆ ಇಲ್ಲ ಎಂಬ ಕಾರಣಕ್ಕಾಗಿ ಮಾರು ವೇಷದಲ್ಲಿದ್ದ ಸಚಿವರನ್ನು ಕೆಳಗಿಳಿಯುವಂತೆ ದಬಾಯಿಸಿದ್ದರು. ಈ ಹಿನ್ನೆಲೆಯಲ್ಲಿ ನಿರ್ದಿಷ್ಟವಾದ ಸುತ್ತೋಲೆಯನ್ನು ರವಾನಿಸಲಾಗಿದೆ. ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ಪ್ರಯಾಣಿಕರ ಸೇವೆ, ಸುರಕ್ಷತೆ ಹಾಗೂ ಸಂಚಾರ ಅನುಭವವನ್ನು ಉತ್ತಮಗೊಳಿಸುವ ಉದ್ದೇಶದಿಂದ ತನ್ನ ಸಿಬ್ಬಂದಿಗೆ ಹೊಸ ನಿರ್ದೇಶನಗಳನ್ನು ಜಾರಿ ಮಾಡಿದೆ. ಪರಿಶೀಲನೆಯ ವೇಳೆ ಕರ್ತವ್ಯ ಲೋಪ ಎಸಗಿದ ಆರೋಪದ ಮೇಲೆ ಒಬ್ಬ ಚಾಲಕ ಮತ್ತು ಒಬ್ಬ ನಿರ್ವಾಹಕರ ವಿರುದ್ಧ ಅಮಾನತು ಕ್ರಮಕ್ಕೆ ಸಚಿವರು ಶಿಫಾರಸು ಮಾಡಿದ್ದಾರೆ.ಹೊಸ ಮಾರ್ಗಸೂಚಿಗಳ ಪ್ರಕಾರ, ಬಿಎಂಟಿಸಿ ಚಾಲಕರು ಬಸ್‌ಗಳನ್ನು ನಿಗದಿತ ಬಸ್ ನಿಲ್ದಾಣಗಳಲ್ಲಿ ಮಾತ್ರ ನಿಲ್ಲಿಸಬೇಕು. ಚಾಲಕರು ಮತ್ತು ನಿರ್ವಾಹಕರು ಪ್ರಯಾಣಿಕರ ಜೊತೆಗೆ ಸೌಜನ್ಯದಿಂದ ಮತ್ತು ಗೌರವದಿಂದ ವರ್ತಿಸಬೇಕು ಎಂದು ಸೂಚಿಸಲಾಗಿದೆ.

ನಿರ್ವಾಹಕರು ಎಲೆಕ್ಟ್ರಾನಿಕ್ ಟಿಕೆಟ್ ಯಂತ್ರಗಳಲ್ಲಿ (ಇಟಿಎಂ) ಲಭ್ಯವಿರುವ ಡೈನಾಮಿಕ್ ಕ್ಯೂಆರ್ ಕೋಡ್ ಆಧರಿತ ಯುಪಿಐ ಪಾವತಿ ಸೌಲಭ್ಯವನ್ನು ಬಳಸಲು ಪ್ರಯಾಣಿಕರನ್ನು ಉತ್ತೇಜಿಸಬೇಕು. ಚಿಲ್ಲರೆ ಹಣದ ಕೊರತೆಯಿಂದ ಯಾವುದೇ ಪ್ರಯಾಣಿಕರಿಗೆ ಪ್ರಯಾಣ ನಿರಾಕರಿಸಬಾರದು ಅಥವಾ ಬಸ್‌ನಿಂದ ಇಳಿಯುವಂತೆ ಒತ್ತಾಯಿಸಬಾರದು ಎಂದು ಬಿಎಂಟಿಸಿ ಸ್ಪಷ್ಟಪಡಿಸಿದೆ. ಇದಲ್ಲದೆ, ಇಟಿಎಂ ವ್ಯವಸ್ಥೆಯಲ್ಲಿ ನಿಗದಿತ ನಿಲ್ದಾಣಗಳಾಗಿ ದಾಖಲಾಗದ ಬಸ್ ಶೆಲ್ಟರ್‌ಗಳನ್ನು ಗುರುತಿಸಿ ಅವುಗಳನ್ನು ವ್ಯವಸ್ಥೆಯಲ್ಲಿ ಸೇರಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಸಾರ್ವಜನಿಕರಿಂದ ಪದೇಪದೇ ದೂರುಗಳು ಬರುವ ಚಾಲಕರು ಮತ್ತು ನಿರ್ವಾಹಕರಿಗೆ ವಡ್ಡರಹಳ್ಳಿ ತರಬೇತಿ ಕೇಂದ್ರದಲ್ಲಿ ಸಾಫ್ಟ್ ಸ್ಕಿಲ್ಸ್ ತರಬೇತಿ ನೀಡುವಂತೆ ಸೂಚಿಸಲಾಗಿದೆ.

## ಡ್ರಿಂಕ್ ಆಂಡ್ ಡ್ರೈವ್ ವಿರುದ್ಧ ಕಾರ್ಯಾಚರಣೆ: 1211 ಪ್ರಕರಣ ದಾಖಲು

**ಬೆಂಗಳೂರು, ಜು.13:** ಮದ್ಯ ಸೇವಿಸಿ ವಾಹನ ಚಲಾಯಿಸುವ ವಾಹನ ಚಾಲಕರು ಹಾಗೂ ಸವಾರರ ವಿರುದ್ಧ ನಗರ ಸಂಚಾರಿ ಪೊಲೀಸರು ವಿಶೇಷ ಹಾಗೂ ಬಿರುಸಿನ ಕಾರ್ಯಾಚರಣೆ ನಡೆಸಿ 1211 ಪ್ರಕರಣಗಳನ್ನು ದಾಖಲಿಸಿಕೊಂಡಿದ್ದಾರೆ. ಜು.6 ರಿಂದ ನಿನ್ನೆಯವರೆಗೆ ನಗರದ 53 ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಗಳಲ್ಲಿ ನಡೆಸಿದ ವಿಶೇಷ ಕಾರ್ಯಾಚರಣೆಯಲ್ಲಿ ವಿವಿಧ ಮಾದರಿಯ 82,909 ವಾಹನಗಳನ್ನು ಪೊಲೀಸರು ತಪಾಸಣೆ ನಡೆಸಿದಾಗ ಮದ್ಯ ಸೇವಿಸಿ ವಾಹನ ಚಾಲನೆ ಮಾಡುತ್ತಿರುವುದು ಕಂಡು ಬಂದ ಹಿನ್ನಲೆಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ. ಅದೇ ರೀತಿ ಅತೀ ವೇಗದಿಂದ ವಾಹನ ಚಲಾಯಿಸುವವರ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸಿರುವ ಪೊಲೀಸರು 222 ಪ್ರಕರಣಗಳನ್ನು ದಾಖಲಿಸಿಕೊಂಡು 2.23ಲಕ್ಷ ರೂ. ದಂಡ ಸಂಗ್ರಹಿಸಿದ್ದಾರೆ. ರಸ್ತೆ ಸುರಕ್ಷತೆಗಾಗಿ ಈ ಕಾರ್ಯಾಚರಣೆಗಳನ್ನು ಮುಂದಿನ ದಿನಗಳಲ್ಲಿಯೂ ಹಮ್ಮಿಕೊಳ್ಳಲಾಗುವುದೆಂದು ಪೊಲೀಸರು ತಿಳಿಸಿದ್ದಾರೆ.

# ರಾಜ್ಯದ ಮುಜರಾಯಿ ದೇವಾಲಯಗಳ ದೇಣಿಗೆ ಹಣ, ಚಿನ್ನಾಭರಣ ಸುರಕ್ಷತೆಗೆ ಎಸ್‌ಒಪಿ ಜಾರಿ

**ಬೆಂಗಳೂರು, ಜು.13:** ಅಯೋಧ್ಯೆಯ ಶ್ರೀರಾಮ ದೇವಸ್ಥಾನದಲ್ಲಿ ಹುಂಡಿಯಲ್ಲಿನ ಚಿನ್ನಾಭರಣ, ನಗದು ಕಳ್ಳತನ ಪ್ರಕರಣಗಳಂತೆ, ರಾಜ್ಯದ ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯ ದೇವಾಲಯಗಳಲ್ಲಿ ಹುಂಡಿ ಎಣಿಕೆ, ಲೆಕ್ಕಪತ್ರ ನಿರ್ವಹಣೆಯಲ್ಲಿ ಕಳ್ಳತನ ಹಾಗೂ ದುರುಪಯೋಗವಾಗಿದೆ ಎಂದು ತಿಳಿಸಲಾಗಿದ್ದು, ದೇವರ ಹಣ ಹಾಗೂ ಚಿನ್ನಾಭರಣದ ಸುರಕ್ಷತೆಗೆ ಕಠಿಣ ನಿಯಮಗಳನ್ನು ರೂಪಿಸಲಾಗಿದೆ.

ಕಂದಾಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯ ಅವರು ಈ ಸಂಬಂಧ ಸುತ್ತೋಲೆ ಹೊರಡಿಸಿದ್ದು, ದೇವಾಲಯದ ಹುಂಡಿ, ದೇಣಿಗೆ ಪೆಟ್ಟಿಗೆಗಳು, ನಗದು ಚಿನ್ನಾಭರಣ ಹಾಗೂ ಇತರ ವಸ್ತುಗಳ ಭದ್ರತೆ, ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸಿಕೊಳ್ಳಲು ಪ್ರಮಾಣಿತ ಕಾರ್ಯ ವಿಧಾನ ಮಾರ್ಗಸೂಚಿ (ಎಸ್‌ಒಪಿ)ಯನ್ನು ಜಾರಿಗೊಳಿಸಿದ್ದಾರೆ.

**ಮಾರ್ಗಸೂಚಿ ಜಾರಿಗೊಳಿಸಿದ ಕಂದಾಯ ಇಲಾಖೆ ಅಪರ ಮುಖ್ಯಕಾರ್ಯದರ್ಶಿ ರಾಜೇಂದ್ರಕುಮಾರ್ ಕಟಾರಿಯಾ**



**ಏನೇನು ಕ್ರಮ?:** ದೇವಸ್ಥಾನಗಳಲ್ಲಿ ಹುಂಡಿಗಳನ್ನು ಎಲ್ಲರಿಗೂ ಕಾಣುವ ಜಾಗದಲ್ಲಿ ಇರಿಸಬೇಕು. ನಾಲ್ಕು ದಿಕ್ಕುಗಳಲ್ಲಿ ಸಿಸಿಟಿವಿ ವೆಬ್ ಕ್ಯಾಮೆರಾಗಳನ್ನು ಅಳವಡಿಸಿ, ಅವುಗಳ ನೇರ ನಿಗಾವಣೆಗಾಗಿ ಜಿಲ್ಲಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು, ತಹಸೀಲ್ದಾರ್ ಕಚೇರಿ, ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳು ಮತ್ತು ಸ್ಥಳೀಯ ಪೊಲೀಸ್ ಠಾಣೆಗಳಿಗೆ ನೇರ ಸಂಪರ್ಕ ಕಲ್ಪಿಸಬೇಕು. ಜೊತೆಗೆ ಧಾರ್ಮಿಕ ದತ್ತಿಯ ಕೇಂದ್ರ ಕಚೇರಿಯ ಸರ್ವರ್‌ಗೂ ಸಂಪರ್ಕಗೊಂಡಿರಬೇಕು ಎಂದು ಸೂಚಿಸಲಾಗಿದೆ.

ಸಿಸಿಟಿವಿ, ಡಿವಿಆರ್‌ಗಳನ್ನು ಕಳ್ಳತನ ಮಾಡುವುದು, ನಿಷ್ಕ್ರಿಯುಗೊಳಿಸುವುದು ಅಥವಾ ಧ್ವಂಸ ಮಾಡುವ ಪ್ರಕರಣಗಳು ಕಂಡು ಬರುತ್ತಿವೆ. ಇನ್ನೂ ಕೆಲವು ಕಡೆ ಕರ್ಪೂರ ಹಚ್ಚಿ ಅದರಿಂದ ಬರುವ ಕಾರ್ಬನ್ ಅನ್ನು ಸಿಸಿಟಿವಿಗಳಿಗೆ ಹಿಡಿದು, ಕಪ್ಪು ಹೊಗೆಯಿಂದ ಕ್ಯಾಮೆರಾದ ಲೆನ್ಸ್ ಗ್ಲಾಸ್ ಮಬ್ಬಾಗುವಂತೆ ಮಾಡಲಾಗುತ್ತದೆ. ಇದಕ್ಕಾಗಿ ವೆಬ್ ಕ್ಯಾಮೆರಾಗಳನ್ನೇ ಅಳವಡಿಸಬೇಕೆಂದು ತಿಳಿಸಲಾಗಿದೆ.

ಜೇಬು ಕಳ್ಳತನ ಹಾಗೂ ಇತರ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ಯೂಆರ್ ಕೋಡ್ ಅನ್ನು ಹೆಚ್ಚಾಗಿ ಬಳಸಬೇಕು. ಭಕ್ತರು ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಯುಪಿಐ ಮೂಲಕ ಅಥವಾ ನೆಟ್ ಬ್ಯಾಂಕ್‌ನಿಂದ ದೇಣಿಗೆ ಪಾವತಿಸಲು ಪ್ರೋತ್ಸಾಹಿಸಬೇಕು. ಕ್ಯೂಆರ್ ಕೋಡ್ ಹಾಳಾಗದಂತೆ ಮತ್ತು ಅದರ ಮೇಲೆ ಬೇರೆ ಕ್ಯೂಆರ್ ಕೋಡ್ ಅಂಟಿಸದಂತೆಯೂ ಎಚ್ಚರಿಕೆ ವಹಿಸಬೇಕು. ಹುಂಡಿಗಳ ಬಳಿಯೇ ಕ್ಯೂಆರ್ ಕೋಡ್ ಇರಬೇಕು ಎಂದು ಸೂಚಿಸಲಾಗಿದೆ.

**ಹುಂಡಿ ಹಣ ಎಣಿಕೆ ವೀಡಿಯೋ**

**ಹುಂಡಿ ಹಣ ಎಣಿಕೆಗೆ ಒಂದು ವಾರದ ಮೊದಲೇ ದಿನಾಂಕ ನಿಗದಿ ಮಾಡಿ ಪ್ರಕಟಿಸಬೇಕು. ಹೆಚ್ಚು ಹಣ ಸಂಗ್ರಹವಾಗುವ ದೇವಸ್ಥಾನಗಳಲ್ಲಿ ಪ್ರತಿ ವಾರ, ಸಾಧಾರಣ ಸಂಗ್ರಹಣೆಯ ದೇವಸ್ಥಾನಗಳಲ್ಲಿ ಎರಡು ವಾರಕ್ಕೊಮ್ಮೆ ತಹಸೀಲ್ದಾರ್ ಮೇಲ್ವಿಚಾರಣೆಯಲ್ಲಿ ಹುಂಡಿ ಎಣಿಕೆಯಾಗಬೇಕು. ಅದರ ಹಣ ಉಪ ಖಜಾನೆಗೆ ಜಮಾವಣೆಯಾಗುವವರೆಗೂ ಕಟ್ಟುನಿಟ್ಟಿನ ನಿಗಾವಣೆ ಇರಬೇಕು. ಪ್ರತಿಯೊಂದು ಪ್ರಕ್ರಿಯೆಯೂ ವಿಡಿಯೋ ಚಿತ್ರೀಕರಣವಾಗಬೇಕು ಎಂದು ತಿಳಿಸಲಾಗಿದೆ. ಹುಂಡಿ ಎಣಿಕೆಗೆ ಖಾಸಗಿ ವ್ಯಕ್ತಿಗಳ ಬದಲಾಗಿ ಬ್ಯಾಂಕ್ ಸಿಬ್ಬಂದಿ, ಸರ್ಕಾರಿ ನೌಕರರು, ಗೃಹ ರಕ್ಷಕ ಸಿಬ್ಬಂದಿಗಳನ್ನು ಮಾತ್ರ ಬಳಸಬೇಕು. ಎಣಿಕೆಗೆ ತೆರಳುವ ಮುನ್ನ ಅವರ ಬಳಿ ಇರುವ ನಗದನ್ನು ಘೋಷಿಸಿಕೊಳ್ಳಬೇಕು. ಹೊರ ಹೋಗುವಾಗ ತೀವ್ರ ತಪಾಸಣೆಯಾಗಬೇಕು. ಮುಖ ಗುರುತಿಸುವಿಕೆಯ ಹಾಜರಾತಿ ಕಡ್ಡಾಯ ಎಂದು ತಿಳಿಸಲಾಗಿದೆ. ಸ್ಥಳೀಯ ಪೊಲೀಸ್ ಇನ್ಸ್ ಪೆಕ್ಟರ್ ಅಥವಾ ಠಾಣಾಧಿಕಾರಿ ನಿಯಮಿತವಾಗಿ ದೇವಾಲಯಗಳಿಗೆ ಭೇಟಿ ನೀಡಿ ಲೈವ್ ಸಿಸಿಟಿವಿ ಮತ್ತು ಭದ್ರತಾ ವ್ಯವಸ್ಥೆಗಳನ್ನು ಪರಿಶೀಲಿಸಬೇಕು. ಎ ಮತ್ತು ಬಿ ವರ್ಗದ ದೇವಸ್ಥಾನಗಳಿಗೆ ಜಿಲ್ಲಾಧಿಕಾರಿ, ಎಸ್ಪಿ, ಸಿಇಒಗಳು ಮೂರು ತಿಂಗಳಿಗೊಮ್ಮೆ ಜಂಟಿಯಾಗಿ ಭೇಟಿ ನೀಡಬೇಕು. ಇತರ ವರ್ಗದ ದೇವಸ್ಥಾನಗಳಿಗೆ ಕಂದಾಯ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು, ಧಾರ್ಮಿಕ ದತ್ತಿ ಇಲಾಖಾಧಿಕಾರಿಗಳು 15 ದಿನಕ್ಕೊಮ್ಮೆ ಭೇಟಿ ನೀಡಬೇಕು. ಸ್ಥಳೀಯ ಲೋಪ ದೋಷಗಳನ್ನು ಮತ್ತು ಅಭಿವೃದ್ಧಿ ಯೋಜನೆ ಬಗ್ಗೆ ಮಾಸಿಕ ವರದಿಯನ್ನು ಹಿರಿಯ ಅಧಿಕಾರಿಗಳಿಗೆ ನೀಡಬೇಕು ಹಾಗೂ ಲೆಕ್ಕ ಪರಿಶೋಧನೆಯಲ್ಲಿ ನಿಖರತೆ ಇರಬೇಕು ಎಂದು ಸೂಚಿಸಲಾಗಿದೆ.**

# ಶರಣಬಸವ ವಿವಿ-ವಿಯೆಟ್ನಾಮ್ ಕೈಗಾರಿಕಾ ವಿವಿ ನಡುವೆ ಒಪ್ಪಂದ



ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯ ಮತ್ತು ವಿಯೇಟ್ನಾಮ್ ಇಂಡಸ್ಟ್ರಿಯಲ್ಲ ವಿಶ್ವವಿದ್ಯಾಲಯದೊಂದಿಗೆ ಐದು ವರ್ಷಗಳ ಸಂಶೋಧನಾ ಸಹಕಾರಕ್ಕೆ ಸಂಬಂಧಿಸಿದಂತೆ ಒಪ್ಪಂದ ಮಾಡಿಕೊಂಡವು. ವಿಯೇಟ್ನಾಮ್ ವಿವಿ ಪ್ರಾಧ್ಯಾಪಕ ಡಾ.ಬಯಿ ಥನ್ಹ್ ಹಂಗ್ ಹಾಗೂ ಡಾ.ಲಕ್ಷ್ಮಿ ಪಾಟೀಲ್ ಮಾಕಾ ಅವರು ಒಪ್ಪಂದಕ್ಕೆ ಸಹಿ ಮಾಡಿದರು.

**ಕಲಬುರಗಿ, ಜು. 13:** ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಅಂತರಾಷ್ಟ್ರೀಯ ಸಹಕಾರದ ಮೂಲಕ ಶೈಕ್ಷಣಿಕ ಅಭಿವೃದ್ಧಿಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಶರಣಬಸವ ವಿಶ್ವವಿದ್ಯಾಲಯವು ವಿಯೆಟ್ನಾಂನ ಹೋ ಚಿ ಮಿನ್ ಸಿಟಿಯ ಇಂಡಸ್ಟ್ರಿಯಲ್ ವಿಶ್ವವಿದ್ಯಾಲಯದೊಂದಿಗೆ ಸಂಶೋಧನೆ ಹಾಗೂ ಇತರೆ ಶೈಕ್ಷಣಿಕ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಐದು ವರ್ಷಗಳ ಅವಧಿಯ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದೆ. ಈ ಒಡಂಬಡಿಕೆಗೆ ವಿಯೆಟ್ನಾಂನ ಇಂಡಸ್ಟ್ರಿಯಲ್ ವಿಶ್ವವಿದ್ಯಾಲಯದ ಡೇಟಾ ಸೈನ್ಸ್ ವಿಭಾಗದ ಮುಖ್ಯಸ್ಥ ಹಾಗೂ ಪ್ರಾಧ್ಯಾಪಕರಾದ ಡಾ. ಬುಯಿ ಥನ್ಹ್ ಹಂಗ್ ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವ ಡಾ. ಲಕ್ಷ್ಮೀ ಪಾಟೀಲ ಮಾಕಾ ಸಹಿ ಹಾಕಿದರು.

ಈ ಸಂದರ್ಭದಲ್ಲಿ ಉಪಕುಲಪತಿ ಪ್ರೊ. ಅನಿಲ್‌ಕುಮಾರ ಬಿಡವೆ, ಸಂಶೋಧನಾ ನಿರ್ದೇಶಕ ಪ್ರೊ. ವಿ. ಡಿ. ಮೈತ್ರಿ, ಮೌಲ್ಯಮಾಪನ ಕುಲಸಚಿವ ಡಾ.ಎಸ್.ಎಚ್. ಹೊನ್ನಳ್ಳಿ, ಸಂಶೋಧನಾ ಡೀನ್‌ಡಾ. ಸುಜಾತಾ ಮಲ್ಲಾಪುರ ಹಾಗೂ ಡೀನ್‌ಡಾ. ಶಿವಕುಮಾರ ಜವಳಿಗಿ ಉಪಸ್ಥಿತರಿದ್ದರು.

ಬಳಿಕ ಡಾ. ಬುಯಿ ಥನ್ಹ್ ಹಂಗ್‌ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವ ಡಾ. ಲಕ್ಷ್ಮೀ ಪಾಟೀಲ್‌ಮಕಾ ಅವರು ಸಹಿ ಮಾಡಲಾದ ತಿಳುವಳಿಕೆ ಒಪ್ಪಂದ ಪತ್ರಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡರು.


ಐದು ವರ್ಷಗಳ ಅವಧಿಯ ಈ ಒಡಂಬಡಿಕೆಯು ಎರಡೂ ವಿಶ್ವವಿದ್ಯಾಲಯಗಳ ನಡುವಿನ ಶೈಕ್ಷಣಿಕ, ವೈಜ್ಞಾನಿಕ ಹಾಗೂ ಸಾಂಸ್ಕೃತಿಕ ಸಹಕಾರವನ್ನು ಉತ್ತೇಜಿಸುವ ಹಾಗೂ ಮತ್ತಷ್ಟು ಬಲಪಡಿಸುವ ಉದ್ದೇಶ ಹೊಂದಿದೆ.

ಪರಸ್ಪರ ಆಸಕ್ತಿಯ ಕ್ಷೇತ್ರಗಳಲ್ಲಿ ಜಂಟಿ ಸಂಶೋಧನಾ ಚಟುವಟಿಕೆಗಳು, ಸಂಯುಕ್ತ ಸಂಶೋಧನಾ ಯೋಜನೆಗಳನ್ನು ಕೈಗೊಳ್ಳುವುದು1 ಹಾಗೂ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಸಂಸ್ಥೆಗಳಿಂದ ಜಂಟಿಯಾಗಿ ಸಂಶೋಧನಾ ಅನುದಾನ ಪಡೆಯಲು ಅವಕಾಶಗಳನ್ನು ಅನ್ವೇಷಿಸುವುದು ಇದರ ಪ್ರಮುಖ ಅಂಶಗಳಾಗಿವೆ.

ಇದರ ಜೊತೆಗೆ ಸಂಶೋಧನಾ ಲೇಖನಗಳು, ಪುಸ್ತಕಗಳು ಹಾಗೂ ಸಮ್ಮೇಳನಗಳ ಸಂಶೋಧನಾ ಪ್ರಬಂಧಗಳನ್ನು ಜಂಟಿಯಾಗಿ ಪ್ರಕಟಿಸುವುದು, ಪದವಿ, ಸ್ನಾತಕೋತ್ತರ ಹಾಗೂ ಪಿಎಚ್.ಡಿ. ವಿದ್ಯಾರ್ಥಿಗಳಿಗೆ ಅಲ್ಪಾವಧಿ ಹಾಗೂ ದೀರ್ಘಾವಧಿಯ ವಿನಿಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು, ಇಂಟರ್ನ್‌ಶಿಪ್, ಪ್ರಾಜೆಕ್ಟ್ ಕಾರ್ಯಗಳು ಹಾಗೂ ಸಂಶೋಧನಾ ಭೇಟಿಗಳಿಗೆ ಉತ್ತೇಜನ ನೀಡುವುದು ಕೂಡ ಈ ಒಡಂಬಡಿಕೆಯ ಭಾಗವಾಗಿದೆ. ಬೋಧನೆ, ಸಂಶೋಧನೆ ಹಾಗೂ ಇತರೆ ಶೈಕ್ಷಣಿಕ ಚಟುವಟಿಕೆಗಳಿಗಾಗಿ ಅಧ್ಯಾಪಕರ ಪರಸ್ಪರ ವಿನಿಮಯಕ್ಕೂ ಇದರಲ್ಲಿ ಅವಕಾಶ ಕಲ್ಪಿಸಲಾಗಿದೆ.

ಇದಲ್ಲದೆ, ಜಂಟಿಯಾಗಿ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಸಮ್ಮೇಳನಗಳು, ವಿಚಾರ ಸಂಕಿರಣಗಳು, ಕಾರ್ಯಾಗಾರಗಳು, ಸಿಂಪೋಸಿಯಂಗಳು ಮತ್ತು ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವುದು, ಶೈಕ್ಷಣಿಕ ಕಾರ್ಯಕ್ರಮಗಳು ಹಾಗೂ ಸಾಮರ್ಥ್ಯ ವೃದ್ಧಿ ಉಪಕ್ರಮಗಳಲ್ಲಿ ಪರಸ್ಪರ ಸಹಕಾರ ವಹಿಸುವುದಕ್ಕೂ ಈ ತಿಳುವಳಿಕೆ ಒಪ್ಪಂದ ಅವಕಾಶ ಒದಗಿಸುತ್ತದೆ. ಸಂಯುಕ್ತ ಚಟುವಟಿಕೆಗಳಿಂದ ಉಂಟಾಗುವ ಬೌದ್ಧಿಕ ಆಸ್ತಿ ಹಕ್ಕುಗಳ ಕುರಿತು ಈ ಒಡಂಬಡಿಕೆಯಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಲಾಗಿದ್ದು, ಲಿಖಿತ ರೂಪದಲ್ಲಿ ಒಪ್ಪಂದವಾಗದ ಹೊರತು, ಅಂತಹ ಬೌದ್ಧಿಕ ಆಸ್ತಿಯು ಎರಡೂ ವಿಶ್ವವಿದ್ಯಾಲಯಗಳ ಜಂಟಿ ಮಾಲೀಕತ್ವದಲ್ಲಿರಲಿದೆ.

# ಕಂಠ ಮೌನವಾದರೂ ಗಾನ ಅಮರ ಎಸ್.ಜಾನಕಿ ಅವರ ಸಂಗೀತಯಾನ



ಭಾರತೀಯ ಚಿತ್ರಸಂಗೀತದ ಇತಿಹಾಸದಲ್ಲಿ ಅಳಿಸಲಾಗದ ಹೆಜ್ಜೆಗುರುತು ಮೂಡಿಸಿದ ಗಾನಕೋಗಿಲೆ ಎಸ್. ಜಾನಕಿ ಅವರ ಅಗಲಿಕೆ ಸಂಗೀತ ಲೋಕಕ್ಕೆ ತುಂಬಲಾರದ ನಷ್ಟ. ಅವರ ಕಂಠದಿಂದ ಮೂಡಿಬಂದ ಸಾವಿರಾರು ಗೀತೆಗಳು ಹಲವು ತಲೆಮಾರುಗಳ ಮನಸ್ಸನ್ನು ತಟ್ಟಿವೆ. ಭಾಷೆಯ ಗಡಿಗಳನ್ನು ಮೀರಿ, ಭಾವನೆಗಳಿಗೆ ಧ್ವನಿಯಾದ ಅವರ ಗಾಯನ ಭಾರತೀಯ ಸಂಗೀತ ಪರಂಪರೆಯ ಅಮೂಲ್ಯ ಸಂಪತ್ತಾಗಿ ಉಳಿಯಲಿದೆ.

1938ರ ಏಪ್ರಿಲ್ 23ರಂದು ಆಂಧ್ರ ಪ್ರದೇಶದ ಗುಂಟೂರು ಜಿಲ್ಲೆಯ ರೇಪಲ್ಲೆ ಗ್ರಾಮದಲ್ಲಿ ಜನಿಸಿದ ಜಾನಕಿ ಅವರು ಬಾಲ್ಯದಿಂದಲೇ ಸಂಗೀತದತ್ತ ಅಪಾರ ಒಲವು ಬೆಳೆಸಿಕೊಂಡರು. ಕೇವಲ ಮೂರು ವರ್ಷದ ವಯಸ್ಸಿನಲ್ಲೇ ಪೈಡಿಸ್ವಾಮಿ ಅವರ ಬಳಿ ಸಂಗೀತಾಭ್ಯಾಸ ಆರಂಭಿಸಿದ ಅವರು, ತಮ್ಮ ಪ್ರತಿಭೆ ಮತ್ತು ನಿರಂತರ ಪರಿಶ್ರಮದಿಂದ ಸಂಗೀತ ಕ್ಷೇತ್ರದಲ್ಲಿ ಅಸಾಧಾರಣ ಎತ್ತರಕ್ಕೆ ಏರಿದರು.

1956ರಲ್ಲಿ ಆಕಾಶವಾಣಿ ಆಯೋಜಿಸಿದ್ದ ಸಂಗೀತ ಸ್ಪರ್ಧೆಯಲ್ಲಿ ರಾಷ್ಟ್ರಪತಿ ಡಾ. ರಾಜೇಂದ್ರ ಪ್ರಸಾದ್ ಅವರಿಂದ ಪ್ರಶಸ್ತಿ ಸ್ವೀಕರಿಸಿದ್ದು ಅವರ ಪ್ರತಿಭೆಗೆ ದೊರೆತ ಮೊದಲ ರಾಷ್ಟ್ರೀಯ ಮನ್ನಣೆಗಳಲ್ಲಿ ಒಂದಾಗಿತ್ತು. ನಂತರ ಚೆನ್ನೈಗೆ ತೆರಳಿ ನಡೆದ ಆಡಿಷನ್‌ನಲ್ಲಿ ಲತಾ ಮಂಗೇಶ್ಕರ್ ಹಾಡಿದ ರಸಿಕ್ ಬಲಮಾ ಗೀತೆಯನ್ನು ಪ್ರಸ್ತುತಪಡಿಸಿ ಎವಿಎಂ ಸ್ಟುಡಿಯೋಸ್‌ನ ಗಮನ ಸೆಳೆದ ಅವರು, ಅಲ್ಲಿಂದಲೇ ತಮ್ಮ ವೃತ್ತಿಪರ ಗಾಯನ ಜೀವನಕ್ಕೆ ಭದ್ರ ಅಡಿಪಾಯ ಹಾಕಿದರು.

ಆರು ದಶಕಗಳಿಗೂ ಹೆಚ್ಚು ಕಾಲ ಕನ್ನಡ, ತಮಿಳು, ತೆಲುಗು, ಮಲಯಾಳಂ, ಹಿಂದಿ ಸೇರಿದಂತೆ ಅನೇಕ ಭಾರತೀಯ ಭಾಷೆಗಳಲ್ಲಿ ಸಾವಿರಾರು ಗೀತೆಗಳನ್ನು ಹಾಡಿದ ಎಸ್. ಜಾನಕಿ, ಪ್ರತಿಯೊಂದು ಹಾಡಿಗೂ ಹೊಸ ಭಾವ, ಹೊಸ ಜೀವ ತುಂಬಿದ ಅಪರೂಪದ ಗಾಯಕಿ. ಮೃದುಭಾವ, ದುಃಖ, ಪ್ರೇಮ, ಭಕ್ತಿ, ಹಾಸ್ಯ ಅಥವಾ ಜಾನಪದ?ಯಾವುದೇ ರೀತಿಯ ಹಾಡಾಗಲಿ, ಅದನ್ನು ಜೀವಂತಗೊಳಿಸುವ ಅದ್ಭುತ ಸಾಮರ್ಥ್ಯ ಅವರದ್ದಾಗಿತ್ತು. ಕನ್ನಡ ಚಿತ್ರರಂಗಕ್ಕೂ ಅವರು ನೀಡಿದ ಕೊಡುಗೆ ಅನನ್ಯವಾಗಿದ್ದು, ಅವರ ಅನೇಕ ಗೀತೆಗಳು ಇಂದಿಗೂ ಜನಮನದಲ್ಲಿ ಚಿರಸ್ಥಾಯಿಯಾಗಿವೆ.

ಅವರ ಸಾಧನೆಗೆ ನಾಲ್ಕು ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳು, ವಿವಿಧ ರಾಜ್ಯ ಸರ್ಕಾರಗಳಿಂದ ಸುಮಾರು 30 ರಾಜ್ಯ ಪ್ರಶಸ್ತಿಗಳು ಸೇರಿದಂತೆ ಅನೇಕ ಗೌರವಗಳು ಸಂದಿವೆ. ಮೈಸೂರು ವಿಶ್ವವಿದ್ಯಾಲಯವು ಗೌರವ ಡಾಕ್ಟರೇಟ್ ನೀಡಿ ಸನ್ಮಾನಿಸಿದ್ದರೆ, ಕರ್ನಾಟಕ ಸರ್ಕಾರವು ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿ ಅವರ ಸಾಧನೆಯನ್ನು ಗೌರವಿಸಿತ್ತು.

2013ರಲ್ಲಿ ಭಾರತ ಸರ್ಕಾರ ಘೋಷಿಸಿದ್ದ ಪದ್ಮಭೂಷಣ ಪ್ರಶಸ್ತಿಯನ್ನು ಅವರು ವಿನಯಪೂರ್ವಕವಾಗಿ ತಿರಸ್ಕರಿಸಿದ್ದರು. ಪದ್ಮ ಪ್ರಶಸ್ತಿಗಳಲ್ಲಿ ದಕ್ಷಿಣ ಭಾರತದ ಕಲಾವಿದರಿಗೆ ಸಮರ್ಪಕ ಮಾನ್ಯತೆ ದೊರೆಯುತ್ತಿಲ್ಲ ಎಂಬ ತಮ್ಮ ನಿಲುವನ್ನು ಅವರು ಸ್ಪಷ್ಟವಾಗಿ ವ್ಯಕ್ತಪಡಿಸಿದ್ದರು. ಅದು ಪ್ರಶಸ್ತಿಯ ನಿರಾಕರಣೆಯಷ್ಟೇ ಅಲ್ಲ, ಕಲಾವಿದರ ಸಮಾನ ಗೌರವಕ್ಕಾಗಿ ವ್ಯಕ್ತಪಡಿಸಿದ ಆತ್ಮಗೌರವದ ಧ್ವನಿಯೂ ಆಗಿತ್ತು.

ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದ ಎಸ್. ಜಾನಕಿ ಅವರು 2026ರ ಜುಲೈ 11ರಂದು ಮೈಸೂರಿನ ಅಪೋಲೋ ಆಸ್ಪತ್ರೆಯಲ್ಲಿ ನಿಧನರಾದರು. ಅವರ ದೇಹ ಭೌತಿಕವಾಗಿ ನಮ್ಮೊಂದಿಗಿಲ್ಲದಿದ್ದರೂ, ಅವರ ಗಾನ ಎಂದೆಂದಿಗೂ ಜೀವಂತವಾಗಿರುತ್ತದೆ. ಕಾಲ ಬದಲಾದರೂ, ತಲೆಮಾರುಗಳು ಬದಲಾದರೂ, ಎಸ್. ಜಾನಕಿ ಅವರ ಧ್ವನಿ ಭಾರತೀಯ ಸಂಗೀತದ ಚಿರಂತನ ಸ್ವರವಾಗಿ ಅನುರಣಿಸುತ್ತಲೇ ಇರುತ್ತದೆ. ಅವರ ಅಗಲಿಕೆ ಒಂದು ಯುಗದ ಅಂತ್ಯವಾದರೂ, ಅವರ ಗಾಯನದ ಪರಂಪರೆ ಎಂದಿಗೂ ಅಂತ್ಯಗೊಳ್ಳದು.

ಲೇಖನ: ಶುಭಲಕ್ಷ್ಮಿ ಹೊಸಮನಿ, ಯುವ ಪತ್ರಕರ್ತೆ, ವಿಜಯಪುರ

# ಉತ್ತರ ಕರ್ನಾಟದ ರೈತರ ಬಗ್ಗೆ ರಾಜ್ಯ ಸರ್ಕಾರ ನಿರ್ಲಕ್ಷ್ಯ: ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಆರೋಪ



**ಬೀದರ್, ಜು.13:** ಉತ್ತರ ಮತ್ತು ಕಲ್ಯಾಣ ಕರ್ನಾಟಕದ ಬರಪೀಡಿತ ರೈತರ ಬಗ್ಗೆ ರಾಜ್ಯ ಕಾಂಗ್ರೆಸ್ ಸರಕಾರ ತೀವ್ರ ನಿರ್ಲಕ್ಷ್ಯ ತೋರುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.

ವಿಮಾನ ನಿಲ್ದಾಣದಲ್ಲಿಂದು ಮಾಧ್ಯಮ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಬೀದರ್, ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೇವಲ ಶೇ.12ರಷ್ಟು ಮಳೆಯಾಗಿದ್ದು, ಪರಿಸ್ಥಿತಿ ತೀರಾ ಹದಗೆಟ್ಟಿದೆ.ಆದ್ದರಿಂದ ಕೃಷಿ ವಲಯಕ್ಕೆ ತಕ್ಷಣವೇ ಆರ್ಥಿಕ ನೆರವು ನೀಡಬೇಕೆಂದು ಆಗ್ರಹಿಸಿದರು."ಮಳೆ ಕೈಕೊಟ್ಟ ಕಾರಣ ಈ ಭಾಗದಲ್ಲಿ 30 ಲಕ್ಷ ರೂ.ಗೂ. ಹೆಚ್ಚು ಹೆಕ್ಟೇರ್ ಕೃಷಿ ಭೂಮಿಯಲ್ಲಿ ಬಿತ್ತನೆಯೇ ಆಗದೆ ರೈತರು ಪರದಾಡುತ್ತಿದ್ದಾರೆ. ತೊಗರಿ, ಸೂರ್ಯಕಾಂತಿ ಮತ್ತು ಹತ್ತಿಯಂತಹ ಪ್ರಮುಖ ಬೆಳೆಗಳನ್ನು ಬಿತ್ತನೆ ಮಾಡಲು ಸಾಧ್ಯವಾಗದೆ ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ" ಎಂದಿದ್ದಾರೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಇತ್ತೀಚಿನ ಬಸವ ಕಲ್ಯಾಣ ಭೇಟಿಯನ್ನು ಕೇವಲ "ಫೋಟೋ ಶೂಟ್" ಎಂದು ಟೀಕಿಸಿದ ವಿಜಯೇಂದ್ರ, ಸರ್ಕಾರದಿಂದ ತಳಮಟ್ಟದಲ್ಲಿ ಯಾವುದೇ ವಾಸ್ತವಿಕ ಪರಿಹಾರ ಸಿಕ್ಕಿಲ್ಲ ಎಂದು ದೂರಿದರು.ಪ್ರಸಕ್ತ ತೀವ್ರ ಸಂಕಷ್ಟದಲ್ಲಿರುವ ರೈತರ ಕೈಹಿಡಿಯಲು ರಾಜ್ಯ ಸರ್ಕಾರ ತಕ್ಷಣವೇ ಪ್ರತಿ ಎಕರೆಗೆ ಕನಿಷ್ಠ 50,000 ರೂ. ಪರಿಹಾರ ಬಿಡುಗಡೆ ಮಾಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದ್ದಾರೆ.

ಹಿಂದೆ ಬಿ.ಎಸ್.ಯಡಿಯೂರಪ್ಪರ ನೇತೃತ್ವದ ಬಿಜೆಪಿ ಸರಕಾರವು 100 ಕೋಟಿ ರೂ. ಹಾಗೂ 200 ಕೋಟಿ ರೂ.ಗಳನ್ನು ಹಂತ-ಹಂತವಾಗಿ ಬಿಡುಗಡೆ ಮಾಡಿ, ಸುಮಾರು 500 ಕೋಟಿ ರೂ. ವೆಚ್ಚದ ಯೋಜನೆಯನ್ನು ಆರಂಭಿಸಿತ್ತು. ಆದರೆ, ಕಳೆದ ಮೂರು ವರ್ಷಗಳಲ್ಲಿ ಕಾಂಗ್ರೆಸ್ ಸರಕಾರವು ಜನರ ಒತ್ತಾಯದ ನಡುವೆಯೂ ಈ ಯೋಜನೆಯ ಬಗ್ಗೆ ತಲೆಕೆಡಿಸಿಕೊಳ್ಳದೆ ನಿರ್ಲಕ್ಷಿಸಿದೆ ಎಂದು ಆರೋಪಿಸಿದ ವಿಜಯೇಂದ್ರ, ಸಿಎಂ ತಕ್ಷಣವೇ ಬಾಕಿ ಹಣವನ್ನು ಬಿಡುಗಡೆ ಮಾಡಿ, ಇದರ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.ಬೀದರ್ ಜಿಲ್ಲಾ ಬಿಜೆಪಿ ಘಟಕದಲ್ಲಿನ ಆಂತರಿಕ ಭಿನ್ನಾಭಿಪ್ರಾಯಗಳ ಕುರಿತ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ವಿಜಯೇಂದ್ರ, ಎಲ್ಲಾ ಸ್ಥಳೀಯ ಸಮಸ್ಯೆಗಳನ್ನು ಸೌಹಾರ್ದಯುತವಾಗಿ ಚರ್ಚಿಸಿ ಬಗೆಹರಿಸಲು ಕೋರ್ ಕಮಿಟಿ ಸಭೆಯನ್ನು ಕರೆಯಲಾಗಿದೆ ಎಂದಿದ್ದಾರೆ.

# ಕೃಷಿಗೆ ನೀರು ಬಿಡುವಂತೆ ಆಗ್ರಹಿಸಿ ರೈತ ಸಂಘದಿಂದ ಅನಿರ್ದಿಷ್ಟಾವಧಿ ಪ್ರತಿಭಟನೆ



**ಕೆಆರ್‌ಎಸ್‌ನಲ್ಲಿರುವ ಇಇ ಕಚೇರಿ ಎದುರು ಇಂದು ಆರಂಭ, ಶಾಸಕ ದರ್ಶನ್ ಪುಟ್ಟಣ್ಣಯ್ಯ ನೇತೃತ್ವ**


ಮಂಡ್ಯ, ಜು.13: ರಾಜ್ಯದಲ್ಲಿ ಮಳೆ ಕೊರತೆಯಿಂದ ಜಲಾಶಯಗಳಲ್ಲಿ ನೀರಿನ ಪ್ರಮಾಣದಲ್ಲಿ ಕುಸಿತ ಕಂಡು ಬಂದಿದೆ. ಈ ಕಾರಣದಿಂದ ಮುಂಗಾರು ಹಂಗಾಮಿನ ಕೃಷಿಗೆ ನೀರು ಹರಿಸುವುದು ಕಷ್ಟ ಎಂದು ರಾಜ್ಯದ ಹಲವಾರು ನೀರಾವರಿ ಸಲಹಾ ಸಮಿತಿಗಳು ತೀರ್ಮಾನಿಸಿವೆ. ಇದರ ನಡುವೆ ಮಂಡ್ಯ ಹಾಗೂ ಮೈಸೂರು ಜಿಲ್ಲೆ ವ್ಯಾಪ್ತಿಯ ಕೃಷಿ ಚಟುವಟಿಕೆಗಳಿಗೆ ನೀರು ಹರಿಸುವಂತೆ ಆಗ್ರಹಿಸಿ ರೈತ ಸಂಘವು ಜುಲೈ 14ರಿಂದ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸುತ್ತಿದೆ.

ಪಾಂಡವಪುರ ಶಾಸಕರಾಗಿರುವ ಸರ್ವೋದಯ ಪಕ್ಷದ ಕಾರ್ಯಾಧ್ಯಕ್ಷ ದರ್ಶನ್ ಪುಟ್ಟಣ್ಣಯ್ಯ ಅವರು ಪ್ರತಿಭಟನೆ ನೇತೃತ್ವ ವಹಿಸಲಿದ್ದಾರೆ. ಕೃಷ್ಣರಾಜಸಾಗರದಲ್ಲಿರುವ ಕಾರ್ಯಪಾಲಕ ಇಂಜಿನಿಯರ್ ಅವರ ಕಚೇರಿ ಎದುರು ಪ್ರತಿಭಟನೆ ಆರಂಭವಾಗಲಿದೆ.

ಒಣಗುತ್ತಿರುವ ಬೆಳೆಗಳಿಗೆ ತಕ್ಷಣ ಕಾವೇರಿ ಅಚ್ಚುಕಟ್ಟು ನಾಲೆಗಳಿಗೆ ನೀರು ಹರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ಮಂಡ್ಯ ಜಿಲ್ಲಾ ಘಟಕದ ವತಿಯಿಂದ ಕೆ.ಆರ್.ಎಸ್ ನಲ್ಲಿರುವ ಕಾರ್ಯಪಾಲಕ ಇಂಜಿನಿಯರ್ ಕಚೇರಿ ಜುಲೈ 14ರ ಮಂಗಳವಾರ ಬೆಳಿಗ್ಗೆ 11 ರಿಂದ ನೀರು ಬಿಡುವವರೆವಿಗೂ ಅಹೋರಾತ್ರಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದ್ದಾರೆ. ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅಧ್ಯಕ್ಷತೆಯಲ್ಲಿ ಕಳೆದ ವಾರವೇ ರೈತ ಪ್ರತಿನಿಧಿಗಳ ಸಭೆ ನಡೆದಿದ್ದು, ಸದ್ಯಕ್ಕೆ ಜಲಾಶಯದಲ್ಲಿ ಲಭ್ಯ ಇರುವ ನೀರಿನ ಸ್ಥಿತಿ ಗಮನಿಸಿದರೆ ಕೃಷಿಗೆ ನೀರು ಹರಿಸಲು ಆಗುವುದಿಲ್ಲ. ಪರಿಸ್ಥಿತಿ ನೋಡಿಕೊಂಡು ಮುಂದೆ ತೀರ್ಮಾನಿಸಲಾಗುವುದು ಎಂದು ತಿಳಿಸಲಾಗಿತ್ತು. ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದರಿಂದ ಮುಖ್ಯಮಂತ್ರಿ ಅವರೇ ಕೃಷ್ಣರಾಜಸಾಗರ ಜಲಾಶಯದಿಂದ ನೀರು ಹರಿಸುವ ಕುರಿತು ನೀರಾವರಿ ಸಲಹಾ ಸಮಿತಿ ತೀರ್ಮಾನ ಕೈಗೊಳ್ಳುವಂತೆ ಸೂಚಿಸಿದ್ದರು. ಇದರ ನಡುವೆಯೇ ನೀರು ಹರಿಸಲು ಆಗ್ರಹಿಸಿ ಮುಷ್ಕರ ಆರಂಭಿಸಲಾಗುತ್ತಿದೆ.

# ಗೃಹಸಚಿವರ ತವರಲ್ಲೇ ಅವಾಂತರ

# ಬಿಸಿಯೂಟದ ಅಕ್ಕಿ, ಬೇಳೆಯಲ್ಲಿ ಹುಳು ಗೋಚರ, ಮಕ್ಕಳಿಗೆ ಗ್ರಹಚಾರ



**ಕಲಬುರಗಿ, ಜು. 13:** ಬಡ ಮಕ್ಕಳ ಹಸಿವು ನೀಗಿಸಬೇಕಾದ ಮತ್ತು ಬಡ ಮಕ್ಕಳ ಪೌಷ್ಟಿಕ ಆಹಾರ ನಿಡುವ ಸರ್ಕಾರದ ಮಹತ್ವಾಕಾಂಕ್ಷಿ 'ಮಧ್ಯಾಹ್ನದ ಬಿಸಿಯೂಟ ಯೋಜನೆ' ಅಧಿಕಾರಿಗಳ ಬೇಜವಾಬ್ದಾರಿಯಿಂದ ಹಳ್ಳ ಹಿಡಿದಿದ್ದು, ಜಿಲ್ಲೆಯ ಶಾಲೆಗಳಿಗೆ ಪೂರೈಕೆಯಾಗುತ್ತಿರುವ ಅಕ್ಕಿ ಮತ್ತು ಬೇಳೆಯಲ್ಲಿ ಹುಳುಗಳ ರಾಶಿಯೇ ಪತ್ತೆಯಾಗಿದೆ. ಅದೂ ಗೃಹ ಸಚಿವರ ತವರು ಮತ್ತು ಅವರೇ ಉಸ್ತುವರಿ ಸಚಿವರಾಗಿರುವ ಜಿಲ್ಲೆಯಲ್ಲಿ ಇಂಥ ಒಂದು ದೊಡ್ಡ ಅಕ್ರಮ ನಡೆಯುತ್ತಿರುವುದು ಆಘಾತವನ್ನುಂಟು ಮಾಡಿದೆ.

ಜಿಲ್ಲೆಯ ಅಫಜಲಪುರ ತಾಲೂಕಿನ ಬಹುತೇಕ ಸರ್ಕಾರಿ ಶಾಲೆಗಳಿಗೆ ತೀರಾ ಕಳಪೆ ಗುಣಮಟ್ಟದ ಆಹಾರ ಧಾನ್ಯ ಪೂರೈಕೆಯಾಗುತ್ತಿದೆ. ಶಾಲೆಯ ದಾಸ್ತಾನು ಕೊಠಡಿಯಲ್ಲಿದ್ದ ತೊಗರಿಬೇಳೆ ಮತ್ತು ಮುಗ್ಲು ಹಿಡಿದಿದ್ದ ಅಕ್ಕಿಯಲ್ಲಿ ಹುಳುಗಳು ಜಿಗುಟು ಹಿಡಿದಿರುವುದು ಪತ್ತೆಯಾಗಿದೆ. ಇದೇ ಕಳಪೆ ಧಾನ್ಯಗಳನ್ನು ಬಳಸಿ ಪ್ರತಿದಿನ ಮಕ್ಕಳಿಗೆ ಬಿಸಿಯೂಟ ಸಿದ್ಧಪಡಿಸಲಾಗುತ್ತಿದೆ ಎಂಬ ಕಹಿಸತ್ಯ ಬೆಳಕಿಗೆ ಬಂದಿದೆ.

ಇಂಥ ಕಳಪೆ ಆಹಾರ ಧಾನ್ಯಗಳಿಂದ ಸಿದ್ಧಪಡಿಸಿದ್ದ ಸೇವಿಸಿ ಗೃಹ ಸಚಿವರ ತವರು ಕ್ಷೇತ್ರ ಚಿತ್ತಾಪುರ ತಾಲ್ಲೂಕಿನ ದಂಡೋತಿ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಐವತ್ತು ಮಕ್ಕಳು ಹೊಟ್ಟೆ ನೋವಿನಿಂದ ಆಸ್ಪತ್ರೆ ಸೇರಿದ ಘಟನೆ ಎರಡು ದಿನಗಳ ಹಿಂದಷ್ಟೇ ನಡೆದಿದ್ದು, ಈಗಾಗಲೇ ಈ ಸಂಬಂಧ ಮುಖ್ಯೋಪಾಧ್ಯಾಯ ಮತ್ತು ಅಡುಗೆಯವರು ಸೇರಿದಂತೆ ಮೂವರನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ. ಆದರೆ ಇಂಥ ಕಳಪೆ ಧಾನ್ಯ ಪೂರೈಕೆ ಮಾಡಿದವರ ವಿರುದ್ಧ ಮಾತ್ರ ಯಾವುದೇ ಕ್ರಮವಿಲ್ಲ. ಯಾಕೆಂದರೆ ಆತ ಕಾಂಗ್ರೆಸ್ ಮುಖಂಡ ಎಂದುಹೇಳಲಾಗುತ್ತಿದೆ.

ಕಳಪೆ ಆಹಾರ ಧಾನ್ಯಗಳ ಈ ದೃಶ್ಯಗಳನ್ನು ಕಂಡು ಶಿರವಾಳ ಗ್ರಾಮದ ರಮೇಶ್ ಸೇರಿದಂತೆ ಹಲವು ಪೋಷಕರು, ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ವಿರುದ್ಧ ತೀವ್ರ ಆಕ್ರೋಶ ಹೊರಹಾಕಿದ್ದಾರೆ. "ಹುಳು ತುಂಬಿದ ಅನ್ನ ತಿಂದು ನಮ್ಮ ಮಕ್ಕಳ ಆರೋಗ್ಯಕ್ಕೆ ಏನಾದರೂ ಹೆಚ್ಚುಕಮ್ಮಿಯಾದರೆ ಯಾರು ಹೊಣೆ?" ಎಂದು ಅವರು ಪ್ರಶ್ನಿಸಿದ್ದಾರೆ.

ಇನ್ನೊಂದೆಡೆ, ಶಾಲೆಯ ಅಡುಗೆ ಮೇಲ್ವಿಚಾರಕಿ ಮತ್ತು ಸಿಬ್ಬಂದಿ ತಮ್ಮ ಅಸಹಾಯಕತೆಯನ್ನು ತೋಡಿಕೊಂಡಿದ್ದಾರೆ. "ಶಾಲೆಗೆ ಸರಬರಾಜಾಗುತ್ತಿರುವ ಧಾನ್ಯಗಳೇ ಇಷ್ಟು ಕಳಪೆಯಾಗಿವೆ. ಬೇರೆ ದಾರಿಯಿಲ್ಲದೆ ನಾವು ಅದೇ ಹುಳು ಹಿಡಿದ ಧಾನ್ಯಗಳನ್ನು ಸಾಧ್ಯವಾದಷ್ಟು ಸ್ವಚ್ಛಗೊಳಿಸಿ ಮಕ್ಕಳಿಗೆ ಅಡುಗೆ ಮಾಡಿಕೊಡುತ್ತಿದ್ದೇವೆ" ಎಂದು ಅಳಲು ತೋಡಿಕೊಂಡಿದ್ದಾರೆ.

ತೇಪೆಗೆ ಶಿಕ್ಷಣ ಇಲಾಖೆ ಪ್ರಯತ್ನ: ಇಷ್ಟೆಲ್ಲಾ ನಡೆಯುತ್ತಿದ್ದರೂ ಅಕ್ಷರ ದಾಸೋಹ ಅಧಿಕಾರಿಗಳು ಮತ್ತು ಶಿಕ್ಷಣ ಇಲಾಖೆ ಕಣ್ಣು ಮುಚ್ಚಿ ಕುಳಿತಿರುವುದು ಸಾರ್ವಜನಿಕರ ಅನುಮಾನಕ್ಕೆ ಕಾರಣವಾಗಿದೆ. ಸದ್ಯಕ್ಕೆ ಕೆಳಹಂತದ ಅಡುಗೆ ಸಿಬ್ಬಂದಿ ಮೇಲೆ ಮಾತ್ರ ಕ್ರಮ ಕೈಗೊಂಡು ಇಡೀ ಪ್ರಕರಣಕ್ಕೆ ತೇಪೆ ಹಚ್ಚಲು ಇಲಾಖೆ ಮುಂದಾಗಿದೆ ಎಂಬ ಆರೋಪ ಕೇಳಿಬಂದಿದೆ.

ಕಳಪೆ ಧಾನ್ಯ ಪೂರೈಸಿದ ಗುತ್ತಿಗೆದಾರರು ಮತ್ತು ಇದಕ್ಕೆ ಕಾರಣರಾದ ಮುಖ್ಯ ಅಧಿಕಾರಿಗಳ ವಿರುದ್ಧ ಸೂಕ್ತ ತನಿಖೆ ನಡೆಸಿ ಕಠಿಣ ಕ್ರಮ ಜರುಗಿಸಬೇಕೆಂದು ಪೋಷಕರು ಮತ್ತು ಸಾರ್ವಜನಿಕರು ಕಡ್ಡಾಯವಾಗಿ ಒತ್ತಾಯಿಸಿದ್ದಾರೆ. ಆದರೆ ಸರಬರಾಜುದಾರರು ಕಾಂಗ್ರೆಸ್ ಮುಖಂಡರು ಮತ್ತು ಸಚಿವ ಶಾಸಕರುಗಳ ಪರಮಾಪ್ತರಾಗಿರುವುದರಿಂದ ಅವರ ವಿರುದ್ಧ ಯಾವುದೇ ಕ್ರಮ ಕೈಕೊಳ್ಳುವಲ್ಲಿ ಅಧಿಕಾರಿಗಳು ಅಸಹಾಯಕರಾಗಿದ್ದಾರೆ ಎನ್ನಲಾಗಿದೆ.

# ಆರಂಭಕ್ಕೂ ಮುನ್ನವೇ ದಸರಾ ಕಂಬಳಕ್ಕೆ ಕಾನೂನು ಸಂಕಷ್ಟ

**ಮೈಸೂರಿನಲ್ಲಿ ಕೆಸರು ಗದ್ದೆ ನಿರ್ಮಾಣಕ್ಕೆ ಮರ ಕಡಿದ ಆರೋಪ**

**ಅರಣ್ಯ ಇಲಾಖೆಯಿಂದ ಮೂವರ ವಿರುದ್ಧ ಎಫ್‌ಐಆರ್**



**ಮೈಸೂರು, ಜು.13:** ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಹಮ್ಮಿಕೊಳ್ಳಲಾಗಿರುವ ಬಹುನಿರೀಕ್ಷಿತ 'ದಸರಾ ಕಂಬಳ' ಕ್ರೀಡಾಕೂಟವು ಈಗ ಆರಂಭಕ್ಕೆ ಮುನ್ನವೇ ತೀವ್ರ ವಿವಾದ ಹಾಗೂ ಕಾನೂನು ಸಂಕಷ್ಟಕ್ಕೆ ಸಿಲುಕಿದೆ. ಕಂಬಳ ಕೂಟಕ್ಕಾಗಿ ಕೆಸರು ಗದ್ದೆ (ಟ್ರ್ಯಾಕ್) ನಿರ್ಮಿಸುವ ನೆಪದಲ್ಲಿ ಸಾತಗಳ್ಳಿ ಬಡಾವಣೆಯ ಮೈದಾನ ದಲ್ಲಿದ್ದ ಹತ್ತಾರು ಮರ ಗಳನ್ನು ನಿಯಮ ಬಾಹಿರವಾಗಿ ಕತ್ತರಿಸಿ ಪರಿಸರಕ್ಕೆ ಹಾನಿ ಮಾಡಲಾಗಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯು ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪನಿರ್ದೇಶಕರು ಸೇರಿ ಮೂವರ ವಿರುದ್ಧ ಎಫ್‌ಐಆರ್ ದಾಖಲಿಸಿದೆ.

ಅರಣ್ಯ ಇಲಾಖೆಯಿಂದ ಯಾವುದೇ ಪೂರ್ವಾನು ಮತಿ ಪಡೆಯದೆ ಮೈದಾನ ಸ್ವಚ್ಛಗೊಳಿ ಸುವ ನೆಪದಲ್ಲಿ ಯುವ ಜನ ಸಬಲೀಕರಣ ಇಲಾಖೆ ಮರಗಳನ್ನು ಧರಾಶಾಹಿಗೊಳಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸ್ಥಳದಲ್ಲಿದ್ದ 20 ಜಾಲಿ ಮರಗಳು ಹಾಗೂ 5 ಇತರೆ ಮರಗಳು ಸೇರಿದಂತೆ ಒಟ್ಟು 25 ಮರಗಳನ್ನು ನಾಶಪಡಿಸಿರುವ ಹಿನ್ನೆಲೆಯಲ್ಲಿ, ಕರ್ನಾಟಕ ಅರಣ್ಯ ಕಾಯ್ದೆ ಅಡಿ ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು, ತನಿಖೆ ಚುರುಕುಗೊಂಡಿದೆ.

ಮತ್ತೊಂದೆಡೆ, ಅಭಿವೃದ್ಧಿ ಹಾಗೂ ಸಾಂಪ್ರದಾಯಿಕ ಕ್ರೀಡೆಯ ಹೆಸರಿನಲ್ಲಿ ನಗರದ ಹಸಿರು ವಲಯವನ್ನು ಬಲಿಗೊಡುತ್ತಿರುವುದಕ್ಕೆ ಮೈಸೂರಿನ ಪರಿಸರ ಹೋರಾಟಗಾರರು ಹಾಗೂ ಸಾರ್ವಜನಿಕರು ತೀವ್ರ ಆಕ್ರೋಶ ಹೊರಹಾಕಿದ್ದಾರೆ. ಜಾನಪದ ಕ್ರೀಡೆಯನ್ನು ಉಳಿಸುವ ನೆಪದಲ್ಲಿ ಪ್ರಕೃತಿ ನಾಶ ಮಾಡುವುದು ಎಷ್ಟು ಸರಿ ಎಂದು ಪ್ರಶ್ನಿಸಿರುವ ಪರಿಸರವಾದಿಗಳು, ಮರಗಳನ್ನು ಕಡಿದು ಪರಿಸರಕ್ಕೆ ಧಕ್ಕೆ ತರುತ್ತಿರುವ ಹಾಲಿ ಜಾಗದಲ್ಲಿ ಕಂಬಳ ನಡೆಸಬಾರದು ಎಂದು ಪಟ್ಟು ಹಿಡಿದಿದ್ದಾರೆ. ಅಲ್ಲದೆ, ತಕ್ಷಣವೇ ಈ ಕ್ರೀಡಾಕೂಟವನ್ನು ಪರಿಸರಕ್ಕೆ ಯಾವುದೇ ತೊಂದರೆಯಾಗದ ಪರ್ಯಾಯ ಜಾಗಕ್ಕೆ ಸ್ಥಳಾಂತರಿಸಬೇಕು ಎಂದು ಸರ್ಕಾರ ಹಾಗೂ ಜಿಲ್ಲಾಡಳಿತವನ್ನು ಬಲವಾಗಿ ಒತ್ತಾಯಿಸಿದ್ದಾರೆ.

# ಸೌಹಾರ್ದ-ಬಾಂಧವ್ಯ-ಭ್ರಾತೃತ್ವಕ್ಕಾಗಿ ಕಾಲ್ನಡಿಗೆ....



ಬೀದರ ಜಿಲ್ಲೆಯ ಬಸವಣ್ಣನವರ ಕರ್ಮಭೂಮಿಯಿಂದ ಸೌಹಾರ್ದ ಬಾಂಧವ್ಯ ಭಾತೃತ್ವವನ್ನು ಎತ್ತಿ ಹಿಡಿಯಲು ರಾಸಾಯನ ಶಾಸ್ತ್ರ ಪ್ರಾಧ್ಯಾಪಕ ರೂಪೇಶ್ ಅವರು ರಾಜ್ಯದಾದ್ಯಂತ ಪಾದಯಾತ್ರೆಯನ್ನು ಇಲ್ಲಿಂದ ಆರಂಭಿಸಿದರು.

> ನಾವೆಲ್ಲ ಸಭ್ಯ ಸಮಾಜದ ನಾಗರಿಕರು. ಜಾತಿ, ಮತ, ಪಂಥದ ಹೆಸರಿನಲ್ಲಿ ಕಚ್ಚಾಡದೇ ದೇಶದ ಪ್ರಗತಿಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಿ ದೇಶವನ್ನು ವಿಶ್ವದಲ್ಲಿ ಎತ್ತರದಲ್ಲಿ ತಲೆ ಎತ್ತಿನಿಲ್ಲಬೇಕು.
> -ರೂಪೇಶ್, ಪುತ್ತೂರು

**ಬೀದರ್. ಜು. 13:** ಸೌಹಾರ್ದ-ಬಾಂಧವ್ಯ-ಭಾತೃತ್ವವನ್ನು ಎತ್ತಿ ಹಿಡಿದು, ಜನಸಾಮಾನ್ಯರಿಗೆ ಅದರ ಮಹತ್ವ ಸಾರಲು ಪುತ್ತೂರಿನ ನಿವೃತ್ತ ರಸಾಯನ ಶಾಸ್ತ್ರದ ಪ್ರಾಧ್ಯಾಪಕ ರೂಪೇಶ್ ಅವರು ರಾಜ್ಯದಾದ್ಯಂತ ಕಾಲ್ನಡಿಗೆ ಯಾತ್ರೆ ಕೈಗೊಂಡಿದ್ದಾರೆ. ಇದಕ್ಕಾಗಿ ಅವರು ಬಸವಣ್ಣನ ಕರ್ಮಭೂಮಿ ಬೀದರ್‌ನಿಂದ ಏಕಾಂಗಿ ಪಾದಯಾತ್ರೆ ಆರಂಭಿಸಿದ್ದಾರೆ.

ನಗರದ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಯಾತ್ರೆ ಶುರು ಮಾಡಿದ್ದು, ರಾಜ್ಯದ ವಿವಿಧ ಭಾಗಗಳ ಮೂಲಕ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಕೊನೆಗೊಳಿಸ ಲಿದ್ದಾರೆ.

ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು ಮೂಲಕ ಇವರ ಕಾಲ್ನಡಿಗೆ ಯಾತ್ರೆ ಮುಂದುವರಿ ಯಲಿದ್ದು, ನಿತ್ಯ 20ರಿಂದ 30 ಕಿ.ಮೀ ಮಾರ್ಗ ಕ್ರಮಿಸಲು ಯೋಜನೆ ರೂಪಿಸಿಕೊಂಡಿದ್ದಾರೆ. ಮಳೆಗಾಲ ಇರುವುದರಿಂದ ಛತ್ರಿ ವ್ಯವಸ್ಥೆ ಮಾಡಿಕೊಂಡಿದ್ದು, ಜೊತೆಯಲ್ಲಿ ಅಗತ್ಯ ಔಷಧಗಳನ್ನು ಇರಿಸಿಕೊಂಡಿ ದ್ದಾರೆ. ಹಗಲಿನಲ್ಲಿ ಕ್ರಮಿಸಿ, ರಾತ್ರಿಯಲ್ಲಿ ದಾರಿಯುದ್ದಕ್ಕೂ ಬರುವ ಗುಡಿ, ಗುಂಡಾರ, ಚೈತ್ಯಾಲಯ, ಮಠ ಮಂದಿರಗಳಲ್ಲಿ ವಾಸ್ತವ್ಯಕ್ಕೆ ವ್ಯವಸ್ಥೆ ಮಾಡಿಕೊಂಡಿದ್ದಾರೆ.

ಇನ್ನು, ಮಾರ್ಗದಲ್ಲಿ ಜನರೊಂದಿಗೆ ಸಮಾಲೋಚನೆ ನಡೆಸಿ, ಅವರಲ್ಲಿ ಸೌಹಾರ್ದದ ಮಹತ್ವ ಸಾರುವುದು ಯಾತ್ರೆಯ ಮುಖ್ಯ ಉದ್ದೇಶವಾಗಿದೆ. ಇದಕ್ಕಾಗಿ ಆಯಾ ಜಿಲ್ಲೆಗಳಲ್ಲಿ ಸ್ಥಳೀಯ ಸಂಘ ಸಂಸ್ಥೆಗಳನ್ನು ಸಂಪರ್ಕಿಸಿ, ಸಮಾಲೋಚನಾ ಸಭೆಗಳಿಗೂ ವ್ಯವಸ್ಥೆ ಮಾಡಿಕೊಂಡಿದ್ದಾರೆ.

ದೇಶದಾದ್ಯಂತ ಜಾತಿ, ಮತ, ಪಂಥ ಹಾಗೂ ಧರ್ಮದ ಹೆಸರಿನಲ್ಲಿ ಸಮಾಜ ವಿಘಟನೆ ಹೊಂದುತ್ತಿದೆ. ಜನರನ್ನು ವ್ಯವಸ್ಥಿತವಾಗಿ ಒಡೆಯಲಾಗುತ್ತಿದೆ. ಬುದ್ಧ, ಬಸವ, ಅಂಬೇಡ್ಕರ್ ಹಾಗೂ ಕುವೆಂಪು ಅವರ ದಯೆ, ಶಾಂತಿ, ಸೌಹಾರ್ದ ಹಾಗೂ ಭಾತೃತ್ವದ ಸಂದೇಶವನ್ನು ಜನರಿಗೆ ತಿಳಿಸಿ, ಅವರಲ್ಲಿ ಸಹೋದರ ಭಾವನೆ ಬಿತ್ತುವ ಉದ್ದೇಶದೊಂದಿಗೆ ಈ ಯಾತ್ರೆ ಕೈಗೊಂಡಿದ್ದೇನೆ ಎಂದು ಇದರ ಉದ್ದೇಶವನ್ನು ರೂಪೇಶ್ ವಿವರಿಸಿದರು.

ಸೌಹಾರ್ದ, ಭಾತೃತ್ವದ ಜೊತೆಗೆ ನಮ್ಮ ಭಾಷೆ, ನೆಲ, ಜಲದ ಕುರಿತಾಗಿಯೂ ಅರಿವು ಮೂಡಿಸುವುದು ಈ ಯಾತ್ರೆಯ ಮತ್ತೊಂದು ಉದ್ದೇಶ. 12ನೇ ಶತಮಾನದಲ್ಲಿ ಸಮಾನತೆಗಾಗಿ ಕ್ರಾಂತಿ ನಡೆದ ನೆಲ ಕಲ್ಯಾಣ. ಆದಕಾರಣ ಈ ನೆಲದಿಂದ ಯಾತ್ರೆ ಆರಂಭಿಸಿದ್ದೇನೆ. ಮೊದಲ ದಿನವೇ ಅನೇಕ ಜನ ಸ್ವಯಂಪ್ರೇರಣೆಯಿಂದ ಬಂದು ನನಗೆ ನೈತಿಕ ಬೆಂಬಲ ಕೊಟ್ಟಿದ್ದಾರೆ. ಅದು ಬಹಳ ಖುಷಿ ತಂದಿದೆ ಎಂದರು.

ಮೊದಲ ಬಾರಿಗೆ ಇಂಥದ್ದೊಂದು ಯಾತ್ರೆ ಕೈಗೊಂಡಿದ್ದೇನೆ. ಇದಕ್ಕಾಗಿ ನಾನು ಕಳೆದ ಕೆಲವು ತಿಂಗಳುಗಳಿಂದ ನಿತ್ಯ 15ರಿಂದ 20 ಕಿ.ಮೀ ನಡೆದಿದ್ದೇನೆ. ಯಾತ್ರೆ ವೇಳೆ ಆರೋಗ್ಯವನ್ನು ಹೇಗೆ ಕಾಪಾಡಿಕೊಳ್ಳಬೇಕೆಂಬ ಸಲಹೆ ವೈದ್ಯರಿಂದ ಪಡೆದು ಮುನ್ನಡೆದಿದ್ದೇನೆ. ನನ್ನ ಯಾತ್ರೆಯಿಂದ ಸ್ವಲ್ಪ ಜನರಲ್ಲಿ ಬದಲಾವಣೆಯಾದರೂ ನನ್ನ ಪ್ರಯತ್ನ ಸಾರ್ಥಕ ಎಂದು ಹೇಳಿದರು.

# ವಸತಿಶಾಲೆ ಮಕ್ಕಳ ಅಸ್ವಸ್ಥತೆಗೆ ಅನ್ನ ಬೇಯದಿರುವುದೇ ಕಾರಣ

**ಸಚಿವ ಪ್ರಿಯಾಂಕ್ ಖರ್ಗೆ ಹೇಳಿಕೆ ದುರದೃಷ್ಟಕರ: ಬಿಜೆಪಿ ವಕ್ತಾರೆ ಡಾ.ಸುಧಾ ಹಾಲಕಾಯಿ ಕಿಡಿ**



ಕಲಬುರಗಿ, ಜು.13: ಚಿತ್ತಾಪುರ ತಾಲೂಕಿನ ದಂಡೋತಿ ವಸತಿಶಾಲೆ 60 ಮಕ್ಕಳು ಅಸ್ವಸ್ಥರಾಗಲು ಅನ್ನ ಬೇಯದಿರುವುದು ಕಾರಣ ಎಂಬ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿಕೆ ದುರದೃಷ್ಟಕರ ಮತ್ತು ನಿರ್ಲಕ್ಷ್ಯ ಧೋರಣೆಗೆ ಸಾಕ್ಷಿಯಾಗಿದೆ ಎಂದು ಬಿಜೆಪಿ ರಾಜ್ಯ ವಕ್ತಾರೆ ಡಾ.ಸುಧಾ ಹಾಲಕಾಯಿ ಕಿಡಿಕಾರಿದ್ದಾರೆ.

ಅಕ್ಕಿ ಬೇಯಿತೆ ಅಥವಾ ಬೇಯಲಿಲ್ಲವೇ ಎಂಬುದು ಮುಖ್ಯವಲ್ಲ. ವಿದ್ಯಾರ್ಥಿಗಳು ಆಹಾರ ಸೇವಿಸಿ ಅಸ್ವಸ್ಥರಾಗಿದ್ದು ಏಕೆ ಎಂಬುದನ್ನು ಸರ್ಕಾರ ಪತ್ತೆಹಚ್ಚಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವುದು ಮುಖ್ಯ. ಪ್ರತಿ ವಿದ್ಯಾರ್ಥಿ ಜೀವವೂ ಅಮೂಲ್ಯ. ವಿದ್ಯಾರ್ಥಿಗಳ ಆರೋಗ್ಯ ಮತ್ತು ಸುರಕ್ಷತೆ ವಿಚಾರದಲ್ಲಿ ಯಾವುದೇ ರಾಜಿಯಾಗಬಾರದು. ಆದರೆ ಜಿಲ್ಲೆಯ ಹಾಸ್ಟೆಲ್‌ಗಳ ಸ್ಥಿತಿಗೆ ಸ್ವತ- ಗೃಹ ಸಚಿವ ಪ್ರಿಯಾಂಕ್ ಕ್ಷೇತ್ರದ ದಂಡೋತಿ ಗ್ರಾಮದ ಘಟನೆ ಕನ್ನಡಿ ಹಿಡಿದಂತಿದೆ ಎಂದು ತಿಳಿಸಿದ್ದಾರೆ.ಪ್ರಿಯಾಂಕ್ ಖರ್ಗೆ ನಿರಂತರವಾಗಿ ಆರ್‌ಎಸ್‌ಎಸ್, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಟೀಕೆ ಮಾಡುವುದರಲ್ಲಿ ಹೆಚ್ಚು ಆಸಕ್ತಿ ತೋರಿಸುತ್ತಿದ್ದಾರೆ ಎಂಬ ಭಾವನೆ ಜನರಲ್ಲಿ ಮೂಡಿದೆ. ಜಿಲ್ಲೆಯ ಜನರು ರಾಜಕೀಯ ವಾಗ್ವಾದ ಕೇಳಲು ಬಯಸುವುದಿಲ್ಲ, ಪ್ರಗತಿ ಬಯಸುತ್ತಾರೆ. ಪ್ರಗತಿಗಾಗಿ ಪ್ರಿಯಾಂಕ್ ಎಂಬ ಘೋಷಣೆ ಎಲ್ಲಿ ಎಂದು ಪ್ರಶ್ನಿಸಿದ್ದಾರೆ.ವಿದ್ಯಾರ್ಥಿಗಳು ಹಾಸ್ಟೆಲ್ಗಳಲ್ಲಿ ಆಹಾರ ಸೇವಿಸಲು ಹೆದರುವಂತಾಗಿದೆ. ಮಕ್ಕಳನ್ನು ಸರ್ಕಾರಿ ವಸತಿನಿಲಯಗಳಿಗೆ ಸೇರಿಸಲು ಪಾಲಕರು ಹಿಂದೇಟು ಹಾಕುತ್ತಿದ್ದಾರೆ. ಹೀಗಾಗಿ ಸಚಿವ ಪ್ರಿಯಾಂಕ್ ಖರ್ಗೆ ತಮ್ಮ ವರ್ತನೆ ಬದಲಿ ಮಾಡಿಕೊಳ್ಳಲಿ, ಜಿಲ್ಲೆಯ ಕಡೆಗೆ ಗಮನ ಹರಿಸಲಿ. ಮುಖ್ಯಮಂತ್ರಿಗಳು ಕಲಬುರಗಿಗೆ ಭೇಟಿ ನೀಡಿದಾಗ ನಿರೀಸಿದ್ದ ಅಭಿವೃದ್ಧಿ ಯೋಜನೆ, ಸಮಸ್ಯೆಗಳ ಪರಿಹಾರದ ಭರವಸೆಗಳು ಕಾಣಿಸಲಿಲ್ಲ. ಸ್ವಾಗತ, ಹಾರಗಳು ಮತ್ತು ಪೋಸ್ಟರ್ಗಳ ರಾಜಕೀಯವೇ ಹೆಚ್ಚಾಗಿತ್ತು. ಕನಕಪುರವನ್ನು ಬೆಂಗಳೂರಿಗೆ ಸಂಪರ್ಕಿಸುವ ಮಹತ್ವಾಕಾಂಕ್ಷೆಯ ಅಭಿವೃದ್ಧಿ ಯೋಜನೆಗಳು ನಡೆಯುತ್ತಿವೆ. ಮತ್ತೊಂದೆಡೆ ಕಲಬುರಗಿ ಜಿಲ್ಲೆ ಅಭಿವೃದ್ಧಿಯ ಹಲವು ಸೂಚ್ಯಂಕಗಳಲ್ಲಿ ಹಿಂದುಳಿದಿದೆ ಇದನ್ನು ಸಿಎಂ ಗಮನಿಸಬೇಕು ಎಂದು ಒತ್ತಾಯಿಸಿದ್ದಾರೆ.

# ನಕಲಿ ಪತ್ರಕರ್ತರ ಮೇಲೆ ಕ್ರಮಕ್ಕೆ ಆಗ್ರಹ

### ಡಿಜಿಪಿ ಭೇಟಿ ಮಾಡಿದ ಕೆಯುಡಬ್ಲ್ಯೂಜೆ ನಿಯೋಗ - ಆರ್‌ಟಿಐ ಪತ್ರಕರ್ತರ ಮೇಲೆ ನಿಗಾಕ್ಕೆ ಮನವಿ




**ಬೆಂಗಳೂರು, ಜು.13:** ನೈಜ ಪತ್ರಕರ್ತರ ಮೇಲೆ ವಿನಾ ಕಾರಣ ತೇಜೋವಧೆ ಮಾಡುವ ನಕಲಿ ಮತ್ತು ಆರ್‌ಟಿಐ ಪತ್ರಕರ್ತರ ಮೇಲೆ ಕಟ್ಟು ನಿಟ್ಟಿನ ಕ್ರಮ ತೆಗೆದುಕೊಳ್ಳಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಪೊಲೀಸ್ ಮಹಾ ನಿರ್ದೇಶಕರನ್ನು ಒತ್ತಾಯಿಸಿದೆ.

ಬೆಂಗಳೂರಿನಲ್ಲಿ ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ.ಸಲೀಂ ಅವರನ್ನು ಭೇಟಿ ಮಾಡಿದ್ದ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದ ಪದಾಧಿಕಾರಿಗಳ ನಿಯೋಗ ಈ ಬಗ್ಗೆ ಮನವಿ ಸಲ್ಲಿಸಿತು. ಪತ್ರಿಕೆಗಳನ್ನೆ ತರದವರು, ಸುದ್ದಿಯನ್ನು ಬರೆಯಲು ಬಾರದವರು ಮತ್ತು ಸುದ್ದಿ ಮನೆಗೆ ಯಾವ ರೀತಿಯ ಸಂಬಂಧವೂ ಇಲ್ಲದವರು ತಾವೇ ಪತ್ರಕರ್ತರು ಎಂದು ಬಿಂಬಿಸಿಕೊಳ್ಳುವ ವಿಸಿಟಿಂಗ್ ಕಾರ್ಡ್ ಪತ್ರಕರ್ತರು, ನೆಪ ಮಾತ್ರಕ್ಕೆ ಸಂಘಟನೆ ಮಾಡಿಕೊಂಡು, ಬ್ಲಾಕ್ ಮೇಲ್ ಮಾಡುವ ಆರ್‌ಟಿಐ ಪತ್ರಕರ್ತರ ವಸೂಲಿ ದಂಧೆಯೂ ಹೆಚ್ಚುತ್ತಿರುವುದು ಕಳವಳಕಾರಿ ಸಂಗತಿ. ಈ ಬೆಳವಣಿಗೆಗೆ ಕಡಿವಾಣ ಹಾಕಲು ಪೊಲೀಸ್ ಇಲಾಖೆ ಮುಂದಾಗಬೇಕು ಎಂದು ವಿನಂತಿಸಿದರು.

ಪತ್ರಿಕಾ ಸಂಘಟನೆಯ ಹೆಸರು ಹೇಳಿಕೊಳ್ಳುವ ಕೆಲ ನಕಲಿ ಪತ್ರಕರ್ತರು ಆಗಿಂದಾಗ್ಗೆ ಪೊಲೀಸ್ ಠಾಣೆಗೆ ದೂರು ಕೊಡುವುದು, ಆರ್‌ಟಿಐ ಹಾಕುವುದನ್ನೆ ತಮ್ಮ ಕಾಯಕವಾಗಿಸಿ ಕೊಂಡಿದ್ದಾರೆ. ಇಂಥವರನ್ನು ಪೊಲೀಸ್ ಠಾಣೆಯಲ್ಲೂ ಬ್ಲಾಕ್ ಲಿಸ್ಟ್‌ನಲ್ಲಿ ಸೇರಿಸಿ ಕ್ರಮ ಜರುಗಿಸಬೇಕು ಎಂದು ಪೊಲೀಸ್ ಮಹಾ ನಿರ್ದೇಶಕರಿಗೆ ಮನದಟ್ಟು ಮಾಡಿಕೊಡಲಾಯಿತು. ಮನವಿಯನ್ನು ಗಂಭೀರವಾಗಿ ಪರಿಗಣಿಸಿ ಕ್ರಮ ಜರುಗಿಸುವುದಾಗಿ ಪೊಲೀಸ್ ಮಹಾನಿರ್ದೇಶಕರು, ಕೆಯುಡಬ್ಲ್ಯೂಜೆ ನಿಯೋಗಕ್ಕೆ ಭರವಸೆ ನೀಡಿದರು.

ನಿಯೋಗದಲ್ಲಿ ಸಂಘದ ಉಪಾಧ್ಯಕ್ಷ ಅಜ್ಜಮಾಡ ರಮೇಶ್ ಕುಟ್ಟಪ್ಪ, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಕಾರ್ಯದರ್ಶಿ ಸೋಮಶೇಖರ ಕೆರಗೋಡು, ನಿಂಗಪ್ಪ ಚಾವಡಿ, ಖಜಾಂಚಿ ವಾಸುದೇವ ಹೊಳ್ಳ ಅವರು ಹಾಜರಿದ್ದರು.

# ಕಾರ್ಮಿಕ ವಿರೋಧಿ ನೀತಿ ಖಂಡಿಸಿ ಅಂಗನವಾಡಿ, ಬಿಸಿಯೂಟ ನೌಕರರ ಪ್ರತಿಭಟನೆ


ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಅಂಗನವಾಡಿ ನೌಕರರು, ಅಡುಗೆ ಮಾಡುವವರು ಮತ್ತು ಸಹಾಯಕರು ಕೇಂದ್ರ ಮತ್ತು ರಾಜ್ಯ ಸರ್ಕಾರದ ಕಾರ್ಮಿಕ ವಿರೋಧಿ ನೀತಿ ಖಂಡಿಸಿ ಕರಾಳ ದಿನದ ಅಂಗವಾಗಿ ಪ್ರತಿಭಟನೆ ನಡೆಸಿ, ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಮನವಿ ಸಲ್ಲಿಸಿದರು.

**ರಾಯಚೂರು, ಜು. 13:** ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಕಾರ್ಮಿಕ ವಿರೋಧಿ ನೀತಿಗಳನ್ನು ಖಂಡಿಸಿ ಅಂಗನವಾಡಿ ನೌಕರರ ಸಂಘ ಹಾಗೂ ಬಿಸಿಯೂಟ ನೌಕರರ ಸಂಘದ ಜಿಲ್ಲಾ ಸಮಿತಿಯ ಪದಾಧಿಕಾರಿಗಳು ಕರಾಳ ದಿನ ಆಚರಿಸಿ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಅಂಗನವಾಡಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷೆ ಎಚ್. ಪದ್ಮಾ ಮಾತನಾಡಿ, ಕೇಂದ್ರ ಸರ್ಕಾರ ಐಸಿಡಿಎಸ್‌ಗೆ ನೀಡುತ್ತಿರುವ ಅನುದಾನ ವನ್ನು ಬೆಲೆ ಏರಿಕೆಗೆ ಅನುಗುಣವಾಗಿ ಹೆಚ್ಚಿಸದೆ ನಿರಂತರವಾಗಿ ಕಡಿಮೆ ಮಾಡುತ್ತಿರು ವುದರಿಂದ ಯೋಜನೆಗೆ ತೀವ್ರ ಹೊಡೆತ ಬಿದ್ದಿದೆ. ಬಿಸಿಯೂಟ ಯೋಜನೆಗೆ ಅಗತ್ಯ ಅನುದಾನ ನೀಡದೇ ಖಾಸಗಿ ಸಂಸ್ಥೆಗಳಿಗೆ ವಹಿಸಲು ಸರ್ಕಾರ ಮುಂದಾಗಿರುವುದು ಯೋಜನೆಯನ್ನು ದುರ್ಬಲಗೊಳಿಸುವ ಕ್ರಮವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

2017ರಿಂದ ಪೌಷ್ಟಿಕ ಆಹಾರಕ್ಕೆ ನೀಡಬೇಕಾದ ಘಟಕ ವೆಚ್ಚವನ್ನು ಹೆಚ್ಚಿಸದೆ ಅಂಗನವಾಡಿ ವ್ಯವಸ್ಥೆಯನ್ನು ದುರ್ಬಲ ಗೊಳಿಸಲಾಗುತ್ತಿದೆ. ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯಿಂದ 3ರಿಂದ 6 ವರ್ಷದ ಮಕ್ಕಳಿಗಾಗಿ ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ ಹಾಗೂ ಯುಕೆಜಿ ಆರಂಭವಾಗುತ್ತಿದ್ದು, ಇದರಿಂದ ಅಂಗನವಾಡಿ ಕೇಂದ್ರಗಳ ಫಲಾನುಭವಿಗಳ ಸಂಖ್ಯೆ ಇಳಿಮುಖ ವಾಗುತ್ತಿದೆ ಎಂದು ತಿಳಿಸಿದರು.

ಅಂಗನವಾಡಿ ನೌಕರರಿಗೆ ಎಫ್‌ಆರ್‌ಎಸ್, ಇ–ಕೆವೈಸಿ, ಪೋಷಣ್ ಟ್ರ್ಯಾಕರ್ ಸೇರಿದಂತೆ ವಿವಿಧ ಆನ್‌ಲೈನ್ ಕೆಲಸಗಳನ್ನು ಗುಣಮಟ್ಟದ ಮೊಬೈಲ್, 5ಜಿ ಡೇಟಾ ಹಾಗೂ ವೈಫೈ ಸೌಲಭ್ಯ ಒದಗಿಸದೆ ನಿರ್ವಹಿಸಲು ಒತ್ತಾಯಿಸ ಲಾಗುತ್ತಿದೆ ಎಂದು ಪ್ರತಿಭಟನಕಾರರು ದೂರಿದರು. ಸರ್ಕಾರದ ಈ ನೌಕರ ವಿರೋಧಿ ನೀತಿಯನ್ನು ತಕ್ಷಣ ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ಚುನಾವಣಾ ಭರವಸೆಯಂತೆ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಸಿಕ 15 ಸಾವಿರ ಹಾಗೂ ಸಹಾಯಕಿಯರಿಗೆ 10 ಸಾವಿರ ಗೌರವಧನ ಜಾರಿಗೊಳಿಸ ಬೇಕು. ಬಿಸಿಯೂಟ ನೌಕರರ ಗೌರವಧನ 7 ಸಾವಿರಕ್ಕೆ ಹೆಚ್ಚಿಸಬೇಕು. ಎಲ್ಲ ಅಂಗನವಾಡಿ ಕೇಂದ್ರಗಳಿಗೆ ಎಲ್‌ಕೆಜಿ–ಯುಕೆಜಿ ವಿಸ್ತರಿಸಬೇಕು. ಸಾದಿಲ್ವಾರು ಜಂಟಿ ಖಾತೆಯ ಜವಾಬ್ದಾರಿಯನ್ನು ಎಸ್‌ಡಿಎಂಸಿಗೆ ವರ್ಗಾವಣೆ ಮಾಡಿರುವ ಆದೇಶವನ್ನು ಹಿಂಪಡೆದು ಮೊದಲಿನ ವ್ಯವಸ್ಥೆಯನ್ನು ಮುಂದುವರಿಸಬೇಕು ಎಂದು ಆಗ್ರಹಿಸಿದರು.

ನಂತರ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರಿಗೆ ಮನವಿ ಪತ್ರ ಸಲ್ಲಿಸಿದರು. ಬಿಸಿಯೂಟ ನೌಕರರ ಸಂಘದ ಅಧ್ಯಕ್ಷೆ ರೇಣುಕಮ್ಮ, ಸಿಐಟಿಯು ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಡಿ.ಎಸ್.ಶರಣಬಸವ, ವರಲಕ್ಷ್ಮಿ, ಮರಿಯಮ್ಮ, ರಮಾದೇವಿ, ಮಹ್ಮದ್ ಹನೀಫ್, ಕೆಜಿ ವೀರೇಶ, ಗೋಕುರಮ್ಮ, ಗಂಗಮ್ಮ, ಅಕ್ಕಮಹಾದೇವಿ, ವಿಶಾಲಾಕ್ಷಮ್ಮ, ಜರೀನಾಬೇಗಂ, ಅಲ್ಲಾಭಕ್ಷ, ಶರಣಮ್ಮ, ನಿಂಗಪ್ಪ, ಶ್ರೀಲೇಖಾ, ಶ್ರೀಧರ, ಅಂಗನವಾಡಿ, ಬಿಸಿಯೂಟ ನೌಕರರು ಪಾಲ್ಗೊಂಡಿದ್ದರು.

# ಪೋಕ್ಸೋ ಪ್ರಕರಣ: ವಚನಾನಂದ ಶ್ರೀಗೆ ದಾವಣಗೆರೆ ಕೋರ್ಟ್ ಷರತ್ತುಬದ್ಧ ಜಾಮೀನು

**ದಾವಣಗೆರೆ, ಜು.13:** ಹರಿಹರ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ ವಿರುದ್ಧ ದಾಖಲಾಗಿದ್ದ ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ, ಇದೀಗ ನ್ಯಾಯಾಲಯವು ಷರತ್ತುಬದ್ಧ ಜಾಮೀನು ಮಂಜೂರು ಮಾಡಿ ಆದೇಶ ಹೊರಡಿಸಿದೆ. ದಾವಣಗೆರೆಯ ಜಿಲ್ಲಾ ವಿಶೇಷ ಪೋಕ್ಸೋ ನ್ಯಾಯಾಲಯದ ನ್ಯಾಯಾಧೀಶ ಶ್ರೀರಾಮ ನಾರಾಯಣ ಹೆಗಡೆ ಅವರು ಈ ಮಹತ್ವದ ತೀರ್ಪನ್ನು ನೀಡಿದ್ದಾರೆ.ಕಳೆದ ಕೆಲವು ದಿನಗಳಿಂದ ತೀವ್ರ ಚರ್ಚೆಗೆ ಗ್ರಾಸವಾಗಿದ್ದ ಈ ಪ್ರಕರಣದಲ್ಲಿ ಸ್ವಾಮೀಜಿ ಪರ ವಕೀಲರು ಸಲ್ಲಿಸಿದ್ದ ಜಾಮೀನು ಅರ್ಜಿಯ ವಿಚಾರಣೆಯನ್ನು ನಡೆಸಿದ ನ್ಯಾಯಾಲಯವು, ಇಲಾಖೆಯ ತನಿಖೆಗೆ ಸಹಕರಿಸಬೇಕು ಹಾಗೂ ಸಾಕ್ಷ್ಯನಾಶಕ್ಕೆ ಯತ್ನಿಸಬಾರದು ಸೇರಿದಂತೆ ಕೆಲವು ಕಠಿಣ ಷರತ್ತುಗಳನ್ನು ವಿಧಿಸಿ ಜಾಮೀನು ಮಂಜೂರಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದೆ. ನ್ಯಾಯಾಲಯದ ಈ ಆದೇಶದಿಂದಾಗಿ ವಚನಾನಂದ ಸ್ವಾಮೀಜಿ ಅವರಿಗೆ ಸದ್ಯಕ್ಕೆ ದೊಡ್ಡ ಮಟ್ಟದ ಕಾನೂನು ರಿಲೀಫ್ ಸಿಕ್ಕಂತಾಗಿದೆ.ಈ ಪ್ರಕರಣವು ರಾಜ್ಯಾದ್ಯಂತ ತೀವ್ರ ಸಂಚಲನ ಮೂಡಿಸಿತ್ತು. ಹರಿಹರ ಪೀಠದ ಶ್ರೀಗಳ ವಿರುದ್ಧ ಕೇಳಿಬಂದಿದ್ದ ಗಂಭೀರ ಆರೋಪಗಳ ಹಿನ್ನೆಲೆಯಲ್ಲಿ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಳ್ಳಲಾಗಿತ್ತು. ಇದೀಗ ನ್ಯಾಯಾಲಯವು ಜಾಮೀನು ನೀಡಿರುವುದರಿಂದ ಪ್ರಕರಣದ ಮುಂದಿನ ಕಾನೂನು ಪ್ರಕ್ರಿಯೆಗಳು ತನಿಖಾಧಿಕಾರಿಗಳ ವರದಿ ಹಾಗೂ ನ್ಯಾಯಾಲಯದ ಮುಂದಿನ ವಿಚಾರಣೆಯ ಆಧಾರದ ಮೇಲೆ ಮುಂದುವರಿಯಲಿವೆ.

# ಕಾರ್ಯಾಗಾರದಲ್ಲಿ ಅಬಕಾರಿ ಉಪ ಆಯುಕ್ತ ಮಂಜುನಾಥ್.ಎನ್ ಮಾಹಿತಿ

## ಮದ್ಯದ ಸನ್ನದುಗಳ ಇ-ಹರಾಜು: ಭಾಗವಹಿಸಲು ಮುಕ್ತ ಅವಕಾಶ



**ಬಳ್ಳಾರಿ, ಜು.13:** ರಾಜ್ಯ ಸರ್ಕಾರವು ಅಬಕಾರಿ ಇಲಾಖೆಯ ಇತಿಹಾಸದಲ್ಲೇ ಮೊದಲ ಬಾರಿಗೆ ಸಿಎಲ್–2ಎ ಮತ್ತು ಸಿಎಲ್–9ಎ ಸನ್ನದುಗಳ ಇ–ಹರಾಜು ಪ್ರಕ್ರಿಯೆಗೆ ಚಾಲನೆ ನೀಡಿದ್ದು, ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸುವವರು ಕೇವಲ ಬಳ್ಳಾರಿ ಅಥವಾ ವಿಜಯನಗರ ಜಿಲ್ಲೆಗೆ ಮಾತ್ರ ಸೀಮಿತವಾಗಿರದೆ, ಇಡೀ ರಾಜ್ಯದ ಯಾವುದೇ ಜಿಲ್ಲೆಯಲ್ಲಾದರೂ ಬಿಡ್ ಮಾಡಬಹುದು ಎಂದು ಬಳ್ಳಾರಿ ಜಿಲ್ಲಾ ಅಬಕಾರಿ ಉಪ ಆಯುಕ್ತ ಮಂಜುನಾಥ್ ಎನ್. ಅವರು ಹೇಳಿದರು.

ರಾಜ್ಯ ಅಬಕಾರಿ ಇಲಾಖೆ ಹಾಗೂ ಬಳ್ಳಾರಿ ಜಿಲ್ಲಾ ಅಬಕಾರಿ ಇಲಾಖೆ ವತಿಯಿಂದ ಅಬಕಾರಿ ಸನ್ನದುಗಳ ಇ–ಹರಾಜು ಕುರಿತು ನಗರದ ಜಿಪಂ ನ ಹೊಸ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಸಂಭಾವ್ಯ ಬಿಡ್ಡುದಾರರು ಹಾಗೂ ಆಸಕ್ತರಿಗೆ ಸೋಮವಾರ ಆಯೋಜಿಸಿದ್ದ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಜ್ಯಾದ್ಯಂತ ಒಟ್ಟು ಸುಮಾರು 483 ಸಿಎಲ್–2ಎ ಮತ್ತು 90 ಕ್ಕೂ ಹೆಚ್ಚು ಸಿಎಲ್–9ಎ ಸನ್ನದುಗಳನ್ನು ಹರಾಜು ಮಾಡಲು ಸರ್ಕಾರ ಉದ್ದೇಶಿಸಿದೆ. ಸಿಎಲ್–2ಎ ಇವು ಚಿಲ್ಲರೆ ಮದ್ಯದ ಮಳಿಗೆಗಳಾಗಿದ್ದು (ವೈನ್ ಸ್ಟೋರ್ಸ್), ಇಲ್ಲಿ ಮಧ್ಯವನ್ನು ಕೊಂಡೊಯ್ದು ಬೇರೆಡೆ ಸೇವಿಸಲು ಮಾತ್ರ ಅವಕಾಶವಿರುತ್ತದೆ (ಪಾರ್ಸಲ್ ವ್ಯವಸ್ಥೆ). ಅದೇರೀತಿಯಾಗಿ ಸಿಎಲ್–9ಎ ಇವು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಬಾರ್ ಮತ್ತು ರೆಸ್ಟೋರೆಂಟ್‌ಗಳಾಗಿದ್ದು, ಇಲ್ಲಿ ಊಟ ಮತ್ತು ಉಪಹಾರದೊಂದಿಗೆ ಮದ್ಯ ಸರಬರಾಜು ಮಾಡಲು ಅವಕಾಶವಿರುತ್ತದೆ ಎಂದು ತಿಳಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 10 ಸಿಎಲ್–2ಎ ಮಳಿಗೆಗಳು ಮತ್ತು 2 ಸಿಎಲ್–9ಎ ಸನ್ನದುಗಳಿದ್ದು, ಇವುಗಳಿಗೆ ಹರಾಜು ಪ್ರಕ್ರಿಯೆ ನಡೆಯಲಿದೆ. ಹರಾಜಿನಲ್ಲಿ ಭಾಗವಹಿಸಲು ಬಯಸುವವರು ಕಡ್ಡಾಯವಾಗಿ ಎಂಎಸ್‌ಟಿಸಿ ಸಂಸ್ಥೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿಕೊಳ್ಳಬೇಕು. ಆನ್‌ಲೈನ್ ವಾಲೆಟ್‌ನಲ್ಲಿ ಇಎಂಡಿ ಬ್ಯಾಲೆನ್ಸ್ ಕಾಯ್ದುಕೊಳ್ಳುವುದು ಕಡ್ಡಾಯವಾಗಿರುತ್ತದೆ ಎಂದರು.

ಬಳ್ಳಾರಿ ಜಿಲ್ಲೆಯ ನೇರ ಹರಾಜು ಪ್ರಕ್ರಿಯೆಯು ಜುಲೈ 28 ರಂದು ಮಧ್ಯಾಹ್ನ 03 ಗಂಟೆಗೆ ಆರಂಭವಾಗಲಿದ್ದು, ಬಿಡ್‌ದಾರರು ಜುಲೈ 26 ರೊಳಗಾಗಿ ಎಲ್ಲಾ ನೋಂದಣಿ ಹಾಗೂ ಶುಲ್ಕ ಪಾವತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಬೇಕು. ಆನ್‌ಲೈನ್ ಬಿಡ್ಡಿಂಗ್‌ಗಾಗಿ ಮೊಬೈಲ್ ಅಥವಾ ಉತ್ತಮ ಇಂಟರ್ನೆಟ್ ಸಂಪರ್ಕವಿರುವ ಡೆಸ್ಕ್‌ಟಾಪ್ ಕಂಪ್ಯೂಟರ್ ಅಥವಾ ಲ್ಯಾಪ್‌ಟಾಪ್ ಗಳನ್ನು ಬಳಸಿ, ತಾವಿದ್ದಲ್ಲಿಯೇ ಭಾಗವಹಿಸಬಹುದಾಗಿದೆ ಎಂದು ಅವರು ತಿಳಿಸಿದರು.

ಅಬಕಾರಿ ಇಲಾಖೆಯ ನಿಯಮಾವಳಿಗಳ ಪ್ರಕಾರ, ಪ್ರಸ್ತುತ ನೀಡಲಾಗುತ್ತಿರುವ ಮದ್ಯದ ಸನ್ನದುಗಳು 5 ವರ್ಷಗಳ ಅವಧಿಗೆ ಮಾತ್ರ ಸೀಮಿತವಾಗಿರಲಿವೆ. ಐದು ವರ್ಷಗಳ ನಂತರ ಈ ಸನ್ನದುಗಳನ್ನು ಮುಂದುವರಿಸುವ ಅಥವಾ ಮರುಹರಾಜು ಮಾಡುವ ಕುರಿತು ಸರ್ಕಾರವೇ ಅಂತಿಮ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ಸ್ಪಷ್ಟಪಡಿಸಿದರು.

ಹೊಸಪೇಟೆ ವಿಭಾಗದ ಅಬಕಾರಿ ಜಂಟಿ ಆಯುಕ್ತರಾದ (ಜಾರಿ ಮತ್ತು ತನಿಖೆ) ಶೈಲಜಾ ಕೋಟೆ ಅವರು ಕಾರ್ಯಾಗಾರವನ್ನು ಉದ್ಘಾಟಿಸಿ, ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಾಗಾರದಲ್ಲಿ ವಿಜಯನಗರ ಜಿಲ್ಲೆಯ ಅಬಕಾರಿ ಉಪ ಆಯುಕ್ತ ಡಾ.ಪಿ. ಮಾದೇಶ್, ಜಿಲ್ಲಾ ಅಬಕಾರಿ ಇಲಾಖೆಯ ಅಧಿಕಾರಿ ಅನಿಲ್, ಎಂ.ಎಸ್.ಟಿ.ಸಿ. ಸಂಸ್ಥೆಯ ಕಾರ್ಯನಿರ್ವಾಹಕ ಸಹಾಯಕ ಗಿರೀಶ್ ಸೇರಿದಂತೆ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಅಬಕಾರಿ ಇಲಾಖೆಯ ಅಧಿಕಾರಿ–ಸಿಬ್ಬಂದಿ ಹಾಗೂ ಅಖಂಡ ಬಳ್ಳಾರಿ ಜಿಲ್ಲೆಯ ಬಿಡ್‌ದಾರರು, ಮತ್ತೀತರರು ಉಪಸ್ಥಿತರಿದ್ದರು.

# ಮತದಾರ ಸೌಲಭ್ಯ ಕೇಂದ್ರಗಳಿಗೆ ಸ್ವೀಪ್ ನೋಡಲ್ ಅಧಿಕಾರಿ ವಸ್ತ್ರದ ಭೇಟಿ

**ಮೈಸೂರು, ಜು.13:** ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್. ವಸ್ತ್ರದ ಅವರು ಸೋಮವಾರ ಮತದಾರರ ಸೌಲಭ್ಯ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ರಮದ ಅಂಗವಾಗಿ, ನರಸಿಂಹರಾಜ ವಿಧಾನಸಭಾ ಕ್ಷೇತ್ರದ ವಲಯ ಕಚೇರಿ–9ರ ವ್ಯಾಪ್ತಿಯ ವಾರ್ಡ್ ಸಂಖ್ಯೆ–39ರ ಎಂಸಿಸಿ ಕಾಲೊನಿಯಲ್ಲಿ ಮತಗಟ್ಟೆ ಸಂಖ್ಯೆ 144, 145, 146 ಹಾಗೂ 147ರ ಮತದಾರರ ಅನುಕೂಲಕ್ಕಾಗಿ ಸ್ಥಾಪಿಸಲಾಗಿರುವ ಮತದಾರರ ಸೌಲಭ್ಯ ಕೇಂದ್ರಕ್ಕೆ ಭೇಟಿ ನೀಡಿ ಮಾಹಿತಿ ಪಡೆದರು. ಕೇಂದ್ರದಲ್ಲಿ ಸಾರ್ವಜನಿಕರಿಗೆ ಕಲ್ಪಿಸಿರುವ ಸೌಲಭ್ಯಗಳು, ಅರ್ಜಿಗಳ ಸ್ವೀಕಾರ, ದಾಖಲೆಗಳ ಪರಿಶೀಲನೆ ಹಾಗೂ ಪರಿಷ್ಕರಣೆ ಕಾರ್ಯದ ಪ್ರಗತಿ ಅವಲೋಕಿಸಿದರು. ಮತದಾರರೊಂದಿಗೆ ಸಂವಾದ ನಡೆಸಿ, ಕೇಂದ್ರದಲ್ಲಿ ದೊರೆಯುತ್ತಿರುವ ಸೇವೆಗಳ ಕುರಿತು ಮಾಹಿತಿ ಪಡೆದರು. ಅವರ ಅಭಿಪ್ರಾಯಗಳನ್ನು ಆಲಿಸಿದರು.

ಬಿಎಲ್‌ಒಗಳು, ಬಿಎಲ್‌ಒ ಮೇಲ್ವಿಚಾರಕರು ಹಾಗೂ ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು. ಎಸ್‌ಐಆರ್ ಕಾರ್ಯವನ್ನು ಗುಣಮಟ್ಟದೊಂದಿಗೆ, ಪಾರದರ್ಶಕ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ನಿರ್ದೇಶನ ನೀಡಿದರು. ನರಸಿಂಹರಾಜ ಕ್ಷೇತ್ರದ ಮತದಾರರ ನೋಂದಣಿ ಅಧಿಕಾರಿ ವೆಂಕಟೇಶ್ ಸಿ., ಎಇಆರ್‌ಒಗಳು, ಕಂದಾಯ ಅಧಿಕಾರಿಗಳು, ಬಿಎಲ್‌ಒ ಮೇಲ್ವಿಚಾರಕರು ಪಾಲ್ಗೊಂಡಿದ್ದರು.



ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸೋಮವಾರ, ವಿಳಂಬಿತ ವೇತನ, ಹೊಸ ರಚನಾತ್ಮಕ ನಿಯಮಗಳು ಮತ್ತು ಈಡೇರದ ವಿರುದ್ಧ ನೂರಾರು ಮಾನ್ಯತೆ ಪಡೆದ ಸಾಮಾಜಿಕ ಆರೋಗ್ಯ ಕಾರ್ಯಕರ್ತರು ಎಐಟಿಸಿ ಜೊತೆ ಪ್ರತಿಭಟನೆ ನಡೆಸಿದರು.

# ನರೇಗಾ ಕಾರ್ಮಿಕರ ಬಾಕಿ ವೇತನವನ್ನು ತಕ್ಷಣ ಪಾವತಿಸಲು AIKKMS ಪ್ರತಿಭಟನೆ




**ಬಳ್ಳಾರಿ ಜು 13:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನರೇಗಾ) ಅಡಿಯಲ್ಲಿ ಕೆಲಸ ನಿರ್ವಹಿಸಿರುವ ಕಾರ್ಮಿಕರ ಮೇ ಮತ್ತು ಜೂನ್ ತಿಂಗಳ ಬಾಕಿ ಕೂಲಿ ವೇತನವನ್ನು ಕೂಡಲೇ ಪಾವತಿಸಬೇಕು ಎಂದು ಆಗ್ರಹಿಸಿ ಅಖಿಲ ಭಾರತ ರೈತ ಕೃಷಿ ಕಾರ್ಮಿಕ ಸಂಘದ (ಎಐಕೆಕೆಎಂಎಸ್) ವತಿಯಿಂದ ಇಂದು ಬಳ್ಳಾರಿ ಜಿಲ್ಲಾ ಪಂಚಾಯಿತಿ ಬಳಿ ಬೃಹತ್ ಪ್ರತಿಭಟನೆ ಮಾಡಿ, ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ವೇತನ ಪಾವತಿಯಲ್ಲಿ ಉಂಟಾಗಿರುವ ವಿಳಂಬದಿಂದ ಗ್ರಾಮೀಣ ಕಾರ್ಮಿಕರು ಮತ್ತು ಅವರ ಕುಟುಂಬಗಳು ತೀವ್ರ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿದ್ದು, ತಕ್ಷಣವೇ ಬಾಕಿ ವೇತನವನ್ನು ಕಾರ್ಮಿಕರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡುವಂತೆ ಹಾಗೂ ಮುಂದಿನ ದಿನಗಳಲ್ಲಿ ವೇತನವನ್ನು ನಿಗದಿತ ಅವಧಿಯೊಳಗೆ ಪಾವತಿಸುವ ವ್ಯವಸ್ಥೆ ಕಲ್ಪಿಸಬೇಕು.

ಜೊತೆಗೇ, ಈ ಭಾಗದ ಕೃಷಿ ಚಟುವಟಿಕೆಗಳಿಗೆ ಜೀವನಾಡಿಯಾದ ತುಂಗಾಭದ್ರಾ ಜಲಾಶಯಕ್ಕೆ ಇನ್ನೂ ನೀರು ತುಂಬಿರದ ಕಾರಣ, ಇಲ್ಲಿ ಕೃಷಿ ಚಟುವಟಿಕೆ ಪ್ರಾರಂಭವಾಗದೆ , ಇಲ್ಲಿನ ಕೃಷಿ ಕೂಲಿ ಕಾರ್ಮಿಕರಿಗೆ ಯಾವುದೇ ರೀತಿಯ ಕೆಲಸ ಸಿಗದೇ, ಜೀವನದ ಆದಾಯಕ್ಕೆ ಸಂಕಷ್ಟ ಪಡುವಂತಾಗಿದೆ, ಆದ್ದರಿಂದ ಈ ಭಾಗದ ಕೃಷಿ ಚಟುವಟಿಕೆ ಪ್ರಾರಂಭವಾಗುವವರೆಗೆ ಇಲ್ಲಿನ ಕೃಷಿ ಕಾರ್ಮಿಕರಿಗೆ ಯಾವುದೇ ಯೋಜನೆಯಲ್ಲಾಗಲಿ ಕೆಲಸ ಮತ್ತು ಕೂಲಿ ಒದಗಿಸಬೇಕೆಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಸರ್ಕಾರ ಮತ್ತು ಸಂಬಂಧಿಸಿದ ಅಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಮನರೇಗಾ ಕಾರ್ಮಿಕರ ಹಕ್ಕುಗಳನ್ನು ಕಾಪಾಡುವ ನಿಟ್ಟಿನಲ್ಲಿ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಎಐಕೆಕೆಎಂಎಸ್ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಸಂಘದ ರಾಜ್ಯ ಸಮಿತಿ ಸದಸ್ಯ ಈ.ಹನುಮಂತಪ್ಪ, ಜಿಲ್ಲಾ ಅಧ್ಯಕ್ಷ ಗೋವಿಂದ್, ಜಿಲ್ಲಾ ಕಾರ್ಯದರ್ಶಿ ಗುರಳ್ಳಿ ರಾಜ, ಜಂಟಿ ಕಾರ್ಯದರ್ಶಿ ಕಾಸಿಂ ಸಾಬ್, ನರೇಗಾ ಉಳಿಸಿ ಸಮಿತಿ ತಾಲ್ಲೂಕು ಅಧ್ಯಕ್ಷ ಕಲ್ಲುಕಂಬ ಪಂಪಾಪತಿ, ಯುವಜನ ಮುಖಂಡ ಕೋಳೂರು ಪಂಪಾಪತಿ, ಕುರುಗೋಡು ತಾಲ್ಲೂಕು ಕಾರ್ಯದರ್ಶಿ ಎಚ್.ಎನ್.ಬಸವರಾಜ್, ಬಳ್ಳಾರಿ ತಾಲ್ಲೂಕು ಕಾರ್ಯದರ್ಶಿ ಧನರಾಜ್, ಜಿಲ್ಲಾ ಸಮಿತಿ ಸದಸ್ಯರಾದ ಹೊನ್ನುರಪ್ಪ, ಮಲ್ಲಪ್ಪ, ಸಿದ್ದಲಿಂಗ, ರೈತರಾದ ಪಂಪನಗೌಡ, ದೊಡ್ಡಬಸವ, ವೆಂಕಟೇಶ್, ಮಾರೆಪ್ಪ, ಬುಗ್ಗಪ್ಪ, ಸೇರಿದಂತೆ ಹಲವಾರು ರೈತರು, ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು

# ಉದಯೋನ್ಮುಖ ನೃತ್ಯ ಕಲಾವಿದೆ ಅನನ್ಯ ಶರ್ಮ ರಂಗಪ್ರವೇಶ



ಬೆಂಗಳೂರಿನ ಹೆಸರಾಂತ ನಟರಾಜರಂಗಂ ಸ್ಕೂಲ್ ಆಫ್ ಡ್ಯಾನ್ಸ್ ನೃತ್ಯಸಂಸ್ಥೆಯ ಬದ್ಧತೆಯ ಉತ್ತಮ ನಾಟ್ಯಗುರು ಮತ್ತು ನೃತ್ಯಕಲಾವಿದೆ ಅಭಿನಯ ನಟರಾಜನ್ ಅವರ ಬಳಿ ಕಳೆದ 10 ವರ್ಷಗಳಿಂದ ಅತ್ಯಾಸಕ್ತಿ–ಶ್ರದ್ಧೆಗಳಿಂದ ಭರತನಾಟ್ಯ ಕಲಿಯುತ್ತಿರುವ ಪ್ರತಿಭಾವಂತೆ ಕು. ಅನನ್ಯಾ ಶರ್ಮ, ಛಾಯಾ ಶರ್ಮ ಮತ್ತು ಅನಿಂದ್ಯಾ ಶರ್ಮ ಅವರ ಮಗಳು. ತನ್ನ 7 ನೆಯ ವಯಸ್ಸಿಗೇ ನೃತ್ಯಾಭ್ಯಾಸ ಆರಂಭಿಸಿದ ಅನನ್ಯಾ, ಡಾ. ಗಂಗೂಬಾಯಿ ಹಾನಗಲ್ ಮ್ಯೂಸಿಕ್ ಮತ್ತು ಪರ್ಫಾರ್ಮಿಂಗ್ ಆರ್ಟ್ಸ್ ಯೂನಿವರ್ಸಿಟಿಯಿಂದ ಜ್ಯೂನಿಯರ್ ಬೋರ್ಡ್ ಪರೀಕ್ಷೆಯಲ್ಲಿ ಡಿಸ್ಟಿಂಕ್ಷನ್ ಪಡೆದು ತೇರ್ಗಡೆಯಾಗಿದ್ದಾಳೆ. ಬೆಂಗಳೂರಿನ ಗೇರ್ ಇನೋವೇಟಿವ್ ಇಂಟರ್ನ್ಯಾಷನಲ್ ಸ್ಕೂಲಿನಲ್ಲಿ 12 ನೇ ತರಗತಿಯಲ್ಲಿ ಓದುತ್ತಿರುವ ಹದಿನೇಳು ವರ್ಷದ ಇವಳಿಗೆ ಕಂಪ್ಯೂಟರ್ ಮತ್ತು ಟೆಕ್ನಾಲಜಿಯಲ್ಲಿ ಅಪರಿಮಿತ ಆಸಕ್ತಿಯಿದ್ದು, ಕರ್ನಾಟಕ ಶಾಸ್ತ್ರೀಯ ಸಂಗೀತವನ್ನೂ ಕಲಿಯುತ್ತಿದ್ದಾಳೆ. ಈಗಾಗಲೇ ಇವಳು ದೇಶಾದ್ಯಂತ ಅನೇಕ ವೇದಿಕೆಗಳಲ್ಲಿ ನೃತ್ಯಪ್ರದರ್ಶನಗಳನ್ನು ನೀಡಿ ಕಲಾರಸಿಕರ ಮೆಚ್ಚುಗೆಯನ್ನು ಪಡೆದಿದ್ದಾಳೆ. ಇದೀಗ ಇವಳು, ತನ್ನ ನೃತ್ಯ ಪ್ರತಿಭೆಯನ್ನು ಪ್ರದರ್ಶಿಸಲು ದಿ. 18 ಶನಿವಾರ ಮಧ್ಯಾಹ್ನ 3.30ಕ್ಕೆ ಬೆಂಗಳೂರಿನ ಮಾರತ್ತಹಳ್ಳಿಯ ನ್ಯೂ ಹೊರೈಸನ್ ಕಾಲೇಜ್ ಆಫ್ ಇಂಜಿನಿಯರಿಂಗ್ ಆಡಿಟೋರಿಯಂನಲ್ಲಿ ವಿದ್ಯುಕ್ತವಾಗಿ ರಂಗಪ್ರವೇಶ ಮಾಡುತ್ತಿದ್ದಾಳೆ. ಈ ಕನ್ನಿಕೆಯ ಸುಮನೋಹರ ನೃತ್ಯಸೊಬಗನ್ನು ಕಣ್ತುಂಬಿಕೊಳ್ಳಲು ಸರ್ವರಿಗೂ ಸುಸ್ವಾಗತ.

# ಹಾರ್ಡ್‌ಡಿಸ್ಕ್‌ನಿಂದ ಸಿಸಿ ಕ್ಯಾಮರಾ ದೃಶ್ಯ ಕೊಡಿಸಿದ ಮಾಹಿತಿ ಆಯೋಗ

### ಮಳವಳ್ಳಿ ಪೊಲೀಸ್ ಠಾಣೆಯ ಪ್ರಕರಣ: ಎಫ್‌ಎಸ್‌ಎಲ್‌ಗೆ ಕಳುಹಿಸಿ ಪರಿಶೀಲನೆ

**ಮಂಡ್ಯ, ಜು.13:** ಪೊಲೀಸ್ ಠಾಣೆಯ ಸಿಸಿ ಕ್ಯಾಮರಾದಲ್ಲಿ ದಾಖಲಾಗಿರುವ ದೃಶ್ಯಾವಳಿಗಳನ್ನು ಹಾರ್ಡ್‌ಡಿಸ್ಕ್ ಪರಿಶೀಲನೆ ಒಳಪಡಿಸಿ ಲಭ್ಯ ಮಾಹಿತಿಯನ್ನು ಮೇಲ್ಮನವಿದಾರರಿಗೆ ಕೊಡಿಸಿರುವ ವಿಶೇಷ ಪ್ರಕರಣ ಕರ್ನಾಟಕ ಮಾಹಿತಿ ಆಯೋಗದಲ್ಲಿ ವರದಿಯಾಗಿದೆ. ಈ ಪ್ರಕರಣದಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಯಾಗಿದ್ದ ಹಿರಿಯ ಪೊಲೀಸ್ ಅಧಿಕಾರಿ ವಿರುದ್ಧ ಶಿಸ್ತುಕ್ರಮಕ್ಕೂ ಶಿಫಾರಸು ಮಾಡಿದೆ.

ಮಂಡ್ಯ ಜಿಲ್ಲೆಯ ಮಳವಳ್ಳಿಯ ನಾಗರಾಜು ಎಂ.ಆರ್. ಅವರು ಅಲ್ಲಿನ ಡಿವೈಎಸ್‌ಪಿ ಅವರಿಗೆ 2022ರ ಆಗಸ್ಟ್ 4 ರಂದು ಅರ್ಜಿ ಸಲ್ಲಿಸಿ, ಮಳವಳ್ಳಿಯ ಪುರ ಹಾಗೂ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ 2021 ರ ಅಕ್ಟೋಬರ್ ನಿಂದ 2022 ರ ಮಾರ್ಚ್ 31 ರವರೆಗಿನ ಸಿಸಿ ಕ್ಯಾಮೆರಾದಲ್ಲಿ ದಾಖಲಾಗಿರುವ ದೃಶ್ಯಾವಳಿಗಳನ್ನು ನೀಡುವಂತೆ ಕೋರಿದ್ದರು. ಪುರ ಹಾಗೂ ಗ್ರಾಮಾಂತರ ಠಾಣೆಯ ಅಧಿಕಾರಿಗಳು ಮಾಹಿತಿ ಹಕ್ಕು ಕಾಯ್ದೆ 8(1)(ಜೆ) ಪ್ರಕಾರ ನೀಡಲು ಸಾಧ್ಯವಿಲ್ಲ ಎಂದು ನಿರಾಕರಿಸಿದ್ದರು. ತಮ್ಮ ಸಾರ್ವಜನಿಕ ಪ್ರಾಧಿಕಾರಕ್ಕೆ ಸಂಬಂಧಿಸಿಲ್ಲದ ಮಾಹಿತಿ ಅರ್ಜಿಯನ್ನು ಸಂಬಂಧಿಸಿದ ಪ್ರಾಧಿಕಾರಕ್ಕೆ ನಿಯಮಬದ್ಧವಾಗಿ ವರ್ಗಾವಣೆ ಮಾಡಿ ಅದನ್ನು ಅರ್ಜಿದಾರರ ಗಮನಕ್ಕೂ ತರಬೇಕಾಗಿತ್ತು. ಆದರೆ ಆಗಿನ ಡಿವೈಎಸ್ಪಿ ಅವರು ಈ ವಿಚಾರದಲ್ಲಿ ಕೆಲವೊಂದು ಲೋಪ ಮಾಡಿದ್ದರು. ಮಂಡ್ಯದ ಆಗಿನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಥಮ ಮೇಲ್ಮನವಿ ಅರ್ಜಿಯ ವಿಚಾರಣೆಯನ್ನೇ ನಡೆಸಿರಲಿಲ್ಲ.

ಆಗಿನ ಡಿವೈಎಸ್ಪಿ ಹಾಗೂ ಈಗ ಬಳ್ಳಾರಿಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಯಾಗಿರುವ ನವೀನ್‌ಕುಮಾರ್ ಅವರು ಮಾಹಿತಿ ಹಕ್ಕು ಅರ್ಜಿಯನ್ನು ನಿಯಮಬದ್ಧವಾಗಿ ನಿಯಮ 6(3)ರಡಿಯಲ್ಲಿ ಪುರ ಹಾಗೂ ಗ್ರಾಮಾಂತರ ಪೊಲೀಸ್ ಠಾಣೆಗಳಿಗೆ ವರ್ಗಾವಣೆ ಮಾಡಿರಲಿಲ್ಲ. ಅರ್ಜಿ ವರ್ಗಾವಣೆಯ ಮಾಹಿತಿಯನ್ನು ಅರ್ಜಿದಾರ ನಾಗರಾಜು ಅವರಿಗೂ ನೀಡಿರಲಿಲ್ಲ. ಪುರ ಠಾಣೆಗೆ ಕೇವಲ ಜ್ಞಾಪನ ಮಾತ್ರ ಹೊರಡಿಸಿದ್ದರು. ಆದರೂ ಎರಡು ಠಾಣೆಯ ಪೊಲೀಸ್ ನಿರೀಕ್ಷಕರು ಮಾಹಿತಿ ನೀಡಲು ಸಾಧ್ಯವಿಲ್ಲವೆಂಬ ಹಿಂಬರಹ ನೀಡಿದ್ದರು. ಹಿರಿಯ ಅಧಿಕಾರಿಗಳ ಮೌಖಿಕ ಸೂಚನೆಯ ಮೇರೆಗೆ ಹಿಂಬರಹ ನೀಡಿದ್ದಾಗಿಯೂ ಆಯೋಗದ ವಿಚಾರಣೆಯ ವೇಳೆ ಒಪ್ಪಿಕೊಂಡಿದ್ದರು. ಸಿಸಿ ಕ್ಯಾಮರಾದ ಫುಟೇಜ್ ಕೇವಲ ಆರು ತಿಂಗಳು ಮಾತ್ರ ಇರುತ್ತದೆ ಎಂಬುದು ಪೊಲೀಸ್ ಅಧಿಕಾರಿಗಳ ವಾದವಾಗಿತ್ತು.

ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಆಯೋಗದ ನಾಲ್ಕನೇ ಪೀಠದ ರಾಜ್ಯ ಮಾಹಿತಿ ಆಯುಕ್ತ ರುದ್ರಣ್ಣ ಹರ್ತಿಕೋಟೆ ಅವರು ಎರಡು ಪೊಲೀಸ್ ಠಾಣೆಯ ಸಿಸಿ ಕ್ಯಾಮರಾಗಳ ಹಾರ್ಡ್‌ಡಿಸ್ಕ್ ಅನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಿ ತನಿಖೆಗೆ ಒಳಪಡಿಸಿ ಅದರಲ್ಲಿ ಲಭ್ಯ ದೃಶ್ಯಾವಳಿಯನ್ನು ಅರ್ಜಿದಾರರಿಗೆ ನೀಡಬೇಕು. ಈ ರೀತಿ ನೀಡುವಾಗ ಅವರು ಠಾಣೆಗೆ ಭೇಟಿ ನೀಡಿದ ಸಂದರ್ಭ ಹಾಗೂ ಅವರನ್ನು ವಿಚಾರಣೆಗೆ ಒಳಪಡಿಸಿದ ದೃಶ್ಯಾವಳಿ ಮಾತ್ರ ನೀಡಬೇಕು, ಕ್ಯಾಮರಾದಲ್ಲಿ ದಾಖಲಾಗಿರುವ ಇತರ ಮಾಹಿತಿಯನ್ನು ನ್ಯಾಯಾಲಯಗಳ ಆದೇಶಗಳಂತೆ ಮುಸುಕು ಮಾಡಬೇಕೆಂದು ಸೂಚನೆ ನೀಡಿದ್ದರು.

ಮಳವಳ್ಳಿಯ ಹಾಲಿ ಡಿವೈಎಸ್ಪಿ ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿ ಯಶವಂತಕುಮಾರ್ ಅವರು ಎರಡು ಪೊಲೀಸ್ ಠಾಣೆಗಳ ಸಿಸಿ ಕ್ಯಾಮೆರಾಗಳ ಹಾರ್ಡ್‌ಡಿಸ್ಕ್‌ನ್ನು ಬೆಂಗಳೂರಿನ ಮಡಿವಾಳದಲ್ಲಿರುವ ಎಫ್‌ಎಸ್‌ಎಲ್‌ಗೆ ಸಲ್ಲಿಸಿ ಅದರಲ್ಲಿರುವ ಲಭ್ಯ ದೃಶ್ಯಾವಳಿಗಳ ಮಾಹಿತಿಯನ್ನು ಸಿಡಿಗೆ ವರ್ಗಾವಣೆ ಮಾಡಿ ವೈಜ್ಞಾನಿಕ ವಿಶ್ಲೇಷಣೆಯ ವರದಿಯೊಂದಿಗೆ ಅರ್ಜಿದಾರರಿಗೆ ಮಾಹಿತಿ ನೀಡಲಾಗಿದೆ. ಆಯೋಗದ ಇತಿಹಾಸದಲ್ಲಿಯೇ ಸಿಸಿ ಕ್ಯಾಮೆರಾಗಳನ್ನು ಎಫ್‌ಎಸ್‌ಎಲ್ ಪರಿಶೀಲನೆಗೆ ಒಳಪಡಿಸಿ ಅರ್ಜಿದಾರರಿಗೆ ಅದರಲ್ಲಿರುವ ದೃಶ್ಯಾವಳಿಗಳನ್ನು ಕೊಡಿಸಿರುವ ಅಪರೂಪದ ಪ್ರಕರಣ ಇದಾಗಿದೆ. ಆದರೂ ಅರ್ಜಿದಾರರು ಪೂರ್ಣ ಮಾಹಿತಿ ಲಭ್ಯವಾಗಿಲ್ಲವೆಂಬ ಆಕ್ಷೇಪ ವ್ಯಕ್ತಪಡಿಸಿದರೂ ಸಹ ಆಯೋಗದ ಕಾರ್ಯವೈಖರಿಗೆ ತಮ್ಮ ಮೆಚ್ಚುಗೆ ಸೂಚಿಸಿದರು.

ಈ ನಡುವೆ ಬಳ್ಳಾರಿ ಎಎಸ್ಪಿ ನವೀನ್‌ಕುಮರ್ ಅವರು ತಾವು ಅಜಿಯನ್ನು ನಿಯಮಬದ್ಧವಾಗಿಯೇ ವರ್ಗಾವಣೆ ಮಾಡಿರುವುದಾಗಿ ಲಿಖಿತ ಹೇಳಿಕೆ ನೀಡಿದ್ದರಿಂದ ಮಂಡ್ಯ ಜಿಲ್ಲೆಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನೇತೃತ್ವದಲ್ಲಿ ಸಮಿತಿ ರಚನೆ ಮಾಡಿ ತನಿಖೆ ಮಾಡಿ ವರದಿ ನೀಡಲು ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರಿಗೆ ಆಯೋಗ ಸೂಚನೆ ನೀಡಿತ್ತು. ಅದರಂತೆ 2006ರ ಮೇ 5 ಮಂಡ್ಯ ಎಎಸ್ಪಿ ಗಂಗಾಧರಸ್ವಾಮಿ ಅವರು ವರದಿ ನೀಡಿದ್ದು ಅದರಲ್ಲಿ ಮಾಹಿತಿ ಹಕ್ಕು ಅಧಿನಿಯಮ 6(3)ರಡಿ ಪೂರ್ಣ ಅರ್ಜಿ ವರ್ಗಾವಣೆ ಮಾಡಿಲ್ಲ ಕೇವಲ ಜ್ಞಾಪನ ಮಾತ್ರ ಹೊರಡಿಸಿದ್ದಾರೆಂದು ಹೇಳಿದ್ದರು. ಆದ್ದರಿಂದ ಅರ್ಜಿ ನಿರ್ಲಕ್ಷ್ಯ ಮಾಡಿರುವ ನವೀನ್‌ಕುಮಾರ್ ಅವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರಿಗೆ ಸೂಚನೆ ನೀಡಲಾಗಿತ್ತು. ಅವರಿಗೆ ನೋಟಿಸ್ ಜಾರಿಯಾಗಿದೆ. ನವೀನ್‌ಕುಮಾರ್ ಅವರು ತಾವು ನಿಯಮಬದ್ಧವಾಗಿಯೇ ಅರ್ಜಿ ವರ್ಗಾವಣೆ ಮಾಡಿರುವುದಾಗಿ ತಮ್ಮ ಸಮಜಾಯಿಷಿಯನ್ನು ಬಳ್ಳಾರಿ ಎಸ್ಪಿ ಹಾಗೂ ಮಾಹಿತಿ ಆಯೋಗಕ್ಕೆ ನೀಡಿದ್ದಾರೆ.

ಅರ್ಜಿ ನಿಯಮಬದ್ಧ ವರ್ಗಾವಣೆ ಇಲ್ಲದೇ ಅಧಿಕಾರಿಗಳ ಮೌಖಿಕ ಸೂಚನೆಯ ಮೇರೆಗೆ ಹಿಂಬರಹ ನೀಡಿದ್ದ ಎರಡು ಠಾಣೆಗಳಲ್ಲಿ ಆಗ ಕಾರ್ಯ ನಿರ್ವಹಣೆ ಮಾಡುತ್ತಿದ್ದ ಎರಡು ಠಾಣೆಗಳ ಇನ್ಸ್‌ಪೆಕ್ಟರ್‌ಗಳಿಗೆ ಮಾಹಿತಿ ಹಕ್ಕು ಅರ್ಜಿಗಳನ್ನು ನಿರ್ಲಕ್ಷ್ಯ ಮಾಡದಂತೆ ಸೂಕ್ತ ಎಚ್ಚರಿಕೆ ನೀಡಲಾಗಿದೆ.

# ಹಾರ್ಮುಜ್ ಸಮೀಪದ ಇರಾನ್‌ನ ಕಡಲತಾಣಗಳ ಮೇಲೆ ಅಮೆರಿಕ ದಾಳಿ

**ಟೆಹ್ರಾನ್, ಜು.13:** ಹಾರ್ಮುಜ್ ಜಲಸಂಧಿಯ ನಿಯಂತ್ರಣ ವಿಚಾರವಾಗಿ ಅಮೆರಿಕ ಮತ್ತು ಇರಾನ್ ನಡುವಿನ ಸಂಘರ್ಷ ಮತ್ತಷ್ಟು ತೀವ್ರಗೊಂಡಿದ್ದು, ಇರಾನ್ ವಿರುದ್ಧ ತನ್ನ ಸೇನಾ ಕಾರ್ಯಾಚರಣೆಯನ್ನು ತೀವ್ರಗೊಳಿಸಿರುವ ಅಮೆರಿಕ ಹಾರ್ಮುಜ್ ಜಲಸಂಧಿಯ ಸಮೀಪವಿರುವ ಇರಾನ್‌ನ ಪ್ರಮುಖ ಕಡಲ ತಾಣಗಳ ಮೇಲೆ ಭೀಕರ ವೈಮಾನಿಕ ದಾಳಿ ನಡೆಸಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನೇರ ನಿರ್ದೇಶನದ ಮೇರೆಗೆ ಯುಎಸ್ ಸೆಂಟ್ರಲ್ ಕಮಾಂಡ್ ಈ ಕಾರ್ಯಾಚರಣೆಯನ್ನು ಮುನ್ನಡೆಸಿದೆ. ಇರಾನ್‌ನ ದಕ್ಷಿಣ ಬಂದರು ನಗರಗಳಾದ ಬಂದರ್ ಅಬ್ಬಾಸ್, ಜಾಸ್ಕ್, ಸಿರಿಕ್ ಮತ್ತು ಕೇಶ್ಮ್ ದ್ವೀಪಗಳಲ್ಲಿರುವ ಇರಾನ್ ಸೇನಾ ನೆಲೆಗಳು ಮತ್ತು ಕಡಲ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ಈ ದಾಳಿಗಳನ್ನು ನಡೆಸಲಾಗಿದೆ ಎಂದು ವರದಿಯಾಗಿದೆ.

ಈ ನಡುವೆ ಹೋರ್ಮುಜ್ ಜಲಸಂಧಿ ತೆರೆದಿದೆಯೇ ಅಥವಾ ಮುಚ್ಚಲಾಗಿದೆಯೇ ಎಂಬುದರ ಕುರಿತು ವಾಷಿಂಗ್ಟನ್ ಮತ್ತು ಟೆಹ್ರಾನ್ ಪರಸ್ಪರ ವಿರುದ್ಧ ಹೇಳಿಕೆಗಳನ್ನು ನೀಡಿವೆ.

ಇರಾನ್ ತನ್ನ ದಕ್ಷಿಣ ಭಾಗದ ಖೆಶ್ಮ್ ಮತ್ತು ಫರೂರ್ ದ್ವೀಪಗಳ ಮೇಲೆ ಕ್ಷಿಪಣಿ ದಾಳಿ ನಡೆದಿರುವುದಾಗಿ ತಿಳಿಸಿದೆ.

ಮತ್ತೊಂದೆಡೆ, ಅಮೆರಿಕದ ಸೇನಾ ನೆಲೆಗಳ ಕಾರಣದಿಂದ ಈ ಹಿಂದೆಯೂ ಇರಾನ್ ದಾಳಿಯ ಗುರಿಯಾಗಿದ್ದ ಕುವೈತ್, ತನ್ನ ಉತ್ತರ ಗಡಿ ತಪಾಸಣಾ ಕೇಂದ್ರಗಳು ಮತ್ತು ಸಮುದ್ರದಲ್ಲಿರುವ ತೈಲ ಕೊರೆತ ವೇದಿಕೆಯ ಮೇಲೂ ದಾಳಿ ನಡೆದಿರುವುದಾಗಿ ತಿಳಿಸಿದೆ.

ಒಮಾನ್ ಕರಾವಳಿಯಲ್ಲಿ ಯುಎಇ ಒಡೆತನದ ಹಾಗೂ ಸೈಪ್ರಸ್ ಧ್ವಜ ಹೊಂದಿದ್ದ ಜಿಎಫ್‌ಎಸ್ ಗ್ಯಾಲಕ್ಸಿ ಎಂಬ ವಾಣಿಜ್ಯ ಕಂಟೈನರ್ ಹಡಗಿನ ಮೇಲೆ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ದಾಳಿ ನಡೆಸಿತ್ತು. ಈ ದಾಳಿಯಿಂದಾಗಿ ಹಡಗು ಸಂಪೂರ್ಣವಾಗಿ ಬೆಂಕಿಗೆ ಆಹುತಿಯಾಗಿತ್ತು.

ಈ ದಾಳಿಗೂ ಮುನ್ನ, ಹಡಗು ಅನಧಿಕೃತ ಮಾರ್ಗದಲ್ಲಿ ಚಲಿಸುತ್ತಿದೆ ಎಂದು ಆರೋಪಿಸಿ ಇರಾನ್ ಜಾಗತಿಕ ವ್ಯಾಪಾರದ ಪ್ರಮುಖ ಮಾರ್ಗವಾದ ಹಾರ್ಮುಜ್ ಜಲಸಂಧಿಯನ್ನು ಮುಚ್ಚಿರುವುದಾಗಿ ಏಕಪಕ್ಷೀಯವಾಗಿ ಘೋಷಿಸಿತ್ತು. ಇರಾನ್‌ನ ಈ ಉದ್ಧಟತನಕ್ಕೆ ಪ್ರತಿಕಾರವಾಗಿ ಅಮೆರಿಕ ಈಗ ಬೃಹತ್ ಮಿಲಿಟರಿ ಕಾರ್ಯಾಚರಣೆಗೆ ಇಳಿದಿದೆ. ಅಮೆರಿಕ ಮಿಲಿಟರಿ ಪಡೆಗಳು ಯುದ್ಧವಿಮಾನಗಳು, ಯುದ್ಧನೌಕೆಗಳು ಮತ್ತು ಅತ್ಯಾಧುನಿಕ ಡ್ರೋನ್‌ಗಳನ್ನು ಬಳಸಿ ಕಳೆದ ಮೂರು ದಿನಗಳಲ್ಲಿ ಇರಾನ್‌ನ 300ಕ್ಕೂ ಹೆಚ್ಚು ಗುರಿಗಳ ಮೇಲೆ ದಾಳಿ ನಡೆಸಿವೆ. ಇದರಲ್ಲಿ 140ಕ್ಕೂ ಹೆಚ್ಚು ಪ್ರಮುಖ ಮಿಲಿಟರಿ ತಾಣಗಳು ಸೇರಿವೆ. ಇರಾನ್‌ನ ಕರಾವಳಿ ರೇಡಾರ್, ರಹಸ್ಯ ಸಂವಹನ ಜಾಲ, ಯುದ್ಧಸಾಮಗ್ರಿ ಡಿಪೋಗಳು, ಹಡಗು ವಿರೋಧಿ ಕ್ಷಿಪಣಿ ಉಡಾವಣಾ ಕೇಂದ್ರಗಳು ಮತ್ತು ನೌಕಾಪಡೆಯ ಯುದ್ಧ ಬೋಟ್‌ಗಳನ್ನು ಸಂಪೂರ್ಣವಾಗಿ ನಾಶಪಡಿಸಲಾಗಿದೆ ಎಂದು ಅಮೆರಿಕದ ಸೆಂಟ್ರಲ್ ಕಮಾಂಡ್ ಪ್ರಕಟಿಸಿದೆ. ಜಲಸಂಧಿಯನ್ನು ಮುಚ್ಚಲಾಗಿದೆ ಎಂದು ಇರಾನ್ ಹೇಳಿಕೊಂಡಿದ್ದರೂ, ಒಮಾನ್ ಸಮೀಪದ ದಕ್ಷಿಣದ ಸುರಕ್ಷಿತ ಮಾರ್ಗದ ಮೂಲಕ ಹಾರ್ಮುಜ್ ಜಲಸಂಧಿ ಮುಕ್ತವಾಗಿದೆ ಎಂದು ಯುಎಸ್ ಮಿಲಿಟರಿ ಸ್ಪಷ್ಟಪಡಿಸಿದೆ.



ಅಮೆರಿಕದ ದಾಳಿಗೆ ತೀವ್ರ ಪ್ರತಿಕ್ರಿಯೆ ನೀಡಿರುವ ಇರಾನ್, ಯುಎಸ್ ಮಿಲಿಟರಿ ನೆಲೆಗಳನ್ನು ಹೊಂದಿರುವ ನೆರೆಯ ಗಲ್ಫ್ ರಾಷ್ಟ್ರಗಳ ಮೇಲೆ ಏಕಕಾಲದಲ್ಲಿ ಕ್ಷಿಪಣಿ ಮತ್ತು ಸರಣಿ ಡ್ರೋನ್ ದಾಳಿಗಳನ್ನು ಆರಂಭಿಸಿದೆ. ಜೋರ್ಡಾನ್‌ನಲ್ಲಿನ ಪ್ರಿನ್ಸ್ ಹಸನ್ ಏರ್ ಬೇಸ್ ಮೇಲಿನ ಇರಾನ್ ದಾಳಿಯಲ್ಲಿ ಕಮಾಂಡ್ ಸೆಂಟರ್‌ಗಳು ಮತ್ತು ಡ್ರೋನ್ ಹ್ಯಾಂಗರ್‌ಗಳು ಹಾನಿಗೊಳಗಾಗಿದ್ದು ಕುವೈತ್‌ನ ಉತ್ತರ ಭೂ ಗಡಿ ನೆಲೆಗಳು ಮತ್ತು ಕುವೈತ್ ಆಯಿಲ್ ಕಂಪನಿಯ ಕಡಲಾಚೆಯ ತೈಲ ಬಾವಿ ಮೇಲೂ ದಾಳಿ ನಡೆದಿದೆ. ಕತಾರ್ ಮತ್ತು ಬಹ್ರೇನ್‌ನಲ್ಲಿ ಕ್ಷಿಪಣಿ ಮುನ್ನೆಚ್ಚರಿಕೆ ಸೈರನ್‌ಗಳು ಮೊಳಗಿದ್ದು, ಖತಾರ್ ಕೆಲವು ಇರಾನಿ ಕ್ಷಿಪಣಿಗಳನ್ನು ಹೊಡೆದುರುಳಿಸಿದೆ.

ಈ ನಡುವೆ ತನ್ನ ಭೂಪ್ರದೇಶದ ಮೇಲಿನ ಡ್ರೋನ್ ದಾಳಿಯನ್ನು ತೀವ್ರವಾಗಿ ಖಂಡಿಸಿರುವ ಒಮಾನ್ ಸರ್ಕಾರ, ಇರಾನ್ ರಾಯಭಾರಿಗೆ ಸಮನ್ಸ್ ಜಾರಿ ಮಾಡಿ ಆಕ್ರೋಶ ವ್ಯಕ್ತಪಡಿಸಿದೆ.

ಈ ಮಹಾ ಸಂಘರ್ಷದ ಬೆನ್ನಲ್ಲೇ ಇರಾನ್‌ನ ತೈಲ ಮಾರಾಟಕ್ಕೆ ನೀಡಲಾಗಿದ್ದ ಸಾಮಾನ್ಯ ಪರವಾನಗಿಗಳನ್ನು ಅಮೆರಿಕ ತಕ್ಷಣದಿಂದಲೇ ರದ್ದುಗೊಳಿಸಿದ್ದು, ಭಾರಿ ಆರ್ಥಿಕ ನಿರ್ಬಂಧಗಳನ್ನು ಮರು ಹೇರಿದೆ. ಕದನ ವಿರಾಮ ಮುರಿದುಬಿದ್ದಿರುವುದು ಇಡೀ ಮಧ್ಯಪ್ರಾಚ್ಯವನ್ನು ಪೂರ್ಣ ಪ್ರಮಾಣದ ಯುದ್ಧಕ್ಕೆ ತಳ್ಳುವ ಭೀತಿ ಮೂಡಿಸಿದೆ. ಈ ಸಂಘರ್ಷವು ಜಾಗತಿಕ ವ್ಯಾಪಾರ ಮತ್ತು ಇಂಧನ (ಕಚ್ಚಾ ತೈಲ) ಪೂರೈಕೆಗೆ ಮಾರಕವಾಗಬಹುದು ಎಂದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ತೀವ್ರ ಕಳವಳ ವ್ಯಕ್ತಪಡಿಸಿದ್ದು, ಇರಾನ್ ಹಾಗೂ ಅಮೆರಿಕಾ ನಾಯಕರು ತಕ್ಷಣವೇ ಮಾತುಕತೆಗೆ ಮರಳಬೇಕೆಂದು ಒತ್ತಾಯಿಸಿದ್ದಾರೆ.

# ಟ್ರಂಪ್ ಆಪ್ತ ಲಿಂಡ್ಸೆ ಗ್ರಹಾಂ ಅನುಮಾನಾಸ್ಪದ ಸಾವು: ಸಂಭ್ರಮಿಸಿದ ಇರಾನ್ ಪತ್ರಿಕೆಗಳು

**ಟೆಹ್ರಾನ್, ಜು.13:** ಡೊನಾಲ್ಡ್ ಟ್ರಂಪ್ ಅವರ ಆಪ್ತ ಮಿತ್ರ, ಅಮೆರಿಕದ ಹಿರಿಯ ಸೆನೆಟರ್ ಲಿಂಡ್ಸೆ ಗ್ರಹಾಂ ಅನುಮಾನಾಸ್ಪದ ರೀತಿಯಲ್ಲಿ ಮೃತಪಟ್ಟಿದ್ದಾರೆ. ಅವರ ನಿಧನವನ್ನು ಇರಾನಿನ ಪತ್ರಿಕೆಗಳು ಸಂಭ್ರಮಿಸುತ್ತಿವೆ.

ಇರಾನ್ ನ ಮಾಧ್ಯಮ ಹಮ್ಶಾಹ್ರಿ ಅಮೆರಿಕದ ಅಧ್ಯಕ್ಷರು ಮತ್ತು ಇತರ ಅಮೆರಿಕನ್ ಅಧಿಕಾರಿಗಳು ಲಿಂಡ್ಸೆ ಗ್ರಹಾಂ ಅವರಂತೆಯೇ 'ಹಠಾತ್ ಸಾವಿಗೀಡಾಗಬಹುದು' ಎಂದು ಎಚ್ಚರಿಕೆ ನೀಡಿದೆ.

ಅಮೆರಿಕದ ಸೆನೆಟರ್ ಸಾವಿನ ನಂತರ 'ಹಠಾತ್ ಸಾವಿಗೆ ಸಿದ್ಧರಾಗಿ' ಎಂಬ ಶೀರ್ಷಿಕೆಯಡಿಯಲ್ಲಿ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಲಿಂಡ್ಸೆ ಗ್ರಹಾಂ ಅವರ ಚಿತ್ರದ ಪಕ್ಕದಲ್ಲಿ ಮೊಣಕಾಲಿನ ಮೇಲೆ ಮಂಡಿಯೂರಿ ಕುಳಿತಿರುವ ಚಿತ್ರವನ್ನು ಹಮ್ಶಾಹ್ರಿ ಮುಖಪುಟದಲ್ಲಿ ಪ್ರಕಟಿಸಿದೆ.

ಅದೇ ಸಮಯದಲ್ಲಿ, ಇರಾನಿನ ಪತ್ರಿಕೆ ವತನ್–ಇ ಎಮ್ರೂಜ್ ತನ್ನ ಜುಲೈ 13 ರ ಮುಖಪುಟದಲ್ಲಿ 'ಸಾವಿನ ವ್ಯಾಪಾರಿಯ ಸಾವು' ಎಂಬ ಶೀರ್ಷಿಕೆಯೊಂದಿಗೆ ಗ್ರಹಾಂ ಅವರ ಮರಣವನ್ನು ಪ್ರಕಟಿಸಿದೆ. ಅಮೆರಿಕದ ಹಿರಿಯ ರಾಜಕಾರಣಿ ಗ್ರಹಾಂ ಇರಾನ್ ವಿರುದ್ಧದ ಯುಎಸ್ ನೀತಿಗಳ ಪ್ರಮುಖ ಬೆಂಬಲಿಗರಾಗಿದ್ದರು ಮತ್ತು ಅವರು 'ಹಠಾತ್ ಅನಾರೋಗ್ಯಕ್ಕೀಡಾಗಿ' ಸಾವನ್ನಪ್ಪಿದ್ದಾರೆ ಎಂದು ದಿನಪತ್ರಿಕೆ ವಿವರಿಸಿದೆ.



ಟೆಹ್ರಾನ್‌ನ ಮಾಧ್ಯಮಗಳ ವರದಿಗಳ ಜೊತೆಗೆ, ಇರಾನ್ನ ಸರ್ಕಾರಿ ಸ್ವಾಮ್ಯದ ಮಾಧ್ಯಮ ಸುದ್ದಿ ವಾಚಕರೊಬ್ಬರು ಗ್ರಹಾಂ ಸಾವಿನಲ್ಲಿ ಟೆಹ್ರಾನ್‌ನ ಭಾಗಿಯಾಗಿರುವುದನ್ನು ಸೂಚಿಸುವಂತೆ ನಿರೂಪಣೆ ಮಾಡಿದ್ದಾರೆ. 'ಯುದ್ಧಪ್ರೇಮಿ ಇರಾನ್ ವಿರೋಧಿ ಯುಎಸ್ ಸೆನೆಟರ್ ಲಿಂಡ್ಸೆ ಗ್ರಹಾಂ ಅವರನ್ನು ನರಕಕ್ಕೆ ಕಳುಹಿಸಿದ್ದಕ್ಕಾಗಿ ನಾನು ಇರಾನ್ ರಾಷ್ಟ್ರವನ್ನು ಅಭಿನಂದಿಸುತ್ತೇನೆ' ಎಂದು ಘೋಷಿಸಿದ್ದಾರೆ. ಈ ಮಾಧ್ಯಮ ಪ್ರಸಾರಗಳು ಡೊನಾಲ್ಡ್ ಟ್ರಂಪ್ ಅವರ ಒಂಉಂ ನೆಲೆಯ ಸದಸ್ಯರಲ್ಲಿ ಪಿತೂರಿ ಸಿದ್ಧಾಂತಗಳಿಗೆ ಉತ್ತೇಜನ ನೀಡಿವೆ, ಅನೇಕರು ಗ್ರಹಾಂ ವಿರುದ್ಧ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಹಿಂದಿನ ಕೊಲೆ ಬೆದರಿಕೆಗಳನ್ನು ಉಲ್ಲೇಖಿಸಿ ಅವರ ಸಾವಿನ ತನಿಖೆಗೆ ಕರೆ ನೀಡಿದ್ದಾರೆ.

ದಕ್ಷಿಣ ಕೆರೊಲಿನಾ ಸೆನೆಟರ್ ರಷ್ಯಾದ ವಿರುದ್ಧದ ಯುದ್ಧದಲ್ಲಿ ಉಕ್ರೇನ್‌ಗೆ ಮಿಲಿಟರಿ ಸಹಾಯವನ್ನು ಗ್ರಹಾಂ ನಿರಂತರವಾಗಿ ಬೆಂಬಲಿಸಿದರು, ಗಾಜಾದಲ್ಲಿನ ಸಂಘರ್ಷದ ಸಮಯದಲ್ಲಿ ಇಸ್ರೇಲ್ ಅನ್ನು ಬಲವಾಗಿ ಬೆಂಬಲಿಸಿದರು ಮತ್ತು ಇರಾನ್ನ ಪ್ರಸ್ತುತ ನಾಯಕತ್ವವನ್ನು ಅಧಿಕಾರದಿಂದ ತೆಗೆದುಹಾಕಬೇಕು ಎಂದು ಪದೇ ಪದೇ ವಾದಿಸಿದ್ದರು.

ಒಂದು ವರ್ಷದ ನಂತರ ಹಮಾಸ್ನೊಂದಿಗೆ ತಲುಪಿದ ಕದನ ವಿರಾಮ ಒಪ್ಪಂದದ ಹೊರತಾಗಿಯೂ, ಇಸ್ರೇಲ್ ಗಾಜಾದಲ್ಲಿ ಪರಮಾಣು ಶಸ್ತ್ರಾಸ್ತ್ರಗಳನ್ನು ಬಳಸುವುದರಲ್ಲಿ ಸಮರ್ಥನೆ ನೀಡಬಹುದು ಎಂದು ಹೇಳುವ ಮೂಲಕ ಗ್ರಹಾಂ ವಿವಾದವನ್ನು ಹುಟ್ಟುಹಾಕಿದ್ದರು. ಇದಲ್ಲದೆ, ಫೆಬ್ರವರಿ 28 ರಂದು ಇರಾನ್ ಮೇಲೆ ನಡೆದ ದಾಳಿಯ ನಂತರ, ಗ್ರಹಾಂ ಇರಾನ್ ಸರ್ಕಾರವನ್ನು ಉರುಳಿಸಬೇಕೆಂದು ಬಹಿರಂಗವಾಗಿ ಕರೆ ನೀಡಿದ್ದರು ಹಾಗೂ ಇರಾನ್‌ನೊಂದಿನ ಸಂಘರ್ಷಕ್ಕೆ ಕಾರಣವಾದ ವಾರಗಳಲ್ಲಿ, ಗ್ರಹಾಂ ಹಲವಾರು ಬಾರಿ ಇಸ್ರೇಲ್‌ಗೆ ಪ್ರಯಾಣಿಸಿದ್ದರು ಮತ್ತು ದೇಶದ ಗುಪ್ತಚರ ಸಂಸ್ಥೆ ಮೊಸಾದ್‌ನ ಅಧಿಕಾರಿಗಳನ್ನು ಭೇಟಿಯಾಗಿದ್ದರು.

# ಪಾಕ್ ಸೇನೆ ವಿರುದ್ಧ ಬಹಿರಂಗ ಯುದ್ಧ ಸಾರಿದ ಫಜ್ಲುರ್ ರೆಹಮಾನ್ ಸಾಂವಿಧಾನಿಕ ಮಿತಿಯೊಳಗೆ ಕಾರ್ಯನಿರ್ವಹಿಸುವಂತೆ ಎಚ್ಚರಿಕೆ

**ಇಸ್ಲಾಮಾಬಾದ್, ಜು.13:** ಪಾಕಿಸ್ತಾನದ ಪ್ರಭಾವಿ ಧಾರ್ಮಿಕ ಹಾಗೂ ರಾಜಕೀಯ ನಾಯಕ, ಜಮಿಯತ್ ಉಲೇಮಾ–ಇ–ಇಸ್ಲಾಂ (ಫಝುಲ್) ಮುಖ್ಯಸ್ಥ ಮೌಲಾನಾ ಫಜ್ಲುರ್ ರೆಹಮಾನ್ ಅವರು ಪಾಕಿಸ್ತಾನ ಸೇನೆ ಮತ್ತು ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಅಸೀಂ ಮುನೀರ್ ವಿರುದ್ಧ ಬಹಿರಂಗ ಯುದ್ಧ ಸಾರಿದ್ದಾರೆ.

ಸೇನೆ ತನ್ನ ಸಂವಿಧಾನಾತ್ಮಕ ಮಿತಿಯೊಳಗೆ ಕಾರ್ಯನಿರ್ವಹಿಸಬೇಕು, ರಾಜಕೀಯ ಮಾಡಬೇಕೆಂದಿದ್ದರೆ ಯೂನಿಫಾರ್ಮ್ ಬಿಚ್ಚಿಟ್ಟು ಚುನಾವಣೆಗೆ ಬರಬೇಕು ಎಂದು ಸವಾಲು ಹಾಕಿದ್ದಾರೆ.

ಪಂಜಾಬ್ ಪ್ರಾಂತ್ಯದ ಖಾಸೂರ್‌ನಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಫಜ್ಲುರ್ ರೆಹಮಾನ್, ಪಾಕಿಸ್ತಾನದ ಸೇನೆ ರಾಜಕೀಯದಲ್ಲಿ ಹಸ್ತಕ್ಷೇಪ ಮಾಡುತ್ತಿದೆ ಎಂದು ಆರೋಪಿಸಿದರು.

"ನಿಮಗೆ ರಾಜಕೀಯ ಮಾಡಬೇಕೆಂದಿದ್ದರೆ ಮೊದಲು ಯೂನಿಫಾರ್ಮ್ ಬಿಚ್ಚಿ ಬನ್ನಿ. ಚುನಾವಣೆಯಲ್ಲಿ ಸ್ಪರ್ಧಿಸಿ. ಆಗ ಜನರು ಯೂನಿಫಾರ್ಮ್ ಧರಿಸಿದವರಿಗೆ ಎಷ್ಟು ಮತ ಕೊಡುತ್ತಾರೆ ಎಂಬುದು ಗೊತ್ತಾಗುತ್ತದೆ." ಎಂದು ಹೇಳಿದರು.ಇದೇ ವೇಳೆ ಬಲೂಚಿಸ್ತಾನದ ಭದ್ರತಾ ಪರಿಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ಬಲೂಚಿಸ್ತಾನದ ಬಹುತೇಕ ಪ್ರದೇಶಗಳು ಈಗ ಪಾಕಿಸ್ತಾನ ಸರ್ಕಾರದ ನಿಯಂತ್ರಣದಲ್ಲೇ ಇಲ್ಲ.



ದೇಶವೇ ಚೂರುಚೂರಾಗುತ್ತಿದೆ. ಆಡಳಿತಗಾರರು ಎಲ್ಲಿದ್ದಾರೆ ಬಲೂಚ್ ಪ್ರದೇಶಗಳಲ್ಲಿ ಬಂಡಾಯಗಳು ನಡೆದವು. ಇಡೀ ಬಲೂಚಿಸ್ತಾನವೇ ಪಾಕಿಸ್ತಾನದ ನಿಯಂತ್ರಣದಿಂದ ಹೊರ ಹೋಗಿದೆ. ಇಂದಿಗೂ ಅಲ್ಲಿ ಸರ್ಕಾರದ ಆಡಳಿತ ನಡೆಯುತ್ತಿಲ್ಲ," ಎಂದು ತಿಳಿಸಿದರು.ಇದೇ ಪರಿಸ್ಥಿತಿ ಈಗ ಖೈಬರ್ ಪಖ್ತುನ್ಖ್ವಾ ಪ್ರಾಂತ್ಯಕ್ಕೂ ವ್ಯಾಪಿಸಿದೆ ಎಂದು ಹೇಳಿದ ಅವರು, "ಕೆಲವೇ ಎರಡು–ಮೂರು ದಿನಗಳಲ್ಲಿ 50ಕ್ಕೂ ಹೆಚ್ಚು ಮೃತದೇಹಗಳು ಬಂದಿವೆ. ಪಶ್ತೂನ್ ಪ್ರದೇಶವೂ ಈಗ ರಕ್ತದ ಮಡುವಾಗಿದೆ," ಎಂದು ಆರೋಪಿಸಿದರು.

ಸಾಮಾನ್ಯ ನಾಗರಿಕರನ್ನು ಉಗ್ರರ ವಿರುದ್ಧ ಹೋರಾಡಲು ಸೇನೆ ಕರೆ ನೀಡುತ್ತಿರುವುದನ್ನೂ ಅವರು ತೀವ್ರವಾಗಿ ಟೀಕಿಸಿದರು. "ದೇಶದ ರಕ್ಷಣೆ ಮಾಡುವುದು ಸೇನೆಯ ಸಂವಿಧಾನಾತ್ಮಕ ಜವಾಬ್ದಾರಿ. ಅದಕ್ಕಾಗಿ ನಿಮ್ಮ ಯೋಧರು ಯೂನಿಫಾರ್ಮ್ ಧರಿಸಿ ವೇತನ ಪಡೆಯುತ್ತಿದ್ದಾರೆ. ನಮ್ಮನ್ನು ಖಾಸಗಿ ಸೇನೆ ರಚಿಸಿ ಹೋರಾಡಿ ಎಂದು ಕೇಳಬೇಡಿ. ನಾನು ಯಾವುದೇ ವೇತನ ಪಡೆಯುವುದಿಲ್ಲ, ನಾನು ಯಾವುದೇ ಸೇನೆಯನ್ನು ಕಟ್ಟುವುದಿಲ್ಲ," ಎಂದು ಸ್ಪಷ್ಟಪಡಿಸಿದರು. ಪಾಕಿಸ್ತಾನದ ಪ್ರತಿಯೊಂದು ಸಂಸ್ಥೆಯೂ ತನ್ನ ಮಿತಿಯೊಳಗೆ ಕಾರ್ಯನಿರ್ವಹಿಸಬೇಕು. "ಸಂಸತ್ತಿಗೆ ತನ್ನ ವ್ಯಾಪ್ತಿ ಇದೆ, ಪ್ರತಿಯೊಂದು ಇಲಾಖೆಗೂ ತನ್ನ ಜವಾಬ್ದಾರಿ ಇದೆ. ಹಾಗೆಯೇ ಸೇನೆಗೂ ತನ್ನ ವ್ಯಾಪ್ತಿ ಇದೆ. ಸೇನೆ ತನ್ನ ಜವಾಬ್ದಾರಿಗಳ ಮೇಲೆ ಗಮನ ಹರಿಸಬೇಕು, ರಾಜಕೀಯದ ಮೇಲೆ ಅಲ್ಲ ಎಂದು ಹೇಳಿದರು. ಇದೇ ವೇಳೆ ಸರ್ಕಾರ ರಚಿಸುವುದು ಮತ್ತು ಕೆಡವುವುದು ಸೇನೆಯ ಕೈಯಲ್ಲಿದೆ ಎಂಬ ಆರೋಪವನ್ನೂ ಫಜ್ಲುರ್ ರೆಹಮಾನ್ ಮಾಡಿದರು.

ಮಗೆ ಸರ್ಕಾರ ರಚಿಸಬೇಕೆಂಬ ಆಸೆ ಇದ್ದರೆ, ಜನರ ಬಳಿಗೆ ಹೋಗಿ ಮತ ಕೇಳಿ. ಚುನಾವಣೆ ಎದುರಿಸಿ ಅಧಿಕಾರಕ್ಕೆ ಬನ್ನಿ. ಪರೋಕ್ಷವಾಗಿ ರಾಜಕೀಯ ನಿಯಂತ್ರಿಸಲು ಪ್ರಯತ್ನಿಸಬೇಡಿ," ಎಂದು ಸವಾಲು ಹಾಕಿದರು.

ಫಜ್ಲುರ್ ರೆಹಮಾನ್ ಅವರ ಈ ಹೇಳಿಕೆಗಳು ಇತ್ತೀಚಿನ ತಿಂಗಳುಗಳಲ್ಲಿ ಪಾಕಿಸ್ತಾನದ ಸೇನಾ ನಾಯಕತ್ವದ ವಿರುದ್ಧ ಪ್ರಮುಖ ರಾಜಕೀಯ ನಾಯಕರಿಂದ ಕೇಳಿಬಂದ ಅತ್ಯಂತ ಕಟುವಾದ ಟೀಕೆಗಳಲ್ಲಿ ಒಂದೆಂದು ಪರಿಗಣಿಸಲಾಗುತ್ತಿದೆ.

# ಬಾಹ್ಯಾಕಾಶ ರಹಸ್ಯ ಭೇದಿಸಿದ ನಾಸಾ

**ವಾಷಿಂಗ್ಟನ್, ಜು. 13:** ಬ್ರಹ್ಮಾಂಡದ ಅತ್ಯಂತ ನಿಗೂಢ ಹಾಗೂ ಕೌತುಕದ ಕಾಯಗಳ ರಹಸ್ಯವನ್ನು ಭೇದಿಸುವ ನಿಟ್ಟಿನಲ್ಲಿ ಖಗೋಳವಿಜ್ಞಾನಿಗಳು ಮಹತ್ವದ ಮೈಲಿಗಲ್ಲು ಸ್ಥಾಪಿಸಿದ್ದಾರೆ. ನಾಸಾದ ಅತ್ಯಾಧುನಿಕ 'ಐಎಕ್ಸ್‌ಪಿಇ' ದೂರದರ್ಶಕವನ್ನು ಬಳಸಿಕೊಂಡು, ಬಾಹ್ಯಾಕಾಶದ 'ಲೈಟ್‌ಹೌಸ್ ನೆಬ್ಯುಲಾ' ವಲಯದಲ್ಲಿರುವ ಎಂಬ ವಿಶಿಷ್ಟ ಪಲ್ಸಾರ್‌ನ ಕಾಂತಕ್ಷೇತ್ರದ ತೀವ್ರತೆಯನ್ನು ಮೊದಲ ಬಾರಿಗೆ ನೇರವಾಗಿ ಅಳೆಯುವಲ್ಲಿ ವಿಜ್ಞಾನಿಗಳು ಯಶಸ್ವಿಯಾಗಿದ್ದಾರೆ. ಈ ಕುರಿತ ಸಂಶೋಧನಾ ವರದಿಯು ಪ್ರಸಿದ್ಧ 'ಅಸ್ಟ್ರೋಫಿಸಿಕಲ್ ಜರ್ನಲ್'ನಲ್ಲಿ ಪ್ರಕಟವಾಗಿದೆ ಎಂದು ನಾಸಾ ತಿಳಿಸಿದೆ.



ಪಲ್ಸಾರ್ ಎಂಬುದು ಅತಿ ಶಕ್ತಿಯುತ ಕಾಂತೀಯ ಶಕ್ತಿಯನ್ನು ಹೊಂದಿರುವ ಮತ್ತು ಅತ್ಯಂತ ತೀವ್ರ ವೇಗದಲ್ಲಿ ತನ್ನ ಅಕ್ಷದ ಮೇಲೆ ತಾನೇ ಸುತ್ತುವ ಒಂದು ಅಪರೂಪದ ನ್ಯೂಟ್ರಾನ್ ನಕ್ಷತ್ರವಾಗಿದೆ. ವಿಜ್ಞಾನಿಗಳು ಈಗ ಪತ್ತೆಹಚ್ಚಿರುವ ಲೈಟ್‌ಹೌಸ್ ನೆಬ್ಯುಲಾದ ಮಧ್ಯಭಾಗದಲ್ಲಿರುವ ಈ ಪಲ್ಸಾರ್, ಕೇವಲ ಒಂದು ಸೆಕೆಂಡಿಗೆ 16 ಬಾರಿ ಭ್ರಮಣಗೊಳ್ಳುತ್ತಿದೆ!

ಬೃಹತ್ ಗಾತ್ರದ ನಕ್ಷತ್ರಗಳು ತಮ್ಮ ಆಯಸ್ಸು ಮುಗಿದ ನಂತರ ತೀವ್ರ ಸ್ಫೋಟಕ್ಕೆ ಒಳಗಾಗುತ್ತವೆ. ಈ ವೇಳೆ ಉಳಿದುಕೊಳ್ಳುವ ಆ ನಕ್ಷತ್ರಗಳ ಅತ್ಯಂತ ಸಾಂದ್ರವಾದ ಕೇಂದ್ರಭಾಗವೇ ನ್ಯೂಟ್ರಾನ್ ನಕ್ಷತ್ರಗಳಾಗಿವೆ. ಇವು ಸೂರ್ಯನಿಗಿಂತಲೂ ಅಧಿಕ ದ್ರವ್ಯರಾಶಿಯನ್ನು ಹೊಂದಿದ್ದರೂ, ಕೇವಲ ಒಂದು ಸಣ್ಣ ನಗರದ ಗಾತ್ರಕ್ಕೆ ಕುಗ್ಗಿಕೊಂಡಿರುತ್ತವೆ. ಈ ಕಾರಣಕ್ಕಾಗಿಯೇ ವಿಜ್ಞಾನಿಗಳು ಇವುಗಳನ್ನು ತೀವ್ರ ಭೌತಶಾಸ್ತ್ರದ ಅಧ್ಯಯನಕ್ಕೆ ಸೂಕ್ತವಾದ ಪ್ರಕೃತಿ ದತ್ತ ಪ್ರಯೋಗಾಲಯಗಳೆಂದು ಕರೆಯುತ್ತಾರೆ.

ಆದಾಗ್ಯೂ, ಧ್ರುವೀಕರಣವು ಬೆಳಕಿನ ಒಂದು ಆಸ್ತಿಯಾಗಿದ್ದು ಅದು ಅದರ ವಿದ್ಯುತ್ ಕ್ಷೇತ್ರದ ಕಂಪನಗಳ ದಿಕ್ಕನ್ನು ವಿವರಿಸುತ್ತದೆ. ಧ್ರುವೀಕರಣದ ಮಟ್ಟವು ಆ ಕಂಪನಗಳು ಪರಸ್ಪರ ಎಷ್ಟು ಹೊಂದಿಕೆಯಾಗಿವೆ ಎಂಬುದರ ಅಳತೆಯಾಗಿದೆ.

ಬೆಳಕಿನ ವೇಗದಲ್ಲಿ ಚಲಿಸುವ ಎಲೆಕ್ಟ್ರಾನ್‌ಗಳು ಈ ಶಕ್ತಿಯುತ ವ್ಯವಸ್ಥೆಯೊಂದಿಗೆ ಹೇಗೆ ಸಂವಹನ ನಡೆಸುತ್ತವೆ ಎಂಬುದನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಲು ಖಗೋಳಶಾಸ್ತ್ರಜ್ಞರು ಪಲ್ಸಾರ್‌ನಿಂದ ವಿಸ್ತರಿಸಿರುವ ಎರಡು ಕಿರಿದಾದ ಎಕ್ಸ್–ರೇ ಶಾಖೆಗಳನ್ನು ಅಧ್ಯಯನ ಮಾಡಿದರು. ಉದ್ದವಾದ ಶಾಖೆಯನ್ನು ಫಿಲಮೆಂಟ್ ಎಂದು ಕರೆಯಲಾಗುತ್ತದೆ, ಆದರೆ ಚಿಕ್ಕದಾದ ಶಾಖೆಯನ್ನು ಟ್ರೇಲ್ ಎಂದು ಕರೆಯಲಾಗುತ್ತದೆ.

ಪಲ್ಸಾರ್‌ನಿಂದ ಅತ್ಯಂತ ವೇಗವಾಗಿ ಹೊರಹೊಮ್ಮುವ ಅತಿ ಹೆಚ್ಚು ಶಕ್ತಿಯುತ ಕಣಗಳು ಬಾಹ್ಯಾಕಾಶದಲ್ಲಿರುವ ಅಂತರತಾರಾ ಅನಿಲದೊಂದಿಗೆ ತೀವ್ರವಾಗಿ ಡಿಕ್ಕಿ ಹೊಡೆಯುತ್ತವೆ. ಈ ಪ್ರಕ್ರಿಯೆಯು ಸಮುದ್ರದಲ್ಲಿ ವೇಗವಾಗಿ ಚಲಿಸುವ ದೋಣಿಯ ಮುಂಭಾಗದಲ್ಲಿ ನೀರಿನ ಅಲೆಗಳು ಕಮಾನು ಅಥವಾ ಬಿಲ್ಲು ಆಕಾರದಲ್ಲಿ ಸೃಷ್ಟಿಯಾಗುವಂತೆಯೇ, ಬಾಹ್ಯಾಕಾಶದಲ್ಲಿಯೂ ಒಂದು ವಿಶಿಷ್ಟವಾದ ಬಿಲ್ಲು ಆಘಾತವನ್ನು ರೂಪಿಸುತ್ತದೆ.

ಹೆಚ್ಚಿನ ಕಣಗಳು ಈ ಬಿಲ್ಲು ಆಘಾತದ ಹಿಂದೆ ಸಿಕ್ಕಿಹಾಕಿಕೊಳ್ಳುತ್ತವೆ. ಪಲ್ಸಾರ್‌ನ ಹಿಂದಿನ ಪ್ರಕ್ಷುಬ್ಧ ಹಾದಿಯನ್ನು ರೂಪಿಸುತ್ತವೆ. 2008 ರಿಂದ, ಅತಿ ಹೆಚ್ಚು ಶಕ್ತಿಯ ಕಣಗಳು ಈ ಬಿಲ್ಲು ಆಘಾತದ ಮೂಲಕ ಅಂತರತಾರಾ ಬಾಹ್ಯಾಕಾಶಕ್ಕೆ ತಪ್ಪಿಸಿಕೊಳ್ಳುತ್ತವೆ. ನಕ್ಷತ್ರಪುಂಜದ ಕಾಂತೀಯ ಕ್ಷೇತ್ರದ ರೇಖೆಗಳ ಉದ್ದಕ್ಕೂ ಹರಿಯುತ್ತವೆ ಮತ್ತು ನೀಹಾರಿಕೆಯ ಉದ್ದವಾದ, ತೆಳುವಾದ ತಂತುವನ್ನು ಸೃಷ್ಟಿಸುತ್ತವೆ ಎಂದು ಸಂಶೋಧಕರು ಶಂಕಿಸಿದ್ದಾರೆ.

ಈ ಅಧ್ಯಯನದ ನೇತೃತ್ವ ವಹಿಸಿದ್ದ ಸ್ಟ್ಯಾನ್‌ಫೋರ್ಡ್ ವಿಶ್ವವಿದ್ಯಾಲಯದ ಪದವಿಪೂರ್ವ ವಿದ್ಯಾರ್ಥಿ ಜ್ಯಾಕ್ ಡಿನ್ಸ್‌ಮೋರ್, ಆ ಸಿದ್ಧಾಂತವನ್ನು ಪರೀಕ್ಷಿಸಲು ಬಯಸಿದ್ದು, ಇದು ಸ್ಮೋಕಿಂಗ್ ಗನ್ ಬೆಳಕಿನ ಧ್ರುವೀಕರಣವನ್ನು ಅಳೆಯುವ ಮೂಲಕ ಬರುತ್ತದೆ ಎಂದು ಹೇಳಿದರು. ಆದಾಗ್ಯೂ, ಇದು ಕಾಂತೀಯ ಕ್ಷೇತ್ರದ ದಿಕ್ಕನ್ನು ಸೂಚಿಸುತ್ತದೆ. ಕಾಂತೀಯ ಕ್ಷೇತ್ರವು ತಂತುವಿನ ಉದ್ದಕ್ಕೂ ತೋರಿಸಿದರೆ, ತಂತುವಿನ ಕಣಗಳು ಕ್ಷೇತ್ರದ ಉದ್ದಕ್ಕೂ ಹರಿಯುತ್ತಿವೆ ಎಂದು ಅದು ಖಚಿತಪಡಿಸುತ್ತದೆ ಎಂದು ಅವರು ಹೇಳಿದರು.

ಈ ಅಳತೆಗಳಲ್ಲಿನ ಒಂದು ಸವಾಲು ಎಂದರೆ ಲೈಟ್‌ಹೌಸ್ ನೀಹಾರಿಕೆ ತುಲನಾತ್ಮಕವಾಗಿ ದುರ್ಬಲವಾಗಿದೆ. ಐಎಕ್ಸ್ಪಿಇ' ಉಪಗ್ರಹದ ದತ್ತಾಂಶಗಳನ್ನು ಬಳಸಿಕೊಂಡು, ಅತ್ಯಾಧುನಿಕ ವಿಶ್ಲೇಷಣಾ ವಿಧಾನಗಳ ಮೂಲಕ ಈ ನೆಬ್ಯುಲಾದ ಸೂಕ್ಷ್ಮ ತರಂಗಗಳ ಧ್ರುವೀಕರಣವನ್ನು ಯಶಸ್ವಿಯಾಗಿ ಅಳೆಯಲಾಗಿದೆ. ಈ ಹೊಸ ತಂತ್ರಜ್ಞಾನವು ನೆಬ್ಯುಲಾದ ಫಿಲಮೆಂಟ್, ಟ್ರೇಲ್ ಹಾಗೂ ಪಲ್ಸಾರ್‌ಗಳಿಂದ ಹೊರಹೊಮ್ಮುವ ವಿಕಿರಣಗಳ ನಿಖರ ಮಾಹಿತಿ ನೀಡಿದೆ. ಸಂಶೋಧನೆಯ ಪ್ರಕಾರ, ನೆಬ್ಯುಲಾದಲ್ಲಿನ ಕಾಂತಕ್ಷೇತ್ರವು ಕಣಗಳ ಹರಿವಿನ ದಿಕ್ಕಿನಲ್ಲೇ ಸಾಗುತ್ತದೆ ಎಂಬುದು ಶೇಕಡಾ 99 ಕ್ಕಿಂತ ಹೆಚ್ಚು ವಿಶ್ವಾಸಾರ್ಹತೆಯೊಂದಿಗೆ ದೃಢಪಟ್ಟಿದೆ. ಸ್ಟ್ಯಾನ್ಫೋರ್ಡ್ ವಿಶ್ವವಿದ್ಯಾಲಯದ ಪ್ರೊಫೆಸರ್ ರೋಜರ್ ರೊಮಾನಿ ಅವರ ಪ್ರಕಾರ, ಈ ಹಿಂದೆ ನೆಬ್ಯುಲಾ ಫಿಲಮೆಂಟ್‌ಗಳಲ್ಲಿ ತೀವ್ರವಾದ ಆಯಸ್ಕಾಂತೀಯ ಪ್ರಕ್ಷುಬ್ಧತೆ ಇರುತ್ತದೆ ಎಂದು ಊಹಿಸಲಾಗಿತ್ತು. ಆದರೆ, ಪ್ರಸ್ತುತ ಅಳತೆ ಮಾಡಲಾದ ಹೆಚ್ಚಿನ ಧ್ರುವೀಕರಣದ ಪ್ರಮಾಣವು, ಅಲ್ಲಿ ಅಂದುಕೊಂಡಿದ್ದಕ್ಕಿಂತ ಕಡಿಮೆ ಪ್ರಕ್ಷುಬ್ಧತೆ ಇದೆ ಎಂಬುದನ್ನು ಸಾಬೀತುಪಡಿಸಿದೆ.

# ಖಮೇನಿ ಅಂತ್ಯಕ್ರಿಯೆ ವೇಳೆ ಮಾಸ್ಕ್ ಧರಿಸಿದ್ದ ವ್ಯಕ್ತಿ ಯಾರು?

**ಟೆಹ್ರಾನ್, ಜು.13:** ಇರಾನ್‌ನ ಮಾಜಿ ಪರಮೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಅವರ ಅಂತ್ಯಕ್ರಿಯೆಯು ಲಕ್ಷಾಂತರ ಜನರ ಸಮ್ಮುಖದಲ್ಲಿ ಇತ್ತೀಚೆಗೆ ಮುಕ್ತಾಯಗೊಂಡಿದೆ. ಫೆಬ್ರವರಿ 28 ರಂದು ಅಮೆರಿಕ ಮತ್ತು ಇಸ್ರೇಲ್ ಜಂಟಿಯಾಗಿ ನಡೆಸಿದ ವಾಯುದಾಳಿಯಲ್ಲಿ ಖಮೇನಿ ಹಾಗೂ ಅವರ ಕುಟುಂಬದವರು ಹತರಾಗಿದ್ದರು. ದಾಳಿ ನಡೆದ ಸುಮಾರು ನಾಲ್ಕು ತಿಂಗಳ ಬಳಿಕ ಅವರ ತವರು ನಗರವಾದ ಮಶಾದ್ನಲ್ಲಿ ಅಧಿಕೃತ ಅಂತ್ಯಕ್ರಿಯೆ ಮೆರವಣಿಗೆಯನ್ನು ಆಯೋಜಿಸಲಾಯಿತು. ಈ ವೇಳೆ ಇಡೀ ಇರಾನ್ ಕಂಬನಿ ಮಿಡಿಯಿತು. ಆದರೆ, ಈ ಭಾವುಕ ವಿದಾಯದ ನಡುವೆಯೂ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ್ದ ರಹಸ್ಯ ವ್ಯಕ್ತಿಯೊಬ್ಬ ಇಡೀ ವಿಶ್ವದ ಗಮನ ಸೆಳೆದಿದ್ದಾನೆ. ಅಂತ್ಯಕ್ರಿಯೆಯ ಪ್ರಾರ್ಥನೆಯ ವೇಳೆ ಮುಂಚೂಣಿಯ ಸಾಲಿನಲ್ಲಿ ಕಪ್ಪು ಬಣ್ಣದ ಫೇಸ್ ಮಾಸ್ಕ್ ಹಾಗೂ ಕಪ್ಪು ಬೇಸ್ಬಾಲ್ ಕ್ಯಾಪ್ ಧರಿಸಿ ಕುಳಿತಿದ್ದ ವ್ಯಕ್ತಿಯ ಸುತ್ತ ಹತ್ತಾರು ವದಂತಿಗಳು ಹರಿದಾಡತೊಡಗಿದ್ದವು. ಇರಾನ್‌ನ ಇಂದಿನ ನಾಯಕತ್ವದ ಭದ್ರತೆಯ ನಡುವೆ ಈ ರೀತಿ ಮುಖ ಮುಚ್ಚಿಕೊಂಡು ಬಂದ ವ್ಯಕ್ತಿ ಯಾರೆಂಬ ಕುತೂಹಲ ಎಲ್ಲರಲ್ಲೂ ಮನೆ ಮಾಡಿತ್ತು. ಇದು ಖಮೇನಿ ಅವರ ಪುತ್ರನಾದ ಮೊಜ್ತಾಬಾ ಖಮೇನಿ ಇರಬಹುದು ಎಂದು ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಚರ್ಚೆಗಳು ಆರಂಭವಾದವು. ಆದರೆ, ಇರಾನ್ ಮಾಧ್ಯಮಗಳು ಈ ರಹಸ್ಯ ವ್ಯಕ್ತಿಯ ಗುರುತನ್ನು ಪತ್ತೆಹಚ್ಚುವ ಮೂಲಕ ಜಾಗತಿಕ ವದಂತಿಗಳಿಗೆ ತೆರೆ ಎಳೆದಿವೆ. ಮಾಸ್ಕ್ ಧರಿಸಿದ್ದ ಆ ವ್ಯಕ್ತಿ ಮಾಜಿ ಪರಮೋಚ್ಚ ನಾಯಕ ಅಲಿ ಖಮೇನಿ ಅವರ ಹಿರಿಯ ಮೊಮ್ಮಗ ಮೊಹಮ್ಮದ್ ಜವಾದ್ ಖಮೇನಿ ಎಂದು ವರದಿ ಮಾಡಿವೆ.

# ಜುರಾಸಿಕ್ ಪಾರ್ಕ್ ಖ್ಯಾತಿಯ ನಟ ಸ್ಯಾಮ್ ನೀಲ್ ಇನ್ನಿಲ್ಲ

**ನವದೆಹಲಿ, ಜು.13:** ವಿಶ್ವಪ್ರಸಿದ್ಧ ಜುರಾಸಿಕ್ ಪಾರ್ಕ್ ಸಿನಿಮಾದ ಡಾ. ಅಲಾನ್ ಗ್ರಾಂಟ್ ಪಾತ್ರದ ಮೂಲಕ ಜಾಗತಿಕ ಮಟ್ಟದಲ್ಲಿ ಅಪಾರ ಜನಪ್ರಿಯತೆ ಗಳಿಸಿದ್ದ ಹಿರಿಯ ನಟ ಸ್ಯಾಮ್ ನೀಲ್ (78) ಅವರು ಕೊನೆಯುಸಿರೆಳೆದಿದ್ದಾರೆ.



ಹಾಲಿವುಡ್ ಸಿನಿಮಾ ರಂಗದಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿದ್ದ ದಿಗ್ಗಜ ನಟ ಸ್ಯಾಮ್ ನೀಲ್ ಅವರ ಅಗಲಿಕೆಯಿಂದಾಗಿ ಜಾಗತಿಕ ಚಿತ್ರರಂಗದಲ್ಲಿ ಸೂತಕದ ಛಾಯೆ ಆವರಿಸಿದೆ. ಸ್ಯಾಮ್ ಅವರ ನಿಧನದ ಸುದ್ದಿಯನ್ನು ಅವರ ಅಧಿಕೃತ ಇನ್ಸ್ಟಾಗ್ರಾಮ್ ಖಾತೆಯ ಮೂಲಕವೇ ಹಂಚಿಕೊಳ್ಳಲಾಗಿದ್ದು, ವಿಶ್ವದಾದ್ಯಂತ ಇರುವ ಅವರ ಅಭಿಮಾನಿಗಳು ಪ್ರತಿಕ್ರಿಯೆಗಳ ಸುರಿಮಳೆ ಮೂಲಕ ತೀವ್ರ ಕಂಬನಿ ಮಿಡಿಯುತ್ತಿದ್ದಾರೆ.

ಸ್ಯಾಮ್ ಅವರ ಅಧಿಕೃತ ಇನ್ಸ್ಟಾಗ್ರಾಂ ಪೋಸ್ಟ್‌ನಲ್ಲಿ, ಸ್ಯಾಮ್ ನೀಲ್ ಅವರ ಕುಟುಂಬಸ್ಥರು ಅತ್ಯಂತ ದುಃಖದೊಂದಿಗೆ ಈ ಸುದ್ದಿಯನ್ನು ಹಂಚಿಕೊಳ್ಳುತ್ತಿದ್ದಾರೆ. ಆಸ್ಟ್ರೇಲಿಯಾದ ಸಿಡ್ನಿಯಲ್ಲಿ ಸೋಮವಾರ (ಜುಲೈ 13) ಸ್ಯಾಮ್ ಕೊನೆಯುಸಿರೆಳೆದಿದ್ದಾರೆ. ಸ್ಯಾಮ್ ಅವರ ಕೊನೆಯ ಕ್ಷಣಗಳಲ್ಲಿ ಕುಟುಂಬಸ್ಥರು ಅವರ ಜೊತೆಗಿದ್ದರು. ತಮ್ಮ ಇಡೀ ಜೀವನವನ್ನು ಗೌರವಯುತವಾಗಿ ನಡೆಸಿದ ಸ್ಯಾಮ್, ಕೊನೆಯ ಕ್ಷಣದಲ್ಲೂ ಅದೇ ಘನತೆಯೊಂದಿಗೆ ಬದುಕಿಗೆ ವಿದಾಯ ಹೇಳಿದ್ದಾರೆ ಎಂದು ಬರೆಯಲಾಗಿದೆ.

ಈ ಸಾವು ಅತ್ಯಂತ ಹಠಾತ್ ಹಾಗೂ ಅನಿರೀಕ್ಷಿತವಾಗಿ ಸಂಭವಿಸಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ಇತ್ತೀಚಿನ ವರ್ಷಗಳಲ್ಲಿ ಕ್ಯಾನ್ಸರ್ ಕಾಯಿಲೆಯಿಂದ ಬಳಲುತ್ತಿದ್ದ ಸ್ಯಾಮ್, ಕೊನೆಯ ದಿನಗಳಲ್ಲಿ ಕ್ಯಾನ್ಸರ್ ಮುಕ್ತರಾಗಿದ್ದರು ಎಂಬುದು ಕುಟುಂಬಕ್ಕೆ ಸಮಾಧಾನ ತಂದಿತ್ತು. ಅಲ್ಲದೆ, ಕೊನೆಯ ದಿನಗಳಲ್ಲಿ ಸ್ಯಾಮ್ ನೀಲ್ ಅವರಿಗೆ ಅದ್ಭುತವಾದ ಆರೈಕೆ ಮತ್ತು ಚಿಕಿತ್ಸೆ ನೀಡಿದ ಸಿಡ್ನಿಯ 'ಸೇಂಟ್ ವಿನ್ಸೆಂಟ್ಸ್ ಪ್ರೈವೇಟ್ ಆಸ್ಪತ್ರೆ'ಯ ಸಿಬ್ಬಂದಿಗೆ ನಟನ ಕುಟುಂಬವು ಈ ಸಂದರ್ಭದಲ್ಲಿ ತಮ್ಮ ಆಳವಾದ ಕೃತಜ್ಞತೆಯನ್ನು ವ್ಯಕ್ತಪಡಿಸಿದೆ.

ಸದ್ಯಕ್ಕೆ ಕುಟುಂಬವು ತೀವ್ರ ಆಘಾತ ಮತ್ತು ಅಪಾರ ನಷ್ಟದ ದುಃಖದಲ್ಲಿದ್ದು, ಹೆಚ್ಚಿನ ವಿವರಗಳನ್ನು ಮುಂದಿನ ದಿನಗಳಲ್ಲಿ ಹಂಚಿಕೊಳ್ಳಲಾಗುವುದು ಎಂದು ತಿಳಿಸಲಾಗಿದೆ. ಅಲ್ಲಿಯವರೆಗೆ ಕುಟುಂಬದ ಖಾಸಗಿತನವನ್ನು ಗೌರವಿಸಬೇಕು ಮತ್ತು ದುಃಖವನ್ನು ಭರಿಸುವ ಶಕ್ತಿ ನೀಡಬೇಕೆಂದು ಕುಟುಂಬದ ಪರವಾಗಿ ಅಭಿಮಾನಿಗಳಲ್ಲಿ ಹಾಗೂ ಮಾಧ್ಯಮಗಳಲ್ಲಿ ವಿನಂತಿಸಿಕೊಳ್ಳಲಾಗಿದೆ.

# ಏಕದಿನ ಸರಣಿಗೆ ಭಾರತ ತಂಡ ಸಿದ್ಧತೆ: ಇಂದು ಚೊಚ್ಚಲ ಪಂದ್ಯ

**ನವದೆಹಲಿ, ಜು.13:** ಜುಲೈ 14 ರಿಂದ ಆರಂಭವಾಗಲಿರುವ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯ ಆರಂಭಿಕ ಪಂದ್ಯಕ್ಕಾಗಿ ಭಾರತ ತಂಡದ ಪ್ರಮುಖ ಆಟಗಾರರು ಎಜ್‌ಬಾಸ್ಟನ್ ಕ್ರಿಕೆಟ್ ಮೈದಾನದಲ್ಲಿ ಸತತ ಎರಡನೇ ದಿನವೂ ಕಠಿಣ ಅಭ್ಯಾಸ ನಡೆಸಿದರು. ಭಾನುವಾರದ ಸುಡು ಬಿಸಿಲಿನಲ್ಲಿ ಸುಮಾರು ಎರಡು ಗಂಟೆಗಳ ಕಾಲ ನಡೆದ ತರಬೇತಿ ಅವಧಿಯಲ್ಲಿ ಮಾಜಿ ನಾಯಕ ರೋಹಿತ್ ಶರ್ಮಾ ಅವರ ಬ್ಯಾಟಿಂಗ್ ಪ್ರದರ್ಶನ ಎಲ್ಲರ ಗಮನ ಸೆಳೆಯಿತು. ಮೈದಾನದ ಹೊರಗೆ ಅಭಿಮಾನಿಗಳಿಂದ 'ಮುಂಬೈ ಚಾ ರಾಜಾ' ಎಂಬ ಘೋಷಣೆಗಳು ಮೊಳಗುವ ಮುನ್ನವೇ ರೋಹಿತ್ ನೆಟ್ಸ್‌ನಲ್ಲಿ ಸುದೀರ್ಘ ಅವಧಿಯ ಬ್ಯಾಟಿಂಗ್ ತಾಲೀಮು ನಡೆಸಿದರು.

ಮೂರು ಗಂಟೆಗಳ ಕಾಲ ನಡೆದ ಒಟ್ಟಾರೆ ತರಬೇತಿ ಅವಧಿಯಲ್ಲಿ ರೋಹಿತ್ ಶರ್ಮಾ ಮೊದಲು ಫೀಲ್ಡಿಂಗ್ ತರಬೇತುದಾರ ಟಿ. ದಿಲೀಪ್ ಅವರ ಉಸ್ತುವಾರಿಯಲ್ಲಿ ಫೀಲ್ಡಿಂಗ್ ಡ್ರಿಲ್ಸ್ ನಡೆಸಿದರು. ಮುಂಬರುವ ಸುದೀರ್ಘ ಪಂದ್ಯಗಳಿಗಾಗಿ ತಮ್ಮ ದೈಹಿಕ ಅರ್ಹತೆ ಹಾಗೂ ಚುರುಕುತನವನ್ನು ಕಾಯ್ದುಕೊಳ್ಳಲು ಅವರು ಸಾಕಷ್ಟು ಸಮಯ ವ್ಯಯಿಸಿದರು. ಇದಾದ ಬಳಿಕ ಏಕದಿನ ತಂಡದ ನಾಯಕ ಶುಭಮಾನ್ ಗಿಲ್, ವಿರಾಟ್ ಕೊಹ್ಲಿ ಮತ್ತು ಕೆ.ಎಲ್. ರಾಹುಲ್ ನೆಟ್ಸ್‌ನಲ್ಲಿ ಬ್ಯಾಟಿಂಗ್ ಮಾಡುತ್ತಿದ್ದಾಗ, ರೋಹಿತ್ ಮೈದಾನದ ಬದಿಗೆ ಬಂದು ಕುಲದೀಪ್ ಯಾದವ್ ಸೇರಿದಂತೆ ಇತರ ಆಟಗಾರರೊಂದಿಗೆ ಸುದೀರ್ಘ ಚರ್ಚೆಯಲ್ಲಿ ತೊಡಗಿದರು.



ತಮ್ಮ ಬ್ಯಾಟಿಂಗ್ ಸರದಿ ಬಂದಾಗ ಆರಂಭದಲ್ಲಿ ಕೆಲವು ಎಸೆತಗಳನ್ನು ಎದುರಿಸಲು ರೋಹಿತ್ ಸ್ವಲ್ಪ ಕಷ್ಟಪಟ್ಟಂತೆ ಕಂಡರೂ, ತಕ್ಷಣವೇ ಎಂಡ್‌ಗಳನ್ನು ಬದಲಾಯಿಸುವ ಮೂಲಕ ಲಯಕ್ಕೆ ಮರಳಿದರು. ನಂತರ ಮತ್ತಷ್ಟು ಬದಲಾವಣೆಯನ್ನು ಬಯಸಿದ ರೋಹಿತ್, ಸ್ಪಿನ್ ಬೌಲಿಂಗ್ ತರಬೇತುದಾರ ಸಾಯಿರಾಜ್ ಬಹುತುಲೆ ಹಾಗೂ ಥ್ರೋಡೌನ್ ತಜ್ಞರಾದ ನುವಾನ್ ಸೇನಾವಿರತ್ನೆ, ದಯಾನಂದ್ ಗರಾನಿ ಮತ್ತು ರಘು ಅವರ ಸಹಾಯದೊಂದಿಗೆ ಓಪನ್ ನೆಟ್ಸ್‌ನಲ್ಲಿ ಪಂದ್ಯದ ಮಾದರಿಯಲ್ಲೇ ಸಿಮ್ಯುಲೇಶನ್ ಬ್ಯಾಟಿಂಗ್ ಅಭ್ಯಾಸ ನಡೆಸಿದರು. ಆಫ್ ಸೈಡ್‌ನಲ್ಲಿ ಫೀಲ್ಡರ್‌ಗಳನ್ನು ನಿಲ್ಲಿಸಿ ಆಡಿದ ರೋಹಿತ್, ಆಕರ್ಷಕ ಬೌಂಡರಿಗಳನ್ನು ಬಾರಿಸುವ ಮೂಲಕ ತಮ್ಮ ಬ್ಯಾಟಿಂಗ್ ಪ್ರದರ್ಶನದಿಂದ ತೃಪ್ತರಾಗಿ ಹೊರನಡೆದರು.

ಮತ್ತೊಂದೆಡೆ, ಸ್ಟಾರ್ ಬ್ಯಾಟರ್ ವಿರಾಟ್ ಕೊಹ್ಲಿ ಕೂಡ ನೆಟ್ಸ್‌ನಲ್ಲಿ ಜಸ್ಪ್ರೀತ್ ಬುಮ್ರಾ, ಗುರ್ನೂರ್ ಬ್ರಾರ್ ಮತ್ತು ಸ್ಥಳೀಯ ವೇಗಿಗಳ ಮಾರಕ ಎಸೆತಗಳನ್ನು ಎದುರಿಸಿದರು. ಶನಿವಾರದ ಅಭ್ಯಾಸದಲ್ಲಿ ಸ್ಪಿನ್ ಬೌಲಿಂಗ್‌ಗೆ ಹೆಚ್ಚಿನ ಆದ್ಯತೆ ನೀಡಿದ್ದ ಕೊಹ್ಲಿ, ಭಾನುವಾರ ವೇಗಿಗಳ ಎಸೆತಗಳನ್ನು ಎದುರಿಸುವ ಮೂಲಕ ಕಣಕ್ಕಿಳಿದರು. ಆರಂಭದಲ್ಲಿ ವೇಗದ ಬೌಲಿಂಗ್ ವಿರುದ್ಧ ಕೊಹ್ಲಿ ಕೊಂಚ ಪರದಾಡಿದಂತೆ ಕಂಡರೂ, ನಂತರ ಸ್ಪಿನ್ನರ್‌ಗಳ ವಿರುದ್ಧ ಅತ್ಯಂತ ಸಂಯಮದ ಆಟ ಪ್ರದರ್ಶಿಸಿ ತಮಗೆ ಬೇಕಾದ ಆತ್ಮವಿಶ್ವಾಸವನ್ನು ಮರಳಿ ಪಡೆದರು.

ವಿರಾಟ್ ಕೊಹ್ಲಿ ಕೇವಲ ತಮಗಷ್ಟೇ ಬ್ಯಾಟಿಂಗ್ ಅಭ್ಯಾಸ ಮಾಡದೆ, ಯುವ ಆಟಗಾರರಿಗೆ ಮಾರ್ಗದರ್ಶನ ನೀಡುವ ಕೆಲಸವನ್ನೂ ಮುಂದುವರಿಸಿದರು. ಶನಿವಾರ ಶುಭಮಾನ್ ಗಿಲ್ ಅವರಿಗೆ ಬ್ಯಾಟಿಂಗ್ ಟಿಪ್ಸ್ ನೀಡಿದ್ದ ಕೊಹ್ಲಿ, ಭಾನುವಾರ ತರಬೇತಿ ಮುಗಿದ ನಂತರ ಮೈದಾನದ ಬದಿಯಲ್ಲಿ ನಿಂತು 26 ವರ್ಷದ ವೇಗಿ ಗುರ್ನೂರ್ ಬ್ರಾರ್ ಅವರಿಗೆ ಬೌಲಿಂಗ್‌ಗೆ ಸಂಬಂಧಿಸಿದ ಕೆಲವು ಪ್ರಮುಖ ಸಲಹೆಗಳನ್ನು ಹಂಚಿಕೊಂಡರು. ಹಿರಿಯ ಆಟಗಾರನ ಈ ನಡೆ ಯುವ ಆಟಗಾರರಲ್ಲಿ ಹೊಸ ಭರವಸೆ ಮೂಡಿಸಿದೆ.

ಸೌತ್‌ಹ್ಯಾಂಪ್ಟನ್‌ನಲ್ಲಿ 5ನೇ ಟಿ20 ಪಂದ್ಯವನ್ನು ಮುಗಿಸಿ ಬಂದಿರುವ ಟಿ20 ತಂಡದ ಸದಸ್ಯರು ಸೇರಿದಂತೆ ಇಡೀ ಭಾರತೀಯ ತಂಡವು ಸೋಮವಾರ (ಜುಲೈ 13) ಸರಣಿಯ ಕೊನೆಯ ಅಧಿಕೃತ ಅಭ್ಯಾಸದಲ್ಲಿ ಪಾಲ್ಗೊಳ್ಳಲಿದೆ. ಜುಲೈ 14 ರಂದು ಎಜ್‌ಬಾಸ್ಟನ್‌ನಲ್ಲಿ ಮೊದಲ ಏಕದಿನ ಪಂದ್ಯ ನಡೆಯಲಿದ್ದು, ನಂತರದ ಎರಡು ಪಂದ್ಯಗಳು ಜುಲೈ 16 ರಂದು ಕಾರ್ಡಿಫ್ ಮತ್ತು ಜುಲೈ 19 ರಂದು ಲಂಡನ್ನಲ್ಲಿ ಜರುಗಲಿವೆ.